ಸಂಪುಟ: 04 ಸಂಚಿಕೆ: 196 ಪುಟಗಳು: 08 ಶನಿವಾರ 28 ಸೆಪ್ಟೆಂಬರ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಜಗತ್ತು ಬದಲಾಗಬೇಕು ಎನ್ನುವವರು ಮೊದಲು ತಮ್ಮಿಂದಲೇ ಬದಲಾವಣೆಯಾಗಬೇಕು ಎಂಬುದನ್ನು ಅರಿತುಕೊಳ್ಳಬೇಕು.

## ಮಾನ ಮರ್ಯಾದೆ ಇದ್ದಿದ್ದೇ ಆದಲ್ಲಿ ರಾಜೀನಾಮೆ ನೀಡಲಿ?

• ಉದಯವಾಹಿನಿ, ಹುಬ್ಬಳ್ಳಿ

ಜನಪ್ರತಿನಿಧಿಗಳ ನ್ಯಾಯಾಲಯ ಮುಖ್ಯಮಂತ್ರಿ ವಿರುದ್ಧ ಲೋಕಾಯುಕ್ತ ಪೊಲೀಸ್‌ರಿಗೆ ಎಫ್‌ಐಆರ್ ದಾಖಲಿಸುವಂತೆ ಹೇಳಿದ್ದರೂ ಸಹ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಮುಂದುವರಿದಿದ್ದಾರೆ. ಅವರಿಗೆ ಮಾನ ಮರ್ಯಾದೆ ಇದ್ದಿದ್ದೇ ಆದಲ್ಲಿ ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಶಾಸಕ ಮಹೇಶ ಟೆಂಗಿನಕಾಯಿ ಆಗ್ರಹಿಸಿದರು. ಹುಬ್ಬಳ್ಳಿಯಲ್ಲಿ ಶುಕ್ರವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹಿಂದೆ ಬಹಳಷ್ಟು ಸಂದರ್ಭದಲ್ಲಿ ಸಿದ್ದರಾಮಯ್ಯ ಅವರು ನಿಮಗೆ ಮಾನ ಮರ್ಯಾದೆ ಇದೆಯಾ ಎಂದು ವಿರೋಧ ಪಕ್ಷದವರನ್ನು ಟೀಕಿಸಿದ್ದಾರೆ. ಅದನ್ನೇ ನಾವು ಈಗ ಹೇಳುತ್ತಿದ್ದೇವೆ. ಸಿದ್ದರಾಮಯ್ಯ ಅವರಿಗೆ ಮಾನ ಮರ್ಯಾದೆ ಇದ್ದಲ್ಲಿ ನ್ಯಾಯಾಲಯದ ತೀರ್ಪಿಗೆ ತಲೆ ಬಾಗಿ ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಡಬೇಕು. ಮುಂದೆ ಅವರು ಸತ್ಯ ಹರಿಶ್ಚಂದ್ರ ಎಂದು ಸಾಬೀತಾದ ಮೇಲೆ ಪುನಃ ಸಿಎಂ ಆಗಲಿ. ನಮ್ಮದೇನೂ ಅಭ್ಯಂತರವಿಲ್ಲ ಎಂದು ಹೇಳಿದರು.

## ಸಿಎಂ ರಾಜಿನಾಮ ಬಗ್ಗೆ ಭವಿಷ್ಯ ನುಡಿದ ಕೋಡಿಮಠದ ಶ್ರೀಗಳು

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್ ಐ ಆರ್ ದಾಖಲಿಸಿ ತನಿಖೆ ನಡೆಸುವಂತೆ ಜನಪ್ರತಿನಿಧಿಗಳ ಕೋರ್ಟ್ ಲೋಕಾಯುಕ್ತಗೆ ಆದೇಶ ಹೊರಡಿಸಿದೆ. ಅಂತೆಯೇ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಬೇಕೆಂದು ವಿಪಕ್ಷಗಳು ಬಿಗಿ ಪಟ್ಟು ಹಿಡಿದಿದೆ. ಸಿಎಂ ಸಿದ್ದರಾಮಯ್ಯ ರಾಜೀನಾಮೆ ಬಗ್ಗೆ ಕೋಡಿಮಠದ ಶ್ರೀಗಳು ಸ್ಫೋಟಕ ಭವಿಷ್ಯ ನುಡಿದಿದ್ದಾರೆ. ಅಭಿಮನ್ಯುವಿನ ಬಿಲ್ಲಿನ ದಾರವನ್ನು ಮೋಸದಿಂದ ಕರ್ಣನ ಕೈಯಿಂದ ದಾರ ಕಟ್ ಮಾಡಿಸುತ್ತಾರೆ ಅಂತಾ ಹೇಳಿದ್ದೆ. ಮಹಾಭಾರತದಲ್ಲಿ ಕೃಷ್ಣನಿದ್ದ, ಭೀಮ ಗೆದ್ದ. ಇಲ್ಲಿ ಕೃಷ್ಣ ಇಲ್ಲ ದುರ್ಯೋಧನ ಗೆದ್ದ. ಅಭಿಮನ್ಯುವಿನ ಹೆಂಡತಿ ರಣರಂಗ ಪ್ರವೇಶಿಸುತ್ತಾಳೆ ಎಂದಿದ್ದೆ ಈಗ ಏನಾಯ್ತು? ಬಿಲ್ಲಿನ ದಾರ ಕಟ್ ಮಾಡಿಸಿದರು. ಸಿದ್ದರಾಮಯ್ಯ ಅವರ ಪತ್ನಿ ಒಮ್ಮೆಯೋ ಸಾರ್ವಜನಿಕವಾಗಿ ಹೊರಗೆ ಬಂದಿಲ್ಲ. ಪಾವಿತ್ರ್ಯತೆ ಇರುವ ಹೆಣ್ಣು ಮಗಳ ಬಗ್ಗೆ ಎಲ್ಲಾ ಕಡೆ ಮಾತನಾಡಿಕೊಳ್ಳುವಂತೆ ಮಾಡಿದ್ದಾರೆ ಎಂದರು. ತಿರುಪತಿಯಲ್ಲಿ ವೆಂಕಟೇಶ್ವರನ ಸನ್ನಿದಿಯಲ್ಲಿ ಏನಾಯ್ತು ..? ಕೃಷ್ಣ ಇಲ್ಲದಕ್ಕೆ ದುರ್ಯೋಧನ ಗೆದ್ದ. ನೀವು ಧರ್ಮಶಾಸ್ತ್ರದ ಪ್ರಕಾರ ಸ್ಥಳ ಸ್ವಚ್ಛ ಮಾಡಿದ್ದೀರಿ, ಆದರೆ ನಾಲ್ಕು ವರ್ಷ ಅದನ್ನು ತಿಂದವರನ್ನು ಏನು ಮಾಡ್ತೀರಿ, ಇದಕ್ಕೆ ಸರ್ಕಾರವೇ ಉತ್ತರ ಕೊಡಬೇಕಿದೆ ಎಂದು ಶ್ರೀಗಳು ಹೇಳಿದ್ದಾರೆ.

## ವಿಷಯ ಬಹಿರಂಗ ಪಡಿಸಿದರೆ ವಿಜಯೇಂದ್ರನೇ ಹೊಡೆಯುತ್ತಾನೆ

• ಉದಯವಾಹಿನಿ, ಬೆಳಗಾವಿ

ರಾಜ್ಯ ಬಿಜೆಪಿಯ ಬಣ ರಾಜಕೀಯ ತಾರಕಕ್ಕೇರಿದೆ. ಒಂದೆಡೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ, ಆರ್.ಅಶೋಕ್ ಹಾಗೂ ಬಿಜೆಪಿ ಕಾರ್ಯಕರ್ತರು ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದರೆ, ಮತ್ತೊಂದೆಡೆ ಮಾಜಿ ಸಚಿವ ರಮೇಶ್ ಜಾರಕಿಹೊಳಿ, ಕೆ.ಎಸ್.ಈಶ್ವರಪ್ಪ, ಯತ್ನಾಳ್ ಪ್ರತ್ಯೇಕ ಸಭೆಗಳನ್ನು ನಡೆಸಿ ಕಮಲ ಪಡೆಯಲ್ಲಿ ಎಲ್ಲಾವೂ ಸರಿಯಿಲ್ಲ ಎಂಬುದನ್ನು ಮತ್ತೆ ಮತ್ತೆ ಸಾಬೀತು ಮಾಡುತ್ತಿದ್ದಾರೆ. ಈ ನಡುವೆ ಮಾಜಿ ಸಚಿವ ರಮೇಶ್ ಜಾರಕಿಹೊಳಿ ಮೊನ್ನೆ ಈಶ್ವರಪ್ಪ ಮನೆಯಲ್ಲಿ ನಡೆದ ರಹಸ್ಯ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಬಹಿರಂಗ ಪಡಿಸಿದ್ದಾರೆ.

## ನಾವು ಸಿಎಂ ಸಿದ್ದರಾಮಯ್ಯಗೆ ಬೆಂಬಲಿಸಿದ್ದೇವೆ : ಖರ್ಗೆ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಮೈಸೂರು ಲೋಕಾಯುಕ್ತ ಕಚೇರಿಯಲ್ಲಿ ಎಫ್‌ಐಆರ್ ದಾಖಲಿಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಇದರ ಮಧ್ಯ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ನಾವು ಸಿಎಂ ಸಿದ್ದರಾಮಯ್ಯ ಅವರ ಪರವಾಗಿ ಇದ್ದೇವೆ ಎಂದು ಬೆಂಬಲ ಸೂಚಿಸಿದ್ದಾರೆ. ನಾವು ಸಿಎಂ ಸಿದ್ದರಾಮಯ್ಯಗೆ ಬೆಂಬಲ ಕೊಟ್ಟಿದ್ದೇವೆ. ಏಕೆಂದರೆ ಸಿದ್ದರಾಮಯ್ಯ ಅವರು ಪಕ್ಷವನ್ನು ಪ್ರತಿನಿಧಿಸುತ್ತಾರೆ. ವೈಯಕ್ತಿಕವಾಗಿ ಅಲ್ಲ. ಇನ್ನು ದಲಿತ ನಾಯಕ ದಲಿತ ಫಂಡ್ ಬಗ್ಗೆ ನರೇಂದ್ರ ಮೋದಿ ಮಾತನಾಡಿರುವ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಅವರು, ನಾನು ಈ ಒಂದು ವಿಷಯದ ಕುರಿತಾಗಿ ಪ್ರಧಾನಿ ಮೋದಿ ಅವರಿಗೆ ಹರಿಯಾಣದಲ್ಲಿ ಉತ್ತರ ಕೊಡುತ್ತೇನೆ ಎಂದು ತಿಳಿಸಿದರು.

ಸಿಬಿಐ ಅವಕಾಶವನ್ನು ಹಿಂಪಡೆಯುವುದು ಸರ್ಕಾರಕ್ಕೆ ಇರುವ ಅಧಿಕಾರ. ನಾನು ಗೃಹ ಮಂತ್ರಿ ಇದ್ದಾಗ ವೀರಪ್ಪನ್ ಕೇಸ್ ರೆಫರ್ ಮಾಡಿದ್ದೆ ಎಂದು ಸಂಪುಟದ ನಿರ್ಧಾರಕ್ಕೆ ಮಲ್ಲಿಕಾರ್ಜುನ ಖರ್ಗೆ ಸಮರ್ಥನೆ ಮಾಡಿಕೊಂಡಿದ್ದಾರೆ. ದೇವರಾಜು ಅರಸು ಇದ್ದಾಗಲೂ ಸಿಬಿಐ ಅವಕಾಶವನ್ನು ಹಿಂಪಡೆಯಲಾಗಿತ್ತು. ಸರ್ಕಾರ ಈ ಒಂದು ನಿರ್ಧಾರ ತೆಗೆದುಕೊಂಡಿರುವುದು ಸಾಮಾನ್ಯ ಎಂದರು.

## ಮೈಸೂರು ರಾಜಮನೆತನಕ್ಕೆ ವಿಶೇಷ ಸ್ಥಾನಮಾನ ನೀಡಿ

• ಉದಯವಾಹಿನಿ, ಮೈಸೂರು



'ರಾಜ್ಯ ಸರ್ಕಾರವು ಮೈಸೂರು ರಾಜಮನೆತನಕ್ಕೆ ವಿಶೇಷ ಸ್ಥಾನಮಾನ (ರಾಯಲ್ ಸ್ಟೇಟಸ್) ನೀಡಬೇಕು' ಎಂದು ಸಂಸದ ಡಾ.ಸಿ.ಎನ್. ಮಂಜುನಾಥ್ ಒತ್ತಾಯಿಸಿದರು.

ನಗರದ ಜೆ.ಕೆ. ಮೈದಾನದ ಸಭಾಂಗಣದಲ್ಲಿ ಶುಕ್ರವಾರ ನಡೆದ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ ಶತಮಾನೋತ್ಸವ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಮರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

> 'ಹತ್ತು ವರ್ಷದ ಹಿಂದೆ ನಮ್ಮ ಕುಟುಂಬ ಕಷ್ಟದ ಸಮಯದಲ್ಲಿದ್ದಾಗ, ರಾಜ್ಯದ ಜನತೆ ತೋರಿದ ಪ್ರೀತಿ ಧೈರ್ಯ ತುಂಬಿತು. ಸಂಸದ ಮಂಜುನಾಥ್ ಅವರು ವಿಶೇಷ ಸ್ಥಾನಮಾನ ನೀಡಲು ಒತ್ತಾಯಿಸಿದ್ದು, ನಾಡಿನ ಜನತೆಯ ರಾಜಮನೆತನದ ಬಗ್ಗೆ ಹೊಂದಿರುವ ಅಭಿಮಾನವನ್ನು ತೋರುತ್ತಿದೆ'
> -ಪ್ರಮೋದಾದೇವಿ ಒಡೆಯರ್, ರಾಜವಂಶಸ್ಥೆ

ಸರ್ಕಾರ, ಆಡಳಿತ ಅದರ ಪಾಡಿಗೆ ನಡೆಯಲಿ, ಆದರೆ, ರಾಜಮನೆತಕ್ಕೆ ಗೌರವ ಸಲ್ಲಿಸುವ ವ್ಯವಸ್ಥೆಯೂ ಆಗಬೇಕು' ಎಂದರು. ಇಂಗ್ಲೆಂಡ್ ದೇಶದಲ್ಲಿ ಪ್ರಜಾಪ್ರಭುತ್ವ ಇದ್ದರೂ ರಾಜಮನೆತನಕ್ಕೆ ಉನ್ನತ ಸ್ಥಾನ ನೀಡಲಾಗಿದೆ. ಡೆನ್ಮಾರ್ಕ್, ಸ್ವೀಡನ್ ದೇಶದಲ್ಲೂ ರಾಜರ ವಿಶೇಷ ಸ್ಥಾನಮಾನ ಮುಂದುವರಿಸಲಾಗಿದೆ. ಆದರೆ, ನಮ್ಮ ರಾಜ್ಯ ಹಾಗೂ ದೇಶದಲ್ಲಿ ಅವರನ್ನು ಗೌರವಿಸುವ ದೊಡ್ಡ ಹೃದಯಗಳಿಲ್ಲ' ಎಂದು ಬೇಸರ ವ್ಯಕ್ತಪಡಿಸಿದರು.

ಪ್ರಸ್ತುತ ಆರೋಗ್ಯ ಕ್ಷೇತ್ರಕ್ಕೆ ಜಿಡಿಪಿಯ ಕೇವಲ ಶೇ 1.9ರಷ್ಟು ವೆಚ್ಚ ಮಾಡಲಾಗುತ್ತಿದೆ. ನಾಲ್ವಡಿ ಕೃಷ್ಣರಾಜ ಒಡೆಯರ್ ಕಾಲದಲ್ಲಿ ಶೇ 5ರಿಂದ ಶೇ 6ರಷ್ಟು ವೆಚ್ಚ ಮಾಡಲಾಗುತ್ತಿತ್ತು. ಶಿಕ್ಷಣ, ಆರೋಗ್ಯ ಮತ್ತು ಇತರ ಕ್ಷೇತ್ರಗಳಿಗೆ ಅನೇಕ ಕೊಡುಗೆ ನೀಡಿದ ಅರಸು ಮನೆತನಕ್ಕೆ ನಮ್ಮ ರಾಜ್ಯದಲ್ಲಾದರೂ ವಿಶೇಷ ಸ್ಥಾನಮಾನ ದೊರೆಯಲಿ' ಎಂದರು.

# ಮುಡಾ ಸವಾಲು ಸಿಎಂ ವಿರುದ್ಧ ಎಫ್‌ಐಆರ್ ದಾಖಲು



**ರಾಜ್ಯ ರಾಜಕಾರಣದಲ್ಲಿ ತೀವ್ರ ಸಂಚಲನ ಸೃಷ್ಟಿಸಿದ್ದ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಡಾ ಪ್ರಕರಣ ಸಂಬಂಧ ಸೆ.24ರಂದು ಹೈಕೋರ್ಟ್ ಮಹತ್ವದ ತೀರ್ಪು ನೀಡಿತು. ಹಗರಣ ಸಂಬಂಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ್ದ ರಾಜ್ಯಪಾಲ ಥಾವರ ಚಂದ್ ಗೆಹ್ಲೋಟ್ ಕ್ರಮವನ್ನು ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ವಜಾಗೊಳಿಸಿ, ತನಿಖೆ ಎದುರಿಸಬೇಕೆಂದು ಹೇಳಿತು. ಇದಾದ ಬಳಿಕ ಸೆ.25ರಂದು ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ತನಿಖೆಗೆ ಆದೇಶಿಸಿ, ಎಫ್‌ಐಆರ್ ದಾಖಲಿಸಲು ಮೈಸೂರು ಲೋಕಾಯುಕ್ತ ಪೊಲೀಸರಿಗೆ ಸೂಚನೆ ನೀಡಿತು.**

- ಲೋಕಾಯುಕ್ತದಲ್ಲಿ ದೂರು
- ಸಿದ್ದರಾಮಯ್ಯ ವಿರುದ್ಧ ಎಫ್‌ಐಆರ್ ದಾಖಲು
- ಸಿದ್ದರಾಮಯ್ಯ ರಾಜೀನಾಮೆಗೆ ಕಾಂಗ್ರೆಸ್‌ನಲ್ಲೇ ಒತ್ತಡ
- ಸಿಎಂಗೆ ಫುಲ್ ಟೆನ್ಷನ್

• ಉದಯವಾಹಿನಿ, ಮೈಸೂರು

**1** ಮುಡಾ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಶುಕ್ರವಾರ ಎಫ್‌ಐಆರ್ ದಾಖಲಿಸಿದ ಲೋಕಾಯುಕ್ತ ಪೊಲೀಸರು

**2** ಜನಪ್ರತಿನಿಧಿಗಳ ಕೋರ್ಟ್ ನಿರ್ದೇಶನದ ಮೇರೆಗೆ ಮುಖ್ಯಮಂತ್ರಿ, ಅವರ ಪತ್ನಿ, ಬಾಮೈದ, ಜಮೀನು ಮಾಲೀಕನ ಎಫ್‌ಐಆರ್

**3** ಎಫ್‌ಐಆರ್‌ನಲ್ಲಿ ಸಿದ್ದರಾಮಯ್ಯ ಮೊದಲ ಆರೋಪಿಯಾಗಿದ್ದರೆ, ಅವರ ಪತ್ನಿ ಪಾರ್ವತಿ ಎರಡನೇ ಆರೋಪಿ

ಮೈಸೂರಿನ ಲೋಕಾಯುಕ್ತ ಪೊಲೀಸರು ಎಫ್ ಐಆರ್ ದಾಖಲಿಸಿದ್ದಾರೆ. ಲೋಕಾಯುಕ್ತ ಎಸ್‌ಪಿ ಉದೇಶ್ ಅವರು ಖುದ್ದು ಎಫ್‌ಐಆರ್ ದಾಖಲಿಸಿದ್ದಾರೆ. ನ್ಯಾಯಾಲಯದ ಆದೇಶದ ಪ್ರಕಾರ ಲೋಕಾಯುಕ್ತರು ಎಫ್‌ಐಆರ್ ದಾಖಲಿಸಿಕೊಂಡಿದ್ದಾರೆ. ಇದೀಗ ಸಿದ್ದರಾಮಯ್ಯ ಅವರ ಇಡೀ ಕುಟುಂಬ ವಿಚಾರಣೆ ಎದುರಿಸಬೇಕಿದೆ. ಮತ್ತೊಂದೆಡೆ ರಾಜೀನಾಮೆಗೆ ವ್ಯಾಪಕ ಆಗ್ರಹ ಕೇಳಿಬರುತ್ತಿದೆ. ಈ ಪ್ರಕರಣದಲ್ಲಿ ಸಿಎಂ ಸಿದ್ದರಾಮಯ್ಯ ಎ1, ಅವರ ಪತ್ನಿ ಪಾರ್ವತಿ ಸಿದ್ದರಾಮಯ್ಯ ಎ2, ಬಾಮೈದ ಮಲ್ಲಿಕಾರ್ಜುನಸ್ವಾಮಿ ಎ3, ಭೂ ಮಾಲೀಕ ದೇವರಾಜು ಎ4 ಮತ್ತು ಇತರರನ್ನು ಎ5 ಆರೋಪಿಗಳೆಂದು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿದ್ದು, ಸಿಎಂ ಸಿದ್ದರಾಮಯ್ಯ ಕುಟುಂಬಕ್ಕೆ ಮುಡಾ ಸಂಕಷ್ಟ ಎದುರಾಗಿದೆ. ಸಿಎಂ ಸಿದ್ದರಾಮಯ್ಯ ವಿರುದ್ದ ಲೋಕಾಯುಕ್ತದಲ್ಲಿ ದೂರು ದಾಖಲಾದ ಬಳಿಕ ದೂರುದಾರ ಸ್ನೇಹಮಯಿ ಕೃಷ್ಣ ಮೊದಲ ಪ್ರತಿಕ್ರಿಯೆ ನೀಡಿದ್ದು, ಮೇಲಾಧಿಕಾರಿಗಳಿಂದ ಒತ್ತಡ ಬಂದಿದೆ ಹಾಗಾಗಿ ಎಫ್ ಐಆರ್ ದಾಖಲಾಗಿದೆ. ನಮ್ಮ ಹೋರಾಟಕ್ಕೆ ಈಗ ಜಯ ಸಿಕ್ಕಿದೆ ಪ್ರಾಮಾಣಿಕ ಹೋರಾಟಕ್ಕೆ ಜಯ ಸಿಗುತ್ತೆ ಎಂಬುದಕ್ಕೆ ಇದೊಂದು ನಿದರ್ಶನ ಎಂದಿದ್ದಾರೆ.

ತನಿಖೆ ಸಿಬಿಐಗೆ ವಹಿಸುವಂತೆ ಆಗ್ರಹ : ಪ್ರಕರಣ ಸಿಬಿಐಗೆ ನೀಡುವವರೆಗೂ ನಿರಂತರ ಹೋರಾಟ ಮಾಡುತ್ತೇವೆ. ಸೋಮವಾರ ಹೈಕೋರ್ಟ್ ನಲ್ಲಿ ನಮ್ಮ ವಕೀಲರು ಅರ್ಜಿ ಸಲ್ಲಿಸಲಿದ್ದಾರೆ. ಈ ಹಿಂದೆ ತನಿಖಾ ಸಂಸ್ಥೆಗಳಿಗೆ ನ್ಯಾಯಾಲಯ ಛೀಮಾರಿ ಹಾಕಿದೆ ಎಂದು ಕಿಡಿಕಾರಿದರು.

ಯಾವುದೇ ಕಾರಣಕ್ಕೂ ನಾನು ರಾಜೀನಾಮೆ ಕೊಡಲ್ಲವೆಂಬ ಸಿಎಂ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಒಂದೊಂದು ಸಮಯಕ್ಕೆ ಸಿಎಂ ಸಿದ್ದರಾಮಯ್ಯ ಒಂದೊಂದು ರೀತಿ ವರ್ತಿಸಿದ್ದಾರೆ. ಬೇರೆಯವರ ಮೇಲೆ ಆರೋಪ ಬಂದಾಗ ರಾಜೀನಾಮೆ ನೀಡಬೇಕೆಂದು ಪಟ್ಟು ಹಿಡಿದಿದ್ರು, ಆದ್ರೆ ತಮ್ಮ ವಿರುದ್ದ ದೂರು ದಾಖಲಾದಾಗ ಉಲ್ಟಾ ಹೊಡೆಯುತ್ತಿದ್ದಾರೆ. ಸಿದ್ದರಾಮಯ್ಯ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಲಿ ಎಂದು ಆಗ್ರಹಿಸಿದರು.

### ಹೇಗಿರಲಿದೆ ತನಿಖೆ..?



ಮೈಸೂರು ಲೋಕಾಯುಕ್ತ ಎಸ್ ಪಿ ಉದೇಶ್ ಟಿ. ಜೆ. ನೇತೃತ್ವದಲ್ಲಿ ತನಿಖೆ ನಡೆಸಲಾಗುತ್ತದೆ. ಹಗರಣಕ್ಕೆ ಕಾರಣವಾದ ನಿವೇಶನಗಳ ದಾಖಲೆಗಳ ಪರಿಶೀಲನೆ, ಭೂ ಸ್ವಾಧೀನ, ಪರಿಹಾರ, ಡಿನೋಟಿಫಿಕೇಷನ್, ಭೂ ಪರಿವರ್ತನೆ ದಾಖಲೆಗಳ ಪರಿಶೀಲನೆ, ಯಾರ ಅವಧಿಯಲ್ಲಿ ಅಕ್ರಮ ಎಸಗಲಾಯಿತು, ಶಿಫಾರಸು ಪತ್ರಗಳು, ಸರ್ಕಾರದ ಆದೇಶ ಪತ್ರಗಳ ಪರಿಶೀಲನೆ, ಬೇರೆಡೆ ಬದಲಿ ನಿವೇಶನ ನೀಡಲು ಕಾರಣವೇನು? ಬೇರೆಡೆ ನಿವೇಶನ ನೀಡಲು ಶಿಫಾರಸು ಮಾಡಲಾಗಿದೆಯೆ? ಸಂಬಂಧಪಟ್ಟ ಅಧಿಕಾರಿಗಳು, ವ್ಯಕ್ತಿಗಳ ವಿಚಾರಣೆಯನ್ನು ಲೋಕಾಯುಕ್ತ ಅಧಿಕಾರಿಗಳು ನಡೆಸಲಿದ್ದಾರೆ.



### ಮತ್ತೊಂದು ಸುತ್ತಿನ ಹೋರಾಟಕ್ಕೆ ಸಿದ್ಧತೆ

ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣದ ಹಿನ್ನೆಲೆಯಲ್ಲಿ ಬಿಜೆಪಿ ಕೋರ್ ಕಮಿಟಿ ಸಭೆಯಲ್ಲೂ ಮಹತ್ವದ ಚರ್ಚೆಗಳು ನಡೆದಿತ್ತು. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಉಪಸ್ಥಿತಿಯಲ್ಲಿ ನಡೆದ ಸಭೆಯಲ್ಲಿ ಮುಂದಿನ ಹೋರಾಟದ ರೂಪುರೇಷೆಗಳ ಬಗ್ಗೆಯೂ ಚರ್ಚೆಗಳು ನಡೆದಿವೆ. ಈ ನಡುವೆ ನಾಲ್ಕು ರಾಜ್ಯಗಳ ಚುನಾವಣೆ ನಡೆಯುತ್ತಿರುವುದರಿಂದ ಚುನಾವಣೆಯಲ್ಲೂ ಸಿದ್ದರಾಮಯ್ಯ ಪ್ರಕರಣ ಚರ್ಚೆಯಾಗುತ್ತಿದೆ. ಮೋದಿ ಹರಿಯಾಣದಲ್ಲಿ ನಡೆದ ಚುನಾವಣಾ ಪ್ರಚಾರದಲ್ಲಿ ಕರ್ನಾಟಕದಲ್ಲಿ ನಡೆಯುತ್ತಿರುವ ರಾಜಕೀಯ ಬೆಳವಣಿಗೆಗಳನ್ನು ಉಲ್ಲೇಖ ಮಾಡಿದ್ದಾರೆ. ಹೀಗಾಗಿ ರಾಷ್ಟ್ರಮಟ್ಟದಲ್ಲಿ ಮುಡಾ ಹಗರಣ ಮತ್ತು ಸಿದ್ದರಾಮಯ್ಯ ರಾಜೀನಾಮೆಗೆ ಬೇಡಿಕೆ ವಿಚಾರ ಚರ್ಚಾ ವಸ್ತುವಾಗಲಿದೆ. ಇದಕ್ಕಾಗಿ ರಾಜ್ಯದಲ್ಲಿ ಬಿಜೆಪಿ ಮತ್ತಷ್ಟು ಪ್ರಬಲವಾಗಿ ಹೋರಾಟ ರೂಪಿಸಬೇಕಾಗಿದೆ. ಈ ಮೂಲಕ ಹೈಕಮಾಂಡ್‌ಗೂ ತನ್ನ ಶಕ್ತಿಯನ್ನು ತೋರಿಸಬೇಕಾಗಿದೆ. ರಾಜ್ಯ ಬಿಜೆಪಿಯಲ್ಲಿರುವ ಭಿನ್ನಮತೀಯ ಚಟುವಟಿಕೆಗಳ ಹಿನ್ನೆಲೆಯಲ್ಲಿ ಹೈಕಮಾಂಡ್ ಕೂಡಾ ಬೇಸತ್ತಿದೆ. ಈ ಹಿನ್ನೆಲೆಯಲ್ಲಿ ಮುಡಾ ಹಗರಣ ಅವಕಾಶವನ್ನು ಸದುಪಯೋಗ ಪಡಿಸಿಕೊಳ್ಳುವ ನಿಟ್ಟನಲ್ಲಿ ಕಮಲ ಪಾಳಯದಲ್ಲಿ ಚಿಂತನೆಗಳು ನಡೆದಿದೆ.



### ಪ್ರತಿ ದಿನ ಮುಡಾ ಮುಡಾ

ಕಾಂಗ್ರೆಸ್ ಪಕ್ಷದ ಮೂಲ ಮತಗಳನ್ನು ಹಾಳು ಮಾಡಲಿಕ್ಕೆ ಬಿಜೆಪಿಯವರು ಇದನ್ನೆಲ್ಲಾ ಮಾಡುತ್ತಿದ್ದಾರೆ. ಕಾನೂನು ಅದರದ್ದೇ ಆದ ಕ್ರಮಗಳನ್ನು ಕೈಗೊಳ್ಳುತ್ತದೆ. ಪರಿಸ್ಥಿತಿ ಏನು ಬರುತ್ತದೆ ಅನ್ನೋದನ್ನು ಪರಿಶೀಲಿಸುತ್ತದೆ. ಏನೂ ಇಲ್ಲದಿದ್ದರೂ ಪ್ರತಿ ದಿನ ಮುಡಾ, ಮುಡಾ ಅಂತಿದ್ದಾರೆ ಎಂದು ವಾಗ್ದಾಳಿ ನಡೆಸಿದರು.

### ಸಿಎಂ ಅರೆಸ್ಟ್ ಆಗ್ತಾರಾ..?

ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ತನ್ನ ತೀರ್ಪಿನಲ್ಲಿ ಪ್ರಕರಣ ದಾಖಲಿಸಲು ಲೋಕಾಯುಕ್ತಕ್ಕೆ ಅನುಮತಿ ನೀಡಿದೆ ಹಾಗಾಗಿ ಲೋಕಾಯುಕ್ತ ಎಡಿಜಿಪಿ ಮನೀಷ್ ಕರ್ಬಿಕರ್ ಸೂಚನೆ ಮೇರೆಗೆ ಮೈಸೂರಿನ ಲೋಕಾಯುಕ್ತ ಎಸ್‌ಪಿ ಸಿದ್ದರಾಮಯ್ಯ ವಿರುದ್ಧ ಪ್ರಕರಣ ದಾಖಲಿಸಲಿದ್ದಾರೆ. ಎಫ್‌ಐಆರ್ ದಾಖಲಾದ ಬಳಿಕ ಸಿದ್ದರಾಮಯ್ಯ ಅವರನ್ನು ಲೋಕಾಯುಕ್ತ ಅಧಿಕಾರಿಗಳು ನಿರಂತರ ವಿಚಾರಣೆ ನಡೆಸಲಿದ್ದಾರೆ. ತನಿಖೆಗೆ ಸಿಎಂ ಕೂಡ ಅಗತ್ಯ ಸಹಕಾರ ನೀಡಬೇಕಿದೆ. ಒಂದುವೇಳೆ ವಿಚಾರಣೆಗೆ ಅಗತ್ಯವಿದ್ದರೆ ಲೋಕಾಯುಕ್ತರು ಸಿದ್ದರಾಮಯ್ಯ ಅವರನ್ನು ವಶಕ್ಕೆ ಪಡೆಯುವ ಸಾಧ್ಯತೆಯೂ ಇದೆ ಎಂದು ಹೇಳಲಾಗುತ್ತಿದೆ.

## ಸಿದ್ದರಾಮಯ್ಯ ಅಧಿಕಾರದಲ್ಲಿದ್ರೆ ತನಿಖೆ ಮೇಲೆ ಪ್ರಭಾವ ಖಚಿತ

### ರಾಜೀನಾಮೆ ಕೊಡುವುದು ಸೂಕ್ತ. ಕೂಡಲೇ ವಿಧಾನಸಭೆ ವಿಸರ್ಜನೆ ಮಾಡಲಿ

• ಉದಯವಾಹಿನಿ, ಹುಬ್ಬಳ್ಳಿ



ಮುಡಾ ಪ್ರಕರಣದಲ್ಲಿ ಹೈಕೋರ್ಟ್ ಆದೇಶ ಬಂದ ನಂತರ ಸಿದ್ದರಾಮಯ್ಯ ರಾಜೀನಾಮೆ ಕೊಡುವುದು ಸೂಕ್ತ. ಕೂಡಲೇ ಅವರು ವಿಧಾನಸಭೆ ವಿಸರ್ಜನೆ ಮಾಡಲಿ ಎಂದು ಬಿಜೆಪಿ ಮುಖಂಡ, ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಆಗ್ರಹಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯನವರು ಅಧಿಕಾರದಲ್ಲಿದ್ದರೆ ತನಿಖೆ ಮೇಲೆ ಪ್ರಭಾವ ಖಚಿತ.

ಈ ಹಿಂದೆ ವಿಪಕ್ಷದಲ್ಲಿದ್ದಾಗ ಅವರು ಏನು ಮಾತನಾಡಿದ್ದರೂ ನೆನಪಿಸಿಕೊಳ್ಳಲಿ. ಮುಖ್ಯಮಂತ್ರಿ ಹುದ್ದೆಯಲ್ಲಿದ್ದು ಯಾವುದೇ ತನಿಖೆ ಎದುರಿಸುವುದು ಸರಿಯಲ್ಲ. ಅವರು ಹೈಕೋರ್ಟ್‌ನ ಆದೇಶ ಪಾಲಿಸಬೇಕು. ಸಿದ್ದರಾಮಯ್ಯ ಕಾಂಗ್ರೆಸ್ ಪಕ್ಷದ ಕೊನೆಯ ಮುಖ್ಯಮಂತ್ರಿ. ಅವರ ನಂತರ ಯಾರೂ ಕಾಂಗ್ರೆಸ್‌ನಿಂದ ಮುಖ್ಯಮಂತ್ರಿ ಆಗಲ್ಲ. ಗೋರಿಗೆ ಹೋಗುವವರೂ ಸೇರಿದಂತೆ ಬಹಳ ಮಂದಿ ಸಹ ಪಾಳೆ ಹಚ್ಚಿದ್ದಾರೆ ಎಂದರು. ಜಮೀರ ಅಹ್ಮದ್ ರಾಜಕೀಯ ತೀರ್ಪು ಎಂದು ಹೇಳಿಕೆ ನೀಡಿದ್ದು, ಅವರ ತಲೆಯಲ್ಲಿ ಮೆದುಳಿದಿಯೋ ಅಥವಾ ಮಾಂಸ ತುಂಬಿದೆಯೋ ಗೊತ್ತಿಲ್ಲ.

ಕೋರ್ಟ್ ತೀರ್ಪಿನ ಬಗ್ಗೆ ಅಪಮಾನಕಾರಿಯಾಗಿ ಮಾತನಾಡಿದ್ದಾರೆ. ಇಂಥವರ ಮೇಲೆ ನ್ಯಾಯಾಂಗ ನಿಂದನೆ ಪ್ರಕರಣ ದಾಖಲಾಗಬೇಕು. ಇಂತಹ ಉದ್ಧಟತನದಿಂದ ಮಾತನಾಡುವವರ ಮೇಲೆ ಕ್ರಮ ಕೈಗೊಳ್ಳಬೇಕು ಎಂದರು.

## ಖರ್ಗೆ ಹಾಗೂ ಕುಟುಂಬದ ವಿರುದ್ಧ ದೂರು

• ಉದಯವಾಹಿನಿ, ಬೆಂಗಳೂರು



ಮಲ್ಲಿಕಾರ್ಜುನ ಖರ್ಗೆ ಹಾಗೂ ಕುಟುಂಬದ ವಿರುದ್ಧ ಬಿಜೆಪಿ ಮುಖಂಡ ಎನ್.ಆರ್.ರಮೇಶ್ ಲೋಕಾಯುಕ್ತಕ್ಕೆ ದೂರು ನೀಡಿದ್ದಾರೆ. ಖರ್ಗೆ ಕುಟುಂಬಕ್ಕೆ ಸೇರಿದ ಟ್ರಸ್ಟ್‌ಗೆ ಐದು ಎಕರೆ ಸಿಎ ಸೈಟ್ ರೂಪದಲ್ಲಿ ನಿವೇಶನ ನೀಡಲಾಗಿದೆ ಎಂದು ಬಿಜೆಪಿ ಆರೋಪಿಸಿತ್ತು. ಇದೇ ಪ್ರಕರಣಕ್ಕೆ ಸಂಬಂಧಿಸಿದಂತೆ 7 ಜನರ ವಿರುದ್ಧ 394 ಪುಟಗಳ ದಾಖಲೆ ಸಮೇತ ಎನ್.ಆರ್.ರಮೇಶ್ ಲೋಕಾಯುಕ್ತಕ್ಕೆ ದೂರು ಸಲ್ಲಿಸಿದ್ದಾರೆ.

ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ದೇವನಹಳ್ಳಿಯಲ್ಲಿರುವ ಏರೋಸ್ಪೇಸ್ ಪಾರ್ಕ್ ಸಮೀಪದಲ್ಲಿ ಐದು ಎಕರೆ ಭೂಮಿಯನ್ನು ಕೆಐಎಡಿಬಿಯಿಂದ ಸಿಎ ಸೈಟ್ ಹೆಸರಲ್ಲಿ ಮಂಜೂರು ಮಾಡಿರುವ ಆರೋಪ ಕೇಳಿಬಂದಿದೆ. ಮಲ್ಲಿಕಾರ್ಜುನ ಖರ್ಗೆ, ಪುತ್ರ ಪ್ರಿಯಾಂಕ್ ಖರ್ಗೆ, ರಾಹುಲ್ ಖರ್ಗೆ, ಅಳಿಯ ರಾಧಾಕೃಷ್ಣ ಹಾಗೂ ಕುಟುಂಬದ ಹೆಸರಲ್ಲಿ ಸಿದ್ಧಾರ್ಥ ವಿಹಾರ್ ಟ್ರಸ್ಟ್‌ಗೆ ಶೈಕ್ಷಣಿಕ ಉದ್ದೇಶಕ್ಕಾಗಿ ಅಕ್ರಮವಾಗಿ ಎರಡು ಬಾರಿ ಸರ್ಕಾರಿ ಭೂಮಿ ಪರಭಾರೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಈ ಅಕ್ರಮದಲ್ಲಿ ಸಚಿವ ಎಂ.ಬಿ.ಪಾಟೀಲ್ ಹಾಗೂ ಐಎ ಎಸ್ ಅಧಿಕಾರಿಗಳೂ ಭಾಗಿಯಾಗಿದ್ದಾರೆ ಎಂದು ಎನ್. ಆರ್.ರಮೇಶ್ ದೂರಿನಲ್ಲಿ ಉಲ್ಲೇಖಿಸಿದ್ದು, ಒಟ್ಟು 7ಜನರ ವಿರುದ್ಧ ಲೋಕಾಯುಕ್ತದಲ್ಲಿ ದೂರು ದಾಖಲಿಸಿದ್ದಾರೆ.

## ಸಿಎಂ ರಾಜೀನಾಮೆ ಕೊಟ್ಟು ತನಿಖೆ ಎದುರಿಸಲಿ: ಅಶ್ವತ್ಥ ನಾರಾಯಣಗೌಡ

### ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಸಿಕ್ಕಿರುವುದರಿಂದ ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು'

• ಉದಯವಾಹಿನಿ, ರಾಮನಗರ

'ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಸಿಕ್ಕಿರುವುದರಿಂದ, ಅವರು ಸಿ.ಎಂ ಹುದ್ದೆಗೆ ರಾಜೀನಾಮೆ ಕೊಟ್ಟು ತನಿಖೆ ಎದುರಿಸಬೇಕು' ಎಂದು ಬಿಜೆಪಿ ವಕ್ತಾರ ಅಶ್ವತ್ಥ ನಾರಾಯಣಗೌಡ ಒತ್ತಾಯಿಸಿದರು.

**ಸರ್ಕಾರವೇ ಅಪರಾಧಿ ಸ್ಥಾನದಲ್ಲಿ ನಿಂತಿದೆ**

ಸರ್ಕಾರ ಅಸ್ತಿತ್ವಕ್ಕೆ ಬಂದ ಒಂದೂವರೆ ವರ್ಷದಲ್ಲೇ ದೊಡ್ಡ ಮಟ್ಟದಲ್ಲಿ ಆಡಳಿತ ವಿರೋಧಿ ಅಲೆ ಎದುರಿಸುತ್ತಿದೆ. ವಾಲ್ಮೀಕಿ ನಿಗಮದ ಹಣ ಅಕ್ರಮ ವರ್ಗಾವಣೆ, ಪರಿಶಿಷ್ಟರ ಹಣ ದುರ್ಬಳಕೆ, ಮುಡಾ ನಿವೇಶನ ಹಂಚಿಕೆ ಹಗರಣದಲ್ಲಿ ಸ್ವತಃ ಸಿದ್ದರಾಮಯ್ಯ ಅವರ ಕುಟುಂಬವೇ ಸಿಲುಕಿದೆ. ಎಲ್ಲಾ ಪ್ರಕರಣಗಳಲ್ಲೂ ಸರ್ಕಾರವೇ ಅಪರಾಧಿ ಸ್ಥಾನದಲ್ಲಿ ನಿಂತಿದೆ' ಎಂದು ನಗರದ ಬಿಜೆಪಿ ಕಚೇರಿಯಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಆರೋಪಿಸಿದರು.

ತಮ್ಮ ಮೊದಲ ಅವಧಿಯ ಸರ್ಕಾರದ ಭ್ರಷ್ಟಾಚಾರದ ಹುಳುಕುಗಳನ್ನು ಮುಚ್ಚಿಕೊಳ್ಳಲು ಸಿದ್ದರಾಮಯ್ಯ ಅವರು ಲೋಕಾಯುಕ್ತವನ್ನೇ ರದ್ದುಪಡಿಸಿ, ಎಸಿಬಿ ರಚಿಸಿದ್ದರು. ಸರ್ಕಾರದ ಆಣತಿ ಮೇರೆಗೆ ಕೆಲಸ ಮಾಡುತ್ತಿದ್ದ ಎಸಿಬಿಯನ್ನು ಕೋರ್ಟ್ ರದ್ದುಪಡಿಸಿ ಲೋಕಾಯುಕ್ತಕ್ಕೆ ಮರುಜೀವ ಕೊಟ್ಟಿತು.

ಇದೀಗ, ಅದೇ ಲೋಕಾಯುಕ್ತದಿಂದ ಸಿದ್ದರಾಮಯ್ಯ ಅವರು ತನಿಖೆ ಎದುರಿಸುವ ಸ್ಥಿತಿ ಬಂದಿದೆ' ಎಂದು ವ್ಯಂಗ್ಯವಾಡಿದರು.

ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತ ತನಿಖೆಯಿಂದ ನ್ಯಾಯ ಸಿಗುವ ಭರವಸೆ ಇಲ್ಲ. ಹಾಗಾಗಿ, ಪ್ರಕರಣವನ್ನು ಸಿಬಿಐಗೆ ವಹಿಸಬೇಕು. ಈ ಕುರಿತು ಬಿಜೆಪಿಯು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಹೋರಾಟ ಮುಂದುವರಿಸಲಿದೆ. ಹಗರಣದ ವಿಷಯದಲ್ಲಿ ಪಕ್ಷದ ನಿಲುವಿನಲ್ಲಿ ಯಾವುದೇ ಬದಲಾವಣೆ ಇಲ್ಲ' ಎಂದು ಪ್ರಶ್ನೆಯೊಂದಕ್ಕೆ ಪ್ರತಿಕ್ರಿಯಿಸಿದರು. 'ಆದಾಯ ಮೀರಿ ಆಸ್ತಿ ಗಳಿಸಿದ ಪ್ರಕರಣದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ವಿರುದ್ಧ ಸಿಬಿಐ ತನಿಖೆಗೆ ನೀಡಿದ್ದ ಅನುಮತಿ ಹಿಂಪಡೆದಿರುವ ರಾಜ್ಯ ಸರ್ಕಾರದ ಕ್ರಮ ಖಂಡನೀಯ. ನಿಜಕ್ಕೂ ಅವರು ತಪ್ಪು ಮಾಡಿಲ್ಲವೆಂದರೆ ತನಿಖೆಗೆ ಹೆದರುವ ಅಗತ್ಯವೇನಿದೆ? ರಾಜ್ಯದಲ್ಲಿ ಸಿಬಿಐಗೆ ಅಂಕುಶ ಹಾಕುತ್ತಿರುವ ಸರ್ಕಾರದ ನಡೆ ಸರಿಯಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

ಪಕ್ಷದ ಜಿಲ್ಲಾಧ್ಯಕ್ಷ ಆನಂದಸ್ವಾಮಿ, ಮಹಿಳಾ ಘಟಕದ ಅಧ್ಯಕ್ಷ ಪುಷ್ಪಲತಾ, ಮುಖಂಡರಾದ ಗೌತಮ್ ಗೌಡ, ಶಿವಾನಂದ್, ಪದ್ಮನಾಭ, ನಾಗೇಶ್, ಚಂದ್ರಶೇಖರ್, ಸುರೇಶ್, ರುದ್ರದೇವರು, ಚೇತನ್, ರಾಘು ಇತರರು ಇದ್ದರು.



### ಆರಂಭದಿಂದಲೂ ಮುಖ್ಯಮಂತ್ರಿ ರಾಜೀನಾಮೆ ಕೇಳುತ್ತಿದ್ದೇವೆ

ಮುಡಾ ಪ್ರಕರಣದಲ್ಲಿ ನಾವು ಆರಂಭದಿಂದಲೂ ಮುಖ್ಯಮಂತ್ರಿ ರಾಜೀನಾಮೆ ಕೇಳುತ್ತಿದ್ದೇವೆ. ಆದರೆ, ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಅವರು ತನಿಖೆ ಎದುರಿಸಲಿ ಎಂದಷ್ಟೇ ಹೇಳುತ್ತಾ ಬಂದಿದ್ದಾರೆ. ಮೈಸೂರು ಪಾದಯಾತ್ರೆಯಲ್ಲೂ ಅದನ್ನೇ ಪುನರುಚ್ಚರಿಸಿದ್ದಾರೆ. ರಾಜಕೀಯ ಕಾರಣಕ್ಕೆ ನಾವು ಮೈತ್ರಿ ಮಾಡಿಕೊಂಡಿದ್ದರೂ, ಮುಡಾ ಹಗರಣದ ವಿಷಯದಲ್ಲಿ ಪಕ್ಷವಾರು ನಿಲುವು ಬೇರೆಯೇ ಇದೆ. ಹಾಗಾಗಿಯೇ ಎಚ್‌ಡಿಕೆ ಮುಖ್ಯಮಂತ್ರಿಯ ರಾಜೀನಾಮೆ ಕೇಳಿಲ್ಲ' ಎಂದು ಅಶ್ವತ್ಥ ನಾರಾಯಣಗೌಡ ಪ್ರತಿಕ್ರಿಯಿಸಿದರು.

## ಸಿಬಿಐ ಮುಕ್ತ ತನಿಖೆ ಅಧಿಕಾರ ವಾಪಾಸ್ ನಿರ್ಧಾರದ ಕಾರಣ ತಿಳಿಸಿದ ಡಿಸಿಎಂ

• ಉದಯವಾಹಿನಿ, ಬೆಂಗಳೂರು



ದ್ವೇಷದ ರಾಜಕಾರಣಕ್ಕೆ ದಾರಿ ಆಗಬಾರದು ಎನ್ನುವ ಕಾರಣಕ್ಕೆ ಸಿಬಿಐಗೆ ನೀಡಿದ್ದ ಮುಕ್ತ ಅನುಮತಿ ಅಧಿಕಾರವನ್ನು ಹಿಂಪಡೆಯಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಗಂಭೀರ ಪ್ರಕರಣಗಳು ಎದುರಾದಾಗ ನಮ್ಮ ಅಧಿಕಾರಿಗಳು ತನಿಖೆಗೆ ಸೂಕ್ತರಲ್ಲ ಎನ್ನುವ ಅಭಿಪ್ರಾಯ ಬಂದರೆ, ಆ ವೇಳೆ ಸಿಬಿಐಗೆ ನೀಡುವ ಬಗ್ಗೆ ಚಿಂತನೆ ಮಾಡುತ್ತೇವೆ ಎಂದರು. ಸಿಬಿಐ ಬಗ್ಗೆ ಜನತಾದಳದ ದೇವೇಗೌಡರು, ಕುಮಾರಸ್ವಾಮಿ ಏನು ಮಾತನಾಡಿದ್ದರು ಎಂಬುದು ಎಲ್ಲಾರಿಗೂ ತಿಳಿದಿದೆ. ಬಿಜೆಪಿಯವರು ಸಿಬಿಐ ಅನ್ನು ಕಾಂಗ್ರೆಸ್ ಬ್ಯೂರೋ ಆಫ್ ಏಜೆನ್ಸಿ ಎಂದು ಕರೆದಿದ್ದರು. ಸಿಬಿಐಗೆ ಯಾವ, ಯಾವ ಪ್ರಕರಣಗಳನ್ನು ನೀಡಲಾಗಿತ್ತು. ಅವುಗಳು ಏನಾಗಿವೆ, ಐಎಂಎ ಪ್ರಕರಣ ಏನಾಗಿದೆ ಎಂಬುದರ ಬಗ್ಗೆ ನಾನು ಚರ್ಚಿಸುವುದಿಲ್ಲ ಎಂದು ಹೇಳಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,745/Gram24ct ₹7,100/Gram22ct ಬೆಳ್ಳಿ: ₹96.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

## ಅಸ್ಮಾಕಂ ಸಂಸ್ಕೃತಂ

ಇಂದು ಸಿದ್ಧಗಂಗಾ ವಿದ್ಯಾಸಂಸ್ಥೆಯ ಬೆಂಗಳೂರಿನ ಶಿವನಗರದ ಅಂಬುಜಾ ಸಂಸ್ಕೃತ ಪಾಠಶಾಲೆಯ ಅಸ್ಮಾಕಂ ಸಂಸ್ಕೃತಂ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದೆ. ಅಸ್ಮಾಕಂ = ನಮ್ಮ, ಸಂಸ್ಕೃತಂ = ಸಂಸ್ಕೃತ ಭಾಷೆ. ಮಾತನಾಡುವುದರಿಂದ ಭಾಷೆ. ಮಾತನಾಡುವ ಏಕೈಕ ಜೀವಿ ಮಾನವ. ಮಹಾದೇವನೇ ಮಾನವನಲ್ಲಿ ಮಾತಾಗಿ ಪ್ರವೇಶಿಸಿದ.ತುಪ್ಪದಿಂದ ನೆಲ ಒರೆಸಬಾರದು.ಮನಬಂದಂತೆ ಮಾತು ಕೂಡದು. ಮಾತಿನಿಂದ ಬದುಕು ಮಾತಿನಿಂದ ಅಂತ್ಯ. ಹದವರಿತ ಹಿತ ಮಿತ ಶುದ್ಧ ಮಾತು ನಮ್ಮದಾಗಿರಲಿ. ನುಡಿದರೆ ಮುತ್ತಿನ ಹಾರದಂತಿರಬೇಕು. ನುಡಿದಂತೆ ಬರೆವ, ಬರೆದಂತೆ ನುಡಿವ ವಿಶ್ವದ ಅತಿ ಪರಿಶುದ್ಧ ಪ್ರಾಚೀನ ಏಕೈಕ ಭಾಷೆ ಸಂಸ್ಕೃತ. ಇದು ಆಂಗ್ಲದ ಕಟ್ ಪುಟ್ ನಂತಲ್ಲ. ಸಂಸ್ಕೃತದ ವ್ಯಾಕರಣದಂಥ ವ್ಯಾಕರಣ ವಿಶ್ವದ ಇನ್ನಾವ ಭಾಷೆಗಿಲ್ಲ. ಅಂತೆಯೇ ಹತ್ತಾರು ಸಾವಿರ ವರ್ಷಗಳ ಪ್ರಾಚೀನದ ಈ ಭಾಷೆ ಇಂದಿಗೂ ಯಥಾಸ್ವರೂಪದಲ್ಲಿದೆ. ಭಾರತದ ನಾವು ಭಾರತೀಯರು. ಭಾರತೀ ಯ ಸಂಸ್ಕೃತಿಯ ಆಗರ ಸಂಸ್ಕೃತ. ಆದ್ದರಿಂದ ಸಂಸ್ಕೃತ ನಮ್ಮದು. ನಾವು ಲಿಂಗಾಯತರು, ಸಂಸ್ಕೃತ ಬೇಕಿಲ್ಲ ಎಂಬಿತ್ಯಾದಿ ಸರಿಯಲ್ಲ. ಬಸವಣ್ಣಾದಿಗಳ ವಚನ ಸಾಹಿತ್ಯ ಲಿಂಗಾಯತರಿಗೆ ಮಾತ್ರವೇ? ಮಾತೃದೇವೋಭವ ಇದು ವೈದಿಕರಿಗೆ ಬ್ರಾಹ್ಮಣರಿಗೆ ಹಿಂದುಗಳಿಗೆ ಮಾತ್ರವೇ? ಊರಿಗೆ ದಾರಿಯನು ಆರು ತೋರಿದಡೇನು? ಸಮಗ್ರ ಮಾನವಕುಲಕ್ಕೆ ಉಪಯುಕ್ತವಾದ ಅಧ್ಯಾತ್ಮ ತರ್ಕ ಖಗೋಳ ಭೂಗೋಳ ಅರ್ಥಶಾಸ್ತ್ರ ಸಸ್ಯಶಾಸ್ತ್ರ ವೈದ್ಯಶಾಸ್ತ್ರ ಗಣಿತಶಾಸ್ತ್ರ ಪುರಾಣ ಕಾವ್ಯ ಇತಿಹಾಸಾದಿಗಳನ್ನೊಳಗೊಂಡ ಜ್ಞಾನ ವಿಜ್ಞಾನ ಸಹಿತ ಸಂಸ್ಕೃತ ನಮ್ಮದು.ಪ್ರೌಢಶಾಲಾ ಮುಖ್ಯ ಶಿಕ್ಷಕ ಸದಾಶಿವಯ್ಯ, ಸಂಸ್ಕೃತ ಮುಖ್ಯ ಶಿಕ್ಷಕ ಡಾ. ಜಗದೀಶ,ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕಿ ಶಶಿಕಲಾ, ಪಂಕಜಾ ಮೊದಲಾದವರಿದ್ದರು.

## ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ಭರ್ತಿಗೆ ಅರ್ಜಿ ಆಹ್ವಾನ

• **ಉದಯವಾಹಿನಿ, ಬೆಂಗಳೂರು**

2024-25 ನೇ ಸಾಲಿನ ಎನ್.ಹೆಚ್.ಎಂ./ಎನ್.ಯು.ಹೆಚ್.ಎಂ. ಮತ್ತು ಪಿ.ಎಂ.ಅಭೀಮ್ ಕಾರ್ಯಕ್ರಮಗಳಲ್ಲಿ ಖಾಲಿ ಇರುವ ವಿವಿಧ ವೃಂಧದ ಹುದ್ದೆಗಳಿಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ. ಎನ್.ಹೆಚ್.ಎಂ./ಎನ್.ಯು.ಹೆಚ್.ಎಂ. ಮತ್ತು ಪಿ.ಎಂ.ಅಭೀಮ್ ಕಾರ್ಯಕ್ರಮಗಳ ಬಳ್ಳಾರಿ ಜಿಲ್ಲೆಯಲ್ಲಿ 2024-25 ನೇ ಸಾಲಿಗೆ ಖಾಲಿ ಇರುವ ವಿವಿಧ ವೃಂಧದ ಹುದ್ದೆಗಳನ್ನು ನೇಮಕ ಮಾಡಿಕೊಳ್ಳಲು ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಅರ್ಹ ಅಭ್ಯರ್ಥಿಗಳು ಈ ಕೆಳಗೆ ಸೂಚಿಸಿದ ದಿನಾಂಕ ಮತ್ತು ಸ್ಥಳಗಳಲ್ಲಿ ಅರ್ಜಿಗಳನ್ನು ಪಡೆಯಹುದು. ಆಯ್ಕೆಯನ್ನು ಕರ್ನಾಟಕ ಸರ್ಕಾರದ ಸಾಮಾನ್ಯ ನೇಮಕಾತಿ ಮಾರ್ಗಸೂಚಿಯಂತೆ ರೋಸ್ಟರ್ ಹಾಗೂ ಮೆರಿಟ್ ಆಧಾರದ ಮೇಲೆ 371ಜೆ ಮತ್ತು ನಾನ್ 371ಜೆ ಹಾಗೂ ಒಳ ಮೀಸಲಾತಿಯನ್ನು ಪರಿಗಣಿಸಿ ನೇಮಕ ಮಾಡಲಾಗುವುದು. ಹುದ್ದೆಗಳ ಸಂಖ್ಯೆಯನ್ನು ಹೆಚ್ಚಿಸುವ ಹಾಗೂ ಕಡಿಮೆ ಮಾಡುವ ಅಧಿಕಾರವನ್ನು ಆಯ್ಕೆ ಸಮಿತಿ ಕಾಯ್ದಿರಿಸಿಕೊಂಡಿರುತ್ತದೆ. ನೇಮಕಾತಿಗೆ ಸಂಬಂಧಿಸಿದಂತೆ ಆಯ್ಕೆ ಸಮಿತಿಯ ತೀರ್ಮಾನವೇ ಅಂತಿಮವಾಗಿರುತ್ತದೆ, ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9449843102 ಅನ್ನು ಕಛೇರಿ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ.

## ಕಳ್ಳನ ಮನಸ್ಸು ಹುಳ್ಳುಳ್ಳಗೆ: ಸಿಎಂ ಸಿದ್ದರಾಮಯ್ಯ ವಿರುದ್ಧ ಬಿಜೆಪಿ ವಾಗ್ದಾಳಿ

• **ಉದಯವಾಹಿನಿ, ಬೆಂಗಳೂರು**

ಸಿಬಿಐ ಮುಕ್ತ ತನಿಖೆಗೆ ಇದ್ದ ಅಧಿಸೂಚನೆಯನ್ನು ಹಿಂಪಡೆಯಲು ರಾಜ್ಯ ಸಚಿವ ಸಂಪುಟ ಸಭೆ ನಿರ್ಧಾರ ವಿಚಾರವಾಗಿ ಪ್ರತಿಕ್ರಿಯಿಸಿರುವ ರಾಜ್ಯ ಬಿಜೆಪಿ 'ಕಳ್ಳನ ಮನಸ್ಸು ಹುಳ್ಳುಳ್ಳಗೆ' ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಕಿಡಿಕಾರಿದೆ. ಸಿಬಿಐ ತನಿಖಾ ದಳಕ್ಕೆ ಮುಕ್ತ ಅನುಮತಿ ನೀಡಿರುವ ಅಧಿಸೂಚನೆಯನ್ನು ವಾಪಾಸ್ ಪಡೆಯುವ ಮೂಲಕ ಸಿಬಿಐಗೆ ರಾಜ್ಯದಲ್ಲಿ ಅಂಕುಶ ಹಾಕಲು ಸಚಿವ ಸಂಪುಟ ಸಭೆಯಲ್ಲಿ ನಿರ್ಧರಿಸಲಾಗಿದೆ. ಇದೇ ವಿಚಾರವಾಗಿ ಸಾಮಾಜಿಕ ಜಾಲತಾಣಗಳಲ್ಲಿ ಬಿಜೆಪಿ ಸಿಎಂ ಸಿದ್ದರಾಮಯ್ಯ ಅವರ ಕಾಲೆಳೆದಿದೆ. ಕಳ್ಳನ ಮನಸ್ಸು ಹುಳ್ಳುಳ್ಳಗೆ ಯಾವುದೇ ತನಿಖೆಗಾದರೂ ಸಿದ್ದ ಎಂದು ಬೊಗಳೆ ಬಿಟ್ಟಿದ್ದ ಭಂಡ ಸಿದ್ದರಾಮಯ್ಯ ಅವರು ಈಗ ರಾಜ್ಯದಲ್ಲಿ ಸಿಬಿಐನ ಸ್ವತಂತ್ರ ತನಿಖೆಗೆ ಅಡ್ಡಗಾಲು ಹಾಕುವ ನಿರ್ಧಾರವನ್ನು ಕೈಗೊಂಡಿದ್ದಾರೆ. ತಪ್ಪು ಮಾಡಿಲ್ಲ ಎಂದ ಮೇಲೆ ತನಿಖೆ ಎದುರಿಸಲು ಸಿದ್ದರಾಮಯ್ಯ ಅವರಿಗೆ ಭಯ ಏಕೆ ಎಂದು ತಿಳಿಸುವಿರಾ ಕಾಂಗ್ರೆಸ್..?? ಎಂದು ಪ್ರಶ್ನಿಸಿದೆ.

## ಓಣಂ ರಂಗೋಲಿ ಹಾಳು ಮಾಡಿದ ಮಹಿಳೆ ವಿರುದ್ಧ ಎಫ್ಐಆರ್ ದಾಖಲು

• **ಉದಯವಾಹಿನಿ, ಬೆಂಗಳೂರು**

ಬೆಂಗಳೂರಿನಲ್ಲಿ ಓಣಂ ರಂಗೋಲಿ ಹಾಳು ಮಾಡಿದ ಮಹಿಳೆ ವಿರುದ್ಧ ಎಫ್ಐಆರ್ ದಾಖಲಾಗಿದೆ. ಬೆಂಗಳೂರಿನ ಅಪಾರ್ಟ್ಮೆಂಟ್ ಒಂದರಲ್ಲಿ ಕೇರಳ ಮೂಲದ ಕೆಲವು ಮಕ್ಕಳು ಹೂವಿನ ರಂಗೋಲಿಯನ್ನು ಬಿಡಿಸಿದ್ದರು, ತನ್ನ ಅನುಮತಿಯಿಲ್ಲದೆ ಹೂವಿನ ರಂಗೋಲಿ ಹಾಕಿದರೆಂದು ಅದನ್ನು ಕಾಲಿನಿಂದ ಒದ್ದು ಹಾಳು ಮಾಡಿದ್ದರು. ಈ ವಿಡಿಯೋ ಸೋಷಿಯಲ್ ಮೀಡಿಯಾದಲ್ಲಿ ಭಾರೀ ವೈರಲ್ ಆಗಿತ್ತು, ಮಹಿಳೆಯ ದುರ್ವರ್ತನೆಗೆ ಭಾರೀ ಆಕ್ರೋಶ ವ್ಯಕ್ತಪಡಿಸಿದ್ದರು. ಇದೀಗ ಮಹಿಳೆ ವಿರುದ್ಧ ಬೆಂಗಳೂರಿನ ಸಂಪಿಗೆಹಳ್ಳಿ ಪೊಲೀಸ್ ಠಾಣೆಯಲ್ಲಿ ಎಫ್ ಐ ಆರ್ ದಾಖಲಾಗಿದೆ. ಬೆಂಗಳೂರಿನ ಸಂಪಿಗೆಹಳ್ಳಿ ಠಾಣಾ ವ್ಯಾಪ್ತಿಯ ಥಣಿಸಂದ್ರದ ಮೊನಾರ್ಕ್ ಸೆರಿನಿಟಿ ಅಪಾರ್ಟ್ಮೆಂಟ್‌ನಲ್ಲಿ ಈ ಘಟನೆ ನಡೆದಿತ್ತು. ತನ್ನ ಅನುಮತಿಯಿಲ್ಲದೆ ಹೂವಿನ ರಂಗೋಲಿ ಬಿಡಿಸಿದರೆಂದು ರೊಚ್ಚಿಗೆದ್ದ ಮಹಿಳೆ ರಂಗೋಲಿಯನ್ನು ನಾಶ ಮಾಡಿದ್ದಳು.

## ಸೆ.30ಕ್ಕೆ ನಟ ದರ್ಶನ್ ಜಾಮೀನು ಅರ್ಜಿ ವಿಚಾರಣೆ ಮುಂದೂಡಿಕೆ

• **ಉದಯವಾಹಿನಿ, ಬೆಂಗಳೂರು**

ನಟ ದರ್ಶನ್ ಅವರು ಚಿತ್ರದುರ್ಗ ಮೂಲದ ರೇಣುಕಾಸ್ವಾಮಿ ಕೊಲೆ ಕೇಸಲ್ಲಿ ಜೈಲು ಪಾಲಾಗಿದ್ದಾರೆ. ಅವರು ಈ ಪ್ರಕರಣದಲ್ಲಿ ಜಾಮೀನಿಗಾಗಿ ಸಲ್ಲಿಸಿದ್ದಂತ ಅರ್ಜಿಯನ್ನು ಸೆಪ್ಟೆಂಬರ್ 30ಕ್ಕೆ ಕೋರ್ಟ್ ಮುಂದೂಡಿಕೆ. ಹೀಗಾಗಿ ನಟ ದರ್ಶನ್‌ಗೆ ಜೈಲೇ ಗತಿ ಎನ್ನುವಂತೆ ಆಗಿದೆ. ರೇಣುಕಾಸ್ವಾಮಿ ಕೊಲೆ ಕೇಸಲ್ಲಿ ಎ2 ಆರೋಪಿಯಾಗಿರುವಂತ ದರ್ಶನ್ ಜಾಮೀನು ಕೋರಿ ಸಲ್ಲಿಸಿದ್ದಂತ ಅರ್ಜಿಯನ್ನು ಬೆಂಗಳೂರಿನ 57ನೇ ಸಿಟಿ ಸಿವಿಲ್ ನ್ಯಾಯಾಲಯವು ನಡೆಸಿತು. ಹಿರಿಯ ವಕೀಲರು ಬರಬೇಕಿರುವುದರಿಂದ ಕಾಲಾವಕಾಶವನ್ನು ಎಸ್ ಪಿಪಿ ಪ್ರಸನ್ನ ಕುಮಾರ್ ಕೋರಿದರು. ಅಲ್ಲದೇ ದರ್ಶನ್ ಪರ ವಕೀಲರು ವಾದ ಮಂಡಿಸಲು ಕಾಲಾವಕಾಶ ಕೋರಿದ್ದರು. ಹೀಗಾಗಿ ಸೆಪ್ಟೆಂಬರ್.30ಕ್ಕೆ ಕೋರ್ಟ್ ವಿಚಾರಣೆ ಮುಂದೂಡಿದೆ. ಅಂದಹಾಗೇ ನಟ ದರ್ಶನ್ ಅಂಡ ಗ್ಯಾಂಗ್ ರೇಣುಕಾಸ್ವಾಮಿ ಕೊಲೆ ಕೇಸಲ್ಲಿ ಬಂಧನಕ್ಕೆ ಒಳಗಾಗಿ ಬಳ್ಳಾರಿ ಜೈಲು ಪಾಲಾಗಿದ್ದಾರೆ. ಅವರು ಜಾಮೀನು ಕೋರಿ ಅರ್ಜಿ ಸಲ್ಲಿಸಿದ್ದರು. ಈ ಪ್ರಕರಣದಲ್ಲಿ ಕೋರ್ಟ್ ಗೆ ಎಸ್ ಪಿಪಿ ಪ್ರಸನ್ನ ಕುಮಾರ್ ಆಕ್ಷೇಪಣೆ ಸಲ್ಲಿಸಲಾಗಿದೆ. ಹಿರಿಯ ವಕೀಲರು ವಾದ ಮಂಡನೆಗೆ ಬರಬೇಕಿದೆ. ಹೀಗಾಗಿ ಕಾಲಾವಕಾಶ ನೀಡುವಂತೆ ಕೋರಿದರು. ಜೊತೆಗೆ ದರ್ಶನ್ ಪರ ವಕೀಲರು ಪ್ರತಿವಾದ ಮಂಡಿಸಲು ಕಾಲಾವಕಾಶ ಕೋರಿದ್ದರಿಂದಾಗಿ ವಿಚಾರಣೆ ಮುಂದೂಡಿಕೆ ಮಾಡಿದೆ.

# ಸಿಎಂ ವಿರುದ್ಧ ಎಫ್ಐಆರ್ ದಾಖಲಾದರೆ ಪಕ್ಷಕ್ಕೆ ಮುಜುಗರ

### ■ ಡಿಸಿಎಂ ಡಿ ಕೆ ಶಿವಕುಮಾರ್ ಪ್ರತಿಕ್ರಿಯೆ ■ ಸಿಬಿಐ ಮುಕ್ತ ತನಿಖೆಗೆ ರಾಜ್ಯ ಸರ್ಕಾರ ಕಡಿವಾಣ, ಬಿಜೆಪಿ ಟೀಕೆ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಮುಡಾ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ರಾಜ್ಯಪಾಲರು ನೀಡಿದ್ದ ಪ್ರಾಸಿಕ್ಯೂಷನ್ ಅನುಮತಿಯನ್ನು ಹೈಕೋರ್ಟ್ ಎತ್ತಿ ಹಿಡಿದಿದ್ದು, ಸಿದ್ದರಾಮಯ್ಯ ಅವರಿಗೆ ಬಿಗ್ ಶಾಕ್ ಎದುರಾಗಿದೆ. ಇತ್ತ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಎಫ್ ಐಆರ್ ದಾಖಲಾದರೆ ಪಕ್ಷಕ್ಕೆ ಮುಜುಗರ ಎನ್ನುವ ಕುರಿತು ಚರ್ಚೆಯಾಗುತ್ತಿದ್ದು, ಈ ಬಗ್ಗೆ ಡಿ ಕೆ ಶಿವಕುಮಾರ್ ಪ್ರತಿಕ್ರಿಯಿಸಿದ್ದಾರೆ.

ಈ ಕುರಿತು ಮಾಧ್ಯಮಗಳ ಜೊತೆಗೆ ಉಪ ಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ ಕೆ ಶಿವಕುಮಾರ್ ಅವರು ಮಾತ ನಾಡಿ, ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಎಫ್ ಐಆರ್ ದಾಖಲಾದರೆ ಯಾವ ಮುಜುಗರವೂ ಆಗುವುದಿಲ್ಲ ಎಂದು ಉತ್ತರಿಸಿದರು.

**ರಾಜ್ಯಪಾಲರ ಪತ್ರಕ್ಕೆ ಸಂಪುಟದಲ್ಲಿ ಒಪ್ಪಿಗೆ**

ಸಿಬಿಐ ಮುಕ್ತ ತನಿಖೆಗೆ ರಾಜ್ಯ ಸರ್ಕಾರ ಕಡಿವಾಣ ಹಾಕಿರುವ ಬಗ್ಗೆ ಬಿಜೆಪಿ ಟೀಕೆಯ ಬಗ್ಗೆ ಮಾತನಾಡಿ, ದ್ವೇಷದ ರಾಜಕಾರಣಕ್ಕೆ ದಾರಿ ಆಗಬಾರದು ಎನ್ನುವ ಕಾರಣಕ್ಕೆ ಸಿಬಿಐಗೆ ನೀಡಿದ್ದ ಮುಕ್ತ ಅನುಮತಿ ಅಧಿಕಾರವನ್ನು ಹಿಂದಕ್ಕೆ ತೆಗೆದುಕೊಳ್ಳಲಾಗಿದೆ.

ಗಂಭೀರ ಪ್ರಕರಣಗಳು ಎದುರಾದಾಗ ನಮ್ಮ ಅಧಿಕಾರಿಗಳು ತನಿಖೆಗೆ ಸೂಕ್ತರಲ್ಲ ಎನ್ನುವ ಅಭಿಪ್ರಾಯ ಬಂದರೆ, ಆ ವೇಳೆ ಸಿಬಿಐಗೆ ನೀಡುವ ಬಗ್ಗೆ ಚಿಂತನೆ ಮಾಡುತ್ತೇವೆ ಎಂದು ಹೇಳಿದರು.

ಸಿಬಿಐ ಬಗ್ಗೆ ಜನತಾದಳದ ದೇವೇಗೌಡರು, ಕುಮಾರಸ್ವಾಮಿ ಏನು ಮಾತನಾಡಿದ್ದರು ಎಂಬುದು ಎಲ್ಲರಿಗೂ ತಿಳಿದಿದೆ. ಬಿಜೆಪಿಯವರು ಸಿಬಿಐ ಅನ್ನು ಕಾಂಗ್ರೆಸ್ ಬ್ಯೂರೋ ಆಫ್ ಏಜೆನ್ಸಿ ಎಂದು ಕರೆದಿದ್ದರು. ಸಿಬಿಐಗೆ ಯಾವ, ಯಾವ ಪ್ರಕರಣಗಳನ್ನು ನೀಡಲಾಗಿತ್ತು. ಅವುಗಳು ಏನಾಗಿವೆ, ಐಎಂಎ ಪ್ರಕರಣ ಏನಾಗಿದೆ ಎಂಬುದರ ಬಗ್ಗೆ ನಾನು ಚರ್ಚಿಸುವುದಿಲ್ಲ ಎಂದು ಹೇಳಿದರು. ರಾಜ್ಯಪಾಲರ ಪತ್ರಕ್ಕೆ ಸಂಪುಟದಲ್ಲಿ ಒಪ್ಪಿಗೆ ಪಡೆದು ಉತ್ತರ ನೀಡಬೇಕು ಎನ್ನುವ ನಿರ್ಣಯದ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿ, ಅನೇಕ ವಿಚಾರಗಳನ್ನು ಮುಖ್ಯಮಂತ್ರಿಗಳು ಹಾಗೂ ಕ್ಯಾಬಿನೆಟ್ ಗಮನಕ್ಕೆ ತರದೇ ತೀರ್ಮಾನ ಮಾಡಲು ಆಗುತ್ತದೆಯೇ ಆದ ಕಾರಣ ರಾಜ್ಯಪಾಲರ ಪತ್ರಕ್ಕೆ ಸಂಪುಟದಲ್ಲಿ ಒಪ್ಪಿಗೆ ಪಡೆದು ಉತ್ತರ ನೀಡಬೇಕು ಎನ್ನುವ ತೀರ್ಮಾನ ತಗೆದುಕೊಂಡಿದ್ದೇವೆ. ನನಗೂ ನೀತಿ, ನಿಯಮಗಳ ಬಗ್ಗೆ ಸ್ವಲ್ಪ ತಿಳುವಳಿಕೆಯಿದೆ. ನಾನು ವಿದ್ಯಾವಂತ, ಬುದ್ದಿವಂತ ಅಲ್ಲದಿದ್ದರೂ ಪ್ರಜ್ಞಾವಂತಿಕೆ ಹೊಂದಿದ್ದೇನೆ. ಪ್ರತಿಯೊಂದಕ್ಕೂ ನಿಯಮವಿರುತ್ತದೆ. ರಾಜ್ಯಪಾಲರ ಕಚೇರಿಗೆ ಮುಖ್ಯ ಕಾರ್ಯದರ್ಶಿಗಳ ಮೂಲಕ ಉತ್ತರ ಹೋಗಬೇಕು.

**ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆ**

ರಾಜಭವನದಿಂದ ಮಾಹಿತಿ ಸೋರಿಕೆ ಬಗ್ಗೆ ಬಿಜೆಪಿ ಆರೋಪದ ಮಾಡುತ್ತಿದೆ ಎಂದು ಮಾಧ್ಯಮ ಪ್ರತಿನಿಧಿಗಳ ಪ್ರಶ್ನೆಗೆತ್ತರಿಸಿ, ಇದು ರಾಜಭವನದ ಆಂತರಿಕ ವಿಚಾರ. ಇದರ ಬಗ್ಗೆ ನನಗೆ ಮಾಹಿತಿಯಿಲ್ಲ. ಲೋಕಾಯುಕ್ತ ಕಚೇರಿಯಲ್ಲಿ ಏನು ನಡೆಯುತ್ತಿದೆ ಎನ್ನುವ ಬಗ್ಗೆಯೂ ಮಾಹಿತಿಯಿಲ್ಲ ಎಂದರು.

**ಸಿದ್ದರಾಮಯ್ಯ ಅವರ ರಕ್ಷಣೆಗೆ ಹಾಗೂ ಸಿಬಿಐ ತನಿಖೆ ತಪ್ಪಿಸಲು ಈ ಕ್ರಮ ತೆಗೆದುಕೊಳ್ಳಲಾಗಿದೆ ಎನ್ನುವ ಆರೋಪದ ಬಗ್ಗೆ ಮಾತನಾಡಿ, ವಿರೋಧ ಪಕ್ಷದವರು ಮಾತನಾಡಿಕೊಳ್ಳಲಿ, ಇದರ ಬಗ್ಗೆ ಬೇರೆ ಸಮಯದಲ್ಲಿ ಮಾತನಾಡೋಣ ತಿಳಿಸಿದರು**

**ಡಿಸಿಎಂ ಡಿ ಕೆ ಶಿವಕುಮಾರ್**

**ನನ್ನ ಕಚೇರಿಗೆ ಕೆಲವು ದಿನಗಳ ಹಿಂದೆ ಡಿನೋಟಿಫಿಕೇಷನ್ ಅಥವಾ ರೀಡೂ ಸಂಬಂಧಪಟ್ಟ ಕಡತ ಬಂದಿತ್ತು. ನನ್ನ ಕಾರ್ಯದರ್ಶಿ ನನಗೆ ಕಳುಹಿಸಿದ್ದರು. ಇದಕ್ಕೆ ನಾನು, ಬೇರೆಯವರಿಗೆ ಉತ್ತರ ಕೊಡಲು ಆಗುವುದಿಲ್ಲ. ಕ್ಯಾಬಿನೆಟ್‌ನಲ್ಲಿ ಈ ಹಿಂದೆ ತೀರ್ಮಾನವಾದಂತೆ, ಈ ಕುರಿತು ಸಂಪುಟ ಉಪ ಸಮಿತಿ ರಚನೆಯಾಗಿದೆ, ಅಲ್ಲಿಗೆ ಕಳುಹಿಸಿ ಎಂದೆ ಎಂದರು.** **-ಡಿ ಕೆ ಶಿವಕುಮಾರ್**

## ತುಪ್ಪ ತಯಾರಿಕೆಯಲ್ಲಿ ಕಲಬೆರಕೆ ಪತ್ತೆ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ತಿರುಪತಿ ಲಡ್ಡು ಪ್ರಸಾದ ತಯಾರಿಕೆಗೆ ಕಲಬೆರಿಕೆ ತುಪ್ಪ, ಪ್ರಾಣಿಗಳ ಕೊಬ್ಬು ಮಿಶ್ರಿತ ತುಪ್ಪ ಬಳಕೆ ವಿವಾದದ ಬೆನ್ನಲ್ಲೇ ಎಚ್ಚೆತ್ತುಕೊಂಡಿದ್ದ ಕರ್ನಾಟಕ ಸರ್ಕಾರ ರಾಜ್ಯದಲ್ಲಿ ತಯಾರಾಗುವ ತುಪ್ಪದ ಮಾದರಿ ಪರೀಕ್ಷೆಗೆ ಸೂಚಿಸಿತ್ತು.

ಇದೀಗ ರಾಜ್ಯದ ಎರಡು ಘಟಕಗಳ ತಯಾರಾಗುವ ತುಪ್ಪ ಕಲಬೆರಿಕೆ ತುಪ್ಪ ಎಂಬುದು ಪತ್ತೆಯಾಗಿದೆ. ಆಹಾರ ಸುರಕ್ಷತಾ ಇಲಾಖೆ 40 ಕಡೆ ತುಪ್ಪ ಸಂಗ್ರಹಿಸಿ ಪರೀಕ್ಷೆ ನಡೆಸಿತ್ತು. ಈ ವೇಳೆ ರಾಜ್ಯದ ಎರಡು ಕಡೆ ಕಲಬೆರಿಕೆ ತುಪ್ಪ ಕಂಡುಬಂದಿದೆ. ಬೆಂಗಳೂರು ಹಾಗೂ ಬಾಗಲಕೋಟೆಯ ಘಟಕದಲ್ಲಿ ತಯಾರಾಗುವ ತುಪ್ಪ ಸೇಫ್ ಇಲ್ಲ ಎಂದು ತಿಳಿದುಬಂದಿದೆ. ಆಹಾರ ಇಲಾಖೆ ವರದಿ ಹಿನ್ನಲೆಯಲ್ಲಿ ಎರಡೂ ಘಟಕಗಳಿಗೆ ನೋಟಿಸ್ ನೀಡಲಾಗಿದೆ. 30 ದಿನಗಳ ಒಳಗೆ ತುಪ್ಪ ಅಸುರಕ್ಷತೆ ಅಲ್ಲ ಎಂಬುದನ್ನು ಸಾಬೀತುಪಡಿಸಿಕೊಳ್ಳಲು ಇಲಾಖೆ ಸೂಚನೆ ನೀಡಿದೆ. ಮೈಸೂರು ಲ್ಯಾಬ್‌ನಲ್ಲಿ ಖಚಿತತೆಯ ಪರೀಕ್ಷೆ ನಡೆಸಲಾಗುತ್ತಿದೆ. ತಿರುಪತಿ ಲಡ್ಡು ಪ್ರಸಾದ ತಯಾರಿಕೆಯಲ್ಲಿ ಕಲಬೆರಿಕೆ ತುಪ್ಪ ಬಳಕೆ ಪತ್ತೆಯಾದ ಬಳಿಕ ರಾಜ್ಯಾದ್ಯಂತ ದೇವಾಲಯಗಳಲ್ಲಿ ನಂದಿನಿ ತುಪ್ಪ ಕಡ್ಡಾಯ ಮಾಡಿ ಕರ್ನಾಟಕ ಸರ್ಕಾರ ಅದೇಶ ಹೊರಡಿಸಿತ್ತು. ಅಲ್ಲದೇ ರಾಜ್ಯದಲ್ಲಿ ಬೇರೆ ಬೇರೆ ಘಟಕಗಳಲ್ಲಿ ತಯಾರಾಗುವ ತುಪ್ಪದ ಗುಣಮಟ್ಟದ ಪರೀಕ್ಷೆಗೂ ಸೂಚಿಸಿತ್ತು.

## ರಾಜಭವನದಿಂದ ಮಾಹಿತಿ ಸೋರಿಕೆ: ತನಿಖೆ ನಡೆಸಲು ಅನುಮತಿ

• **ಉದಯವಾಹಿನಿ, ಬೆಂಗಳೂರು**




ಉದಯವಾಹಿನಿ ಚಿತ್ರ

ರಾಜ್ಯ ಸರ್ಕಾರ, ರಾಜಭವನದ ನಡುವಿನ ಸಂಘರ್ಷ ಮುಂದುವರೆದಿದೆ. ರಾಜಭವನದಿಂದಲೇ ಮಾಹಿತಿ ಸೋರಿಕೆಯಾಗಿದೆ ಎಂಬ ಆರೋಪ ಕೇಳಿಬರುತ್ತಿದೆ. ಕೇಂದ್ರ ಸಚಿವ ಹೆಚ್.ಡಿ. ಕುಮಾರ ಸ್ವಾಮಿ ವಿರುದ್ಧ ಲೋಕಾಯುಕ್ತರು ಕಾನೂನು ಕ್ರಮ, ತನಿಖೆಗೆ ಅನುಮತಿ ನೀಡುವಂತೆ ಕೋರಿ ರಾಜ್ಯ ಪಾಲರಿಗೆ ಬರೆದಿದ್ದ ಪತ್ರ ಸೋರಿಕೆಯಾಗಿದ್ದು, ಚರ್ಚೆಗೆ ಕಾರಣವಾಗಿತ್ತು. ಇದೀಗ ಇದೇ ವಿಚಾರವಾಗಿ ರಾಜಭವನದ ಅಧಿಕಾರಿಗಳ ವಿರುದ್ಧ ತನಿಖೆ ನಡೆಸಲು ಲೋಕಾಯುಕ್ತ ಮುಂದಾಗಿದೆ.

**ಡಿಜಿ-ಐಜಿಪಿಗೆ ಲೋಕಾಯುಕ್ತ ಪತ್ರ**

ರಾಜಭವನದ ಅಧಿಕಾರಿಗಳ ವಿರುದ್ಧ ತನಿಖೆ ನಡೆಸಲು ಅನುಮತಿ ಕೋರಿ ಡಿಜಿ-ಐಜಿಪಿ ಹಾಗೂ ಎಡಿಜಿಪಿಗೆ ಲೋಕಾಯುಕ್ತ ಎಸ್ಐಟಿ ಐಜಿಪಿ ಚಂದ್ರಶೇಖರ್ ಪತ್ರ ಬರೆದಿದ್ದಾರೆ.

ಹೆಚ್.ಡಿ.ಕುಮಾರಸ್ವಾಮಿ ವಿರುದ್ಧ ಕೇಳಿಬಂದಿರುವ ಗಣಿ ನಿಯಮ ಉಲ್ಲಂಘನೆ ಆರೋಪದ ತನಿಖೆಗೆ ಅಥವಾ ಕಾನೂನು ಕ್ರಮ ತೆಗೆದುಕೊಳ್ಳಲು ಅನುಮತಿ ಕೋರಿ ಲೋಕಾಯುಕ್ತ 2023 ಸೆ.24ರಂದು ರಾಜ್ಯಪಾಲರಿಗೆ ಪ್ರಸ್ತಾವ ಸಲ್ಲಿಸಿತ್ತು. ನಿಯಮಗಳ ಪ್ರಕಾರ ನಾಲ್ಕು ತಿಂಗಳ ಒಳಗೆ ಕಡತ ವಿಲೇವಾರಿ ಮಾಡಬೇಕು.

ಆದರೆ 8 ತಿಂಗಳಾದರೂ ರಾಜ್ಯಪಾಲರ ಸಚಿವಾಲಯದಲ್ಲೇ ಬಾಕಿ ಉಳಿದಿದೆ. ಇದು ಭ್ರಷ್ಟಾಚಾರ ನಿಯಂತ್ರಣ ಕಾಯ್ದೆಯ ಸೆಕ್ಷನ್ 19ರ ಪ್ರಕಾರ ಸ್ಪಷ್ಟ ಉಲ್ಲಂಘನೆಯಾಗಿದೆ. ಕುಮಾರಸ್ವಾಮಿ ವಿರುದ್ಧ ತನಿಖೆಗೆ ಅನುಮತಿ ಕೋರಿ ಲೋಕಾಯುಕ್ತ ರಾಜ್ಯಪಾಲರಿಗೆ ಬರೆದಿದ್ದ ಪತ್ರ ವಿಚರ ಆ.27ರಂದು ಬಹಿರಂಗವಾಗಿತ್ತು.

ಈ ಹಿನ್ನೆಲೆಯಲ್ಲಿ ರಾಜಭವನದಿಂದಲೇ ಮಾಹಿತಿ ಸೋರಿಕೆಯಾಗುತ್ತಿದೆ ಎಂದು ಆಡಳಿತ ಪಕ್ಷ ಕಾಂಗ್ರೆಸ್ ಆರೋಪಿಸಿದೆ.

## ಭೂ ಕಬಳಿಕೆ ಆರೋಪದಲ್ಲಿ ಲೋಕಾಯುಕ್ತಕ್ಕೆ ದೂರು ಸಲ್ಲಿಕೆ!

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಮುಡಾ ಹಗರಣಕ್ಕೆ ಸಂಬಂಧಪಟ್ಟಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಇದೀಗ ಮೈಸೂರು ಲೋಕಾಯುಕ್ತ ಕಚೇರಿಯಲ್ಲಿ ಎಫ್ ಐಆರ್ ದಾಖಲಿಸಲು ಎಲ್ಲಾ ಸಿದ್ಧತೆ ಮಾಡಿಕೊಳ್ಳಲಾಗಿದೆ. ಇದರ ಬೆನ್ನಲ್ಲೇ ಕಾಂಗ್ರೆಸ್ಸಿಗೆ ಮತ್ತೊಂದು ಬಿಗ್ ಶಾಕ್ ಎದುರಾಗಿದ್ದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕುಟುಂಬದ ವಿರುದ್ಧ ಲೋಕಾಯುಕ್ತಕ್ಕೆ ದೂರು ಸಲ್ಲಿಸಲಾಗಿದೆ.

ಹೌದು ಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಕುಟುಂಬದ ವಿರುದ್ಧ ಸುಮಾರು 394 ಪುಟಗಳ ದಾಖಲೆ ಸಮೇತ ಮಾಜಿ ಕರ್ಪೊರೇಟರ್ ಎನ್ ಆರ್ ರಮೇಶ್ ಎನ್ನುವವರು ದೂರು ನೀಡಿದ್ದಾರೆ. ಮಲ್ಲಿಕಾರ್ಜುನ ಖರ್ಗೆ ಪುತ್ರರಾದ ಪ್ರಿಯಾಂಕ ಖರ್ಗೆ, ರಾಹುಲ್ ಖರ್ಗೆ, ಅಳಿಯ ರಾಧಾಕೃಷ್ಣ ಹಾಗೂ ಕುಟುಂಬದ ಹೆಸರಲ್ಲಿನ ಇರುವ ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಅಕ್ರಮವಾಗಿ ಸರ್ಕಾರಿ ಭೂಮಿ ಪರಭಾರೆ ಮಾಡಿಸಿಕೊಂಡ ಆರೋಪದ ಹಿನ್ನೆಲೆಯಲ್ಲಿ ಹಾಗೂ ಶೈಕ್ಷಣಿಕ ಉದ್ದೇಶಕ್ಕೆಂದು ಎರಡೆರಡು ಬಾರಿ ಭೂಮಿ ಪಡೆದಿದ್ದಾರೆ ಎಂದು ಆರೋಪಿಸಿದ್ದಾರೆ. 2014ರಲ್ಲಿ ಬಿಟಿಎಂ 4ನೇ ಸ್ಟೇಜಿನ ಎರಡನೇ ಬ್ಲಾಕ್ ನಲ್ಲಿ ಎರಡು ಎಕರೆ ಹಾಗೂ ಬಿಡಿಎ ವ್ಯಾಪ್ತಿಯ ಸಿಎ ನಿವೇಶನ ಪರಭಾರೆ ಮಾಡಿಸಿಕೊಂಡ ಆರೋಪ ಕೇಳಿಬಂದಿದೆ. 2024ರಲ್ಲಿ ಬಾಗಲೂರು ಬಳಿ 5 ಎಕರೆ ಅಷ್ಟು ಕೆಐಎಡಿಬಿ ಭೂಮಿಯನ್ನು ಪರಭಾರೆ ಮಾಡಿಕೊಂಡಿದ್ದಾರೆ.

ಇದರಲ್ಲಿ ಸಚಿವ ಎಂಬಿ ಪಾಟೀಲ್ ಹಾಗೂ ಐಎಎಸ್ ಅಧಿಕಾರಿಗಳು ಕೂಡ ಭಾಗಿಯಾಗಿದ್ದಾರೆ. ಒಟ್ಟು 7 ಜನರ ವಿರುದ್ಧ ಮಾಜಿ ಕರ್ಪೊರೇಟರ್ ಎನ್. ಆರ್. ರಮೇಶ್ ದೂರು ಸಲ್ಲಿಸಿದ್ದಾರೆ.ಮಲ್ಲಿಕಾರ್ಜುನ ಖರ್ಗೆ ಕುಟುಂಬಸ್ಥರ ಸಿದ್ಧಾರ್ಥ ವಿಹಾರ ಟ್ರಸ್ಟ್ ಸಂಸ್ಥೆ ಹೆಸರಿಗೆ ಒಂದೇ ಉದ್ದೇಶಕ್ಕೆ 2 ಪ್ರತ್ಯೇಕ ಸರ್ಕಾರಿ ಸಂಸ್ಥೆಗಳ ಮೂಲಕ 2 ಬೃಹತ್ ಆಸ್ತಿಗಳ ಹಂಚಿಕೆ ಆರೋಪ ಕೇಳಿಬಂದಿದೆ.

**ಮಂಜೂರು ಮಾಡಿಸಿರುವ ಆರೋಪ**

**ಸಿದ್ಧಾರ್ಥ ವಿಹಾರ ಟ್ರಸ್ಟ್‌ನ ಅಧ್ಯಕ್ಷರು ಹಾಗೂ ಟ್ರಸ್ಟಿಗಳಾಗಿರುವ ಮಲ್ಲಿಕಾರ್ಜುನ ಖರ್ಗೆ ಮತ್ತು ಅವರ ಪತ್ನಿ ರಾಧಾಬಾಯಿ, ಖರ್ಗೆ, ಮಕ್ಕಳಾದ ಸಚಿವ ಪ್ರಿಯಾಂಕ್ ಖರ್ಗೆ, ರಾಹುಲ್ ಖರ್ಗೆ ಹಾಗೂ ಅಳಿಯ ರಾಧಾಕೃಷ್ಣ ಅವರನ್ನು ಒಳಗೊಂಡಿರುವ ಸಿದ್ಧಾರ್ಥ ವಿಹಾರ ಟ್ರಸ್ಟ್, ಶಿಕ್ಷಣ ವ್ಯವಸ್ಥೆ ಎಂಬ ಹೆಸರಿನಲ್ಲಿ ಬೇರೆ ಬೇರೆ ಸ್ಥಳಗಳಲ್ಲಿ ಬೇರೆ ಬೇರೆ ಸರ್ಕಾರಿ ಸಂಸ್ಥೆಗಳಿಂದ ಕಾನೂನು ಬಾಹಿರವಾಗಿ ಸರ್ಕಾರಿ ಸ್ವತ್ತುಗಳನ್ನು ಅಧಿಕಾರ ಮತ್ತು ರಾಜಕೀಯ ಪ್ರಭಾವವನ್ನು ಬಳಸಿಕೊಂಡು ಮಂಜೂರು ಮಾಡಿಸಿಕೊಂಡಿರುವ ಆರೋಪ ಕೇಳಿ ಬಂದಿರುವ ಹಿನ್ನೆಲೆ ದೂರು ದಾಖಲಾಗಿದೆ.**

## ಕೋರ್ಟ್ ಆದೇಶದಂತೆ ಸಿಎಂ ವಿರುದ್ಧ ಎಫ್ಐಆರ್ ದಾಖಲು

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್ ಐಆರ್ ದಾಖಲಿಸಿ ತನಿಖೆ ನಡೆಸುವಂತೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಆದೇಶ ನೀಡಿದ್ದು, ಇಂದು ಸಿಎಂ ಸಿದ್ದರಾಮಯ್ಯ ಸೇರಿದಂತೆ ಕುಟುಂಬಸ್ಥರ ವಿರುದ್ಧ ಎಫ್ಐಆರ್ ದಾಖಲಿಸಲು ಮೈಸೂರು ಲೋಕಾಯುಕ್ತ ಎಡಿಜಿಪಿ ಮನೀಶ್ ಖರ್ಬಿಕರ್ ಸೂಚನೆ ನೀಡಿದ್ದಾರೆ.

ಮೈಸೂರು ಲೋಕಾಯುಕ್ತ ಎಸ್ ಪಿ ಉದೇಶ್ ಇಂದು ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್ ಐಆರ್ ದಾಖಲಿಸುವ ಸಾಧ್ಯತೆ ಇದೆ. ದೂರುದಾರ ಸ್ನೇಹಮಯಿ ಕೃಷ್ಣ ಅವರ ದೂರಿನ ಮೇರೆಗೆ ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್ಐಆರ್ ದಾಖಲಿಸಿ ತನಿಖೆ ನಡೆಸುವಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶ ನೀಡಿದ್ದು, ಸ್ನೇಹಮಯಿ ಕೃಷ್ಣ ದೂರಿನ ಮೇರೆಗೆ ಸಿಎಂ ಸಿದ್ದರಾಮಯ್ಯ ಎ1, ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿ ಎ2, ಪತ್ನಿ ಸಹೋದರ ಮಲ್ಲಿಕಾರ್ಜುನ್ ಸ್ವಾಮಿ ಎ3, ಜಮೀನು ಮಾರಿದ ದೇವರಾಜು ಎ4 ಹಾಗೂ ಇತರರ ವಿರುದ್ಧ ದೂರು ದಾಖಲಿಸಲು ಮೈಸೂರು ಲೋಕಾಯುಕ್ತ ಸಿದ್ಧತೆ ನಡೆಸಿದೆ.

**ಮೈಸೂರು ಜಿಲ್ಲಾ ಲೋಕಾಯುಕ್ತ ಎಸ್ಪಿ ಉದೇಶ್ ಹೈಕೋರ್ಟ್ ಮತ್ತು ಜನಪ್ರತಿನಿಧಿಗಳ ನ್ಯಾಯಾಲಯದ ಆದೇಶ ಪ್ರತಿಗಳನ್ನು ಅಧಿಕೃತವಾಗಿ ಪಡೆದುಕೊಂಡು ಲೋಕಾಯುಕ್ತ ಪ್ರಧಾನ ಕಚೇರಿಗೆ ಭೇಟಿ ನೀಡಿ ಹಿರಿಯ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದ್ದು, ಲೋಕಾಯುಕ್ತ ಎಡಿಜಿಪಿ ಮನೀಶ್ ಖರ್ಬಿಕರ್ ಸೂಚನೆ ಮೇರೆಗೆ ಅಖಕಅ ಸೆಕ್ಷನ್ ಅಡಿಯಲ್ಲಿ ಎಫ್ ಐಆರ್ ದಾಖಲಿಸಿ ತನಿಖೆ ನಡೆಸುವಂತೆ ಸೂಚನೆ ನೀಡಿದ್ದು, ಕೆಲವೇ ಗಂಟೆಗಳಲ್ಲಿ ಮೈಸೂರು ಲೋಕಾಯುಕ್ತ ಕಚೇರಿಯಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ಎಫ್ಐಆರ್ ದಾಖಲಾಗಲಿದೆ.**

## ಅಡುಗೆ ಎಣ್ಣೆ ದರ ದಿಢೀರ್ 20 ರೂ. ಹೆಚ್ಚಳ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಹಬ್ಬದ ಸಂದರ್ಭದಲ್ಲಿಯೇ ಖಾದ್ಯ ತೈಲ ದರ ದಿಢೀರ್ ಏರಿಕೆ ಕಂಡಿದೆ. ಲೀಟರ್‌ಗೆ 15 ರಿಂದ 20 ರೂಪಾಯಿವರೆಗೂ ಅಡುಗೆ ಎಣ್ಣೆ ದರ ಹೆಚ್ಚಳವಾಗಿದ್ದು, ಜನಸಾಮಾನ್ಯರಿಗೆ ಬೆಲೆ ಏರಿಕೆ ಬಿಸಿ ತಟ್ಟಿದೆ. ಹೋಟೆಲ್‌ಗಳು, ಮನೆಗಳಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಳಕೆ ಮಾಡುವ ಸೂರ್ಯಕಾಂತಿ ಎಣ್ಣೆ ದರ ಪ್ರತಿ ಕೆಜಿಗೆ 110 ರಿಂದ 130ರೂ.ಗೆ ಹೆಚ್ಚಳವಾಗಿದ್ದು, ಶೇಂಗಾ ಎಣ್ಣೆ ದರ ಕೆಜಿಗೆ 145 ರಿಂದ 160 ರೂ.ಗೆ ಏರಿಕೆಯಾಗಿದೆ. ಸೋಯಾಬಿನ್, ತಾಳೆ ಎಣ್ಣೆ ದರ ಕೆಜಿಗೆ 15 ರೂಪಾಯಿವರೆಗೆ ಹೆಚ್ಚಳವಾಗಿದೆ. ಕೇಂದ್ರ ಸರ್ಕಾರ ಖಾದ್ಯ ತೈಲದ ಮೇಲಿನ ಮೂಲ ಕಸ್ಟಮ್ಸ್ ಸುಂಕ ಏರಿಕೆ ಮಾಡಿದ ಹಿನ್ನೆಲೆಯಲ್ಲಿ ಖಾದ್ಯ ತೈಲಗಳ ಚಿಲ್ಲರೆ ದರದಲ್ಲಿ ಏರಿಕೆಯಾಗಿದೆ. ಮುಂದಿನ ದಿನಗಳಲ್ಲಿ ಅಡುಗೆ ಎಣ್ಣೆ ದರ ಮತ್ತಷ್ಟು ಏರಿಕೆ ಕಾಣಲಿದೆ ಎಂದು ಹೇಳಲಾಗಿದೆ. ಹಬ್ಬದ ಸಂದರ್ಭದಲ್ಲಿ ಅಡುಗೆ ಎಣ್ಣೆ ದರ ಏರಿಕೆಯಾಗಿರುವುದರಿಂದ ಗ್ರಾಹಕರಿಗೆ ಹೊರೆಯಾಗಿ ಪರಿಣಮಿಸಿದೆ.

ಸಾಮಾನ್ಯವಾಗಿ ಅಡುಗೆ ಎಣ್ಣೆ ದರ ಕೆಜಿಗೆ ಒಂದರಿಂದ ಎರಡು ರೂಪಾಯಿ ಏರಿಕೆ ಆಗುತ್ತಿತ್ತು. ಈಗ ದಿಢೀರ್ 20 ರೂ. ಹೆಚ್ಚಳವಾಗಿರುವುದರಿಂದ ಹೋಟೆಲ್, ಬೇಕರಿಗಳಲ್ಲಿ ಊಟ, ತಿಂಡಿ, ಚಿಪ್ಸ್, ಸಿಹಿ ಪದಾರ್ಥ, ಇತರೆ ತಿನಿಸುಗಳ ಬೆಲೆ ಏರಿಕೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ.

# ಮಹಾಲಕ್ಷ್ಮಿ ಹತ್ಯೆಗೆ ಪ್ರೇರಣೆಯಾಯ್ತಾ ಶ್ರದ್ಧಾ ವಾಕರ್ ಪ್ರಕರಣ?

### ■ ಆರೋಪಿ ಮುಕ್ತಿ ರಂಜನ್ ಪ್ರತಾಪ್ ಬರೆದ ಡೆತ್ ನೋಟ್ ■ ಕರ್ನಾಟಕ ಪೊಲೀಸರಿಗೆ ಹಸ್ತಾಂತರ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ರಾಜ್ಯ ರಾಜಧಾನಿ ಬೆಂಗಳೂರಲ್ಲಿ ಬರ್ಬರವಾಗಿ ಮಹಾಲಕ್ಷ್ಮಿ ಹತ್ಯೆ ಪ್ರಕರಣದೇಶಾದ್ಯಂತ ಸಂಚಲನ ಮೂಡಿಸಿದೆ. 40ಕ್ಕೂ ಹೆಚ್ಚು ತುಂಡುಗಳನ್ನಾಗಿ ಮಾಡಿ ಫ್ರಿಡ್ಜ್‌ನಲ್ಲಿ ಇರಿಸಿದ್ದ ಮಹಾಲಕ್ಷ್ಮೀ ಮೃತದೇಹವನ್ನು ಹೊರತೆಗೆಯಲಾಯಿತು. ಪ್ರಕರಣದ ತನಿಖೆ ವೇಳೆ ಸುಮಾರು 20 ದಿನಗಳ ಹಿಂದೆ ಅಂದರೆ ಸೆಪ್ಟೆಂಬರ್ 2 ರಿಂದ 3 ರ ನಡುವೆ ಕೊಲೆ ನಡೆದಿದೆ ಎಂದು ತಿಳಿದು ಬಂದಿದೆ. ಈ ಘಟನೆ ಶ್ರದ್ಧಾ ವಾಕರ್ ಪ್ರಕರಣವನ್ನು ಹೋಲುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಚರ್ಚೆಗಳು ಆರಂಭವಾಗಿದೆ.

ಮಹಾಲಕ್ಷ್ಮಿ ಹತ್ಯೆ ಕೇಸ್‌ನ ಆರೋಪಿ ಮುಕ್ತಿ ರಂಜನ್ ಪ್ರತಾಪ್ ಬರೆದ ಡೆತ್‌ನೋಟ್ ಅನ್ನು ಒಡಿಶಾ ಪೊಲೀಸರು ಕರ್ನಾಟಕ ಪೊಲೀಸರಿಗೆ ಹಸ್ತಾಂತರಿಸಿದ್ದಾರೆ. ಮಹಾಲಕ್ಷ್ಮಿ, ನಾನು ಇಬ್ಬರೂ ಆತ್ಮೀಯವಾಗಿದ್ದೆವು. ಆದರೆ ಸಣ್ಣ ಸಣ್ಣ ವಿಚಾರಗಳಿಗೂ ಜಗಳವಾಡುತ್ತಿದ್ದಳು. ಇದು ನನಗೆ ಇಷ್ಟವಾಗುತ್ತಿರಲಿಲ್ಲ. ಆತ್ಮೀಯವಾಗಿದ್ದರೂ ಮುನಿಸಿಕೊಳ್ಳುವುದು ಏಕೆ ಎಂದು ನನಗೆ ತಿಳಿಯುತ್ತಿರಲಿಲ್ಲ. ಸೆಪ್ಟೆಂಬರ್ 3ರಂದು ನಾನು ಆಕೆಯನ್ನು ಭೇಟಿಯಾಗಲು ಮನೆಗೆ ಹೋಗಿದ್ದೆ.

ಅಂದು ಸಹ ಜಗಳವಾಯಿತು. ಜಗಳವಾಡುವಾಗ ಆಕೆ ನನ್ನ ಮೇಲೆ ಹಲ್ಲೆ ಮಾಡಿದ್ದಳು. ನಾನು ಪ್ರತಿಯಾಗಿ ಹಲ್ಲೆ ಮಾಡಿದೆ.

**ಪ್ರಕರಣದ ತನಿಖೆ ಆರಂಭ**

ಬಳಿಕ ಕೊಲೆ ಮಾಡಿ ಮೃತದೇಹವನ್ನು ತುಂಡುಗಳನ್ನಾಗಿ ಕತ್ತರಿಸಿ ಫ್ರಿಡ್ಜ್‌ನಲ್ಲಿ ಇಟ್ಟಿದ್ದೆ ಎಂದು ಡೆತ್‌ನೋಟ್‌ನಲ್ಲಿ ಬರೆದಿದ್ದಾನೆ ಎಂದು ಹೇಳಲಾಗಿದೆ. ಶ್ರದ್ಧಾ ವಾಕರ್ ಡೇಟಿಂಗ್ ಆ್ಯಪ್ ಮೂಲಕ ಅಫ್ತಾಬ್ ಅಮೀನ್ ಪೂನಾವಾಲಾ ಅವರನ್ನು ಭೇಟಿಯಾಗಿದ್ದರು. ನಂತರ ಇಬ್ಬರೂ ದೆಹಲಿಗೆ ಬಂದು ಮೆಹ್ರಾಲಿಯ ಛತ್ತರ್‌ಪುರ ಪ್ರದೇಶ ದಲ್ಲಿ ಬಾಡಿಗೆ ಫ್ಲಾಟ್‌ನಲ್ಲಿ ಲಿವಿಂಗ್ ಟು ಗೆದರ್ ರಿಲೇಷನ್‌ಶಿಪ್‌ನಲ್ಲಿ ಇದ್ದರು. ಮೇ 2022ರಲ್ಲಿ ಮದುವೆ ವಿಚಾರವಾಗಿ ಇಬ್ಬರ ನಡುವೆ ಜಗಳವಾಗಿತ್ತು. ಜಗಳದಿಂದ ಕೋಪಗೊಂಡ ಅಫ್ತಾಬ್ ಶ್ರದ್ಧಾಳನ್ನು ಬರ್ಬರವಾಗಿ ಹತ್ಯೆ ಮಾಡಿ ಆಕೆಯ ದೇಹವನ್ನು 35 ತುಂಡುಗಳಾಗಿ ಕತ್ತರಿಸಿದ್ದಾನೆ. ಪ್ರಕರಣದ ತನಿಖೆ ನಡೆಸಿದ ಪೊಲೀಸರು ಅಫ್ತಾಬ್ ಮನೆ ಮೇಲೆ ದಾಳಿ ನಡೆಸಿ ಬಂಧಿಸಿದ್ದರು. ಶ್ರದ್ಧಾ ವಾಕರ್ ಅವರ ದೇಹದ ಕತ್ತರಿಸಿದ ತುಂಡುಗಳನ್ನು ಅಫ್ತಾಬ್ ಮನೆಯ ರೆಫ್ರಿಜರೇಟರ್‌ನಲ್ಲಿ ಸಂಗ್ರಹಿಸಿದ್ದ. ಪ್ರತಿದಿನ ರಾತ್ರಿ 2 ಗಂಟೆ ಸುಮಾರಿಗೆ ಶ್ರದ್ಧಾ ಅವರ ದೇಹದ ತುಂಡುಗಳನ್ನು ಸಮೀಪದ ಕಾಡಿನಲ್ಲಿ ವಿವಿಧೆಡೆ ಎಸೆದಿದ್ದಾಗಿ ವಿಚಾರಣೆಯಲ್ಲಿ ತಿಳಿದು ಬಂತು. ಕಳೆದ ವರ್ಷ ಜನವರಿಯಲ್ಲಿ ದೆಹಲಿ ಪೊಲೀಸರು ಸಲ್ಲಿಸಿದ್ದ 6629 ಪುಟ ಗಳ ಚಾರ್ಜ್‌ಶೀಟ್‌ನಲ್ಲಿ ಶ್ರದ್ಧಾ ಅವರ ಹತ್ಯೆ ಸಂಪೂರ್ಣ ಮಾಹಿತಿಯನ್ನು ಉಲ್ಲೇಖಿಸಲಾಗಿದೆ.

**ಹತ್ಯೆಯ ನಂತರ ಮುಕ್ತಿ ರಂಜನ್ ಪ್ರತಾಪ್ ತನ್ನ ಕಿರಿಯ ಸಹೋದರನಿಗೆ ಕರೆ ಮಾಡಿ ಬಾಡಿಗೆ ಮನೆಯನ್ನು ಕೂಡಲೇ ಖಾಲಿ ಮಾಡುವಂತೆ ಸೂಚಿಸಿದ್ದ ಎನ್ನಲಾಗಿದೆ. ತನ್ನ ಸಹೋದರ ಕಾರಣ ಕೇಳಿದಾಗ ಫೋನ್‌ನಲ್ಲಿ ಹೇಳಲು ಸಾಧ್ಯವಿಲ್ಲ ಖುದ್ದಾಗಿ ಹೇಳುವುದಾಗಿ ತಿಳಿಸಿದ್ದ ಎಂದು ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಕೊಲೆ ಮಾಡಿದ ನಂತರ ಮುಕ್ತಿ ರಂಜನ್ ಪ್ರತಾಪ್ ಮನೆಗೆ ಹಿಂದಿರುಗಿ ಅಪರಾಧವನ್ನು ಒಪ್ಪಿಕೊಂಡಿದ್ದು, ತಾನು ಇನ್ನು ಮುಂದೆ ನಗರದಲ್ಲಿ ವಾಸಿಸಲು ಸಾಧ್ಯವಿಲ್ಲ. ತನ್ನ ಹುಟ್ಟೂರಿಗೆ ಹೋಗುತ್ತೇನೆಂದು ತಿಳಿಸಿದ್ದಾಗಿ ವಿಚಾರಣೆ ವೇಳೆ ಆತನ ಸಹೋದರ ಹೇಳಿದ್ದಾನೆ ಎನ್ನಲಾಗಿದೆ.**

**ಪ್ರಕರಣದ ತನಿಖೆಯನ್ನು ಆರಂಭಿಸಿದ ಪೊಲೀಸರು ಆರೋಪಿಗಾಗಿ ಹುಡುಕಾಟ ನಡೆಸಿದ್ದರು. ಆರೋಪಿಯನ್ನು 31 ವರ್ಷದ ಮುಕ್ತಿ ರಂಜನ್ ಪ್ರತಾಪ್ ಎಂದು ಗುರುತಿಸಲಾಯಿತು. ಆದರೆ ಆತ ಒಡಿಶಾದ ಭದ್ರಕ್ ಜಿಲ್ಲೆಯ ಧುಸುರಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಶವವಾಗಿ ಪತ್ತೆಯಾಗಿದ್ದಾನೆ. ಮರದಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾನೆ ಎಂದು ಉಪಪೊಲೀಸ್ ಆಯುಕ್ತ (ಕೇಂದ್ರ) ಶೇಖರ್ ಎಚ್ ತೆಕ್ಕಣ್ಣವರ್ ತಿಳಿಸಿದರು. ಸ್ಥಳದಲ್ಲಿ ದೊರೆತ ಸೂಸೈಡ್ ನೋಟ್‌ನಲ್ಲಿ ಆತ ಅಪರಾಧವನ್ನು ಒಪ್ಪಿಕೊಂಡಿದ್ದಾನೆ ಎಂದು ಒಡಿಶಾ ಪೊಲೀಸರು ತಿಳಿಸಿದ್ದಾರೆ.**

# ಸಿಎಂಗೆ ಈ ಸ್ಥಿತಿ ಬರೋಕೆ ನೀನೇ ಕಾರಣ: ಕೈ ನಾಯಕರು ಕೆರಳಿದ್ದು ಯಾರ ಮೇಲೆ?

## ಸಿದ್ದರಾಮಯ್ಯ ಅವರ ಸ್ವಾಗತಕ್ಕೆ ಬಂದಿದ್ದ ಸ್ವಪಕ್ಷದವರೇ ಆದ ಮುಡಾ ಅಧ್ಯಕ್ಷ ಕೆ.ಮರಿಗೌಡ ಅವರಿಗೆ ಕಾಂಗ್ರೆಸ್ ನಾಯಕರು ಘೇರಾವ್

• **ಉದಯವಾಹಿನಿ, ಮೈಸೂರು**





ಉದಯವಾಹಿನಿ ಚಿತ್ರ

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಬದಲಿ ನಿವೇಶನ ಪ್ರಕರಣವು ಸಿಎಂ ಸಿದ್ದರಾಮಯ್ಯ ಅವರನ್ನು ಬೇತಾಳದಂತೆ ಬೆನ್ನತ್ತಿದೆ. ಇದೇ ವಿಚಾರ ಸಿಎಂ ಸಿದ್ದರಾಮಯ್ಯ ಅವರ ಕುರ್ಚಿಯನ್ನು ಕೂಡ ಅಲುಗಾಡಿಸಿದೆ. ಇಷ್ಟಕ್ಕೆಲ್ಲ ಕಾರಣರಾದ ವ್ಯಕ್ತಿಯೊಬ್ಬರ ಮೇಲೆ ಕಾಂಗ್ರೆಸ್ ನಾಯಕರು ಕೆಂಡಾಮಂಡಲವಾಗಿದ್ದಾರೆ.

ಹೌದು, ಇಂದಿನಿಂದ ಮೂರು ದಿನಗಳ ಕಾಲ ಮೈಸೂರು ಪ್ರವಾಸದಲ್ಲಿರುವ ಸಿಎಂ ಸಿದ್ದರಾಮಯ್ಯ ಅವರನ್ನು ಬರಮಾಡಿಕೊಳ್ಳಲು ಅಲ್ಲಿನ ಕಾಂಗ್ರೆಸ್ ನಾಯಕರು ಹಾಗೂ ಕಾರ್ಯಕರ್ತರು ಮೈಸೂರು ಏರ್‌ಪೋರ್ಟ್ ಬಳಿ ಜಮಾಯಿಸಿದ್ದರು. ಈ ವೇಳೆ ಸಿದ್ದರಾಮಯ್ಯ ಅವರ ಸ್ವಾಗತಕ್ಕೆ ಬಂದಿದ್ದ ಸ್ವಪಕ್ಷದವರೇ ಆದ ಮುಡಾ ಅಧ್ಯಕ್ಷ ಕೆ.ಮರಿಗೌಡ ಅವರಿಗೆ ಕಾಂಗ್ರೆಸ್ ನಾಯಕರು ಘೇರಾವ್ ಹಾಕಿ, ಹೈಡ್ರಾಮ ನಡೆಸಿರುವ ಘಟನೆ ವರದಿಯಾಗಿದೆ. ಇಷ್ಟಕ್ಕೆಲ್ಲ ನೀನೇ ಕಾರಣ....ಸಿಎಂ ಸಿದ್ದರಾಮಯ್ಯ ಅವರನ್ನು ಈ ಸ್ಥಿತಿಗೆ ತಂದಿದ್ದು ನೀನೇ' ಎಂದು ಮರಿಗೌಡ ಅವರ ವಿರುದ್ಧ ಎಲ್ಲರೂ ರೌಂಡಪ್ ಆಗಿದ್ದಾರೆ. ಕೊನೆಗೆ ಮರಿಗೌಡ ಅವರನ್ನು ಅಲ್ಲಿಂದ ಕಾರು ಹತ್ತಿಸಿ ಕಳಿಸಿಬಿಟ್ಟರು ಎನ್ನಲಾಗಿದೆ. ಸಿಎಂ ಆಪ್ತನೂ ಎನ್ನಲಾದ ಮರಿಗೌಡ ಅಲ್ಲಿದ್ದವರ ಮನವೊಲಿಸಲು ಮುಂದಾದರೂ ಅವರ ಕೋಪ ತಣ್ಣಗಾಗಲಿಲ್ಲ. ಕೆಲವರು ಏಕವಚನದಲ್ಲಿ ಹಾಗೂ ಅವಾಚ್ಯ ಶಬ್ದಗಳಿಂದ ಮರಿಗೌಡ ಅವರನ್ನು ನಿಂದಿಸಿದ್ದಾರೆ.

**ಮೊದಲು ಇಲ್ಲಿಂದ ಜಾಗ ಖಾಲಿ ಮಾಡು**

ನಿನ್ನ ಭಾಷಣ ನಮ್ಮತ್ರ ಬೇಡ, ಮೊದಲು ಇಲ್ಲಿಂದ ಜಾಗ ಖಾಲಿ ಮಾಡು. ಇಲ್ಲಾಂದ್ರೆ ಪರಿಣಾಮ ನೆಟ್ಟಗಿರಲ್ಲ ಎಂದು ವಾರ್ನ್ ಕೂಡ ಮಾಡಿದ್ದಾರಂತೆ. ಪರಿಸ್ಥಿತಿ ಬೇರೆ ಕಡೆ ತಿರುಗುವ ಮುನ್ನವೇ ಮರಿಗೌಡ ಅಲ್ಲಿಂದ ಹೊರಟಿದ್ದಾರೆ ಎಂದು ಹೇಳಲಾಗಿದೆ.

ಇದಕ್ಕೂ ಮುನ್ನ ಕಾಂಗ್ರೆಸ್ ಮುಖಂಡರೆಲ್ಲ ಮರೀಗೌಡ ಅವರಿಗೆ ಧಿಕ್ಕಾರ ಕೂಗಿದ್ದಾರೆ. ನಿನ್ನೊಬ್ಬ ನಿಂದಲೇ ಇಂದು ಸಿಎಂ ಸಿದ್ದರಾಮಯ್ಯ ಅವರಿಗೆ ಇಂತಹ ಪರಿಸ್ಥಿತಿ ಬಂದಿದೆ. ನೀನೇ ಕಾರಣ ಇದಕ್ಕೆಲ್ಲ ಎಂದು ಜೋರಾಗಿ ಕೋಪದ ಮಾತುಗಳನ್ನಾಡಿದ್ದಾರೆ ಎಂದು ವರದಿಯಾಗಿದೆ.

ಬಳಿಕ ವಿಶೇಷ ವಿಮಾನದಲ್ಲಿ ಮೈಸೂರಿಗೆ ಬಂದ ಸಿದ್ದರಾಮಯ್ಯ ಅವರನ್ನು ಕಾಂಗ್ರೆಸ್ ಮುಖಂಡರು ಬರಮಾಡಿಕೊಂಡರು. ಈ ವೇಳೆ ಮಾತನಾಡಿರುವ ಸಿಎಂ ಸಿದ್ದರಾಮಯ್ಯ, ಸಂವಿಧಾನದಿಂದ ಆಯ್ಕೆಯಾದ ರಾಜ್ಯಪಾಲರು ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವುದು ಸರಿಯಲ್ಲ. ದೇಶದಲ್ಲಿ ಎಲ್ಲೆಲ್ಲಿ ವಿರೋಧಪಕ್ಷಗಳ ಸರ್ಕಾರವಿದೆಯೋ, ಅಲ್ಲಿ ಕೇಂದ್ರ ಬಿಜೆಪಿ ಸರ್ಕಾರವು ಇ.ಡಿ ಹಾಗೂ ರಾಜಭವನದ ಕಚೇರಿಯನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ದೂರಿದರು. ಮುಡಾ ಪ್ರಕರಣದಲ್ಲಿ ಕಾನೂನು ಪ್ರಕಾರ ಹೋರಾಟ ಮಾಡುತ್ತೇನೆ. ನನ್ನ ಜೊತೆಗಿನ ಜನ ಬೆಂಬಲದಿಂದ ಬೆದರಿರುವ ಪ್ರತಿಪಕ್ಷಗಳು, ನನ್ನ ಮೇಲೆ ರಾಜಕೀಯ ಪ್ರೇರಿತ ಕೇಸ್ ಹಾಕಿರುವುದು ಇದೇ ಮೊದಲು. ನ್ಯಾಯ ನನ್ನ ಪರವಾಗಿದೆ, ಇದನ್ನು ಎದುರಿಸಿ ಗೆಲ್ಲುತ್ತೇನೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

**ರಾಜ್ಯಪಾಲರು ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವುದು ಸರಿಯಲ್ಲ**

ರಾಷ್ಟ್ರಪತಿಗಳಾಗಲಿ ಅಥವಾ ರಾಜ್ಯಪಾಲರಾಗಲಿ ಸಂವಿಧಾನದ ಪ್ರಕಾರ ಕೆಲಸ ಮಾಡಲು ನೇಮಕಗೊಂಡವರು. ಯಾವುದೇ ಚುನಾವಣೆಯ ಮೂಲಕ ಆಯ್ಕೆಯಾದವರಲ್ಲ. ಅವರು ಸಂವಿಧಾನದಲ್ಲಿ ಪ್ರಮುಖರು. ಆದರೆ ಜನಪ್ರತಿನಿಧಿಗಳು ಚುನಾವಣೆಯ ಮೂಲಕ ಆಯ್ಕೆಯಾಗಿ ಆಡಳಿತದಲ್ಲಿ ಪ್ರಮುಖರು. ಇಂತಹ ಪ್ರಮುಖ ವ್ಯತ್ಯಾಸವಿರುವಾಗ ಯಾವುದೇ ರಾಜ್ಯದ ರಾಜ್ಯಪಾಲರು ರಾಜ್ಯದ ಆಡಳಿತದಲ್ಲಿ ಹಸ್ತಕ್ಷೇಪ ಮಾಡುವುದು ಸರಿಯಲ್ಲ. ಈ ವಿಷಯದ ಕುರಿತು ರಾಷ್ಟ್ರದಾದ್ಯಂತ ಚರ್ಚೆಯಾಗಬೇಕು ಎಂದು ಒತ್ತಾಯಿಸಿದರು.

> ನಮ್ಮ ಸರ್ಕಾರಕ್ಕೆ ಕಳೆದ ಚುನಾವಣೆಯಲ್ಲಿ ಜನರ ಆಶೀರ್ವಾದ ಸಿಕ್ಕಿದೆ, ಅದಕ್ಕೆ ತಕ್ಕಂತೆ ನಾವು ಉತ್ತಮ ರೀತಿಯಲ್ಲಿ ಆಡಳಿತ ನಡೆಸುತ್ತಿದ್ದೇವೆ. ಈ ಐದು ವರ್ಷದ ಅವಧಿಯಲ್ಲಿ ರಾಜ್ಯವನ್ನು ಅಭಿವೃದ್ಧಿಗೊಳಿಸಬೇಕೆಂದು ಜನಾದೇಶವಿದೆ. ಇದಕ್ಕೆ ರಾಜ್ಯಪಾಲರು ಅಡ್ಡಿಪಡಿಸಬಾರದು, ಅಡ್ಡಿಪಡಿಸಿದರೆ ನಾವು ಅನಿವಾರ್ಯವಾಗಿ ಪ್ರತಿರೋಧ ವ್ಯಕ್ತಪಡಿಸಬೇಕಾಗುತ್ತದೆ **-ಸಿಎಂ ಸಿದ್ದರಾಮಯ್ಯ**

## ನಿಗದಿತ ಸಮಯಕ್ಕೆ ಮೊಟ್ಟೆ, ಗ್ಯಾಸ್, ಬಾಡಿಗೆ ಹಣ ಬಿಡುಗಡೆಗೆ ಅಂಗನವಾಡಿ ನೌಕರರು ಒತ್ತಾಯ

• **ಉದಯವಾಹಿನಿ, ಕೋಲಾರ**

ಸಮಗ್ರ ಶಿಶು ಅಭಿವೃದ್ಧಿ ಯೋಜನೆಯಡಿ ದುಡಿಯುತ್ತಿರುವ ಅಂಗನವಾಡಿ ಕಾರ್ಯಕರ್ತೆಯರನ್ನು ಕಾಯಂಗೊಳಿಸುವ ಜೊತೆಗೆ ಮೊಟ್ಟೆ, ಗ್ಯಾಸ್, ಬಾಡಿಗೆ ಹಣವನ್ನು ನಿಗದಿತ ಸಮಯಕ್ಕೆ ಬಿಡುಗಡೆ ಮಾಡುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘವು ಪ್ರತಿಭಟನೆ ನಡೆಸಲು ಸಭೆಯಲ್ಲಿ ತೀರ್ಮಾನಿಸಲಾಯಿತು,

ನಗರದ ಪಾಲಸಂದ್ರ ಲೇಔಟ್ ಕಛೇರಿಯಲ್ಲಿ ಶುಕ್ರವಾರ ನಡೆದ ಜಿಲ್ಲಾ ಸಮಿತಿ ಸಭೆಯ ನಂತರ ಮಾತನಾಡಿದ ಸಂಘಟನೆಯ ರಾಜ್ಯ ಉಪಾಧ್ಯಕ್ಷೆ ಲಕ್ಷ್ಮೀದೇವಮ್ಮ ಸರಕಾರದ ಪ್ರತಿಯೊಂದು ಯೋಜನೆಯ ಅನುಷ್ಠಾನಗೊಳಿಸಲು ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಿಬ್ಬಂದಿ ಬೇಕಾಗಿದೆ ಆದರೆ ಅವರಿಗೆ ಸೌಲಭ್ಯಗಳನ್ನು ಒದಗಿಸಲು ಮಾತ್ರ ಸರ್ಕಾರವು ಹಿಂದೆ ಬಿದ್ದಿದೆ ನೌಕರರ ಮತ್ತು ಸಿಬ್ಬಂದಿಯ ಯೋಗಕ್ಷೇಮಕ್ಕೆ ಅನುದಾನವನ್ನು ಕೊಡದೇ ನಿರ್ಲಕ್ಷ ವಹಿಸಿದ್ದು ಸರಿಯಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಅಂಗನವಾಡಿ ನೌಕರರಿಗೆ ಮೊಟ್ಟೆ, ಎಲ್‌ಪಿಜಿ ಗ್ಯಾಸ್ ಸಿಲಿಂಡರ್, ಬಾಡಿಗೆ, ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಸಮಯಕ್ಕೆ ಸರಿಯಾಗಿ ನೀಡದೆ ಪ್ರತಿ ತಿಂಗಳು ಕಾರ್ಯಕರ್ತೆಯರು ಕೈಯಿಂದ ಭರಿಸುವಂತಾಗಿದೆ ಇದರಿಂದ ಸಾಕಷ್ಟು ತೊಂದರೆಯಾಗಿದೆ ರಾಜ್ಯ ಸರ್ಕಾರವು ನಿಗದಿತ ಪಿಂಚಣಿ ಯೋಜನೆಯನ್ನು ಕೂಡಲೇ ಜಾರಿಗೊಳಿಸಬೇಕು ಅಂಗನವಾಡಿ ನೌಕರರಿಗೆ ಹಾಗೂ ಸಿಬ್ಬಂದಿಗೆ ಕೆಲಸಕ್ಕೆ ತಕ್ಕಂತೆ ವೇತನದ ಜೊತೆಗೆ ನಿವೃತ್ತಿ ನಂತರದ ಪಿಂಚಣಿಯನ್ನು ನೀಡಬೇಕು ಎಂದು ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

ಸಭೆಯಲ್ಲಿ ಕಾರ್ಮಿಕ ಮುಖಂಡರಾದ ಗಾಂಧಿನಗರ ನಾರಾಯಣಸ್ವಾಮಿ, ಎಂ.ವಿಜಯಕೃಷ್ಣ, ಅಂಗನವಾಡಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷೆ ಅಂಜಲಮ್ಮ, ಪ್ರಧಾನ ಕಾರ್ಯದರ್ಶಿ ಎನ್ ಕಲ್ಪನಾ, ಉಪಾಧ್ಯಕ್ಷರಾದ ಶಿಳ್ಳಂಗೆರೆ ರಾಜಮ್ಮ, ಜಯಲಕ್ಷ್ಮಿ, ಲೋಕೇಶ್ವರಿ, ವೆಂಕಟಲಕ್ಷ್ಮೀ, ಲಕ್ಷ್ಮೀದೇವಿ, ಸಹ ಕಾರ್ಯದರ್ಶಿ ಗಾಂಧಿನಗರ ಮಂಜುಳ, ಮುಖಂಡರಾದ ಪುಷ್ಪ, ಮಮತಾ ಮುಂತಾದವರು ಇದ್ದರು.

**ಗ್ರಾಚೂಟಿ ಜಾರಿಯಾಗಬೇಕು**

ರಾಜ್ಯ ಅಂಗನವಾಡಿ ನೌಕರರ ಸಂಘವು ಸಾಕಷ್ಟು ಬಾರಿ ಸಂಬಂಧಿಸಿದ ಇಲಾಖೆ ಮತ್ತು ಜನಪ್ರತಿನಿಧಿಗಳ ಗಮನಕ್ಕೆ ಬೇಡಿಕೆಗಳನ್ನು ಈಡೇರಿಸಲು ಒತ್ತಾಯಿಸಲಾಗಿದೆ ಅಂಗನವಾಡಿ ನೌಕರರಿಗೆ ಪ್ರತಿ ತಿಂಗಳು ಗೌರವ ಧನ, ಮೊಟ್ಟೆ, ಗ್ಯಾಸ್, ಬಾಡಿಗೆ ಹಣ ನಿಗದಿತ ಸಮಯಕ್ಕೆ ಬಿಡುಗಡೆ ಮಾಡಬೇಕು ಮುಂಬಡ್ತಿ, ವರ್ಗಾವಣೆಗಳಲ್ಲಿ ರಾಜಕೀಯ ಮಾಡದೇ ನ್ಯಾಯಯುತವಾಗಿ ಆದೇಶ ನೀಡಬೇಕು ಗ್ರಾಚೂಟಿ ಜಾರಿಯಾಗಬೇಕು. ನಿವೃತ್ತಿಯಾದವರಿಗೆ ತಕ್ಷಣ ನಿವೃತ್ತಿ ಹಣ ಬಿಡುಗಡೆ ಮಾಡಬೇಕು ಸುಮಾರು ವರ್ಷಗಳಿಂದ ಬಾಕಿ ಉಳಿದ ನಿವೃತ್ತಿ ಹಣ ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

## ಬೆಳ್ಳಾವಿ ಗೇಟ್‌ನಿಂದ ತೊರ್ನಹಳ್ಳಿ ಗ್ರಾಮದವರೆಗೆ 5 ಕೋಟಿ ರೂ.ಗಳ ವೆಚ್ಚದಲ್ಲಿ ರಸ್ತೆ ಡಾಂಬರೀಕರಣ

• **ಉದಯವಾಹಿನಿ, ಮಾಲೂರು**

ತೊರ್ನಹಳ್ಳಿ ಗ್ರಾ.ಪಂ.ಯ ಬೆಳ್ಳಾವಿ ಗೇಟ್ ನಿಂದ ತೊರ್ನಹಳ್ಳಿ ಗ್ರಾಮದ ವರೆಗೆ 5 ಕೋಟಿ ರೂಗಳ ವೆಚ್ಚದಲ್ಲಿ ರಸ್ತೆಯ ಡಾಂಬರೀಕರಣ ಮಾಡಲಾಗುತ್ತಿದೆ ಎಂದು ಲೋಕೋಪಯೋಗಿ ಇಲಾಖೆಯ ಎಇಇ ರಾಜು ತಿಳಿಸಿದರು.

ತೊರ್ನಹಳ್ಳಿ ಗ್ರಾ.ಪಂ.ಯ ಬೆಳ್ಳಾವಿ ಗೇಟ್‌ನಿಂದ ತೊರ್ನಹಳ್ಳಿ ಗ್ರಾಮದವರೆಗೆ 5 ಕೋಟಿ.ರೂಗಳ ವೆಚ್ಚದಲ್ಲಿ ನಡೆಯುತ್ತಿರುವ ರಸ್ತೆ ಕಾಮಗಾರಿಯನ್ನು ವೀಕ್ಷಿಸಿದ ಎಇಇ ರಾಜು ಗುಣಮಟ್ಟದ ಕಾಮಗಾರಿಯನ್ನು ಮಾಡುವಂತೆ ಗುತ್ತಿಗೆದಾರರಿಗೆ ತಿಳಿಸಿ ಸ್ಥಳದಲ್ಲಿಯೇ ಇದ್ದು ಕಾಮಗಾರಿ ಪೂರ್ಣಗೊಳ್ಳುವ ವರೆಗೆ ಕಾಮಗಾರಿಯನ್ನು ಶಾಸಕರು ವೀಕ್ಷಣೆ ಮಾಡಿ ಗುಣಮಟ್ಟವನ್ನು ನೋಡಿಕೊಳ್ಳುವಂತೆ ತಿಳಿಸಿದ್ದಾರೆ. ಆದ್ದರಿಂದ ಸ್ಥಳದಲ್ಲಿ ಹಾಜರಿದ್ದು ಕಾಮಗಾರಿಯ ಗುಣಮಟ್ಟವನ್ನು ಪರಿಶಿಲನೆ ಮಾಡಲಾಗುತ್ತಿದೆ ಎಂದರು. ಗ್ರಾ.ಪಂ.ಮಾಜಿ ಅಧ್ಯಕ್ಷ ಕೆ.ಮುನಿಶಾಮಪ್ಪ ಮಾತನಾಡಿ ಶಾಸಕರ ಬಳಿ ಹಲವಾರು ಬಾರಿ ರಸ್ತೆಯು ಸಂಪೂರ್ಣವಾಗಿ ಹದಗೆಟ್ಟಿರುವ ಬಗ್ಗೆ ತಿಳಿಸಿದ್ದು, ಶಾಸಕರು ಸ್ಪಂಧಿಸಿ 5 ಕೋಟಿ ರೂಗಳನ್ನು ರಸ್ತೆ ಅಭಿವೃದ್ಧಿ ಕಾಮಕಾರಿಗೆ ಬಿಡುಗಡೆ ಮಾಡಿಸಿರುವುದರಿಂದ ಶಾಸಕರಿಗೆ ಅಭಿನಂದನೆ ಸಲ್ಲಿಸುವುದಾಗಿ ಹಾಗೂ ಗುತ್ತಿಗೆದಾರರು ಗುಣಮಟ್ಟದ ಕಾಮಗಾರಿಯನ್ನು ಮಾಡುವಂತೆ ಹೇಳಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಎಇಇ ರಾಜಗೋಪಾಲ್, ಗುತ್ತಿಗೆದಾರ ಚಂಬೆ ನಾರಾಯಣಸ್ವಾಮಿ, ಚಲಪತಿ, ಹಾಜರಿದ್ದರು.

## ಕೊಡವರ ಮದುವೆ: ಮಧ್ಯಾಹ್ನ ಮದ್ಯ ಸೇವನೆ ನಿಷಿದ್ಧ

• **ಉದಯವಾಹಿನಿ, ಗೋಣಿಕೊಪ್ಪಲು**

ಸೇನೆಯಲ್ಲಿ ಸೇವೆ ಸಲ್ಲಿಸುತ್ತಿರುವ ಕೊಡವ ಯೋಧರ ಮೂರನೇ ಮಕ್ಕಳ ಮದುವೆಗೆ ಪೊನ್ನಂಪೇಟೆ ಕೊಡವ ಸಮಾಜ ಸಭಾ ಭವನವನ್ನು ಉಚಿತವಾಗಿ ನೀಡುವ ನಿರ್ಣಯ ಮುಂದುವರಿಸಲಾಗುವುದು ಎಂದು ಸಮಾಜದ ಅಧ್ಯಕ್ಷ ಕಾಳಿಮಾಡ ಮೋಟಯ್ಯ ಹೇಳಿದರು.

ಸಮಾಜದ ವಾರ್ಷಿಕ ಮಹಾಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೊಡವ ಜನಾಂಗದ ಜನಸಂಖ್ಯೆ ಇತ್ತೀಚಿನ ವರ್ಷಗಳಲ್ಲಿ ಕ್ಷೀಣಿಸುತ್ತಿದೆ. ಇದರಿಂದ ಸಂಸ್ಕೃತಿ ಮೇಲು ಪರಿಣಾಮ ಬೀರುತ್ತಿದೆ. ಈ ಕಾರಣದಿಂದ ಕೊಡವ ಜನಾಂಗದ ಜನಸಂಖ್ಯೆ ಹೆಚ್ಚಿಸಲು ಸೇನೆ ಮೂಲಕ ದೇಶ ಸೇವೆ ಮಾಡುತ್ತಿರುವ ಯೋಧರಿಗೆ ಮೂರನೇ ಮಗುವಾದರೆ ವಿವಾಹ ಸಮಾರಂಭಕ್ಕೆ ಕೊಡವ ಸಮಾಜ ಭವನ ಉಚಿತ' ಎಂದು ತಿಳಿಸಿದರು. ಉಳಿದಂತೆ ಸಮಾಜದಲ್ಲಿ ನಡೆಯುವ ಮದುವೆ ಮುಹೂರ್ತದ ಮಧ್ಯಾಹ್ನ ಮದ್ಯ ನಿಷೇಧಿರಿಸಿರುವುದು, ಕೊಡವ ಭಾಷೆ ಬೆಳೆಸಲು ಕೊಡವ ಪುಸ್ತಕ ಭಂಡಾರ ಸ್ಥಾಪಿಸಿರುವುದು, ಕೊಡವ ಕಲೆ ಸಂಸ್ಕೃತಿ ಬೆಳೆಸಲು ಕೊಡವ ಪಡಿಪು ಯೋಜನೆ ಕೈಗೊಂಡಿರುವುದನ್ನು ಮುಂದುವರಿಸಲಾಗುವುದು' ಎಂದು ಹೇಳಿದರು.

ಸಮಾಜದ ಸದಸ್ಯರ ಮಕ್ಕಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ99.84 ಅಂಕ ಪಡೆದ ಕಾಟಮಾಡ ಭಾಷಿತಾ ಹಾಗೂ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಶೇ 98.5 ಅಂಕ ಪಡೆದ ಚೆಪ್ಪುಡೀರ ಹರ್ಷಿನಿ ಪ್ರದೀಪ್ ಹಾಗೂ ವಾಣಿಜ್ಯ ವಿಭಾಗದಲ್ಲಿ ಶೇ 97.5 ಅಂಕ ಪಡೆದ ಪೆಮ್ಮಂಡ ಸುಕಿ ನಾಚಪ್ಪ ಅವರಿಗೆ ಪ್ರೋತ್ಸಾಹಕರ ಬಹುಮಾನ ನೀಡಿ ಗೌರವಿಸಲಾಯಿತು. ಸಮಾಜದ ಅಂಗಸಂಸ್ಥೆಯಾದ ಪೊನ್ನಂಪೇಟೆ ಅಪ್ಪಚ್ಚಕವಿ ವಿದ್ಯಾಲಯದ ಏಳರಿಂದ ಹತ್ತನೇ ತರಗತಿಯಲ್ಲಿ ಹೆಚ್ಚಿನ ಅಂಕ ಪಡೆದ ಮಕ್ಕಳಿಗೆ ವಿದ್ಯಾರ್ಥಿವೇತನ ವಿತರಿಸಲಾಯಿತು.

## ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಗ್ರಾಮ ಲೆಕ್ಕಾಧಿಕಾರಿಗಳು ಧರಣಿ

• **ಉದಯವಾಹಿನಿ, ಶಿಡ್ಲಘಟ್ಟ**

ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಗ್ರಾಮ ಲೆಕ್ಕಾಧಿಕಾರಿಗಳು ಕೈಗೆ ಕಪ್ಪುಪಟ್ಟಿ ಕಟ್ಟಿಕೊಂಡು ರಾಜ್ಯ ಸರ್ಕಾರ ವಿರುದ್ಧ ಗುರುವಾರ ತಾಲ್ಲೂಕು ಕಚೇರಿಯ ಮುಂದೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಬಿ.ಎನ್ ಸ್ವಾಮಿ ರವರಿಗೆ ಮನವಿ ನೀಡಿದರು.

**ತಾಲ್ಲೂಕು ಕಚೇರಿಯ ಮುಂದೆ ಪ್ರತಿಭಟನೆ**

ಗ್ರಾಮ ಆಡಳಿತ ಅಧಿಕಾರಿಗಳ ಹುದ್ದೆಗಳನ್ನು ತಾಂತ್ರಿಕ ಹುದ್ದೆಗಳಿಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಿ ಆದೇಶಿಸಿ ನೀಡುವ ಬಗ್ಗೆ ಮತ್ತು ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಬಗ್ಗೆ, ಸೇವಾ ವಿಷಯದಲ್ಲಿ ಸಂಬಂಧಿಸಿದಂತೆ ಸೌಲಭ್ಯಗಳನ್ನು ಕಲ್ಪಿಸುವಂತೆ ಒತ್ತಾಯಿಸಿ ಹಾಗೂ ಕೆಲಸದ ಒತ್ತಡವನ್ನು ಕಡಿಮೆ ಮಾಡುವಂತೆ ಆಗ್ರಹಿಸಿ ಅನಿರ್ದಿಷ್ಟಾವಧಿ ಮುಷ್ಕರ ಹಮ್ಮಿಕೊಳ್ಳಲಾಗಿತ್ತು.

ಮಾತೃ ಇಲಾಖೆಯ ಎಲ್ಲಾ ಕೆಲಸಗಳೊಂದಿಗೆ ಸರ್ಕಾರದ ಆದೇಶದಂತೆ ಇತರೆ ಇಲಾಖೆಗಳ ಹಲವಾರು ಕೆಲಸಗಳನ್ನು ನಿರ್ವಹಿಸುವ ಹಾಗೂ ಚುನಾವಣೆ, ಅತಿವೃಷ್ಟಿ, ಅನಾವೃಷ್ಟಿ, ಇನ್ನಿತರ ಜವಾಬ್ದಾರಿಯುತ ಕರ್ತವ್ಯ ನಿರ್ವಹಿಸುತ್ತಿರುವ ನಮಗೆ ದಿನನಿತ್ಯ ಸಾರ್ವಜನಿಕ ವಲಯದಲ್ಲಿ ನೂರಾರು ಸೇವೆಗಳನ್ನು ನೀಡುವಾಗ ಮಾರಣಾಂತಿಕ ದೈಹಿಕ ಹಲ್ಲೆ, ಕೊಲೆ ಪ್ರಕರಣಗಳು ಈಗಾಗಲೇ ನಿರಂತರವಾಗಿ ನಡೆಯುತಿದ್ದು, ಸರ್ಕಾರ ಆದಷ್ಟು ಬೇಗನೆ ನಮ್ಮ ಬೇಡಿಕೆಯನ್ನು ಪೂರೈಸಲು ಆಗ್ರಹಿಸಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಅಧ್ಯಕ್ಷ ಚೇತನ್ ಕುಮಾರ್, ಗೌರವಾಧ್ಯಕ್ಷ ಎಡ್ರಿನ್ ಲಾರೆನ್ಸ್, ಉಪಾಧ್ಯಕ್ಷ ನಾಗರಾಜ್, ಪ್ರಧಾನ ಕಾರ್ಯ ದರ್ಶಿ ಸುರೇಶ್, ಸಂಘಟನಾ ಕಾರ್ಯದರ್ಶಿ ವರಲಕ್ಷ್ಮೀ, ರಾಕೇಶ್, ನಂದನ್ ಕುಮಾರ್, ಅಕ್ಷಯ್, ಇನ್ನು ಮುಂತಾದವರು ಹಾಜರಿದ್ದರು.

> ಹಲವಾರು ವರ್ಷಗಳಿಂದ ನಮ್ಮ ಬೇಡಿಕೆ ಈಡೇರಿಕೆಗಾಗಿ ಹಲವು ಸರ್ಕಾರಗಳಿಗೆ ಮನವಿ ಪತ್ರ ಸಲ್ಲಿಸಿದರು ಯಾವುದೇ ಪ್ರಯೋಜನವಾಗಿಲ್ಲ. ಇದರಿಂದ ರಾಜ್ಯಾಧ್ಯಕ್ಷರ ಸೂಚನೆ ಮೇರೆಗೆ ತಾಲ್ಲೂಕು ಕ್ಷೇತ್ರದಲ್ಲಿ ಶಾಂತಿಯುತವಾಗಿ ಪ್ರತಿಭಟನೆ ನಡೆಸುತ್ತಿದ್ದೇವೆ, ನಮ್ಮ ಬೇಡಿಕೆಯನ್ನು ಸರ್ಕಾರ ಕೂಡಲೇ ಈಡೇರಿಸಬೇಕು **-ತ್ರಿಮೂರ್ತಿ ಕಡಿಮನಿ, ಖಜಾಂಚಿ**

## ದಸರಾ ನೆಪದಲ್ಲಿ ಅಭಿವೃದ್ಧಿ ಮರೆಯಬೇಡಿ: ಸಿಎಂ ಸೂಚನೆ

• **ಉದಯವಾಹಿನಿ, ಮೈಸೂರು**

ದಸರಾ ನೆಪದಲ್ಲಿ ಜಿಲ್ಲೆಯಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತ ಆಗಬಾರದು. ಉತ್ಸವದ ಜವಾಬ್ದಾರಿ ಇರುವವರನ್ನು ಹೊರತುಪಡಿಸಿ ಉಳಿದವರು ಕಳ್ಳಾಟವಾಡದೆ ಜನರ ಕೆಲಸಗಳನ್ನು ಮಾಡಬೇಕು' ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಾಕೀತು ಮಾಡಿದರು. ಇಲ್ಲಿನ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (ಕೆಡಿಪಿ) ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ದಸರಾ ಜನರ ಉತ್ಸವವೇ ಹೊರತು ಸರ್ಕಾರದ್ದಲ್ಲ. ಇದರ ಹೊಣೆ ಜಿಲ್ಲಾಡಳಿತದ್ದು' ಎಂದು ಹೇಳಿದರು. ಮೈಸೂರು ಸಾಂಸ್ಕೃತಿಕವಾಗಿ ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿದೆ. ಪ್ರತಿ ವರ್ಷ ದಸರೆಯನ್ನು ಸರ್ಕಾರ ಅತ್ಯಂತ ಅರ್ಥಪೂರ್ಣವಾಗಿ ಆಚರಿಸುತ್ತಿದೆ. ಕಳೆದ ವರ್ಷ ಬರಗಾಲ ಇತ್ತು. ಈ ವರ್ಷ ವಾಡಿಕೆಗಿಂತ ಹೆಚ್ಚು ಮಳೆ ಆಗಿದೆ.

ಎಲ್ಲಾ ಜಲಾಶಯಗಳೂ ತುಂಬಿವೆ. ಹೀಗಾಗಿ ಅದ್ದೂರಿಯಾಗಿ, ಅರ್ಥಪೂರ್ಣವಾಗಿ ಆಚರಿಸುವ ಜೊತೆಗೆ ವೈಭವ ಮತ್ತು ಸಂಭ್ರಮಕ್ಕೆ ಕೊರತೆ ಆಗದಂತೆಯೂ ನೋಡಿಕೊಳ್ಳಬೇಕು. ನಮ್ಮ ಪರಂಪರೆ, ಚರಿತ್ರೆ, ಇತಿಹಾಸದ ವೈಭವ ಮಹೋತ್ಸವದಲ್ಲಿ ಜನರಿಗೆ ಕಾಣಿಸುವಂತಿರಬೇಕು' ಎಂದು ಸೂಚಿಸಿದರು.

**ಎಲ್ಲಾ ನ್ಯಾಯಾಲಯಗಳಿಗಿಂತ ಜನತಾ ನ್ಯಾಯಾಲಯ ಮುಖ್ಯ;** ಆತ್ಮಸಾಕ್ಷಿ ಮುಖ್ಯ ಎಂಬ ಮಹಾತ್ಮ ಗಾಂಧೀಜಿಯವರ ಮಾತನ್ನು ನೆನಪಿಸಿದ ಮುಖ್ಯಮಂತ್ರಿ, ನೆಪ-ಸುಳ್ಳು ಹೇಳುವುದನ್ನು ಅಧಿಕಾರಿಗಳು ನಿಲ್ಲಿಸಬೇಕು. ಒಂದು ಸುಳ್ಳು ಹೇಳಿದರೆ ಅದನ್ನು ಸಮರ್ಥಿಸಲು ಮತ್ತೊಂದು, ಇನ್ನೊಂದು ಸುಳ್ಳು ಹೇಳುತ್ತಲೇ ಹೋಗಬೇಕಾಗುತ್ತದೆ. ಸುಳ್ಳು ಮತ್ತು ನೆಪ ಹೇಳುವ ಅಧಿಕಾರಿಗಳು ಸಿಕ್ಕಿ ಬೀಳುತ್ತಾರೆ. ಇದು ವೃತ್ತಿ ಜೀವನಕ್ಕೆ ಒಳ್ಳೆಯದಲ್ಲ' ಎಂದು ಅಧಿಕಾರಿಗಳಿಗೆ ಸಲಹೆ ನೀಡಿದರು.



ಉದಯವಾಹಿನಿ ಚಿತ್ರ

> ಕಾನೂನು-ಸುವ್ಯವಸ್ಥೆ ಸರಿ ಇಲ್ಲದಿದ್ದರೆ ರಾಜ್ಯದ ಅಭಿವೃದ್ಧಿ ಮತ್ತು ಆರ್ಥಿಕತೆಯ ಪ್ರಗತಿ ಅಸಾಧ್ಯ. ಪೊಲೀಸ್ ಇಲಾಖೆಯ ಬೇಜವಾಬ್ದಾರಿಯಿಂದ ಅಪರಾಧಗಳು ಆಗಬಾರದು. ರಾಜ್ಯದ ಬಂಡವಾಳ ಹೂಡಿಕೆಗೂ, ಕಾನೂನು-ಸುವ್ಯವಸ್ಥೆಗೂ ನೇರಾ ನೇರ ಸಂಬಂಧವಿದೆ. ಈ ಬಗ್ಗೆ ಕಟ್ಟೆಚ್ಚರ ವಹಿಸಬೇಕು'ಎಂದು ಪೊಲೀಸ್ ಅಧಿಕಾರಿಗಳಿಗೆ ಸೂಚಿಸಿದರು. **-ಸಿದ್ದರಾಮಯ್ಯ**

## ಸ್ನೇಹಮಯಿ ಕೃಷ್ಣ ವಿರುದ್ಧ ಲಕ್ಷಾಂತರ ರೂ. ವಂಚನೆ ಆರೋಪ

• **ಉದಯವಾಹಿನಿ, ಚಾಮರಾಜನಗರ**

ಮುಡಾದಲ್ಲಿ ಹಗರಣ ನಡೆದಿದೆ ಎಂದು ಸಿಎಂ ಸಿದ್ದರಾಮಯ್ಯ ವಿರುದ್ಧ ದೂರು ನೀಡಿದ ಮೈಸೂರಿನ ಸ್ನೇಹಮಯಿ ಕೃಷ್ಣ ವಿರುದ್ಧ ಇದೀಗ ಆರ್‌ಟಿಐ ಕಾರ್ಯಕರ್ತರು ಒಬ್ಬರು ಲಕ್ಷಾಂತರ ರೂಪಾಯಿ ನನಗೆ ವಂಚಿಸಿದ್ದಾರೆ ಎಂದು ಆರೋಪಿಸಿ ಅವರ ವಿರುದ್ಧ ದೂರು ದಾಖಲಿಸಿದ್ದಾರೆ.

ಹೌದು ಚಾಮರಾಜನಗರದ ಆರ್‌ಟಿಐ ಕಾರ್ಯಕರ್ತ ಕರುಣಾಕರ್ ಎನ್ನುವವರು, ಸ್ನೇಹಮಯಿ ಕೃಷ್ಣ ವಿರುದ್ಧ ವಂಚನೆ ದೂರು ನೀಡಿದ್ದಾರೆ.



ಉದಯವಾಹಿನಿ ಚಿತ್ರ

3,ಲಕ್ಷ ಹಣ ಪಡೆದು ವಂಚಿಸಿದ್ದಾರೆ ಎಂದು ಆರೋಪಿಸಿ ದೂರು ನೀಡಿದ್ದಾರೆ.ಈ ಕುರಿತು ಚಾಮರಾಜನಗರದಲ್ಲಿ ದೂರುದಾರ ಕರುಣಾಕರ್ ಹೇಳಿಕೆ ನೀಡಿದ್ದು, ಹಣ ಕೊಡಿ ಅಂತ ಸಾಲದ ರೂಪದಲ್ಲಿ ಸ್ನೇಹ ಮಹಿ ಕೃಷ್ಣ ಕೇಳುತ್ತಾರೆ. ಬಳಿಕ ಬಡ್ಡಿ ಸಮೇತ ಹಣ ವಾಪಸ್ ಕೊಟ್ಟು ನಂಬಿಕೆಗಳಿಸುತ್ತಾರೆ.

ನಂತರ ಮತ್ತೆ ನನ್ನ ಬಳಿ 3,00,000 ಹಣ ಪಡೆದಿದ್ದಾರೆ. ಹಣಕೊಡಲು ಸಾಧ್ಯವಿಲ್ಲದಿದ್ದಾಗ ರಿವರ್ಸ್ ಆಗುತ್ತಾರೆ. ಪತ್ನಿಗೆ ಹುಷಾರಿಲ್ಲ, ಮಕ್ಕಳ ಸ್ಕೂಲ್ ಫೀಸ್ ಕಟ್ಟಬೇಕು ಎಂದು ಸಾಲ ಪಡೆದಿದ್ದರು. ಯಾರ ಬಳಿಯೂ ಚೆಕ್ ಅಥವಾ ಆರ್ಟಿಜಿಎಸ್ ಮೂಲಕ ಹಣ ಪಡೆಯಲ್ಲ.ಎಲ್ಲಾ ಹಣ ನಗದು ಮೂಲಕವೇ ಸ್ನೇಹಮಯಿ ಕೃಷ್ಣ ಪಡೆದುಕೊಂಡಿದ್ದಾರೆ.

**ಎಸಿಜೆ ನ್ಯಾಯಾಲಯಕ್ಕೆ ಹಾಜರು**

ಲೈಸನ್ಸ್ ಇಲ್ಲದೆ ಫೈನಾನ್ಸ್ ಮಾಡುತ್ತಿದ್ದಾರೆಂದು ನಮ್ಮ ವಿರುದ್ಧವೇ ದೂರು ದಾಖಲಿಸಿದ್ದಾರೆ. ಈ ಹಿಂದೆ 2013ರಲ್ಲಿ ನನ್ನ ವಿರುದ್ಧ ಚೀಟಿಂಗ್ ಕೇಸ್ ದಾಖಲಾಗಿತ್ತು. ಆ ವೇಳೆ ನನ್ನನ್ನು ಬಿಡಿಸಿದ್ದನು. ನಂತರ ನಮ್ಮಿಬ್ಬರ ಸ್ನೇಹ ಬೆಳೆಯಿತು. ಬಳಿಕ ಸ್ನೇಹಮಯಿ ಕೃಷ್ಣ 3 ಲಕ್ಷ ರೂಪಾಯಿ ನನ್ನ ಬಳಿ ಸಾಲ ಪಡೆದಿದ್ದಾನೆ ಎಂದು ಚಾಮರಾಜನಗರದಲ್ಲಿ ಆರ್‌ಟಿಐ ಕಾರ್ಯಕರ್ತ ಕರುಣಾಕರ್ ಹೇಳಿಕೆ ನೀಡಿದರು. ಹಾಗಾಗಿ ತಮ್ಮ ವಿರುದ್ಧ ಲಕ್ಷಾಂತರ ರೂಪಾಯಿ ವಂಚನೆ ಆರೋಪ ಕೇಳಿ ಬಂದಿರುವ ಹಿನ್ನೆಲೆಯಲ್ಲಿ ಸ್ನೇಹಮಯಿರವರು ಇದೀಗ ಚಾಮರಾಜನಗರದ ಎಸಿಜೆ ನ್ಯಾಯಾಲಯಕ್ಕೆ ಹಾಜರಾಗಿದ್ದಾರೆ ಎಂದು ತಿಳಿದು ಬಂದಿದೆ.

# ಸ್ವಂತ ಕಟ್ಟಡ ಇಲ್ಲದೇ ಶಿಕ್ಷಣ ತರಬೇತಿಗೆ ಡಯಟ್ ಪರದಾಟ

## • ಕೋಲಾರ ಜಿಲ್ಲೆಯ ಭಾಗವಾಗಿದ್ದ ಚಿಕ್ಕಬಳ್ಳಾಪುರ ಸ್ವತಂತ್ರ ಜಿಲ್ಲೆಯಾಗಿ ರಚನೆಗೊಂಡು 18 ವರ್ಷ ಕಳೆದಿದೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಜಿಲ್ಲೆಯು ಶೈಕ್ಷಣಿಕ ಜಿಲ್ಲೆಯಾಗಿ ಬರೋಬರಿ 18 ವರ್ಷ ಕಳೆಯುತ್ತಿದೆ. ಜಿಲ್ಲೆಯಲ್ಲಿ ಸರ್ಕಾರಿ ಹಾಗೂ ಅನುದಾನಿತ ಶಿಕ್ಷಕರ ಸಂಖ್ಯೆ ಸಾವಿರಾರು ಸಂಖ್ಯೆಯಲ್ಲಿದೆ. ಆದರೆ, ಕಾಲಕಾಲಕ್ಕೆ ಶಿಕ್ಷಣ ಕ್ಷೇತ್ರದ ಬದಲಾವಣೆ, ಶಿಕ್ಷಣ ಕ್ರಮಗಳ ಬಗ್ಗೆ ಶಿಕ್ಷಕರನ್ನು ತರಬೇತಿ ಮೂಲಕ ಸಜ್ಜುಗೊಳಿಸುವ ಜಿಲ್ಲಾ ಶಿಕ್ಷಣ ತರಬೇತಿ ಕೇಂದ್ರಕ್ಕೆ ಮಾತ್ರ ಇಂದಿಗೂ ಸ್ವಂತ ಕಟ್ಟಡ ಇಲ್ಲ.

ಹೌದು, ಶೈಕ್ಷಣಿಕವಾಗಿ ಚಿಕ್ಕಬಳ್ಳಾಪುರ ಜಿಲ್ಲೆಯು ಸಾಕಷ್ಟು ಸಾಧನೆಗಳನ್ನು ಮಾಡಿದೆ. ಅನೇಕ ಸಾಧಕರನ್ನು ಹುಟ್ಟುಹಾಕಿದೆ. ಆದರೆ ಕೋಲಾರ ಜಿಲ್ಲೆಯ ಭಾಗವಾಗಿದ್ದ ಚಿಕ್ಕಬಳ್ಳಾಪುರ ಸ್ವತಂತ್ರ ಜಿಲ್ಲೆಯಾಗಿ ರಚನೆಗೊಂಡು 18 ವರ್ಷ ಕಳೆದಿದೆ.

ಆದರೆ ಅಂದಿನಿಂದ ಇಂದಿನವರೆಗೂ ಡಯಟ್‌ಗೆ ಒಂದು ಸ್ವಂತ ಕಟ್ಟಡ ಇಲ್ಲದೇ ತರಬೇತಿ ಕಾರ್ಯಗಳಿಗೆ ಪರದಾಡಬೇಕಿದೆ.



ಉದಯವಾಹಿನಿ ಚಿತ್ರ

**ಜಮೀನು ಒದಗಿಸಿ ಕೊಡುವಂತೆ ಮನವಿ**

**ಕಿರಿದಾದ ಕಟ್ಟಡದಲ್ಲಿ ಕಾರ್ಯ ನಿರ್ವಹಣೆ:** ರಾಜ್ಯ ಮಟ್ಟದಲ್ಲಿ ಶಿಕ್ಷಣ ತರಬೇತಿ ಹಾಗೂ ಸಂಶೋಧನಾ ಕೇಂದ್ರ, ಇದ್ದರೆ, ರಾಜ್ಯದ ಪ್ರತಿ ಜಿಲ್ಲೆಯಲ್ಲಿ ಶಿಕ್ಷಣ ತರಬೇತಿ ಕೇಂದ್ರ (ಡಯಟ್) ಕಾರ್ಯನಿರ್ವಹಿಸುತ್ತಿದೆ.

ಪ್ರತಿ ದಿನ ಒಂದಲ್ಲ ಒಂದು ರೀತಿಯಲ್ಲಿ ಜಿಲ್ಲೆಯ ಸರ್ಕಾರಿ, ಅನುದಾನಿತ ಶಾಲೆಗಳಲ್ಲಿ ಪಾಠ, ಪ್ರವಚನ ಮಾಡುವ ಶಿಕ್ಷಕರಿಗೆ ಸರ್ಕಾರದ ಮಾರ್ಗದರ್ಶನದಂತೆ ಶೈಕ್ಷಣಿಕ ವ್ಯವಸ್ಥೆಯ ಬದಲಾದ ಕ್ರಮಗಳ ಬಗ್ಗೆ ತರಬೇತಿ ಇದ್ದೇ ಇರುತ್ತದೆ. ಆದರೆ ಡಯಟ್‌ಗೆ ಸ್ವಂತ ಕಟ್ಟಡ ಇಲ್ಲದೇ ಚಿಕ್ಕಬಳ್ಳಾಪುರ ಜಿಲ್ಲೆಯಾದಾಗನಿಂದ ಮೂಲ ಸೌಕರ್ಯಗಳು ಇಲ್ಲದೇ ಕಿಷ್ಕಿಂದೆಯಂತಹ ಕಟ್ಟಡಗಳಲ್ಲಿ ಕೆಲಸ ಮಾಡುವ ಪರಿಸ್ಥಿತಿ ಡಯಟ್ ಉಪನ್ಯಾಸಕರದಾಗಿದೆ.

ಚಿಕ್ಕಬಳ್ಳಾಪುರ ಡಯಟ್ ಈ ಮೊದಲು ನಗರದ ಹೊರ ವಲಯದ ಅಗಲಗುರ್ಕಿ ಸಮೀಪ ಇದ್ದ ಸರ್ಕಾರಿ ದೈಹಿಕ ಶಿಕ್ಷಣ ಮಹಾ ವಿದ್ಯಾಲಯದಲ್ಲಿ ಇತ್ತು. ಅಲ್ಲಿಂದ ಚಿಕ್ಕಬಳ್ಳಾಪುರ ನಗರಕ್ಕೆ ವರ್ಗಾವಣೆಗೊಂಡ ಬಳಿಕ ನಗರದ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಉಪನಿರ್ದೇಶಕರ ಕಚೇರಿ ಆವರಣದಲ್ಲಿರುವ ಹಳೆಯ ಸರ್ಕಾರಿ ಶಾಲಾ ಕೊಠಡಿಗಳಲ್ಲಿ ಮೂಲ ಸೌಕರ್ಯ ವಂಚಿತ ಕಟ್ಟಡದಲ್ಲಿ ಸದ್ಯ ಡಯಟ್ ಕಾರ್ಯನಿರ್ವಹಿಸುತ್ತಿದ್ದು, ಸ್ವಂತ ಕಟ್ಟಡ ಇಲ್ಲದ ಕಾರಣ ಡಯಟ್‌ನ ಕಾರ್ಯ ಚಟುವಟಿಕೆಗಳಿಗೆ ತೀವ್ರ ಹಿನ್ನಡೆ ಅನುಭವಿಸುವಂತಾಗಿದೆ.

**ಜಾಗದ ಕೊರತೆಯಿಂದ ನಿತ್ಯ ಪರದಾಡ**

ಚಿಕ್ಕಬಳ್ಳಾಪುರ ಶಿಕ್ಷಣ ತರಬೇತಿ ಕೇಂದ್ರ, (ಡಯಟ್) ಜಿಲ್ಲೆಯ ಶಿಕ್ಷಕರಿಗೆ ತರಬೇತಿ ಕೊಡಲು ಬರೋಬ್ಬರಿ 9 ಮಂದಿ ಹಿರಿಯ ಉಪನ್ಯಾಸಕರು, 16 ಮಂದಿ ಉಪನ್ಯಾಸಕರು ಇದ್ದಾರೆ. ಜೊತೆಗೆ ಪ್ರಾಂಶುಪಾಲರು, ಗ್ರಂಥಪಾಲಕರು, ಡಿ ಗ್ರೂಪ್ ನೌಕರರು ಹೀಗೆ ಸುಮಾರು 30 ಕ್ಕೂ ಹೆಚ್ಚು ಅಧಿಕಾರಿ, ಸಿಬ್ಬಂದಿ ಜಿಲ್ಲಾ ಡಯಟ್ ನಲ್ಲಿ ಕೆಲಸ ಮಾಡುತ್ತಿದ್ದಾರೆ. ಆದರೆ ತಾತ್ಕಲಿಕವಾಗಿ ಒದಗಿಸಿರುವ ಕಟ್ಟಡದಲ್ಲಿ ಕೇವಲ 3 ಕೊಠಡಿಗಳು ಮಾತ್ರ ಇದ್ದು, ಡಯಟ್ ಉಪನ್ಯಾಸಕರು ತರಬೇತಿ ಸೇರಿದಂತೆ ವಿವಿಧ ಶೈಕ್ಷಣಿಕ ಕಾರ್ಯಚಟುವಟಿಕೆಗಳನ್ನು ಕೈಗೊಳ್ಳಲು ಜಾಗದ ಕೊರತೆಯಿಂದ ನಿತ್ಯ ಪರದಾಡಬೇಕಿದೆ.

> ಜಿಲ್ಲೆಯ ಶಿಕ್ಷಕರಿಗೆ ನಿತ್ಯ ತರಬೇತಿ ನೀಡುವ ಡಯಟ್ ಕೇಂದ್ರಕ್ಕೆ ಸ್ವಂತ ಕಟ್ಟಡದ ಅವಶ್ಯಕತೆ ತುಂಬ ಇದ್ದು, ಜಿಲ್ಲಾಡಳಿತಕ್ಕೆ ಹಾಗೂ ಜಿಲ್ಲೆಯ ಉನ್ನತ ಶಿಕ್ಷಣ ಸಚಿವರಾದ ಡಾ.ಎಂ.ಸಿ.ಸುಧಾಕರ್ ಅವರಿಗೆ ಕಟ್ಟಡ ನಿರ್ಮಾಣಕ್ಕೆ ಅವಶ್ಯಕವಾದ ಜಮೀನು ಒದಗಿಸಿ ಕೊಡುವಂತೆ ಮನವಿ ಮಾಡಿದ್ದೇವೆ. ಸಚಿವರು ಸಕಾರತ್ಮಾಕವಾಗಿ ಸ್ಪಂದಿಸಿದ್ದಾರೆ **-ಸುಬ್ಬಾರೆಡ್ಡಿ, ಡಯಟ್ ಉಪನ್ಯಾಸಕರು, ಚಿಕ್ಕಬಳ್ಳಾಪುರ**

## ಮಿನಿ ನ್ಯೂಸ್

### ಸರಕಾರಿ ಶಾಲೆಗೆ ಫೇಸ್ ಬಯೋಮೆಟ್ರಿಕ್

• **ಉದಯವಾಹಿನಿ ಮಂಡ್ಯ**

ತಾಲ್ಲೂಕಿನ ತಗ್ಗಹಳ್ಳಿಯ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯು ಹೆತ್ತವರು, ಗ್ರಾಮಸ್ಥರು ಮತ್ತು ಶಾಲಾಡಳಿತ ಮಂಡಳಿಯ ನೆರವಿನಿಂದ 1 ಲಕ್ಷ ರೂ. ವೆಚ್ಚದಲ್ಲಿ ಮುಖ ಗುರುತಿಸುವಿಕೆ ಉಪಕರಣ (ಫೇಸ್ ಬಯೋಮೆಟ್ರಿಕ್) ಖರೀದಿಸಿ ಅಳವಡಿಸುವ ಮೂಲಕ ಮಕ್ಕಳ ಹಾಜರಾತಿ ಹೆಚ್ಚಳಕ್ಕೆ ಮುನ್ನುಡಿ ಬರೆದಿದೆ.

ಸರಕಾರಿ ಶಾಲೆಗಳಲ್ಲಿ ಮಕ್ಕಳ ಹಾಜರಾತಿ ಹೆಚ್ಚಿಸಲು ಫೇಸ್ ಬಯೋಮೆಟ್ರಿಕ್ ಅಳವಡಿಕೆ ಯೋಜನೆಯ ಪ್ರಸ್ತಾವನೆ ತನ್ನ ಮುಂದಿದ್ದರೂ ಸರಕಾರ ಇನ್ನೂ ಮುಂದಿನ ಹೆಜ್ಜೆ ಇರಿಸಿಲ್ಲ. ಆದರೆ ತಗ್ಗಹಳ್ಳಿ ಶಾಲೆಯ ಈ ವಿಚಾರದಲ್ಲಿ ರಾಜ್ಯದ ಎಲ್ಲಾ ಸರಕಾರಿ ಶಾಲೆಗಳಿಗೆ ಮಾದರಿಯಾಗಿದೆ. ಇದರ ಜತೆಗೆ ಶಾಲೆಯಲ್ಲಿ ಎಲ್‌ಕೆಜಿ ಹಾಗೂ ಯುಕೆಜಿ ಪ್ರಾರಂಭವಾದ ಹಿನ್ನೆಲೆಯಲ್ಲಿ ಅತಿಥಿ ಶಿಕ್ಷಕರ ನೇಮಕಾತಿ ಮಾಡಿಕೊಳ್ಳಲಾಗಿತ್ತು. ಅವರ ವೇತನಕ್ಕಾಗಿ ಪೋಷಕರೇ ಶುಲ್ಕ ಭರಿಸುತ್ತಿದ್ದರು. ಅದರಲ್ಲಿ ಉಳಿದ ಹಣವನ್ನೂ ಫೇಸ್ ಬಯೋಮೆಟ್ರಿಕ್ ಅಳವಡಿಕೆಗೆ ಬಳಸಿಕೊಳ್ಳಲಾಗಿದೆ.

### ಗ್ರಾಮ ಆಡಳಿತಾಧಿಕಾರಿಗಳ ಮುಷ್ಕರ

• **ಉದಯವಾಹಿನಿ ಹಾರೋಹಳ್ಳಿ**

ನಾನಾ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಗ್ರಾಮ ಆಡಳಿತ ಅಧಿಕಾರಿಗಳು ಇಂದು ಹಾರೋಹಳ್ಳಿ ತಾಲ್ಲೂಕು ಕಚೇರಿ ಮುಂಭಾಗ ಅನಿರ್ದಿಷ್ಟಾವಧಿ ಮುಷ್ಕರ ನಡೆಸಿದರು. ಮೊಬೈಲ್ ಆಧರಿತ ಕೆಲಸ ನಿರ್ವಹಿಸಲು ಯಾವುದೇ ಮೂಲಭೂತ ಸೌಲಭ್ಯಗಳನ್ನು ನೀಡದೆ ಕಾರ್ಯ ಪ್ರಗತಿಗೆ ಒತ್ತಡ ಹೇರುತ್ತಿರುವುದರಿಂದ ಅಧಿಕಾರಿಗಳಿಗೆ ಮಾನಸಿಕ ಒತ್ತಡ ಹೆಚ್ಚಾಗುತ್ತಿದೆ, ಸರ್ಕಾರ ಕೂಡಲೇ ಅಗತ್ಯ ಸೌಲಭ್ಯಗಳನ್ನು ನೀಡಬೇಕು ಎಂದು ಪ್ರತಿಭಟನಾಕಾರರು ಒತ್ತಾಯಿಸಿದರು.

ಗ್ರಾಮ ಆಡಳಿತ ಅಧಿಕಾರಿಗಳಿಗೆ ಸುಸಜ್ಜಿತವಾದ ಕಚೇರಿ ನೀಡಬೇಕು, ಉತ್ತಮ ಗುಣಮಟ್ಟದ ಟೇಬಲ್, ಕುರ್ಚಿ, ಅಲ್ಮೆರಾ, ಅತ್ಯುತ್ತಮ ಗುಣಮಟ್ಟದ ಮೊಬೈಲ್ ಫೋನ್, ಸಿಯುಜಿ ಸಿಮ್ ಮತ್ತು ಡೇಟಾ ಗೂಗಲ್ ಕ್ರೋಮ್, ಬುಕ್ ಲ್ಯಾಪ್ ಟಾಪ್, ಪ್ರಿಂಟರ್ ಹಾಗೂ ಸ್ಕ್ಯಾನರ್‌ಗಳನ್ನು ಒದಗಿಸಿ ಕೊಡಬೇಕು. ಮೊಬೈಲ್ ತಂತ್ರಾಂಶಗಳ ಕೆಲಸ ವಿಚಾರವಾಗಿ ಇದುವರೆಗೂ ಆಗಿರುವ ಎಲ್ಲಾ ಅಮಾನತ್ತುಗಳನ್ನು ತಕ್ಷಣವೇ ರದ್ದುಪಡಿಸಬೇಕು. ಗ್ರಾಮ ಆಡಳಿತ ಅಧಿಕಾರಿಗಳಿಗೆ ಭದ್ರತೆ ನೀಡಿ ಮತ್ತು ಸುರಕ್ಷಿತವಾದ ಕಟ್ಟಡಗಳನ್ನು ನಿರ್ಮಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

### ತುಮಕೂರು-ಯಶಂತಪುರ ಮಧ್ಯೆ ನೂತನ ಮೆಮು ರೈಲು ಸೇವೆಗೆ ವಿ. ಸೋಮಣ್ಣ ಚಾಲನೆ

• **ಉದಯವಾಹಿನಿ ತುಮಕೂರು**

ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಅವರು ಇಂದು ಶುಕ್ರವಾರ ತುಮಕೂರು-ಯಶವಂತಪುರ ಮೆಮು ರೈಲಿಗೆ ಚಾಲನೆ ನೀಡಿದರು.ನಂತರ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು ತುಮಕೂರು-ಯಶವಂತಪುರ ಜೊತೆಗೆ ಬಾಣಸವಾಡಿ-ತುಮಕೂರು ನಡುವೆ ಹೊಸ ಮೆಮು ರೈಲು ಸೇವೆ ಆರಂಭ ಮಾಡುವುದಾಗಿ ಭರವಸೆ ನೀಡಿದರು.

**ಮೆಮು ರೈಲು ಸಂಚಾರ:** ತುಮಕೂರು-ಯಶವಂತಪುರ ನಡುವಿನ ಹೊಸ ಮೆಮು ರೈಲು ಇಂದೇ ಕಾರ್ಯಾರಂಭ ಮಾಡುತ್ತಿದ್ದು, ಭಾನುವಾರ ಹೊರತುಪಡಿಸಿ ವಾರದ ಎಲ್ಲಾ ದಿನ ಸಂಚರಿಸಲಿದೆ.

**ರೈಲು ಸಂಖ್ಯೆ 06201:** ತುಮಕೂರು-ಯಶವಂತಪುರ ಮೆಮು ರೈಲು ಪ್ರತಿದಿನ ಬೆಳಿಗ್ಗೆ 8.45ಕ್ಕೆ ತುಮಕೂರಿನಿಂದ ಹೊರಟು 10.25ಕ್ಕೆ ಯಶವಂತಪುರ ತಲುಪಲಿದೆ.

**ರೈಲು ಸಂಖ್ಯೆ 06202:** ಯಶವಂತಪುರ-ತುಮಕೂರು ಮೆಮು ರೈಲು ಸಂಜೆ 5.40ಕ್ಕೆ ಯಶವಂತಪುರದಿಂದ ಹೊರಟು ಸಂಜೆ 7.05ಕ್ಕೆ ತುಮಕೂರು ತಲುಪಲಿದೆ.

### ಬಿಜೆಪಿ ಕಾರ್ಯಕರ್ತರು ಪೊಲೀಸ್ ವಶಕ್ಕೆ

• **ಉದಯವಾಹಿನಿ ಮೈಸೂರು**

ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಕಾರ್ಯ ಕರ್ತರು ಮೈಸೂರಿನಲ್ಲಿ ನಡೆಸುತ್ತಿರುವ ಪ್ರತಿಭಟನೆ ತೀವ್ರಗೊಂಡಿದೆ ಮೈಸೂರು ಬಿಜೆಪಿ ಕಚೇರಿ ಬಳಿ ಸೇರಿರುವ ಸಾವಿರಾರು ಬಿಜೆಪಿ ಕಾರ್ಯಕರ್ತರು, ಸಿಎಂ ಸಿದ್ದರಾಮಯ್ಯ ವಿರುದ್ಧ ಘೋಷಣೆ ಕೂಗಿ ರಾಜೀನಾಮೆಗೆ ಆಗ್ರಹಿಸಿದ್ದಾರೆ. ಈ ವೇಳೆ ಪೊಲೀಸರು ಬಿಜೆಪಿ ಕಚೇರಿ ಬಳಿ ಹಾಕಿದ್ದ ಬ್ಯಾರಿಕೇಡ್ ಗಳನ್ನು ತಳ್ಳಿ, ಅದರ ಮೇಲೆ ಹತ್ತಿ ಹೊರ ಹೋಗಲು ಪ್ರತಿಭಟನಾಕಾರರು ಯತ್ನಿಸಿದ್ದಾರೆ. ಈ ವೇಳೆ ಪೊಲೀಸರು ತಡೆಯೊಡ್ಡಿದ್ದಾರೆ. ಮೈಸೂರು ಜಿಲ್ಲಾ ಪಂಚಾಯತ್ ಕಚೇರಿಯಲ್ಲಿ ಸಿಎಂ ಸಿದ್ದರಾಮಯ್ಯ ನೇತೃತ್ವದಲ್ಲಿ ಇಂದು ಕೆಡಿಪಿ ಸಭೆ ನಡೆಯಲಿದ್ದು, ಸಭೆ ವೇಳೆ ಸಿಎಂ ಸಿದ್ದರಾಮಯ್ಯ ಅವರಿಗೆ ಮುತ್ತಿಗೆ ಹಾಕುವ ನಿಟ್ಟಿನಲ್ಲಿ ಜಿಲ್ಲಾ ಪಂಚಾಯತ್ ಕಚೇರಿಯತ್ತ ಮುನ್ನುಗ್ಗಲು ಬಿಜೆಪಿ ಕಾರ್ಯಕರ್ತರು ಯತ್ನಿಸಿದ್ದಾರೆ. ತಕ್ಷಣ ಎಚ್ಚೆತ್ತ ಪೊಲೀಸರು ಬಿಜೆಪಿ ಕಾರ್ಯಕರ್ತರನ್ನು ತಡೆದು ವಶಕ್ಕೆ ಪಡೆದಿದ್ದಾರೆ. ಪ್ರತಿಭಟನಾ ನಿರತ ಬಿಜೆಪಿ ಕಾರ್ಯಕರ್ತರನ್ನು ವಶಕ್ಕೆ ಪಡೆಯುತ್ತಿದ್ದಂತೆ ಬಿಜೆಪಿ ನಾಯಕರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

### ಗುಣಮಟ್ಟದ ಹಾಲು ಪೂರೈಕೆಯಿಂದ ಸಂಘದ ದೃಢತೆ: ನಾಗರಾಜು

• **ಉದಯವಾಹಿನಿ ಚನ್ನಪಟ್ಟಣ**

ಹಾಲು ಉತ್ಪಾದಕರು ಸಂಘಕ್ಕೆ ನೀಡುವ ಉತ್ತಮ ಗುಣಮಟ್ಟದ ಹಾಲು ಸಂಘದ ಸದೃಢತೆಯನ್ನು ಕಾಪಾಡುತ್ತದೆ ಎಂದು ಗೋವಿಂದಹಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷ ಜಿ.ಎಚ್. ನಾಗರಾಜು ಅಭಿಪ್ರಾಯಪಟ್ಟರು. ತಾಲ್ಲೂಕಿನ ಗೋವಿಂದಹಳ್ಳಿ ಗ್ರಾಮದಲ್ಲಿ ಮಂಗಳವಾರ ನಡೆದ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆಯಲ್ಲಿ ಮಾತನಾಡಿದರು.

ರೈತರು ಸ್ವಾವಲಂಬಿ ಬದುಕು ಸಾಗಿಸಲು ಹೈನುಗಾರಿಕೆ ಉತ್ತಮ ಉಪ ಕಸುಬಾಗಿದೆ. ರೈತರ ಕಷ್ಟದಲ್ಲಿ ಕೈ ಹಿಡಿದಿರುವುದೆ ಹೈನುಗಾರಿಕೆ. ಹಾಲು ಉತ್ಪಾದಕ ರೈತರು ಉತ್ತಮ ಗುಣಮಟ್ಟದ ಹಾಲನ್ನು ಸಂಘಕ್ಕೆ ಸರಬರಾಜು ಮಾಡಿ ಆರ್ಥಿಕವಾಗಿ ಬೆಳವಣಿಗೆ ಸಾಧಿಸಬೇಕು ಎಂದು ಕಿವಿಮಾತು ಹೇಳಿದರು. ಬಮೂಲ್ ಚನ್ನಪಟ್ಟಣ ಶಿಬಿರದ ವಿಸ್ತರಣಾಧಿಕಾರಿ ಝುರೀನಾ ಮಾತನಾಡಿ, ಗುಣಮಟ್ಟದ ಹಾಲು ಉತ್ಪಾದನೆಗೆ ರಾಸುಗಳಿಗೆ ಸಮ ಪ್ರಮಾಣದಲ್ಲಿ ಆಹಾರ ನೀಡಬೇಕು. ಇಲ್ಲವಾದಲ್ಲಿ ಫ್ಯಾಟ್ ನಲ್ಲಿ ಏರಿಳಿತ ಕಂಡು ಬರುತ್ತದೆ. ರಾಸುಗಳಿಗೆ ಹಸಿರು ಮೇವಿನ ಜೊತೆಗೆ, ಒಣ ಹುಲ್ಲು, ಪೌಷ್ಟಿಕ ಆಹಾರ ಫೀಡ್ಸ್ ಅನ್ನು ಸಮ ಪ್ರಮಾಣದಲ್ಲಿ ನೀಡಬೇಕು. ಇದರಿಂದ ರಾಸುಗಳಿಗೆ ಕ್ಯಾಲ್ಸಿಯಂ ಇನ್ನಿತರ ಖನಿಜಾಂಶಗಳು ದೊರಕುತ್ತವೆ. ಆಗ ಗುಣಮಟ್ಟದ ಹಾಲು ದೊರೆಯುತ್ತದೆ ಎಂದರು.

ಅಂತರಾಳದಿಂದ..
EDITORIAL

# ವಿಶ್ವಾಸಾರ್ಹತೆ ಕಳೆದುಕೊಂಡ ಸಿಬಿಐ

ಸಿಬಿಐ ತನಿಖೆಗೆ ಮುಕ್ತ ಅವಕಾಶ ನೀಡುವ ಅಧಿಸೂಚನೆಯನ್ನು ರಾಜ್ಯ ಸರಕಾರ ಹಿಂದಕ್ಕೆ ತೆಗೆದುಕೊಂಡಿದೆ. ಇನ್ನು ಮುಂದೆ ರಾಜ್ಯದಲ್ಲಿ ಸಿಬಿಐ ಯಾವುದೇ ತನಿಖೆಯನ್ನು ನಡೆಸಬೇಕಾದರೂ ರಾಜ್ಯ ಸರಕಾರದ ಅನುಮತಿಯನ್ನು ತೆಗೆದುಕೊಳ್ಳಬೇಕಾಗುತ್ತದೆ. ಇದರಾಚೆಗೆ ತನಿಖೆಯಲ್ಲಿ ಹಸ್ತಕ್ಷೇಪ ನಡೆಸಲೇಬೇಕಾದ ಅನಿವಾರ್ಯ ಸ್ಥಿತಿ ಎದುರಾದರೆ ಅದು ಸುಪ್ರೀಂಕೋರ್ಟ್‌ನಿಂದ ಅನುಮತಿ ಪಡೆಯುವುದು ಅಗತ್ಯವಾಗುತ್ತದೆ.

ರಾಜ್ಯದಲ್ಲಿ ರಾಜ್ಯಪಾಲರನ್ನು ಕೇಂದ್ರ ಸರಕಾರ ತನ್ನ ರಾಜಕೀಯ ದುರುದ್ದೇಶಕ್ಕಾಗಿ ದುರ್ಬಳಕೆ ಮಾಡುತ್ತಿದೆ ಎನ್ನುವ ಆರೋಪ ಕೇಳಿ ಬರುತ್ತಿದ್ದುದರಿಂದ ಸಿಬಿಐ ತನಿಖೆಯ ವಿರುದ್ಧ ಸರಕಾರ ಇಂತಹದೊಂದು ತೀರ್ಮಾನ ತೆಗೆದುಕೊಳ್ಳುವುದು ಅನಿರೀಕ್ಷಿತವಾಗಿರಲಿಲ್ಲ. ಒಂದು ಕಾಲದಲ್ಲಿ ಸಿಬಿಐ ತನಿಖೆ ಎಂದರೆ ರಾಜಕಾರಣಿಗಳು ಬೆಚ್ಚಿ ಬೀಳುತ್ತಿದ್ದರು. ಸರಕಾರ ಕಂಪಿಸುತ್ತಿತ್ತು ಯಾರೂ ಭೇದಿಸಲಸಾಧ್ಯವಾಗಿರುವ ಪ್ರಕರಣಗಳನ್ನು ಸಿಬಿಐ ಭೇದಿಸಿ, ಆರೋಪಿಗಳು ಅದೆಷ್ಟು ಉನ್ನತ ಹುದ್ದೆಯಲ್ಲಿದ್ದರೂ ಅವರನ್ನು ಹುಡುಕಿ ಬಂಧಿಸಿ ಜೈಲಿಗೆ ತಳ್ಳುತ್ತದೆ ಎಂದು ಜನರು ನಂಬಿದ್ದರು. ಭಾರತದ ಶ್ರೀಸಾಮಾನ್ಯರ ಮಟ್ಟಿಗೆ ಸಿಬಿಐಗಿಂತ ಉನ್ನತ ತನಿಖಾ ಸಂಸ್ಥೆ ಇನ್ನೊಂದಿರಲಿಲ್ಲ. ಈ ಕಾರಣದಿಂದಲೇ, ಸಿಬಿಐ ಅಧಿಕಾರಿಗಳನ್ನು ತನಿಖೆಗಳನ್ನು ವಸ್ತುವಾಗಿಟ್ಟುಕೊಂಡು ಹಲವು ಭಾರತೀಯ ಸಿನೆಮಾಗಳು ಸಾಲು ಸಾಲಾಗಿ ಬಂದಿದ್ದವು. ವಿಪರ್ಯಾಸವೆಂದರೆ, ಇಂದು ಸಿಬಿಐ ತನಿಖಾ ಸಂಸ್ಥೆಗಳು ವರ್ಚಸ್ಸನ್ನು ಉಳಿಸಿಕೊಂಡಿಲ್ಲ. ಮಾತ್ರವಲ್ಲ ಸಿಬಿಐಯನ್ನು ಭ್ರಷ್ಟ ರಾಜಕಾರಣಿಗಳೇ ತಮ್ಮ ರಾಜಕೀಯ ಚದುರಂಗದಾಟಗಳಿಗೆ ಕಾಲಾಳು ವಾಗಿ ಬಳಸಿಕೊಳ್ಳುತ್ತಿದ್ದಾರೆ.

> ಈಗಾಗಲೇ ಕೆಲವು ತನಿಖಾ ಸಂಸ್ಥೆಗಳನ್ನು ಬಳಸಿಕೊಂಡು ರಾಜ್ಯದ ಹಲವು ರಾಜಕೀಯ ನಾಯಕರನ್ನು ಬಗ್ಗು ಬಡಿಯುವ ಪ್ರಯತ್ನವನ್ನು ಕೇಂದ್ರ ಸರಕಾರ ನಡೆಸಿದೆ. ಸಿಬಿಐಗೆ ತನಿಖಾವಕಾಶವನ್ನು ಮುಂದುವರಿಸಿದರೆ, ಅದು ನೇರವಾಗಿ ರಾಜ್ಯದ ಮುಖ್ಯಮಂತ್ರಿಯನ್ನು ಗುರಿಯಾಗಿಸುವ ಅನುಮಾನವಿದ್ದುದರಿಂದ ತರಾತುರಿಯಲ್ಲಿ ಸರಕಾರ ಅಧಿಸೂಚನೆಯನ್ನು ವಾಪಸ್ ತೆಗೆದುಕೊಂಡಿದೆ. ಈ ಹಿಂದೆ ಆಂಧ್ರ ಪ್ರದೇಶ, ಪಶ್ಚಿಮಬಂಗಾಳವೂ ಇದೇ ತೀರ್ಮಾನವನ್ನು ತೆಗೆದುಕೊಂಡು ಕೇಂದ್ರ ಸರಕಾರಕ್ಕೆ ತಪರಾಕಿ ನೀಡಿದ್ದವು. ಇದೀಗ ಆ ರಾಜ್ಯಗಳ ಸಾಲಿಗೆ ಕರ್ನಾಟಕವೂ ಸೇರಿದಂತಾಗಿದೆ.

ರಾಜಕಾರಣಿಗಳು ಸಿಬಿಐ ತನಿಖೆಗೆ ಒತ್ತಾಯಿಸುತ್ತಿದ್ದಾರೆ ಎಂದರೆ, ಪ್ರಕರಣವನ್ನು ಪರೋಕ್ಷವಾಗಿ ಮುಚ್ಚಿಹಾ ಕಲು ಹವಣಿಸುತ್ತಿದ್ದಾರೆ ಎಂದು ಜನರು ಅನುಮಾನಿ ಸುವಂತಾಗಿದೆ. ರಾಜಕೀಯ ಪಕ್ಷಗಳು ತನಿಖಾ ಸಂಸ್ಥೆಗಳನ್ನು ದುರುಪಯೋಗಗೊಳಿಸುತ್ತಾ ಬಂದಿರುವುದು ಇಂದು ನಿನ್ನೆಯೇನೂ ಅಲ್ಲ ಕೇಂದ್ರದಲ್ಲಿ ಆಗಿ ಹೋಗಿರುವ ಎಲ್ಲಾ ಸರಕಾರಗಳು ತಮ್ಮ ತಮ್ಮ ಮಿತಿಯಲ್ಲಿ ಸಿಬಿಐಯನ್ನು ತಮ್ಮ ಎದುರಾಳಿಗಳನ್ನು ಬಗ್ಗು ಬಡಿಯಲು ದುರ್ಬಳಕೆ ಮಾಡುತ್ತಲೇ ಬಂದಿವೆ. ಆದರೆ ಇವೆಲ್ಲದರ ನಡುವೆಯೂ ಸಿಬಿಐ ತನ್ನ ಸ್ವಂತಿಕೆಯನ್ನು ಉಳಿಸಿಕೊಂಡಿತ್ತು. ಕೆಲವೊಮ್ಮೆ ಕೇಂದ್ರ ಸರಕಾರದ ವಿರುದ್ಧವೂ ಅದು ತನ್ನ ಅಧಿಕಾರವನ್ನು ಬಳಸಿಕೊಂಡದ್ದಿದೆ. ಆದರೆ ಯಾವಾಗ ಸಿಬಿಐ ಪ್ರಧಾನಿ ಮೋದಿಯ ರಫೇಲ್ ಹಗರಣದ ಬಗ್ಗೆ ಆಸಕ್ತಿ ತೋರಿಸಿತೋ, ಅಲ್ಲಿಂದ ಸಿಬಿಐ ಸಂಸ್ಥೆಯ ಬೆನ್ನುಮೂಳೆಯನ್ನು ಪೂರ್ಣವಾಗಿ ಮುರಿಯಲಾಯಿತು. ಅಂದಿನ ಸಿಬಿಐ ಮುಖ್ಯಸ್ಥರನ್ನೇ ಮೂಲೆಗುಂಪು ಮಾಡಿ, ಭ್ರಷ್ಟಾಚಾರದಲ್ಲಿ ಗುರುತಿಸಿಕೊಂಡ ಅಧಿಕಾರಿಯ ಕೈಗೆ ಸಿಬಿಐಯ ಚುಕ್ಕಾಣಿಯನ್ನು ನೀಡಲಾಯಿತು. ಸಿಬಿಐಯ ನೈತಿಕ ಶಕ್ತಿಯನ್ನು ಸಂಪೂರ್ಣ ಉಡುಗಿಸಲಾಯಿತು. ಕೇಂದ್ರ ಸರಕಾರದ ವಿರುದ್ಧ ಅದರಲ್ಲೂ ಪ್ರಧಾನಿಯ ವಿರುದ್ಧ ಕಾರ್ಯನಿರ್ವಹಿಸಿದರೆ ಅವರ ಸ್ಥಿತಿ ಏನಾಗುತ್ತದೆ ಎನ್ನುವುದು ರಫೇಲ್ ಹಗರಣದಲ್ಲಿ ಸಿಬಿಐಯ ನೇತೃತ್ವ ವಹಿಸಿದವರಿಗೆ ಸ್ಪಷ್ಟಪಡಿಸಲಾಯಿತು. ಆ ದಿನದಿಂದ ಸಿಬಿಐ ತನಿಖಾ ಸಂಸ್ಥೆ ರೆಕ್ಕೆ ಮುರಿದ ಹಕ್ಕಿಯಂತಾಯಿತು. ಇಂದು, ಸಿಬಿಐ ಎನ್ನುವುದು ರಾಜಕೀಯ ಎದುರಾಳಿಗಳನ್ನು ಬ್ಲಾಕ್‌ಮೇಲ್ ಮಾಡಲು ಕೇಂದ್ರ ಸರಕಾರ ಬಳಸುತ್ತಿರುವ ಹಲವು ಅಸ್ತ್ರಗಳಲ್ಲಿ ಒಂದು ಎಂದು ಜನರು ಆರೋಪಿಸುವಂತಾಗಿದೆ. ಕೇಂದ್ರದ ವಿರುದ್ಧ ಧ್ವನಿಯೆತ್ತಿದೆ ಎಲ್ಲಾ ರಾಜ್ಯಗಳ ವಿರುದ್ಧವೂ ಸಿಬಿಐಯನ್ನು ಬಳಸುವ ಪ್ರಯತ್ನ ನಡೆದಿದೆ. ಪಶ್ಚಿಮ ಬಂಗಾಳದ ಮಮತಾ ಬ್ಯಾನರ್ಜಿ ನೇತೃತ್ವದ ಸರಕಾರವನ್ನು ಅಭದ್ರಗೊಳಿಸಲು ಮತ್ತು ಅವರ ಮೇಲೆ ನಿಯಂತ್ರಣ ಸಾಧಿಸಲು ಸಿಬಿಐಯನ್ನು ಕೇಂದ್ರ ಸರಕಾರ ದುರ್ಬಳಕೆ ಮಾಡಿಕೊಂಡಾಗ ಅದರ ವಿರುದ್ಧ ಮಮತಾ ಅವರು ಧ್ವನಿಯೆತ್ತಿದರು. 2018ರಲ್ಲಿ ಕೇಂದ್ರ ಮತ್ತು ರಾಜ್ಯ ಸರಕಾರಗಳ ನಡುವೆ ತಿಕ್ಕಾಟ ತೀವ್ರವಾದಾಗ ಆಂಧ್ರ ಪ್ರದೇಶ ಮತ್ತು ಪಶ್ಚಿಮಬಂಗಾಳ ರಾಜ್ಯಗಳು ಸಿಬಿಐ ತನಿಖೆಯ ಅಧಿಕಾರವನ್ನು ಕಿತ್ತುಕೊಂಡವು. ಸಿಬಿಐ ಕುರಿತಂತೆ ರಾಜ್ಯಗಳು ವ್ಯಕ್ತಪಡಿಸಿರುವ ಅಪನಂಬಿಕೆ ಪರೋಕ್ಷವಾಗಿ ಒಕ್ಕೂಟ ವ್ಯವಸ್ಥೆಯ ಮೇಲೆಯೂ ಪರಿಣಾಮ ಬೀರಿದೆ. ಮುಖ್ಯವಾಗಿ ರಾಜ್ಯಗಳು ಕೇಂದ್ರ ಸರಕಾರದ ಬಗ್ಗೆ ನಂಬಿಕೆಯನ್ನು ಕಳೆದುಕೊಂಡಿದ್ದವು. ಮುಂದೆ, ಈ ನಿಲುವನ್ನು ಹಲವು ರಾಜ್ಯಗಳು ಅನುಸರಿಸಿಕೊಂಡು ಬಂದವು. ಇದೀಗ ಕರ್ನಾಟಕ ಸಿಬಿಐ ವಿರುದ್ಧ ತೆಗೆದುಕೊಂಡ ನಿರ್ಧಾರದಿಂದ ಹಳೆಯ ತನಿಖೆಗಳಿಗೆ ಯಾವುದೇ ಅಡ್ಡಿಯೂ ಆಗುವುದಿಲ್ಲ ಹೊಸದಾಗಿ ತನಿಖೆ ನಡೆಸಬೇಕಾದರೆ ಸಿಬಿಐ ರಾಜ್ಯದ ಅನುಮತಿಯನ್ನು ಪಡೆದುಕೊಳ್ಳಲೇಬೇಕು ಅಥವಾ ಸುಪ್ರೀಂಕೋರ್ಟ್ ಅಥವಾ ಹೈಕೋರ್ಟ್‌ನ ಸಮ್ಮತಿಯನ್ನು ಪಡೆದುಕೊಳ್ಳಬೇಕಾಗುತ್ತದೆ. ಹಿಂದೆ ನಡೆದಂತೆ ಐಟಿ, ಈಡಿ.ಯನ್ನು ಬಳಸಿಕೊಂಡು ರಾಜ್ಯದ ನಾಯಕರನ್ನು ಬೆದರಿಸಿದಂತೆ ಸಿಬಿಐಯನ್ನು ಬಳಸಿ ಬೆದರಿಸಲು ಸಾಧ್ಯವಾಗುವುದಿಲ್ಲ. ಸಿಬಿಐ ತನ್ನ ವಿಶ್ವಾಸಾರ್ಹತೆಯನ್ನು ಕಳೆದುಕೊಳ್ಳುವಲ್ಲಿ ಕೇಂದ್ರದ ಪಾತ್ರ ಬಹುದೊಡ್ಡದು. ಇದರ ಲಾಭವನ್ನು ಈ ದೇಶದ ಭ್ರಷ್ಟ ರಾಜಕಾರಣಿಗಳು ತಮ್ಮದಾಗಿಸಿಕೊಳ್ಳುತ್ತಿದ್ದಾರೆ. ಒಂದು ಕಾಲದಲ್ಲಿ ಸಿಬಿಐ ತನಿಖೆ ಶುರು ಹಚ್ಚಿದರೆ ಅದು ಒಬ್ಬ ರಾಜಕಾರಣಿಯ ರಾಜಕೀಯ ಬದುಕಿನ ಮೇಲೆ ಭಾರೀ ದುಷ್ಪರಿಣಾಮವನ್ನು ಬೀರುತ್ತಿತ್ತು ಆದರೆ ಸಿಬಿಐ ತನಿಖೆಯನ್ನೇ ರಾಜಕಾರಣಿಗಳು ಕಟಕಟೆಯಲ್ಲಿ ನಿಲ್ಲಿಸಿ ಪ್ರಶ್ನಿಸುತ್ತಿದ್ದಾರೆ.



## ರಾಮಾಯಣ

### ಋಷ್ಯ ಶೃಂಗ ಮುನಿಯು ಅಂಗದೇಶಕ್ಕೆ ಬಂದದ್ದು

• ಹಿಂದಿನ ಸಂಚಿಕೆಯಿಂದ **6ನೆಯ ಅಧ್ಯಾಯ**

ಆ ಋಷಿಯು ಎಂದೆಂದೂ ಕಾಣದ ಮನೋಹರೆಯರಾದ ಆ ಸ್ತ್ರೀಯರನ್ನು ಕಂಡು ಮನಕರಗಿ ಅವರನ್ನು ಕುರಿತು ' ನನ್ನ ತಂದೆಯು ವಿಭಾಂಡಕನೆಂಬ ಮುನೀಶ್ವರನು : ನಾನು ಆತನ ಕುಮಾರನು : ನನ್ನ ಹೆಸರು ಋಷ್ಯಶೃಂಗನು : ನನ್ನ ಆಶ್ರಮವು ಇಲ್ಲಿಗೆ ಸಮೀಪದಲ್ಲಿದೆ ; ಅಲ್ಲಿಗೆ ಬನ್ನಿರಿ : ನಿಮಗೆ ವಿಧ್ಯುಕ್ತ ಪ್ರಕಾರವಾಗಿ ಅರ್ಘ್ಯಪಾದ್ಯಾಚಮನಾದಿ ಪೂಜೆಗಳನ್ನು ಮಾಡಿ ಕೃತಾರ್ಥ ನಾಗುವೆನು' ಎಂದು ಹೇಳಿದನು. ಆ ವಾಕ್ಯವನ್ನು ಕೇಳಿ ಆ ಸ್ತ್ರೀಯರು ಅತಿ ಹರ್ಷದಿಂದ ಆತನ ಆಶ್ರಮಕ್ಕೆ ಹೋದರು. ಆತನು ಅರ್ಘ್ಯಪಾದ್ಯಾಚಮನಾದಿಗಳಿಂದ ಪೂಜೆಯನ್ನು ಮಾಡಿ ಕಂದಮೂಲ ಫಲಾದಿಗಳನ್ನು ಕೊಟ್ಟು ಸತ್ಕರಿಸಿದನು. ಆತನ ಸತ್ಕಾರವನ್ನು ಕೈಗೊಂಡು ಅತ್ಯಂತ ಸಂತೋಷಪಟ್ಟು ಆ ಸ್ತ್ರೀಯರು ಆತನ ತಂದೆಯಾದ ವಿಭಾಂಡಕಮುನೀಶ್ವರನು ಬಂದು ಕಂಡು ಕೋಪಿಸುವನಾದ್ದರಿಂದ ತಿರುಗಿ ಹೋಗಬೇಕೆಂದು ಮನಸ್ಸಿನಲ್ಲಿ ಆಲೋಚನೆ ಮಾಡಿ ಆತನನ್ನು ಕುರಿತು 'ಎಲೈ ಋಷ್ಯಶೃಂಗ ಮುನಿಯೆ, ನೀನು ಕೊಟ್ಟ ಫಲಾದಿಗಳನ್ನು ನಾವು ಅಂಗೀಕರಿಸಿದೆವು; ಇನ್ನು ನೀನು ನಮ್ಮ ವಶದಲ್ಲಿರುವ ಫಲಾದಿಗಳನ್ನು ಅಂಗೀಕರಿಸಬೇಕು' ಎಂದು ಪ್ರಾರ್ಥಿಸಿ ತಾವು ತಂದ ನಾನಾವಿಧ ಭಕ್ಷ್ಯಗಳನ್ನು ಆತನಿಗೆ ಕೊಡುತ್ತಿದ್ದರು; ಆ ಮುನಿಯು ಆ ಭಕ್ಷ್ಯಗಳನ್ನು ಫಲಾದಿಗಳೆಂದೆಣಿಸಿ ಭಕ್ಷಿಸಿ ಯಾವಾಗಲೂ ಕಂಡಂಥ ವಸ್ತುಗಳಲ್ಲದ್ದರಿಂದ ಸಂತೋಷಪಡುತ್ತಿದ್ದನು ; ಬಳಿಕ ಆ ವೇಶ್ಯಾಸ್ತ್ರೀಯರು ವಿಭಾಂಡಕಮುನೀಶ್ವರನ ಭಯದಿಂದ ಋಷ್ಯಶೃಂಗಮುನೀಂದ್ರನಿಂದ ಬೀಳ್ಕೊಂಡು ಮೊದಲು ತಾವು ಇದ್ದ ಸ್ಥಳಕ್ಕೆ ಹೋದರು. ಋಷ್ಯಶೃಂಗನು ಆ ವೇಶ್ಯಾಸ್ತ್ರೀಯರು ಹೋದಮೇಲೆ ಸ್ನಾನಮಾಡಿ ಚಿತ್ರ ವಿಕಾರದಿಂದ ದುಃಖಾಕ್ರಾಂತನಾಗಿ ವನದಲ್ಲಿ ಸಂಚರಿಸುತ್ತ ಹೊತ್ತುಕಳೆದು ಮಾರನೆಯ ದಿವಸ ಆ ವೇಶ್ಯಾ ಸ್ತ್ರೀಯರಿದ್ದ ಕಡೆಗೆ ಅವರನ್ನೇ ಮನಸ್ಸಿನಲ್ಲಿ ನೆನೆಯುತ್ತ ಬರುತ್ತಿದ್ದನು; ಆ ಸ್ತ್ರೀಯರು ತಮ್ಮೆಡೆಗೆ ಬರುವಂಥ ಋಷ್ಯಶೃಂಗನನ್ನು ಕಂಡು ಹರ್ಷದಿಂದ ಎದುರುಬಂದು ಆತನನ್ನು ನೋಡಿ ಎಲೈ ಋಷ್ಯಶೃಂಗಮುನೀಂದ್ರನೆ, ನಮ್ಮ ಆಶ್ರಮಕ್ಕೆ ನೀನು ಬಾ : ಅಲ್ಲಿ ಫಲಾದಿಗಳು ನಿಮ್ಮ ಆಶ್ರಮದಲ್ಲಿರುವ ಫಲಗಳಿಗಿಂತಲೂ ವಿಶೇಷವಾಗಿರುವುವು' ಎಂದರು. ಆ ಮಾತನ್ನು ಕೇಳಿ ಋಷ್ಯಶೃಂಗನು ಸಂತೋಷದಿಂದ ಅವರ ಆಶ್ರಮಕ್ಕೆ ಹೋಗಲು ಒಪ್ಪಿದನು. ಆಗ ವೇಶ್ಯಾಸ್ತ್ರೀಯರು ಆ ಮುನಿಯನ್ನು ರೋಮಪಾದರಾಯನ ಪಟ್ಟಣಕ್ಕೆ ಕರೆದುಕೊಂಡು ಬಂದರು, ಆತನು ಪಟ್ಟಣಕ್ಕೆ ಪ್ರವೇಶಿಸಿದಾಗಲೇ ದೇವೇಂದ್ರನು ಮಳೆಗರೆದು ಸಮಸ್ತ ಜಗತ್ತನ್ನೂ ತಂಪುಮಾಡಿದನು. ಆಗ ರೋಮಪಾದರಾಯನು ಋಷಿಯನ್ನು ಎದುರುಗೊಂಡು ನಮಸ್ಕರಿಸಿ ನಿಯಮಸ್ಥನಾಗಿ ವಿಧ್ಯುಕ್ತಪ್ರಕಾರದಲ್ಲಿ ಅರ್ಘ್ಯಪಾದ್ಯಾಚಮನಾದಿ ಸತ್ಕಾರಗಳನ್ನು ಮಾಡಿ 'ಋಷ್ಯಶೃಂಗಮುನೀಶ್ವರನೆ, ನಿನ್ನನ್ನು ಕರೆದುಕೊಂಡು ಬಂದದ್ದರಿಂದ ನಿನ್ನ ತಂದೆಯಾದ ವಿಭಾಂಡಕಮುನಿಗೆ ನನ್ನಲ್ಲಿ ಕೋಪವಿಲ್ಲದ ಹಾಗೆ ವರವನ್ನು ಕೊಡಬೇಕು ಎಂದು ಬೇಡಿಕೊಂಡು ಆ ಮುನೀಂದ್ರನನ್ನು ತನ್ನ ಅಂತಃಪುರಕ್ಕೆ ಬಿಜಯಮಾಡಿಸಿ ತನ್ನ ಕುಮಾರಿಯಾದ ಶಾಂತಾದೇವಿಯನ್ನು ಕೊಟ್ಟು ವಿಧ್ಯುಕ್ತಪ್ರಕಾರದಲ್ಲಿ ವಿವಾಹಮಾಡಿಸಿ ಅತ್ಯಂತ ಹರ್ಷದಿಂದಿದ್ದನು. ಋಷ್ಯಶೃಂಗಮುನೀಶ್ವರನು ಅವಳೊಡನೆ ಅನೇಕವಿಧ ಭೋಗಗಳನ್ನು ಅನುಭವಿಸಿಕೊಂಡು ಬೇಕಾದ ವಸ್ತುಗಳಿಂದ ಸತ್ಕರಿಸಲ್ಪಟ್ಟವನಾಗಿ ಸುಖದಿಂದಿದ್ದಾನೆ ಎಂದು ಹೇಳಿದನು.

ಮುಂದುವರಿಯುವುದು...



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ
ಹಾಗೂ
ವಿಮರ್ಶಕರು



# ಹಸಿರು ಕ್ರಾಂತಿಯ ಹರಿಕಾರ, ಕೃಷಿ ವಿಜ್ಞಾನಿ ಡಾಕ್ಟರ್ ಎಂ ಎಸ್ ಸ್ವಾಮಿನಾಥನ್ ರವರ ಪ್ರಥಮ ವರ್ಷದ ಪುಣ್ಯಸ್ಮರಣೆ

• ಉದಯವಾಹಿನಿ, ವಿಶೇಷ

ಡಾಕ್ಟರ್: ಎಂ ಎಸ್ ಸ್ವಾಮಿನಾಥನ್ ರವರು 1925 ಆಗಸ್ಟ್ 7ರಂದು ತಮಿಳು ನಾಡಿನ ಕುಂಭಕೋಣಂನಲ್ಲಿ ಜನಿಸಿದರು. ತಾಯಿ ನಾಡಿನಲ್ಲಿ ವಿದ್ಯಾಭ್ಯಾಸ ಮುಗಿಸಿ ಹೆಚ್ಚಿನ ವ್ಯಾಸಂಗೋಸ್ಕರ ಲಂಡನ್‌ಗೆ ಹೋಗಿ ಅಲ್ಲಿ ಕೇಂಬ್ರಿಡ್ಜ್ ವಿಶ್ವವಿದ್ಯಾಲಯದಿಂದ ಪಿಎಚ್ ಡಿ ಹಾಗೂ ಡಾಕ್ಟರೇಟ್ ಪದವಿ ಪಡೆದು 1954 ರಲ್ಲಿ ಭಾರತಕ್ಕೆ ಮರಳಿದರು.

ಅವರು ಹೊರ ರಾಷ್ಟ್ರಗಳಲ್ಲಿ ಉದ್ಯೋಗ ಹುಡುಕುವ ಪ್ರಯತ್ನ ಮಾಡದೇ ಮಾತೃಭೂಮಿಯ ಸೇವೆಯೇ ತಮ್ಮ ಕರ್ತವ್ಯ ಎಂದು ಭಾವಿಸಿದ್ದರು. ಓರ್ವ ದೇಶಭಕ್ತ ಸರಿಯಾದ ನಿರ್ಣಯ ಆದರ್ಶಗಳನ್ನ ಹೊಂದಿದ್ದರು. ವಿವಿಧ ರೀತಿಯ ಉತ್ತಮ ಬೀಜಗಳನ್ನ ಅಭಿವೃದ್ಧಿಪಡಿಸುವುದರ ಮೂಲಕ ಆಹಾರ ಧಾನ್ಯಗಳ ಬೆಳೆಯಲ್ಲಿ ಭಾರತ ಸ್ವಸಾಮರ್ಥ್ಯವನ್ನು ಪಡೆಯಲು ಸಾಧ್ಯ ಎಂದರು. ಡಾಕ್ಟರ್: ಸ್ವಾಮಿನಾಥನ್ ರವರು ಭಾರತದ ಬೇಸಾಯವನ್ನು ಅಭಿವೃದ್ಧಿಗೊಳಿಸಲು ಹಲವು ರೀತಿಯ ಮೆಕ್ಸಿಕನ್ ಗೋದಿ ತಳಿಗಳನ್ನು ಬಳಸಲು ಉದ್ದೇಶಿಸಿದರು. ಇದರಿಂದಾಗಿ ದೇಶದ ಕೃಷಿ ಉತ್ಪಾದನೆ ಹೆಚ್ಚಾಯಿತು.

ಡಾಕ್ಟರ್: ಸ್ವಾಮಿನಾಥನ್ ಭಾರತದ ಹಸಿರು ಕ್ರಾಂತಿಗೆ ಕಾರಣರಾದರು. ಇವರು ಹಲವಾರು ಸಂಶೋಧನೆಗಳು ಹಾಗೂ ಪ್ರಯೋಗಗಳಿಂದಾಗಿ ರಾಷ್ಟ್ರ ವ್ಯವಸಾಯ ಕ್ಷೇತ್ರದಲ್ಲಿ ಸಾಕಷ್ಟು ಪ್ರಗತಿ ಸಾಧಿಸದಲ್ಲದೆ ಹೊರ ದೇಶಗಳಿಗೂ ಆಹಾರ ಧಾನ್ಯಗಳನ್ನ ರಫ್ತು ವಹಿವಾಟ ಮಾಡುವಷ್ಟು ಸಾಮರ್ಥ್ಯಗಳಿಸಿತು. 1972 ರಲ್ಲಿ ಡಾ: ಸ್ವಾಮಿನಾಥನ್ ರವರು ಇಂಡಿಯನ್ ಕೌನ್ಸಿಲ್ ಫಾರ್ ಅಗ್ರಿಕಲ್ಚರಲ್ ರಿಸರ್ಚ್ ಸಂಸ್ಥೆಗೆ ಡೈರೆಕ್ಟರ್ ಆಗಿ ನೇಮಕಗೊಂಡರು. ಗೋದಿ ಬೆಳೆಯಲ್ಲಿ ಇವರು ಸಂಶೋದಿಸಿದ ಒಂದು ವಿಶಿಷ್ಟ ತಳಿಯಿಂದಾಗಿ ದೇಶದಲ್ಲಿ ಹಸಿರು ಕ್ರಾಂತಿ ಯಶಸ್ವಿಯಾಗಲು ಕಾರಣವಾಯಿತು. ಇವರು ನಡೆಸಿದ ಸಂಶೋಧನೆ ಪ್ರಯತ್ನಗಳಿಂದಾಗಿ ಇಡೀ ದೇಶದಲ್ಲಿ ಗೋದಿ ಬೆಳೆ ಎಲ್ಲಾ ದಾಖಲೆಗಳನ್ನು ಮೀರಿ ಅತಿ ಹೆಚ್ಚು ಪ್ರಮಾಣದಲ್ಲಿ ಬೆಳೆಯಲು ಸಾಧ್ಯವಾಯಿತು.

> **ಮಾತೃಭೂಮಿಯ ಸೇವೆಯೇ ತಮ್ಮ ಕರ್ತವ್ಯ**

ಲಂಡನ್ ನ ರಾಯಲ್ ಸೊಸೈಟಿ ಸೇರಿದಂತೆ ವಿಶ್ವದ 14 ಪ್ರಮುಖ ಅಂತರಾಷ್ಟ್ರೀಯ ವಿಜ್ಞಾನ ಕೇಂದ್ರಗಳು ಅವರಿಗೆ ಫೆಲೋಶಿಪ್ ನೀಡಿದವು. ಭಾರತ ಸರ್ಕಾರ ಪದ್ಮಶ್ರೀ, ಪದ್ಮಭೂಷಣ ಪ್ರಶಸ್ತಿ ನೀಡಿ ಗೌರವಿಸಿತು.

1971 ರಲ್ಲಿ ಅವರಿಗೆ ಪ್ರತಿಷ್ಠಿತ ಮ್ಯಾಗ್ಸೆ ಪ್ರಶಸ್ತಿ ಲಭಿಸಿತು. 1986 ರಲ್ಲಿ ಆಲ್ಬರ್ಟ್ ಐನ್ಸ್ಟೀನ್ ಪ್ರಶಸ್ತಿ ದೊರಕಿತು. ಅಮೇರಿಕಾದ ಟೈಲರ್ ಬಹುಮಾನ, ಜಪಾನ್ ದೇಶದ ಹೋಂಡಾ ಬಹುಮಾನ, ಯುನೆಸ್ಕೋ ನೀಡುವ ಗಾಂಧಿ ಗೋಲ್ಡ್ ಅವಾರ್ಡ್ ಹಲವಾರು ಪ್ರಶಸ್ತಿಗಳು ದೊರೆತವು. 20ನೇ ಶತಮಾನದ ಏಷ್ಯಾದ ಅತಿ ಪ್ರಭಾವಿ ವ್ಯಕ್ತಿಗಳಲ್ಲಿ ಡಾಕ್ಟರ್: ಸ್ವಾಮಿನಾಥನ್ ಒಬ್ಬರೆಂದು ಟೈಮ್ಸ್ ಪತ್ರಿಕೆ ವರದಿ ಮಾಡಿತು.

1990ರ ಪ್ರಾರಂಭದಲ್ಲಿ ಇವರು ಮದ್ರಾಸ್ನಲ್ಲಿ ಎಂಎಸ್ ಸ್ವಾಮಿನಾಥನ್ ಸಂಶೋಧನಾ ಸಂಸ್ಥೆ ಸ್ಥಾಪಿಸಿದರು. ಇದಕ್ಕಾಗಿ ಅವರು ತಮಗೆ ಬಹುಮಾನವಾಗಿ ಬಂದ ಹಣವನ್ನ ವಿನಿಯೋಗಿಸಿದರು. ಈ ಸಂಶೋಧನಾ ಸಂಸ್ಥೆ ಭಾರತದ ಗ್ರಾಮಾಂತರ ಪ್ರದೇಶಗಳ ಆರ್ಥಿಕ ಅಭಿವೃದ್ಧಿಗಾಗಿ ಹಲವಾರು ಯೋಜನೆಗಳನ್ನು ರೂಪಿಸಿತು. ಅಂತರಾಷ್ಟ್ರೀಯ ಮಟ್ಟದಲ್ಲಿ ಈ ಸಂಸ್ಥೆಯು ಪ್ರಸಿದ್ಧಿ ಪಡೆಯಿತು. ಭಾರತದಲ್ಲಿ ಬೇಸಾಯ ಕ್ಷೇತ್ರದ ಅಭಿವೃದ್ಧಿಗಾಗಿ ಡಾಕ್ಟರ್: ಸ್ವಾಮಿನಾಥನ್ ನೀಡಿದ ಅನನ್ಯ, ನಿಷ್ಕಲ್ಮಶ ಕೊಡುಗೆಗಳು, ಸಾಧನೆಗಳು ದೇಶದ ಕೃಷಿ ಇತಿಹಾಸದಲ್ಲಿ ಪ್ರಮುಖ ಸ್ಥಾನ ಪಡೆಯುತ್ತವೆ.

ಹಸಿರು ಕ್ರಾಂತಿಯ ಹರಿಕಾರ, ಅಪ್ರತಿಮ ಶ್ರೇಷ್ಠ ಕೃಷಿ ವಿಜ್ಞಾನಿ, ತಾಯಿ ನಾಡಿನ ಹೆಮ್ಮೆಯ ಪುತ್ರ ದಿನಾಂಕ: 28-09-2023 ರಂದು ತನ್ನ 98ನೇ ವಯಸ್ಸಿನಲ್ಲಿ ವಯೋಸಹಜ ಕಾರಣದಿಂದ ಕೃಷಿ ನಕ್ಷತ್ರ ಕಣ್ಮರೆಯಾದರು.

> ಡಾ. ಸ್ವಾಮಿನಾಥನ್ ಅವರು ದೇಶದ ಎಲ್ಲಾ ಕಡೆ ಪ್ರವಾಸ ಕೈಗೊಂಡು ವ್ಯವಸಾಯದಲ್ಲಿ ಹಳೆಯ ಶಾಸ್ತ್ರೀಯ ಪದ್ಧತಿಗಳನ್ನು ಬಿಟ್ಟು ವೈಜ್ಞಾನಿಕವಾದ ಹೊಸ ಹೊಸ ಪದ್ದತಿಗಳನ್ನು ಅನುಸರಿಸುವಂತೆ, ರೈತರಿಗೆ ಸ್ಪೂರ್ತಿ ನೀಡಿದರು. ಡಾಕ್ಟರ್: ಸ್ವಾಮಿನಾಥನ್ ಅವರು ಕೃಷಿ ಕ್ಷೇತ್ರದ ಬೆಳವಣಿಗೆಗೆ ನೀಡಿದ ಅಮೂಲ್ಯ ಕೊಡುಗೆಗಳನ್ನು ಗುರುತಿಸಿ ದೇಶವಿದೇಶಗಳು ಅವರಿಗೆ ಬಹುಮಾನ ಪ್ರಶಸ್ತಿಗಳನ್ನ ನೀಡಿ ಗೌರವಿಸಿದವು.

ಆದರೂ ಅವರ ಸಾಧನೆ, ಆದರ್ಶ ಹಾಗೂ ಕೊಡುಗೆಗಳು ಚಿರಸ್ಮರಣೀಯ. ರಾಷ್ಟ್ರದಲ್ಲಿ ಹುಟ್ಟಿ ಬೆಳೆದು ಸಾಧಿಸಿ ಶಾಶ್ವತವಾದ ಕೃಷಿ ಕ್ಷೇತ್ರದಲ್ಲಿ ಕೀರ್ತಿಯನ್ನ ರಾಷ್ಟ್ರಕ್ಕೆ ತಂದುಕೊಟ್ಟ ಮಹಾಪುರುಷ. ಅವರ ಅನನ್ಯ ಸೇವೆಯನ್ನ ಸ್ಮರಿಸಿ ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲಿ ಎಂದು ಇಡೀ ಭಾರತೀಯ ಕೃಷಿ ವಿಜ್ಞಾನಿಗಳ ಹಾಗೂ ಭಾರತೀಯ ಎಲ್ಲಾ ನಾಗರೀಕರ ಪರವಾಗಿ ಆ ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

# ಬಹುಮುಖ ಪ್ರತಿಭೆಯ ಕಲಾವಿದೆ ದಿವ್ಯಾ ಪಾಲಾಕ್ಷ ರಂಗಪ್ರವೇಶ



ಕಲಾ ಸಾಹಿತ್ಯ
ವೈ.ಕೆ. ಸಂಧ್ಯಾ ಶರ್ಮ
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

• ಉದಯವಾಹಿನಿ, ವಿಶೇಷ

ಯಥಾ ಗುರು-ತಥಾ ಶಿಷ್ಯೆ ಎಂಬ ಮಾತಿಗೆ ಅನುಗುಣವಾಗಿ ಉದಯೋನ್ಮುಖ ನೃತ್ಯ ಕಲಾವಿದೆ ಶ್ರೀಮತಿ ದಿವ್ಯಾ ಪಾಲಾಕ್ಷ ಬೆಂಗಳೂರಿನ ಖ್ಯಾತ ರಚನ್ಸಾ ಡಾನ್ಸ್ ಅಕಾಡೆಮಿಯ ನೃತ್ಯ ಗುರು ವಿದುಷಿ ಕಾವ್ಯ ದಿಲೀಪ್ ಅವರ ನೆಚ್ಚಿನ ಶಿಷ್ಯೆಯಾಗಿ, ಅವರಂತೆ ಪ್ರತಿಭಾವಂತೆ, ಬಹುಮುಖ ವ್ಯಕ್ತಿತ್ವ ಉಳ್ಳವಳು. ಭರತನಾಟ್ಯ, ಕುಚಿಪುಡಿ ಉಭಯ ನೃತ್ಯಶೈಲಿಗಳಲ್ಲಿ ಗುರುಗಳಂತೆ ನುರಿತ ಕಲಾವಿದೆಯಾಗಿ ನಾಡಿನಾದ್ಯಂತ ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿ ಕಲಾರಸಿಕರ ಮೆಚ್ಚುಗೆ ಪಡೆದವಳು. ಶ್ರೀ ಗಂಗರುದ್ರಯ್ಯ ಮತ್ತು ರಾಜೇಶ್ವರಿಯ ಪುತ್ರಿ ಮತ್ತು ಪಾಲಾಕ್ಷರವರ ಪತ್ನಿಯಾದ ದಿವ್ಯಾ ಚಿಕ್ಕಂದಿನಿಂದ ನೃತ್ಯ ಕಲಿಯುತ್ತ ಗುರು ಕಾವ್ಯರ ಬದ್ಧತೆಯ ಗರಡಿಯಲ್ಲಿ ರೂಪುಗೊಂಡ ನೃತ್ಯಶಿಲ್ಪ. ಕರ್ನಾಟಕ ಸರ್ಕಾರದ ಭರತನಾಟ್ಯ ಪರೀಕ್ಷೆಯಲ್ಲಿ, ಜ್ಯೂನಿಯರ್ ಮತ್ತು ಸೀನಿಯರ್ ಪರೀಕ್ಷೆಗಳಲ್ಲಿ ಉತ್ತಮಾಂಕಗಳನ್ನುಗಳಿಸಿದ್ದು, ಕುಚಿಪುಡಿ ಜ್ಯೂನಿಯರ್ ಪರೀಕ್ಷೆಯಲ್ಲೂ ಶ್ರೇಷ್ಠ ದರ್ಜೆಯಲ್ಲಿ ತೇರ್ಗಡೆಯಾಗಿ 'ವಿದ್ವತ್' ಪರೀಕ್ಷೆಯ ತಯಾರಿಯಲ್ಲಿದ್ದಾಳೆ.

ದಿವ್ಯಾ, ತಾನು ಕಲಿತ ನೃತ್ಯದ ವಿವಿಧ ಆಯಾಮಗಳನ್ನು ಪ್ರದರ್ಶಿಸಲು, ಅಕ್ಟೋಬರ್ ತಿಂಗಳ 4ನೇ ತಾ. ಶುಕ್ರವಾರ ಬೆಳಗ್ಗೆ 9.30 ಗಂಟೆಗೆ ಮಲ್ಲೇಶ್ವರದ ಸೇವಾಸದನ ಸಭಾಂಗಣದಲ್ಲಿ ವಿದ್ಯುಕ್ತವಾಗಿ ರಂಗಪ್ರವೇಶ ಮಾಡಲಿದ್ದಾಳೆ. ಕಲಾವಿದೆಯ ಸುಮನೋಹರ ನೃತ್ಯವಲ್ಲರಿಯನ್ನು ಕಣ್ತುಂಬಿಕೊಳ್ಳಲು ಕಲಾರಸಿಕರೆಲ್ಲರಿಗೂ ಸುಸ್ವಾಗತ. ದಿವ್ಯಳ ಮನೆಯಲ್ಲಿ ಕಲೆಗೆ ಪೂರಕವಾದ ಸುಸಂಕೃತವಾದ ವಾತಾವರಣ. ತಾಯಿ ರಾಜೇಶ್ವರಿ ಉತ್ತಮ ಗಾಯಕಿಯಾಗಿದ್ದು, ಮಗಳಲ್ಲಿ ನೃತ್ಯದ ಒಲವು ಗುರುತಿಸಿ, ಅವಳನ್ನು ನೃತ್ಯಕಲಾವಿದೆಯಾಗಿ ಮಾಡುವ ಕನಸು ಹೊಂದಿ, ದಿವ್ಯ 8 ವರ್ಷದವಳಿದ್ದಾಗಲೇ ಭರತನಾಟ್ಯ ಕಲಿಯಲು ಪ್ರೇರೇಪಿಸಿ ಜತಿನ್ ನೃತ್ಯಶಾಲೆಗೆ ಸೇರಿಸಿದರು.

ಮುಂದೆ ಪ್ರಶಿಕ್ಷಣಕ್ಕೆ ನುರಿತ ಗುರು ಕಾವ್ಯ ದಿಲೀಪರ ರಚನ್ಸಾ ಡಾನ್ಸ್ ಅಕಾಡೆಮಿಯ ಕಕ್ಷೆಗೆ ಸೇರ್ಪಡೆಗೊಳಿಸಿದರು. ಬಹು ಆಸಕ್ತಿಯಿಂದ ನೃತ್ಯ ಕಲಿಯುತ್ತ ಬಂದ ದಿವ್ಯಾ, ಶಾಲಾ- ಕಾಲೇಜುಗಳಲ್ಲಿಯೂ ಸಂಗೀತ-ನೃತ್ಯ ಸಾಂಸ್ಕೃತಿಕ ಚಟುವಟಿಕಗಳಲ್ಲಿ ತೊಡಗಿಕೊಂಡು ಅಂತರ್ಶಾಲಾ-ಅಂತ ರ್ಕಾಲೇಜುಗಳ ನೃತ್ಯಸ್ಪರ್ಧೆಗಳಲ್ಲಿ ಅನೇಕ ಬಹುಮಾನಗಳನ್ನು ಗಳಿಸಿದ ಹೆಮ್ಮೆ ಅವಳದು.

ಓದಿನಲ್ಲೂ ಚುರುಕಾಗಿದ್ದ ದಿವ್ಯಾ, ಬೆಂಗಳೂರಿನ ಕೆ.ಎಲ್.ಇ. ಎಸ್. ನಿಜಲಿಂಗಪ್ಪ ಸಂಸ್ಥೆಯಲ್ಲಿ ಮನೋವಿಜ್ಞಾನ ವಿಷಯದಲ್ಲಿ ಬಿ.ಎ. ಮುಗಿಸಿ, ನಂತರ- ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಎಂ.ಎ. (ಮನೋವಿಜ್ಞಾನ) ಸ್ನಾತಕೋತ್ತರ ಪದವಿ ಪಡೆದು, ಪ್ರಸ್ತುತ ಜೈನ್ ವಿ.ವಿ.ದಲ್ಲಿ ಮನೋವಿಜ್ಞಾನದಲ್ಲಿ ಎಂ.ಫಿಲ್ ಮಾಡುತ್ತಿದ್ದಾಳೆ. ಜೊತೆಗೆ ಅಂತಿಮ ಹಂತದಲ್ಲಿರುವ ಕ್ಯಾನ್ಸರ್ ರೋಗಿಗಳ 'ಕರುಣಾಶ್ರಯ' ಕ್ಯಾನ್ಸರ್ ಆಸ್ಪತ್ರೆಯಲ್ಲಿ 4 ವರ್ಷಗಳ ಕಾಲ ಮನೋವೈದ್ಯರಾಗಿ ಸೇವೆ ಸಲ್ಲಿಸಿದ ವಿಶೇಷ ದಿವ್ಯಳದು ನೃತ್ಯ-ಗಾಯನ ಮತ್ತು ಚಿತ್ರಕಲೆಗಳಲ್ಲಿ ಪರಿಶ್ರಮ ಹೊಂದಿರುವ ಬಹುಮುಖ ಪ್ರತಿಭೆ ದಿವ್ಯ, ನಾಡಿನಾದ್ಯಂತ ಅನೇಕ ನೃತ್ಯಪ್ರದರ್ಶನಗಳನ್ನು ನೀಡಿದ್ದು, ಅವುಗಳಲ್ಲಿ ಮುಖ್ಯವಾದುದೆಂದರೆ- ಹೊಸದುರ್ಗದ ಶಿವರಾತ್ರಿ ಉತ್ಸವ, ಮುಕುಲ ಬಾಲನೃತ್ಯೋತ್ಸವ, ಆರ್ಟಿಕ್ಯುಲೇಟ್ ಫೆಸ್ಟಿವಲ್, ನವರಾತ್ರಿ ಉತ್ಸವ, ಡಿವೈನ್ ಟೆಂಪಲ್, ಆಕೃತಿ, ಕನ್ನಡ -ಸಂಸ್ಕೃತಿ ನಾಟಕೋತ್ಸವ, ವಿಶ್ವ ನೃತ್ಯ ದಿನಾಚರಣೆ ಉತ್ಸವ, ಋತುಗಾನ ಸಂಗೀತ ಉತ್ಸವ, ಕ್ವಾರಣ್ಯ ನೀಡವ್ವ' ಉತ್ಸವಗಳು ಹಾಗೂ ಅನೇಕ ದೇವಾಲಯಗಳಲ್ಲಿ ನೃತ್ಯಪ್ರದರ್ಶನ ನೀಡಿದ ಗರಿಮೆ ಇವಳದು. ಇವಲ್ಲದೆ, ಮೋಹಿನಿ ಭಸ್ಮಾಸುರ, ಸೀತಾರಾಮ ಕಲ್ಯಾಣ, ದಶಾವತಾರ ನವರಸ ಕೃಷ್ಣ ಮುಂತಾದ ನೃತ್ಯರೂಪಕಗಳಲ್ಲಿ ಪ್ರಮುಖ ಪಾತ್ರ ವಹಿಸಿದ್ದಾಳೆ. ಈಕೆಯ ಪ್ರತಿಭೆಗೆ ಹಲವಾರು ಪ್ರಶಸ್ತಿಗಳೂ ಸಂದಿವೆ. ಅವುಗಳೆಂದರೆ- ಕುಪ್ಪೂರು ಗದ್ದುಗೆ ಮಠದಲ್ಲಿ 'ನಾಟ್ಯ ವಿಶಾರದೆ', ತಿರುಪತಿಯಲ್ಲಿ 'ಪದ್ಮಾವತಿ' ಪ್ರಶಸ್ತಿ 'ನೃತ್ಯಾಂಗನ' ಪ್ರಶಸ್ತಿ-ಗೌರವಗಳು ಸಂದಿವೆ.

ಕಲೋಪಾಸಕ ಪತಿ ಪಾಲಾಕ್ಷ ಅವರ ಸಂಪೂರ್ಣ ಸಹಕಾರ ಪ್ರೋತ್ಸಾಹಗಳಿಂದ ಮುಂದೆ ನೃತ್ಯರಂಗದಲ್ಲಿ ಸಾಧನೆ ಮಾಡುವ ಕನಸು ಹೊಂದಿ ದ್ದಾಳೆ ದಿವ್ಯಾ.

> **ದಿವ್ಯ 8 ವರ್ಷದವಳಿದ್ದಾಗಲೇ ಭರತನಾಟ್ಯ ಕಲಿಯಲು ಪ್ರೇರೇಪಣೆ**



# ಪವಿತ್ರಾಗೌಡ ಜಾಮೀನು ಅರ್ಜಿ ವಿಚಾರಣೆ ಮತ್ತೆ ಮುಂದೂಡಿಕೆ

• ಉದಯವಾಹಿನಿ, ಬೆಂಗಳೂರು

ರೇಣುಕಾಸ್ವಾಮಿ ಹತ್ಯೆ ಪ್ರಕರಣದ ಪ್ರಮುಖ ಆರೋಪಿ ಪವಿತ್ರಾಗೌಡ ಜಾಮೀನು ಅರ್ಜಿ ವಿಚಾರಣೆ ಮತ್ತೆ ಮುಂದೂಡಿಕೆಯಾಗಿದೆ.

ರೇಣುಕಾಸ್ವಾಮಿ ಹತ್ಯೆ ಪ್ರಕರಣದ ಆರೋಪಿ ನಟ ದರ್ಶನ್ ಜಾಮೀನು ಅರ್ಜಿಯನ್ನು ಬೆಂಗಳೂರು ಸೆಷನ್ಸ್ ಕೋರ್ಟ್ ಸೆ.30ಕ್ಕೆ ಮುಂದೂಡಿದೆ. ಇದರ ಬೆನ್ನಲ್ಲೇ ಪ್ರಮುಖ ಆರೋಪಿ ಪವಿತ್ರಾಗೌಡ ಜಾಮೀನು ಅರ್ಜಿ



ಉದಯವಾಹಿನಿ ಚಿತ್ರ

ವಿಚಾರಣೆ ಕೂಡ ಮುಂದೂಡಲಾಗಿದೆ. ಪವಿತ್ರಾಗೌಡ ಜಾಮೀನು ಅರ್ಜಿ ವಿಚಾರಣೆಯನ್ನು ಸಹ ಕೋರ್ಟ್ ಸೆ.30ಕ್ಕೆ ಮುಂದೂಡಿ ಆದೇಶ ಹೊರಡಿಸಿದೆ.

ಪವಿತ್ರಾಗೌಡ ಪರ ಟಾಮಿ ಸೆಬಾಸ್ಟಿಯನ್ ವಾದ ಮಂಡನೆ ಮಾಡಿದ್ದರು. ಈ ವೇಳೆ ಪವಿತ್ರಾಗೆ ರೇಣುಕಾಸ್ವಾಮಿ ಕೊಲ್ಲುವ ಉದ್ದೇಶವಿರಲಿಲ್ಲ. ಆಕೆ ಅಂತಹ ಷಡ್ಯಂತ್ರವನ್ನೂ ನಡೆಸಿರಲಿಲ್ಲ. ಅಲ್ಲದೇ ಪವಿತ್ರಾ ವಿರುದ್ಧ ಸಾಕ್ಷಿ ಹೇಳಿಕೆಯಲ್ಲಿಯೂ ದರ್ಶನ್ ಜೊತೆ ಬಂದು ಪವಿತ್ರಾ ರೇಣುಕಾಸ್ವಾಮಿ ಕಪಾಳಕ್ಕೆ ಹೊಡೆದಿದ್ದಳು. ಅದನ್ನು ಬಿಟ್ಟರೆ ಬೇರೆ ಆರೋಪವಿಲ್ಲ ಎಂದು ವಾದಿಸಿದ್ದಾರೆ ಎಂದು ತಿಳಿದುಬಂದಿದೆ.

# ಪಿತೃಪಕ್ಷದಲ್ಲಿ ಶ್ರಾದ್ಧವನ್ನು ಏಕೆ ಮಾಡಬೇಕು?

• ಉದಯವಾಹಿನಿ, ವಿಶೇಷ

ಪಿತೃಪಕ್ಷದಲ್ಲಿ ವಾತಾವರಣದಲ್ಲಿನ ತಿರ್ಯಕ್ ಲಹರಿಗಳ ಮತ್ತು ಯಮಲಹರಿಗಳ ಪ್ರಭಾವವು ಹೆಚ್ಚಿನ ಪ್ರಮಾಣದಲ್ಲಿ ಇರುವುದರಿಂದ ಪಿತೃಪಕ್ಷದಲ್ಲಿ ಶ್ರಾದ್ಧವನ್ನು ಮಾಡಿದರೆ ರಜ-ತಮಾತ್ಮಕ ಕೋಶಗಳಿರುವ ಪಿತೃಗಳಿಗೆ ಪೃಥ್ವಿಯ ವಾತಾವರಣ ಕಕ್ಷೆಯಲ್ಲಿ ಬರಲು ಸುಲಭವಾಗುತ್ತದೆ. ಆದುದರಿಂದ ಹಿಂದೂ ಧರ್ಮದಲ್ಲಿ ಹೇಳಲಾದ ವಿಧಿಗಳನ್ನು ಆಯಾ ಕಾಲದಲ್ಲಿ ಮಾಡುವುದು ಹೆಚ್ಚು ಶ್ರೇಯಸ್ಕರವಾಗಿದೆ.

ನಮ್ಮೊಂದಿಗೆ ಅತಿಹೆಚ್ಚು ಸಂಬಂಧವಿರುವ ಮೊದಲಿನ ಒಂದೆರಡು ಪೀಳಿಗೆಗಳ ಪಿತೃಗಳ ಶ್ರಾದ್ಧವನ್ನು ನಾವು ಮಾಡುತ್ತೇವೆ. ಏಕೆಂದರೆ ಇವರೊಂದಿಗೆ ನಮ್ಮ ಕೊಡುಕೊಳ್ಳುವಿಕೆಯ ಲೆಕ್ಕಾಚಾರವು ಬಹಳಷ್ಟು ಇರುತ್ತದೆ. ಇತರ ಪೀಳಿಗೆಗಳಿಗಿಂತ ಈ ಪಿತೃಗಳಲ್ಲಿ ಕುಟುಂಬದಲ್ಲಿ ಸಿಲುಕಿಕೊಳ್ಳುವ ಆಸಕ್ತಿಯ ಪ್ರಮಾಣವು ಹೆಚ್ಚಿಗೆ ಇರುವುದರಿಂದ ಅವರ ಈ ಬಂಧನವು ತೀವ್ರವಾಗಿರುತ್ತದೆ. ಆದುದರಿಂದ ಈ ಬಂಧನವನ್ನು ಕಡಿದು ಹಾಕಲು ವೈಯಕ್ತಿಕ ರೀತಿಯಲ್ಲಿ ಒಂದು ವರ್ಷದವರೆಗೆ ಮಾಡುವ ಶ್ರಾದ್ಧಕ್ಕೆ ಸಂಬಂಧಿಸಿದ ವಿಧಿಗಳನ್ನು ಮಾಡುವುದು ಆವಶ್ಯಕವಾಗಿರುತ್ತದೆ. ಇದರ ತುಲನೆಯಲ್ಲಿ ಅದಕ್ಕೂ ಮೊದಲಿನ ಇತರ ಪಿತೃಗಳೊಂದಿಗಿನ ನಮ್ಮ ಸಂಬಂಧದ ತೀವ್ರತೆಯು ಕಡಿಮೆ ಇರುವುದರಿಂದ ಅವರಿಗೆ ವಿಧಿಯನ್ನು ಸಾಮೂಹಿಕವಾಗಿ ಪಿತೃಪಕ್ಷದಲ್ಲಿ ಮಾಡುವುದು ಸೂಕ್ತವಾಗಿದೆ. ಆದುದರಿಂದ ಒಂದು ವರ್ಷದವರೆಗೆ ಮಾಡುವ ಶ್ರಾದ್ಧ ಮತ್ತು ಪಿತೃಪಕ್ಷದಲ್ಲಿ ಮಾಡುವ ಶ್ರಾದ್ಧ ಇವರೆಡನ್ನೂ ಮಾಡುವುದು ಆವಶ್ಯಕವಾಗಿದೆ.

ಶ್ರಾದ್ಧದಿಂದ 101 ಕುಲಗಳಿಗೆ ಗತಿ ಸಿಗುತ್ತದೆ ಎಂದು ಹೇಳುತ್ತಾರೆ ಇದರ ಅರ್ಥವೇನು ?

'ಕುಲ' ಈ ಶಬ್ದವನ್ನು 'ಆಯಾ ಜೀವಗಳ ಜೀವನದಲ್ಲಿ ಪ್ರತ್ಯಕ್ಷ, ಪರೋಕ್ಷ ಕೊಡುಕೊಳ್ಳುವಿಕೆಯ ರೂಪದಲ್ಲಿ ಸಂಪರ್ಕಕ್ಕೆ ಬಂದಿರುವ ಇತರ ಜೀವಿಗಳು' ಎಂಬ ಅರ್ಥದಲ್ಲಿ ಉಪಯೋಗಿಸಲಾಗಿದೆಯೇ ಹೊರತು ಪೀಳಿಗೆ ಎಂಬರ್ಥದಲ್ಲಿ ಉಪಯೋಗಿಸಲಾಗಿಲ್ಲ. ಶ್ರಾದ್ಧಾದಿ ಕರ್ಮಗಳನ್ನು ಮಾಡುವುದರಿಂದ ಆಯಾ ಲಿಂಗದೇಹಗಳ ಮೇಲೆ ಪರಿಣಾಮವಾಗಿ ಅವುಗಳ ಕೋಶಗಳಲ್ಲಿನ ಆಸಕ್ತಿಯುಕ್ತ ರಜತಮ ದಾರಗಳ ವಿಘಟನೆಯಾಗುತ್ತದೆ. ಇದರಿಂದ ಆ ಜೀವಕ್ಕೆ ಗತಿ ಸಿಗುತ್ತದೆ; ಅಲ್ಲದೆ ಅದರೊಂದಿಗೆ ಅನೇಕ ಕಾರಣಗಳಿಂದ ಸಂಪರ್ಕಕ್ಕೆ ಬಂದಿರುವ ಇತರ ಸುಮಾರು 101 ಜೀವಗಳೂ ಸಹ ಆಯಾ ಕೊಡುಕೊಳ್ಳುವಿಕೆಯ ಸಂಪರ್ಕದಿಂದ ಮುಕ್ತವಾಗಿ ಸ್ವಲ್ಪಮಟ್ಟಿಗಾದರೂ ಗತಿಯನ್ನು ಪಡೆಯುತ್ತವೆ. 'ಶ್ರಾದ್ಧವನ್ನು ಮಾಡುವುದರಿಂದ 101 ಕುಲಗಳಿಗೆ ಗತಿ ಸಿಗುತ್ತದೆ', ಅಂದರೆ ಮೃತಪಟ್ಟ ಜೀವದೊಂದಿಗೆ ಕೊಡುಕೊಳ್ಳುವಿಕೆಯ ಸಂಬಂಧವಿರುವ ಇತರ ಸಜೀವಿಗಳಿಗೂ ಗತಿಯು ಸಿಗುತ್ತದೆ ಎಂಬುದು ಇದರ ಅರ್ಥವಾಗಿದೆ'.



ಉದಯವಾಹಿನಿ ಚಿತ್ರ

> **ಒಂದು ವರ್ಷದವರೆಗೆ ಶ್ರಾದ್ಧವನ್ನು ಮಾಡಿದ ನಂತರ ಪುನಃ ಪಿತೃಪಕ್ಷದಲ್ಲಿ ಶ್ರಾದ್ಧವನ್ನು ಏಕೆ ಮಾಡಬೇಕು ?**
>
> ಮೃತ್ಯುವಿನ ನಂತರ ಒಂದು ವರ್ಷದವರೆಗೆ ಮಾಡುವ ಶ್ರಾದ್ಧದಿಂದ ಆಯಾ ವಿಶಿಷ್ಟ ಲಿಂಗದೇಹಗಳಿಗೆ ಗತಿ ಸಿಗುವುದರಿಂದ ಆಯಾ ವ್ಯಕ್ತಿಗಳ ವ್ಯಷ್ಟಿ ಸ್ತರದಲ್ಲಿನ ಋಣವನ್ನು ತೀರಿಸಲು ಸಹಾಯವಾಗುತ್ತದೆ. ಇದು ವೈಯಕ್ತಿಕ ಸ್ತರದಲ್ಲಿ ಋಣವನ್ನು ತೀರಿಸುವ ಒಂದು ವ್ಯಷ್ಟಿ ಉಪಾಸನೆಯೇ ಆಗಿದೆ ಮತ್ತು ಪಿತೃಪಕ್ಷದಲ್ಲಿ ಮಾಡುವ ಶ್ರಾದ್ಧವು ಸಮಷ್ಟಿ ಸ್ತರದಲ್ಲಿ ಪಿತೃಗಳ ಋಣವನ್ನು ತೀರಿಸುವ ಸಮಷ್ಟಿ ಉಪಾಸನೆಯಾಗಿದೆ. ವ್ಯಷ್ಟಿ ಋಣವು ಆಯಾ ಲಿಂಗದೇಹಗಳ ಬಗೆಗಿನ ಪ್ರತ್ಯಕ್ಷ ಕರ್ತವ್ಯ ಪಾಲನೆಯನ್ನು ಕಲಿಸಿದರೆ ಸಮಷ್ಟಿ ಋಣವು ಒಂದೇ ಕಾಲದಲ್ಲಿ ವ್ಯಾಪಕ ಮಟ್ಟದಲ್ಲಿ ಕೊಡುಕೊಳ್ಳುವ ಲೆಕ್ಕವನ್ನು ತೀರಿಸುತ್ತದೆ.

# ನಾನು ಅನ್ನುವುದನ್ನು ಬಿಟ್ಟಾಗ, ವ್ಯಕ್ತಿ ಪರಿಪೂರ್ಣನಾಗುತ್ತಾನೆ..!



ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ

ಅಹಂಕಾರವನ್ನು ಗೆಲ್ಲದೇ ಹೋದರೆ, ಎಷ್ಟೇ ಸಾಧನೆ ಮಾಡಿದರೂ ಅದು ಕ್ಷುಲ್ಲಕವೇ ಆಗುತ್ತದೆ. ಯಾವುದೇ ಸಾಧಕನಿಗೆ ಅಹಂಕಾರ ಅತಿ ದೊಡ್ಡ ತೊಡಕು. ಈ ನಿಟ್ಟಿನಲ್ಲಿ ನಾರದರ ಅಹಂಕಾರ ಕರಗಿದ ಸ್ವಾರಸ್ಯಕರ ಕತೆಯೊಂದು ಇಲ್ಲಿದೆ. ಇದು ನಮಗೆಲ್ಲ ಪಾಠವಾಗಲಿ.

ಒಮ್ಮೆ ದೇವರ್ಷಿ ನಾರದರಿಗೆ ತಮ್ಮ ಸಾಧನೆಯ ಬಗ್ಗೆ ಅತೀವ ಅಭಿಮಾನ ಉಂಟಾಯಿತು. ತನ್ನಂಥ ಭಕ್ತರೂ ತಾಪಸಿಗರೂ ಯಾರಿಲ್ಲವೆಂಬ ಸ್ವಪ್ರಶಂಸೆ ಆರಂಭಿಸಿದರು.

ಕಂಡವರೆಲ್ಲರ ಎದುರು ತಾವು ಸದಾ ಕಾಲ ಶ್ರೀ ಹರಿಯ ಧ್ಯಾನ ಮಾಡುವುದನ್ನೂ ಆ ಮೂಲಕ ಸೃಷ್ಟಿಯಲ್ಲೇ ಇನ್ನಾರೂ ಸಂಪಾದಿಸದಷ್ಟು ಪುಣ್ಯ ಸಂಪಾದನೆ ಮಾಡಿರುವುದನ್ನೂ ಹೇಳಿಕೊಳ್ಳುತ್ತಿದ್ದರು. ಮೊದಮೊದಲು ನಾರದರ ಮಾತುಗಳನ್ನು ಕೇಳಿ ಸ್ಪಂದಿಸುತ್ತಿದ್ದವರಿಗೆ ಬರಬರುತ್ತ ಆ ಬಗ್ಗೆ ಜುಗುಪ್ಸೆ ಉಂಟಾಗತೊಡಗಿತು. ನಾರದರ ಈ ವರ್ತನೆಯ ಬಗ್ಗೆ ಶ್ರೀಮನ್ನಾರಾಯಣನವರೆಗೂ ದೂರು ಹೋಯಿತು. ಲೋಕ ಸಂಚಾರಿಯಾಗಿದ್ದ ನಾರದರು ಬಹಳ ದಿನಗಳ ನಂತರ ವೈಕುಂಠಕ್ಕೆ ಬಂದರು. ಕ್ಷೀರಸಾಗರದಲ್ಲಿ ಆದಿಶೇಷನ ಮೇಲೆ ಪವಡಿಸಿದ್ದ ಲಕ್ಷ್ಮೀ ನಾರಾಯಣರಿಗೆ ಕೈಮುಗಿದು ಯಥಾಪ್ರಕಾರ ತನ್ನದೇ ಗುಣಗಾನಕ್ಕೆ ಶುರುವಿಟ್ಟರು.

ಆಗ ಲಕ್ಷ್ಮೀ ದೇವಿಯು, ನಾರದಾ, ನಿನ್ನನ್ನು ಮೀರಿಸಿದ ಭಕ್ತರಿಲ್ಲವೆಂದು ಅಷ್ಟು ದೃಢವಾಗಿ ಹೇಗೆ ಹೇಳುತ್ತೀ ಎಂದು ಕೇಳಿದಳು. ಆಗ ನಾರದರು, ತಾಯಿ, ಬೇಕಿದ್ದರೆ ಪರೀಕ್ಷಿಸಿ ನೋಡಿ. ನನಗಿಂತ ದೊಡ್ಡ ಹರಿಭಕ್ತ ಸಿಕ್ಕರೆ ನೀವು ಹೇಳುವುದೆಲ್ಲ ಮಾಡಿಯೇನು, ಎಂದುಬಿಟ್ಟರು. ಆಗ ನಾರಾಯಣನು ನಡೆ ಹಾಗಾದರೆ, ದೇವತೆಗಳನ್ನು ಒರೆಗೆ ಹಚ್ಚುವ.. ಭೂಲೋಕದಲ್ಲಿ ಒಂದು



> **ಅವರಿಬ್ಬರೂ ವೇಷ ಮರೆಸಿಕೊಂಡು ಒಬ್ಬ ರೈತನ ಮನೆಗೆ ಹೋದರು. ಅವನೊಬ್ಬ ಭಕ್ತರೈತ. ಇವರನ್ನು ಪ್ರೀತಿಯಿಂದ ಉಪಚರಿಸಿ ಆಶ್ರಯ ಕೊಟ್ಟನು. ಅವನು ಸದಾ ನಾರಾಯಣ ನಾರಾಯಣ ಎನ್ನುತ್ತ ನಾಮಸ್ಮರಣೆ ಮಾಡುತ್ತಿದ್ದನು. ಅದನ್ನು ತೋರಿಸುತ್ತಾ ಶ್ರೀಹರಿಯು ನೋಡಿದೆಯಾ ನಾರದಾ, ನೀನೊಬ್ಬನೇ ಅಲ್ಲ ಎಂದನು.**

ಸುತ್ತು ಹೊಡೆದು ಬರೋಣ, ಎನ್ನುತ್ತ ನಾರದರೊಟ್ಟಿಗೆ ಹೊರಟನು. ಆಗ ನಾರದ ತಾನು ನಿದ್ದೆಯನ್ನೂ ಮಾಡದೆ ನಾಮ ಸ್ಮರಣೆ ಮಾಡುವ ಹೆಚ್ಚುಗಾರಿಕೆ ತೋಡಿಕೊಂಡನು. ರೈತನು ಹೊಲ ಉಳುವಾಗ, ನೀರು ಸೇದುವಾಗ ಹೀಗೆ ಪ್ರತಿಯೊಂದು ಕೆಲಸದ ನಡುವೆಯೂ ನಾಮಸ್ಮರಣೆ ಮಾಡುತ್ತಿದ್ದನು.

ಇವನ್ನೆಲ್ಲ ನೋಡಿದ ನಾರದ, ಇದೇನು ಮಹಾ ಎನ್ನುತ್ತ ಶ್ರೀಹರಿ ತೋರಿದ ನಿದರ್ಶನವನ್ನು ಅವಗಣಿಸಿದನು. ಆಗ ನಾರಾಯಣನು ಒಂದು ನೀರು ತುಂಬಿದ ಗಡಿಗೆಯನ್ನು ನಾರದನ ತಲೆಮೇಲಿಟ್ಟು- ಒಂದು ಹನಿಯೂ ಚೆಲ್ಲದಂತೆ ಈ ಬೆಟ್ಟಕ್ಕೆ ಸುತ್ತು ಹೊಡೆದು ಬಾ, ಎಂದನು.

ನಾರದರು ಅದರಂತೆ ಗಡಿಗೆಯನ್ನು ಹೊತ್ತು ಜಾಗರೂಕತೆಯಿಂದ, ಸ್ವಲ್ಪವೂ ನೀರು ತುಳುಕದ ಹಾಗೆ ಸವಾಲು ಪೂರೈಸಿ ಹೆಮ್ಮೆಯಿಂದ ಬೀಗಿದರು. ಆಗ ಶ್ರೀ ಹರಿಯು, ನಾರದಾ, ಈ ನಡುವೆ ನನ್ನನ್ನು ಎಷ್ಟು ಬಾರಿ ನೆನೆಸಿಕೊಂಡೆ ಎಂದು ಕೇಳಿದನು.

ಒಮ್ಮೆಯೂ ಇಲ್ಲ. ಅದು ಹೇಗೆ ನೆನೆಯಲಿ ಗಮನವೆಲ್ಲ ಗಡಿಗೆ ಮೇಲೆಯೇ ಇತ್ತು ಎಂದನು.

ಆಗ ಶ್ರೀಹರಿಯು ರೈತನು ಎಂತಹ ಕಠಿಣ ಕೆಲಸದಲ್ಲಿ ತೊಡಗಿದ್ದಾಗಲೂ ನಾಮಸ್ಮರಣೆ ಮಾಡುವುದನ್ನು ನೆನಪಿಸಿಕೊಟ್ಟನು.ನಾರದರ ಅಹಂಕಾರ ಕರಗಿತು. ಅಂದಿನಿಂದ ಅವರು ತಮ್ಮನ್ನು ತಿದ್ದಿಕೊಂಡು ಪರಿಪೂರ್ಣ ಸಾಧಕರಾದರು

# ಸ್ನಾತಕೋತ್ತರ ಪದವಿ ಪ್ರವೇಶ ಶುಲ್ಕವನ್ನು ಕಡಿಮೆ ಮಾಡಿ

## ಪದವಿ ಸ್ನಾತಕೋತ್ತರ ಪದವಿ ಮುಗಿಸಿದ ವಿದ್ಯಾರ್ಥಿಗಳ ಅಂಕಪಟ್ಟಿ ಮುದ್ರಿಸಿ ಒದಗಿಸಲು ಒತ್ತಾಯಿಸಿ ಕುಲಪತಿಗಳಿಗೆ ಮನವಿ

• ಉದಯವಾಹಿನಿ, ಸಿಂಧನೂರು

ರಾಯಚೂರು ವಿಶ್ವವಿದ್ಯಾಲಯದ 2024/25 ನೇ ಸಾಲಿನ ಸ್ನಾತಕೋತ್ತರ ಪದವಿ ಪ್ರವೇಶ ಶುಲ್ಕವನ್ನು ಕಡಿಮೆ ಮಾಡಿ ಪದವಿ ಸ್ನಾತಕೋತ್ತರ ಪದವಿ ಮುಗಿಸಿದ ವಿದ್ಯಾರ್ಥಿಗಳ ಅಂಕಪಟ್ಟಿ ಮುದ್ರಿಸಿ ಒದಗಿಸಲು ಒತ್ತಾಯಿಸಿ ತಾಲ್ಲೂಕು ತಹಶೀಲ್ದಾರ್ ವಿಶ್ವವಿದ್ಯಾಲಯದ ಕುಲಪತಿಗಳಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು. ನಂತರ ಮಾತನಾಡಿದ ಪರಿಷತ್ತಿನ ಜಿಲ್ಲಾ ಸಂಚಾಲಕ ಮೌನೇಶ ಜಾಲವಾಡಗಿ ಅವರು ಸರ್ಕಾರಗಳು ಬಡವರ ರಚನಾತ್ಮಕ ಕಾರ್ಯಕ್ರಮಗಳು ಮೂಲಕ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿರುವುದು. ನೂತನ ವಿಶ್ವವಿದ್ಯಾಲಯಗಳನ್ನು ಪ್ರಾರಂಭಿಸಿರುವುದು ಸ್ವಾಗತಾರ್ಹ ಆ ನಿಟ್ಟಿನಲ್ಲಿ ರಾಯಚೂರು ವಿಶ್ವವಿದ್ಯಾಲಯ ಪ್ರಾರಂಭವಾಗಿ ಮೂರು/ನಾಲ್ಕು ವರ್ಷಗಳು ಕಾಲ ಕಳೆದಿದೆ, ಮತ್ತು ಒಂದು ಬ್ಯಾಚ್ ಯಶಸ್ವಿಯಾಗಿ ಮುಗಿದಿದೆ, ಆದರೂ ಪದವಿಸ್ನಾತಕೋತ್ತರ ಪದವಿ ಮುಗಿಸಿದ ವಿದ್ಯಾರ್ಥಿಗಳಿಗೆ ಇನ್ನೂವರೆಗೂ ಅಂಕಪಟ್ಟಿಯನ್ನು ನೀಡದಿರುವುದು ವಿಶ್ವವಿದ್ಯಾಲಯದ ಆಡಳಿತಾತ್ಮಕ ಹಿನ್ನಡೆಯಾಗಿದೆ ಎಂದು ತಪ್ಪಾಗಲಿಕ್ಕಿಲ್ಲ, ಏಂದರು.


ಉದಯವಾಹಿನಿ ಚಿತ್ರ

**ಶುಲ್ಕ ನಿಗದಿ ಮಾಡಿದ್ದು ಸಮಂಜಸವಲ್ಲ**

ಈಗಾಗಲೇ ಸ್ನಾತಕೋತ್ತರ ಪದವಿ ಮುಗಿಸಿದ ವಿದ್ಯಾರ್ಥಿಗಳು ಅಂಕಪಟ್ಟಿ ಇರದೇ ಹೆಚ್ಚಿನ ವಿದ್ಯಾಭ್ಯಾಸದ ಪ್ರವೇಶ ದಿಂದ ಹಿಂದುಳಿಯುವಂತಾಗಿದೆ, ಎಸ್ಸಿ,ಎಸ್ಟಿ ವಿದ್ಯಾರ್ಥಿಗಳು ಪ್ರೋತ್ಸಾಹ ಧನದ ಅರ್ಜಿ ಹಾಕಲು ಮೂಲ ಅಂಕ ಪಟ್ಟಿಯನ್ನು ಇಲಾಖೆಯವರು ಕೇಳುತ್ತಿದ್ದಾರೆ, ಇದರಿಂದಾಗಿ ಈ ವಿದ್ಯಾರ್ಥಿಗಳು ಸಹ ಪ್ರೋತ್ಸಾಹ ಧನ ಪಡೆ ಯುವಲ್ಲಿ ವಂಚಿತರಾಗುವ ಆತಂಕದಲ್ಲಿದ್ದಾರೆ. ನಮ್ಮ ಕಲ್ಯಾಣ ಕರ್ನಾಟಕದ ಭಾಗದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾಲಯ ಅಧಿಕಾರಿಗಳು ಬಹಳ ಹೊರೆಯನ್ನು ಉಂಟುಮಾಡುತ್ತಿದೆ.

ಈ ನಿಟ್ಟಿನಲ್ಲಿ ಕರ್ನಾಟಕ ರಾಜ್ಯದ ಬೇರೆ ವಿಶ್ವವಿದ್ಯಾಲಯಗಳು ಇದೆ ಪ್ರವೇಶ ಶುಲ್ಕ 200 ರಿಂದ 400 ನಿಗದಿಪಡಿಸಿವೆ. ಆದರೆ ನಮ್ಮ ವಿಶ್ವವಿದ್ಯಾಲಯ ಅತಿ ಹೆಚ್ಚಿನ ಅರ್ಜಿ ಶುಲ್ಕವನ್ನು ನಿಗದಿ ಮಾಡಿದ್ದು,ಸಮಂಜಸವಲ್ಲ.

ಆದ್ದರಿಂದ ತಾವುಗಳು ಈ ಕುರಿತಂತೆ ಗಮನವರಿಸಿ ವಿದ್ಯಾರ್ಥಿಗಳ ಹಿತ ದೃಷ್ಟಿಯಿಂದ ಹಾಗೂ ವಿಭಾಗಗಳಿಗೆ ಪ್ರವೇಶಾತಿಯನ್ನು ಹೆಚ್ಚಿಸುವ ಸಲುವಾಗಿ ಅರ್ಜಿ ಶುಲ್ಕವನ್ನು ಕಡಿಮೆಗೊಳಿಸಬೇಕು,ಹಾಗೂ ಸ್ನಾತಕೋತ್ತರ ಪದವಿ ಮುಗಿಸಿದ ಎಲ್ಲಾ ವಿಭಾಗದ ವಿದ್ಯಾರ್ಥಿಗಳ ಅಂಕ ಪಟ್ಟಿಯನ್ನು ಮುದ್ರಿಸಿ, ವಿತರಿಸಬೇಕೆಂದು ತಮ್ಮಲ್ಲಿ ಮನವಿ ಮಾಡಿಕೊಳ್ಳುತ್ತೇವೆ ಹೊರದ ಇದ್ದಲ್ಲಿ ಹೊರದೆ ನಮ್ಮ ಸಮಿತಿ ವತಿಯಿಂದ ಜಿಲ್ಲಾದ್ಯಂತ ಉಗ್ರ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಈ.ಸ.ತಾಲ್ಲೂಕು ಅಧ್ಯಕ್ಷರಾದ ದುರುಗೇಶ ಕಲಮಂಗಿ ಮಾತನಾಡಿದರು. ಈ. ಸಂ. ಹೋರಾಟಗಾರರ ಹಿರಿಯ ಮುಖಂಡ ಮಲ್ಲಪ್ಪ ಗೋನಾಳ, ಈರಪ್ಪ ಸುಲ್ತಾನಾಪುರ, ವಿರೇಶ್ ಹಂಚಿನಾಳ, ಆಲಂಬಾಷ ಬೂದಿಹಾಳ, ಯುವ ಮುಖಂಡ ಚನ್ನಬಸವ ಯಾಪಲಪರ್ವಿ, ಪ್ರಧಾನ ಕಾರ್ಯದರ್ಶಿ ನರಸಪ್ಪ ಅಮರಾಪುರ, ಉಪಾಧ್ಯಕ್ಷ ವಿರುಪಣ್ಣ ರಾಮತ್ನಾಳ, ಮೌನೇಶ ಉಪ್ಪಳ, ಯಲ್ಲಸ್ವಾಮಿ ರೌಡಕುಂದ, ಶಿವರಾಜ ಕೆ, ದುರ್ಗೇಶ ರೌಡಕುಂದ, ಮಲ್ಲಿಕಾರ್ಜುನ ಅಮರಾಪುರ ದೇವರಾಜ್ ಬಪ್ಪೂರು, ಪ್ರಕಾಶ್, ಬಸವರಾಜ, ದೇವರಾಜ,ಪ್ರದೀಪ, ಪವನ್ ಇನ್ನಿತರರು ಭಾಗವಹಿಸಿದ್ದರು.

**ಪ್ರತ್ಯೇಕವಾಗಿ ಶುಲ್ಕ ನಿಗದಿ**

**ರಾಯಚೂರು ವಿಶ್ವವಿದ್ಯಾಲಯ 2024-25 ಶೈಕ್ಷಣಿಕ ವರ್ಷಕ್ಕಾಗಿ ಸ್ನಾತಕೋತ್ತರ ಪದವಿಗಳಿಗಾಗಿ ಪ್ರವೇಶಕ್ಕೆ ಪ್ರಕಟಣೆಯನ್ನು ಹೊರಡಿಸಿದೆ, ಇದರ ಪ್ರಕಾರ ಸಾಮಾನ್ಯ ವಿದ್ಯಾರ್ಥಿಗೆ ಪ್ರತಿ ವಿಭಾಗಕ್ಕೆ ಪ್ರವೇಶವನ್ನು ಸಲ್ಲಿಸಲು ₹ 800.00 ಹಾಗೂ ಎಸ್ಸಿ ಮತ್ತು ಎಸ್ ಟಿ ವರ್ಗದವರಿಗೆ ₹ 400.00 ಅನ್ನು ನಿಗದಿಪಡಿಸಿದೆ. ಒಂದು ವಿದ್ಯಾರ್ಥಿ ಹಲವು ವಿಭಾಗ ಗಳಿಗೆ ಅರ್ಜಿಯನ್ನು ಸಲ್ಲಿಸುವಾಗ ಪ್ರತಿ ಅರ್ಜಿಗೂ ಪ್ರತ್ಯೇಕವಾಗಿ ಶುಲ್ಕವನ್ನು ನಿಗದಿಪಡಿಸಲಾಗಿದೆ.**

# ಉಚಿತ ಆರೋಗ್ಯ ಶಿಬಿರ ಸದುಪಯೋಗ ಪಡಿಸಿಕೊಳ್ಳಿ

• ಉದಯವಾಹಿನಿ, ಮುದ್ದೇಬಿಹಾಳ

ಮುದ್ದೇಬಿಹಾಳ ತಾಲ್ಲೂಕ ಪ್ಯಾರಾ ಮಿಲಿಟರಿ ಮಾಜಿ ಕಲ್ಯಾಣ ಸಂಘ ಹಾಗೂ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಸ್ವಾಮಿಜೀ ಸೂಪರ್ ಸ್ಪೇಷಾಲಿಟಿ ಆಸ್ಪತ್ರೆ ಸಹಯೋಗದಲ್ಲಿ ಸೆ 29. ರವಿವಾರ ಉಚಿತ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಗಿದ್ದು ಇದರ ಸದುಪಯೋಗವನ್ನು ಮುದ್ದೇಬಿ ಹಾಳ ಪಟ್ಟಣ, ತಾಲ್ಲೂಕಿನ ಸಾರ್ವಜನಿಕರು ಪಡೆದುಕೊಳ್ಳಬೇಕೆಂದು ಸಂಘದ ಅಧ್ಯಕ್ಷ ಅಬ್ದುಲ್ ಜಬ್ಬಾರ ಪಲ್ಟನ್, ಕಾರ್ಯದರ್ಶಿ ಸೋಮಶೇಖರ ಚೀರಲದಿನ್ನಿ , ಸಾಹೇಬಗೌಡ ಗೋನಾಳ, ಬಿ.ಎಸ್ ಯಾಳವಾರ ಮಾತನಾಡಿ ನಮ್ಮ ಪ್ಯಾರಾ ಮಿಲಿಟರಿ ಕಲ್ಯಾಣ ಸಂಘದ 9ನೇ ವಾರ್ಷಿಕೋತ್ಸವದ ಅಂಗವಾಗಿ ಉಚಿತ ಆರೋಗ್ಯ ಶಿಬಿರ, ಹುತಾತ್ಮ ವೀರ ಯೋಧರ ಧರ್ಮಪತ್ನಿ ವೀರನಾರಿಯರಿಗೆ ಸನ್ಮಾನ ಕಾರ್ಯಕ್ರಮ ಹಮ್ಮಿ ಕೊಳ್ಳಲಾಗಿದೆ ಎಂದು ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

ರವಿವಾರ ವಿಬಿಸಿ ಹೈಸ್ಕೂಲ್‌ನಲ್ಲಿ ನಡೆಯುವ ಕಾರ್ಯಕ್ರಮ ಸಾನಿಧ್ಯವನ್ನು ಕುಂಟೋಜಿ ಹಿರೇಮಠದ ಶ್ರೀ ಗುರು ಚೆನ್ನವೀರ ಶಿವಾಚಾರ್ಯ ಮಹಾಸ್ವಾಮಿಗಳು ವಹಿಸಲಿದ್ದು ಅಧ್ಯಕ್ಷತೆ ಶಾಸಕ ಸಿ.ಎಸ್ ನಾಡಗೌಡ, ಉದ್ಘಾಟನೆ ಮಾಜಿ ಶಾಸಕ ಎ.ಎಸ್ ಪಾಟೀಲ್ ನಡಹಳ್ಳಿ ತಹಶಿಲ್ದಾರ ಬಲರಾಮ ಕಟ್ಟಿಮನಿ, ತಾಪಂ ಇಒ ನಿಂಗಪ್ಪ ಮಸಳಿ, ಪ್ಯಾರಾ ಮಿಲಿಟರಿ ಜಿಲ್ಲಾಧ್ಯಕ್ಷ ಮಲ್ಲಿಕಾರ್ಜುನ ಮಸಳಿ,ಮಾಜಿ ಜಿಪಂ ಉಪಾಧ್ಯಕ್ಷ ಪ್ರಭುಗೌಡ ದೇಸಾಯಿ, ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ, ನಿವೃತ್ತ ಡಿವೈಎಸ್ಪಿ ಎಸ್ ಎಸ್ ಹುಲ್ಲೂರ ಮುಖ್ಯಾಧಿಕಾರಿ ಮಲ್ಲನಗೌಡ ಬಿರಾದಾರ ಸೇರಿದಂತೆ ಅನೇಕ ಗಣ್ಯರು ಭಾಗವಹಿಸಲಿದ್ದಾರೆ.

**ಕಾರ್ಗಿಲ್ ಸ್ಮಾರಕ ಸಮಿತಿಯ ಸಂಸ್ಥಾಪಕ ಅಧ್ಯಕ್ಷ ಬಸಯ್ಯ ನಂದಿಕೇಶ್ವರಮಠ ನಮ್ಮ ಪ್ಯಾರ ಮಿಲಿಟರಿ ಯೋಧರು ತಾಲ್ಲೂಕಿನಲ್ಲಿ ಜೆಎಸ್‌ಎಸ್ ಆಸ್ಪತ್ರೆಯ ಹೃದಯರೋಗ, ಮಧುಮೇಹ ಬಿಪಿ, ಸ್ತ್ರೀರೋಗ,ಎದೆನೋವು ಮಂಡಿನೋವು,ಎಲಬು ಕೀಲು ಶಸ್ತ್ರಚಿಕಿತ್ಸೆ ವಿಭಾಗ ಮಕ್ಕಳ ತಜ್ಞರು ಭಾಗವಹಿಸಿಲಿದ್ದು ಇದರ ಸದುಪಯೋಗ ಜನತೆ ಪಡೆಯಬೇಕೆಂದು ಕರೆ ನೀಡಿದರು.**

# ಡೆಂಗ್ಯೂ ನಿಯಂತ್ರಣ ಆರೋಗ್ಯದೊಂದಿಗೆ ಸಮತೋಲನ ಅಗತ್ಯ

• ಉದಯವಾಹಿನಿ, ಸಿಂಧನೂರು

ಜಗತ್ತಿನಲ್ಲಿನ ಹವಾಮಾನ ವೈಪರಿತ್ಯ, ತಿಳಿದೊ ತಿಳಿಯದೆ ಬಳಸುತ್ತಿರುವ ಕ್ರಿಮಿನಾಶಕ ಬಳಸಿ ನಮ್ಮ ಆ ರೋಗ್ಯ ಮತ್ತು ಪರಿಸರದ ಆರೋಗ್ಯ ದ ಕಾಳಜಿ ಕಡಿಮೆಯಾಗುತ್ತಿರುವುದು ವಿಷಾದನೀಯ ಎಂದರು. ವಿಶ್ವ ಪರಿಸರ ಆರೋಗ್ಯ ದಿನಾಚರಣೆ ಮತ್ತು ಶುಕ್ರವಾರದ ಲಾರ್ವಾ ಸಮೀಕ್ಷಾ ಮೇಲ್ವಿಚಾರಣಾ ಕಾರ್ಯದಲ್ಲಿ ಭಾಗವಹಿಸಿ ಮಾತನಾಡಿದ ಅವರು ನಮ್ಮ ವಿನಾಶ,ಪ್ರಾಣಿ ಪಕ್ಷಿಗಳ ಅವನತಿಗೆ ನಮ್ಮಗಳ ದೈನಂದಿನ ಪರಿಸರ ನಾಶದಿಂದ ಶುರು ವಾಗಿದೆ ಇದರ ಅರಿವೆ ಇಲ್ಲದಂತೆ ಇರುವ ಮಾನವ ಕುಲ ಅನೇಕ ಸವಾಲುಗಳನ್ನು ಎದಿರಿಸುವ ಅನಿವಾರ್ಯತೆ ಹುಟ್ಟು ಹಾಕಿದ್ದಾನೆ.

ಜೀವ ಜಂತುಗಳು, ನಮ್ಮ ಪರಿಸರ ಯಾವಾಗಲು ನಮ್ಮ ಆಯುಷ್ಯ ದೊಂದಿಗೆ ಹೊಂದಿಕೊಂಡಿದ್ದು ಅದನ್ನು ನಿರ್ಲಕ್ಷಿಸಿ ಮುಂದುವರೆಯುವುದು ನಮ್ಮ ಕಾಲಿಗೆ ನಾವೆ ಕೊಡಲಿ ಪೆಟ್ಟು ಕೊಟ್ಟಂತೆ ಇದರಿಂದ ನಾನಾ ರೋಗ ರುಜಿನ ಬರುವುದಲ್ಲದೆ ಸ್ವಚ್ಛತೆ ಗಮನ ಹರಿಸದೆ ಸೊಳ್ಳೆಗಳು ಹುಟ್ಟಿ


ಉದಯವಾಹಿನಿ ಚಿತ್ರ

ಡೆಂಗ್ಯೂ ಜ್ವರದಂತಹ ಮಾರಣಾಂತಿಕ ಖಾಯಿಲೆ ಬರುತ್ತಿರುವುದು ತಮಗೆಲ್ಲ ತಿಳಿದ ವಿಚಾರವಾಗಿದೆ ಎಂದರು.

ಈ ಸಂದರ್ಭದಲ್ಲಿ.ಜಿಲ್ಲಾ ಹಿ ಆ.ಮಲೇರಿಯಾ ಮೇಲ್ವಿಚಾರಕರಾದ ತಾಯಪ್ಪ ಡಿ.ಎಮ್.ಓ ಕಛೇರಿ ರಾಯಚೂರ ತಾಲ್ಲೂಕಾ ಆರೋಗ್ಯ ಅಧಿಕಾರಿಗಳ ಕಛೇರಿಯ ಸಿಬ್ಬಂದಿಗಳಾದ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಜಿ.ರಂಗನಾಥ,ಸಂಗನಗೌಡ, ತಾಲ್ಲೂಕಾ ಮೇಲ್ವಿಚಾರಕ ಎಫ್.ಎ.ಹಣಗಿ ಹಾಗೂ ಸನ್ ರೈಸ್ ಪ್ಯಾರಾ ಮೆಡಿಕಲ್ ಕಾಲೇಜಿನ ಸಿಬ್ಬಂದಿಗಳಾದ ಡ.ಚಕ್ರವರ್ತಿ, ಅಶ್ಮುಪಾಷಾ,ನಗರ ಆ.ಕೇಂದ್ರದ ಮಲ್ಲಪ್ಪ ಮಲೇರಿಯಾ ಲಿಂಕ್ ವರ್ಕರ ಆಶಾ.ಕಾ.ಕರ್ತೆಯಾದ ಕಾಶಿಬಾಯಿ ವಿದ್ಯಾರ್ಥಿಗಳು ಹಾಜರಿದ್ದರು.

# ಹಿರಿಯ ನಾಗರಿಕರ ರಕ್ಷಣೆಗೆ ಕಾನೂನಿನ ಬಲವಿದೆ: ನ್ಯಾಯಾಧೀಶ

• ಉದಯವಾಹಿನಿ, ಚಿತ್ರದುರ್ಗ

ಹಿರಿಯ ನಾಗರಿಕರ ಪಾಲನೆ ಪೋಷಣೆ ಮತ್ತು ಸಂರಕ್ಷಣಾ ಕಾಯ್ದೆ -2007 ಜಾರಿ ಮಾಡುವ ಮೂಲಕ ಹಿರಿಯ ನಾಗರಿಕರ ರಕ್ಷಣೆಗೆ ಕಾನೂನಿನ ಬಲ ನೀಡಲಾಗಿದೆ ಎಂದು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶ ಎಂ.ವಿಜಯ್ ಹೇಳಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಮಹಿಳಾ, ಮಕ್ಕಳ ಕಲ್ಯಾಣ ಇಲಾಖೆ, ವಿಕಲಚೇತನರು, ಹಿರಿಯ ನಾಗರಿಕರು ಸಬಲೀಕರಣ ಇಲಾಖೆ, ಸ್ವಯಂ ಸೇವಾ ಸಂಸ್ಥೆಗಳ ಸಹಯೋಗದಲ್ಲಿ, ನಗರದ ಬಾಲಭವನದ ಸಭಾಂಗಣದಲ್ಲಿ, ಶುಕ್ರವಾರ ಹಿರಿಯ ನಾಗರಿಕರು ಹಾಗೂ ವಿಕಲಚೇತನರಿಗಾಗಿ ಏರ್ಪಡಿಸಲಾದ ಕಾನೂನು ನೆರವು ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ನಾಗರಿಕರ ರಕ್ಷಣೆಯ ಹೊಣೆ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಮೇಲಿದೆ. ಹಿರಿಯ ನಾಗರಿಕ ರಕ್ಷಣೆ ಕಾಯ್ದೆಯಡಿ ಉಪವಿಭಾಗಧಿಕಾರಿಗಳಿಗೆ ಹೆಚ್ಚಿನ ಅಧಿಕಾರ ನಿಡಲಾಗಿದೆ. ಆಸ್ತಿ ರಕ್ಷಣೆ ಜೊತೆಗೆ ಮಕ್ಕಳಿಂದ ಜೀವನಾಂಶ ಪಡಯಲು ಕಾಯ್ದೆಯಲ್ಲಿ ಹಿರಿಯ ನಾಗರಿಕರಿಗೆ ಅವಕಾಶ ನೀಡಲಾಗಿದೆ. ನ್ಯಾಯಧೀಶನಾಗಿ ಸೇವೆ ಆರಂಭಿಸಿದಾಗಿನಿಂದಲೂ ಇಲ್ಲಿಯವರೆಗೆ ನಾನು ಗಮನಿಸಿದ ಹಾಗೆ, ಯಾವುದೇ ತಂದೆ ತಾಯಿ ಆಸ್ತಿಗಾಗಿ ಮಕ್ಕಳ ಮೇಲೆ ಕೇಸು ದಾಖಲಿಸಿಲ್ಲ. ಆದರೆ ಮಕ್ಕಳೇ ತಂದೆ ತಾಯಿಯರ ಮೇಲೆ ಕೇಸು ದಾಖಲಿಸಿದ್ದಾರೆ. ಇದು ವಿಪರ್ಯಾಸದ ಸಂಗತಿಯಾಗಿದೆ ಎಂದು ಕಳವಳ ವ್ಯಕ್ತ ಪಡಿಸಿದರು.


ಉದಯವಾಹಿನಿ ಚಿತ್ರ

ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಜೆ.ಸೋಮಶೇಖರ್ ಮಾತನಾಡಿ, ಹಿರಿಯ ನಾಗರಿಕರ ಹಿತರಕ್ಷಣೆಗಾಗಿ ಸರ್ಕಾರ ಹಲವಾರು ಕಾರ್ಯಕ್ರಮಗಳನ್ನು ರೂಪಿಸಿದೆ. ಹಿರಿಯ ನಾಗರಿಕರಿಗೆ ಪ್ರೀತಿ, ವಿಶ್ವಾಸ, ಗೌರವದಿಂದ ನಡೆಸಿಕೊಳ್ಳುವ ಮನಸ್ಥಿತಿ ಪ್ರತಿಯೊಬ್ಬರಲ್ಲಿಯೂ ಇರಬೇಕು. ಸರ್ಕಾರಿ ಕಚೇರಿಗೆ ಆಗಮಿಸುವ ಹಿರಿಯ ನಾಗರಿಕರನ್ನು ಗೌರವದಿಂದ ನಡೆಸಿಕೊಳ್ಳಬೇಕು. ಹಿರಿಯ ನಾಗರಿಕರಿಗೆ ಸಮಸ್ಯೆಗೆ ತಕ್ಷಣ ಸ್ಪಂದಿಸುವ ಕೆಲಸ ಮಾಡಬೇಕು ಹಿರಿಯ ನಾಗರಿಕರು ಬಹಳ ಒತ್ತಡದ ಜೀವನ ನಡೆಸುತ್ತಿದ್ದಾರೆ, ಹಾಗಾಗಿ ಅವರನ್ನು ಅತ್ಯಂತ ಗೌರವದಿಂದ ನಡೆಸಿಕೊಳ್ಳಬೇಕು ಎಂದು ಹೇಳಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, ವೃದ್ಧಾಪ್ಯ ಎಂಬುವುದು ಮಾನವನ ಅವಿಭಾಜ್ಯ ಅಂಗವಾಗಿದೆ. 60 ವರ್ಷ ಮೇಲ್ಪಟ್ಟವರನ್ನು ನಾವು ಹಿರಿಯ ನಾಗರಿಕರು ಎಂದು ಕರೆಯುತ್ತೇವೆ. ಹಿರಿಯ ನಾಗರಿಕರು ಮಾನಸಿಕವಾಗಿ ಮೊದಲೇ ಸಿದ್ಧರಾಗಿದ್ದರೆ ವೃ ದ್ಧಾಪ್ಯ ಜೀವನ ಅಷ್ಟೊಂದು ಕಷ್ಟಕರವಾಗಿರುವುದಿಲ್ಲ. ವಯಸ್ಸಾದಂತೆ ಅನಾರೋಗ್ಯದ ಸಮಸ್ಯೆ ಜತೆಗೆ ದೈಹಿಕ, ಮಾನಸಿಕ ಅನಾರೋಗ್ಯ ಹೆಚ್ಚಾಗುತ್ತದೆ. ಇದರಿಂದ ಹಿರಿಯ ನಾಗರಿಕರು ಕುಗ್ಗುವುದು ಸಹಜ. ಇದನ್ನು ಧೈರ್ಯವಾಗಿ ಎದುರಿಸಲು ಮುಂ ಚಿತವಾಗಿ ಯೋಜನೆ ರೂಪಿಸಿದರೆ ಜೀವನವನ್ನು ಸುಖಮಯವಾಗಿ ನಡೆಸಲು ಅನುಕೂಲವಾಗಲಿದೆ ಎಂದು ಅಭಿಪ್ರಾಯವ್ಯಕ್ತಪಡಿಸಿದರು.

ಯಾವುದೇ ಕಾರಣಕ್ಕೂ ಹಿರಿಯ ನಾಗರಿಕರನ್ನು ತಾತ್ಸಾರ ಮನೋಭಾವದಿಂದ ಕಾಣಬಾರದು ಎಂದು ಸಲಹೆ ನೀಡಿದರು. ಹಿರಿಯ ನಾಗರಿಕರೊಂದಿಗೆ, ಪಾಲಕರೊಂದಿಗೆ ಮಕ್ಕಳ ಜೀವನ ನಡೆಸಬೇಕು. ಹಿರಿಯ ನಾಗರಿಕರು ಸಹ ಕುಟುಂಬ ನಿರ್ವಹಣೆಯಲ್ಲಿ ಅಗತ್ಯ ಸಹಕಾರ ನೀಡುತ್ತಾರೆ. ಮಕ್ಕಳ ಪಾಲನೆ-ಪೋಷಣೆಯಲ್ಲಿ ಹಿರಿಯ ನಾಗರಿಕರ ಪಾತ್ರ ಹಿರಿದು. ಹಿರಿಯ ನಾಗ ರಿಕರಿಗೆ ಘನತೆ ಜೀವನವನ್ನು ಮಾಡಲು ಕುಟುಂಬದ ಸದಸ್ಯರೆಲ್ಲರೂ ಅವಕಾಶ ಮಾಡಿ ಕೊಡಬೇಕು ಎಂದು ಹೇಳಿದರು.

ಕಾರ್ಯಾಗಾರದಲ್ಲಿ ಕಾನೂನು ನೆರವು ಅಭೀರಕ್ಷಕ ಎಂ.ಮೂರ್ತಿ ಹಾಗೂ ಪೋರ್ಥ ವೇವ್ ಪೌಂಡೇಶನ್ ರಿಯಾಜ್ ಅಹ್ಮದ್ ಹಿರಿಯ ನಾಗರಿಕರು ಹಾಗೂ ವಿಕಲಚೇತನರ ರಕ್ಷಣೆಯ ಕಾನೂನುಗಳ ಕುರಿತು ಉಪನ್ಯಾಸ ನೀಡಿದರು.

ಹಿರಿಯ ನಾಗರಿಕರ ಕಲ್ಯಾಣ ಸಂಘದ ಅಧ್ಯಕ್ಷ ರಂಗಪ್ಪ ರೆಡ್ಡಿ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ.ಸಿ, ವಕೀಲ ಬಸವರಾಜು, ಜಿಲ್ಲಾ ಅಂಗವಿಲರ ಕಲ್ಯಾಣಾಧಿಕಾರಿ ಸೊಮಶೇಖರ್ ಸೇರಿದಂತೆ ಮತ್ತಿರರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

> **ವಿಕಲಚೇತನರು ಸಹ ತಮ್ಮ ನ್ಯೂನತೆಗಳ ಬಗ್ಗೆ ಚಿಂತೆ ಮಾಡಬಾರದು. ಯಾರನ್ನು ದೂಷಣೆ ಮಾಡು ವುದರಿಂದ ಪ್ರಯೋಜನವಾಗುವುದಿಲ್ಲ. ವಿಕಲಚೇತನರು ತಮ್ಮ ಮಾನಸಿಕ ಸಾಮರ್ಥ್ಯ ಹೆಚ್ಚಿಸಿಕೊಳ್ಳಬೇಕು. ಬೇರೆ ಬೇರೆ ರಂಗಗಳಲ್ಲಿ ಸಾಧನೆ ಮಾಡಬೇಕು**
> -ಎಂ.ವಿಜಯ್, ನ್ಯಾಯಾಧೀಶ

> **ಮಕ್ಕಳಿಗಾಗಿ ನಾವು ಆಸ್ತಿ ಮಾಡುತ್ತೇವೆ. ಆದರೆ ವೃದ್ಧಾಪ್ಯದ ಅವಧಿಯಲ್ಲಿ ಮಕ್ಕಳಿಂದ ನಾವು ನ್ಯಾಯಾಲಯದ ಮೊರೆ ಹೋಗಿ ಜೀವನಾಂಶ ಪಡೆಯುವ ಬದಲಾದ ಕುಟುಂಬ ವ್ಯವಸ್ಥೆಯಲ್ಲಿ ಹಿರಿಯ ನಾಗರಿ ಕರಿಗೆ ತುಂಬಾ ಸಮಸ್ಯೆಯಾಗುತ್ತಿದೆ. ಹಿರಿಯ ನಾಗರಿಕರಿಗೆ ಸ್ವಾತಂತ್ರ್ಯ ನಿರ್ಧಾರ ಕೈಗೊಳ್ಳುವಿಕೆಗೆ ಒಪ್ಪಿಗೆ ನೀಡಬೇಕಾಗುತ್ತದೆ, ಸುರಕ್ಷಿತ ವಾತವರಣದ ಜತೆಗೆ ಕುಟುಂಬಕ್ಕೆ ಹಿರಿಯ ನಾಗರಿಕರ ಅನುಭವವನ್ನು ಸದುಪಯೋಗ ಪಡೆದುಕೊಳ್ಳಬೇಕು**
> -ಭಾರತಿ ಆರ್ ಬಣಕಾರ್
> ಉಪನಿರ್ದೇಶಕಿ

> **ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರ ಸುರಕ್ಷತೆಗಾಗಿ, ಪಾಲನೆ-ಪೋಷಣೆಗಾಗಿ ಹಿರಿಯ ನಾಗರಿಕರಿಗಾಗಿ ಪ್ರತ್ಯೇಕ ಇಲಾಖೆ ಹಾಗೂ ಕಾಯ್ದೆ ರೂಪಿಸಲಾಗಿದೆ. ಹಿರಿಯ ನಾಗರಿಕರು ಹಾಗೂ ವಿಶೇಷ ಚೇತನರ ಸಮಸ್ಯೆಗಳಿಗೆ ತ್ವರಿತವಾಗಿ ಪರಿಹಾರಕ್ಕೆ ಅಗತ್ಯ ಕ್ರಮವಹಿಸಲಾಗುವುದು**
> -ಎಸ್.ಜೆ.ಸೋಮಶೇಖರ್
> ಕಾರ್ಯನಿರ್ವಾಹಕ ಅಧಿಕಾರಿ

# ಭೂತಾನ್ ಅಡಿಕೆ ಆಮದು ಸ್ಥಗಿತಗೊಳಿಸಿ: ಶಾಸಕ

• ಉದಯವಾಹಿನಿ, ಶಿರಸಿ



ಭೂತಾನ್‌ನಿಂದ 17 ಸಾವಿರ ಟನ್ ಹಸಿ ಅಡಿಕೆ ಆಮದಿಗೆ ಕೇಂದ್ರ ಸರ್ಕಾರ ನೀಡಿದ ಅನುಮತಿಯನ್ನು ದೇಶೀಯ ಅಡಿಕೆ ಬೆಳೆಗಾರರ ಹಿತದೃಷ್ಟಿಯಿಂದ ಸ್ಥಗಿತ ಮಾಡಬೇಕು' ಎಂದು ಶಾಸಕ ಭೀಮಣ್ಣ ನಾಯ್ಕ ಆಗ್ರಹಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಶುಕ್ರವಾರ ಸುದ್ದಿಗೋಷ್ಠಿ ನಡೆಸಿ ಅವರು ಮಾತನಾಡಿದರು.

ಅಡಿಕೆ ಬೆಳೆಗಾರರ ಕಷ್ಟ ಸುಖ ನೋಡಬೇಕಿದ್ದ, ಸಂಸತ್ತಿನಲ್ಲಿ ಈ ಬಗ್ಗೆ ಧ್ವನಿ ಎತ್ತಬೇಕಾದ ಬಿಜೆಪಿ ಸಂಸದರು ಮಾಯವಾಗಿದ್ದಾರೆ. ದೇಶದಲ್ಲಿ ಸಾಕಷ್ಟು ಅಡಿಕೆ ಬೆಳೆಯಲಾಗುತ್ತಿದೆ. ಆದರೆ ಕೇಂದ್ರ ಸರ್ಕಾರವು ಭೂತನ್ ಅಡಿಕೆ ಆಮದಿಗೆ ಅನುಮತಿ ನೀಡಿದೆ. ಇದು ದೇಶೀಯ ಅಡಿಕೆ ದರ ಕುಸಿ ತಕ್ಕೆ ಕಾರಣವಾಗಿದೆ. ವಿದೇಶಿ ಅಡಿಕೆ ಆಮದು ಮಾಡುವ ವೇಳೆ ಮಲೆನಾಡಿನ ಅಡಿಕೆ ಬೆಳೆಯುವ ಕ್ಷೇತ್ರಗಳ ಸಂಸದರು ಏನು ಮಾಡುತ್ತಿದ್ದರು? ಯಾಕೆ ವಿರೋಧಿಸಿಲ್ಲ?' ಎಂದು ಪ್ರಶ್ನಿಸಿದ ಅವರು, 'ಅಡಿಕೆ ಬೆಳೆಯುವ ಕ್ಷೇತ್ರದ ಎಲ್ಲಾ ಸಂಸದರು ಈ ವಿಷಯ ಪ್ರಧಾನಿ ಗಮನಕ್ಕೆ ತಂದು ಸ್ಥಗಿತದ ನಿರ್ಣಯ ಕೈಗೊಳ್ಳದಿದ್ದರೆ ಬೆಳೆಗಾರರು ಹೋರಾಟದ ಹಾದಿ ತುಳಿಯಬೇಕಾಗುತ್ತದೆ' ಎಂದರು. ರಾಜ್ಯದಲ್ಲಿ ಅಡಿಕೆ ಬೆಳೆಯುವ ಹಾಗೂ ಅದನ್ನು ಅವಲಂಬಿಸಿರುವ ಕುಟುಂಬಗಳು ಸಾಕಷ್ಟಿವೆ. ಆದರೆ ಈ ಬಾರಿ ಅತಿವೃಷ್ಟಿಯಿಂದ ಕೊಳೆ ರೋಗ ಬಂದ ಪರಿಣಾಮ ಅಪಾರ ನಷ್ಟವಾಗಿದೆ. ಹೀಗಾಗಿ ಬೆಳೆಗಾರರು ಸಂಕಷ್ಟದಲ್ಲಿದ್ದಾರೆ.

ಈ ಹಿನ್ನೆಲೆಯಲ್ಲಿ ಉತ್ತರ ಕನ್ನಡ ಜಿಲ್ಲೆಯ ಅಡಿಕೆ ಪ್ರದೇಶದಲ್ಲಾದ ಹಾನಿಯ ಮಾಹಿತಿ ಪಡೆದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ವರದಿ ನೀಡಿದ್ದು, ಸೂಕ್ತ ಪರಿಹಾರ ನೀಡುವಂತೆ ವಿನಂತಿಸಿದ್ದೇನೆ' ಎಂದು ಹೇಳಿದರು.

ಹೊರ ದೇಶ, ರಾಜ್ಯದ ಅಡಿಕೆ ಮಲೆನಾಡ ಅಡಿಕೆ ಜತೆ ಕಲಬೆರಕೆ ಮಾಡಿ ಮಾರುಕಟ್ಟೆಗೆ ಬಿಟ್ಟರೆ ಅಂಥ ವರ್ತಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದರು.

# ಎಂಟು ಭಾಷೆಗಳಲ್ಲಿ ಹಲೋ ಗೋದ್ರೆಜ್ ಕೃಷಿ ಸಲಹಾ ಸಹಾಯವಾಣಿ ಲಭ್ಯ

• ಉದಯವಾಹಿನಿ, ಬಳ್ಳಾರಿ

ಗೋದ್ರೇಜ್ ಅಗ್ರೋವೆಟ್ ಲಿಮಿಟೆಡ್, ಇತ್ತೀಚೆಗೆ ಫೋನ್ ಕರೆಯ ಮೂಲಕ ಬೆಳೆ ಸಂರಕ್ಷಣೆಗಾಗಿ ನೈಜ-ಸಮಯದ ಪರಿಣಿತ ಪರಿಹಾರವನ್ನು ಒದಗಿಸಲು ಬಹುಭಾಷಾ ಕೃಷಿ ಸಲಹಾ ಸಹಾಯವಾಣಿ 'ಹಲೋ ಗೋದ್ರೇಜ್' ಅನ್ನು ಪ್ರಾರಂಭಿಸಿದೆ. ಇದನ್ನು ಹಿಂದಿ, ಮರಾಠಿ, ಕನ್ನಡ, ತೆಲುಗು, ತಮಿಳು, ಬೆಂಗಾಲಿ, ಪಂಜಾಬಿ ಮತ್ತು ಇಂಗ್ಲಿಷ್ ಹೀಗೆ ಎಂಟು ಪ್ರಾದೇಶಿಕ ಭಾಷೆಗಳಲ್ಲಿ ಲಭ್ಯವಿರುತ್ತದೆ ಇದರ ಅನುಕೂಲವನ್ನು ರೈತರು ಪಡೆದುಕೊಳ್ಳಬಹುದು ಎಂದು ಕಂಪನಿ ತಿಳಿಸಿದೆ.

ಈ ಹೊಸ ಉಪಕ್ರಮವು ಕಂಪನಿಯ ಕೃಷಿ ಉತ್ಪಾದಕತೆಯನ್ನು ಸುಧಾರಿಸುವ ಪ್ರಯತ್ನಕ್ಕೆ ಸಮೀಕರಿಸುತ್ತದೆ. ಇದರಿಂದ ಅಗತ್ಯವಿದ್ದಾಗ ರೈತರು ಯಾವುದೇ ಸ್ಥಳದಲ್ಲಿದ್ದರೂ ಕರೆಯ ಮೂಲಕ ಈ ಸಲಹಾ ಸಹಾಯವಾಣಿಯ ಉಪಯೋಗ ಪಡೆದು ಕೊಳ್ಳಬಹುದು. ಈ ಕುರಿತು ಮಾತನಾಡಿರುವ ಗೋದ್ರೆಜ್ ಅಗ್ರೋವೆಟ್ ಲಿಮಿಟೆಡ್‌ನ ವ್ಯವಸ್ಥಾಪಕ ನಿರ್ದೇಶಕ ಬಲರಾಮ್ ಸಿಂಗ್ ಯಾದವ್, ಕೃಷಿ ಕುಟುಂಬಗಳ ಏಳಿಗೆಗೆ ಗೋದ್ರೆಜ್ ಆಗ್ರೋವೆಟ್‌ನಲ್ಲಿ ನಾವು ಮಾಡುವ ಎಲ್ಲಾ ಕೆಲಸಗಳ ಕೇಂದ್ರಬಿಂದುವಾದೆ. ಉತ್ತಮ ಇಳುವರಿಗೆ ಸರಿಯಾದ ಸಮಯದಲ್ಲಿ ಸರಿಯಾದ ಪರಿಹಾರದ ಲಭ್ಯತೆ ಮತ್ತು ಅದರ ಬಳಕೆ ಅನಿವಾರ್ಯ. ಆದ್ದರಿಂದ, ಹಲೋ ಗೋದ್ರೆಜ್ ಉಪಕ್ರಮವು ನೈಜ-ಸಮಯದ ವೈಯಕ್ತಿಕಗೊಳಿಸಿದ ಪರಿಹಾರಗಳನ್ನು ನೀಡುವ ಮೂಲಕ ರೈತರು ಮತ್ತು ಕೃಷಿ ತಜ್ಞರ ನಡುವಿನ ಅಂತರವನ್ನು ಕಡಿಮೆ ಮಾಡಲು ನಮಗೆ ಸಹಾಯ ಮಾಡುತ್ತದೆ ಎಂದು ತಿಳಿಸಿದರು.

ಬದಲಾಗುತ್ತಿರುವ ಹವಾಮಾನ ಪರಿಸ್ಥಿತಿಗಳು ಮತ್ತು ಹೆಚ್ಚುತ್ತಿರುವ ಕೀಟಗಳ ದಾಳಿಯಿಂದ ರೈತರಲ್ಲಿ ಕಳವಳವನ್ನು ಹೆಚ್ಚಿಸಿದೆ. ನಿರಂತರವಾಗಿ ವಿಕಸನಗೊಳ್ಳುತ್ತಿರುವ ಇಂತಹ ಕೃಷಿ ಪರಿಸ್ಥಿತಿಗಳ ನಡುವೆ, ರೈತರಿಗೆ ಇತ್ತೀಚಿನ ಬೆಳೆ ಸಂರಕ್ಷಣಾ ಪರಿಹಾರಗಳು ಮತ್ತು ವೈಯಕ್ತಿಕ ಮಾರ್ಗದರ್ಶನವನ್ನು ಅವರು ಬಯಸಿದ ಭಾಷೆಯಲ್ಲೇ ಪಡೆಯಲು ಅನುವು ಮಾಡಿಕೊಡುವುದು ಇಂದು ತುರ್ತು ಅಗತ್ಯವಾಗಿದೆ. ಹಲೋ ಗೋದ್ರೆಜ್ ಮೂಲಕ, ಭಾರತದಾದ್ಯಂತದ ರೈತರು ಈಗ ನಮ್ಮ ಕೃಷಿ ತಜ್ಞರ ತಂಡದಿಂದ ನೇರ ಸಂವಹನದ ಮೂಲಕ ನೈಜ ಸಮಯದ ಸಲಹೆಯನ್ನು ಪಡೆಯಬಹುದಾಗಿದೆ ಎಂದು ಅವರು ತಿಳಿಸಿದರು.

ಸುಸ್ಥಿರ, ಲಾಭದಾಯಕ ಕೃಷಿಯತ್ತ ಪ್ರಯಾಣದಲ್ಲಿ ಭಾರತೀಯ ರೈತರಿಗೆ ಅತ್ಯಂತ ವಿಶ್ವಾಸಾರ್ಹ ಪಾಲು ದಾರನಾಗುವ ಕಂಪನಿಯ ಆಶಯವನ್ನು ಹಲೋ ಗೋದ್ರೆಜ್ ಸಾಕಾರಗೊಳಿಸುತ್ತದೆ. ಇದು ವಿಶ್ವಾಸಾರ್ಹ ಕೃಷಿ ಮಾಹಿತಿಯ ಮೂಲವಾಗಿದೆ, ಇದರಿಂದಾಗಿ ಕೃಷಿ ಕ್ಷೇತ್ರದಲ್ಲಿ ಸಂಸ್ಥೆಯ ನಾಯಕತ್ವ ಮತ್ತಷ್ಟು ಬಲಿಷ್ಠವಾಗಲಿದೆ, ಎಂದು ಗೋದ್ರೆಜ್ ಅಗ್ರೋವೆಟ್ ಲಿಮಿಟೆಡ್‌ನ ಬೆಳೆ ಸಂರಕ್ಷಣಾ ವ್ಯವಹಾರದ ಸಿಇಒ ರಾಜವೇಲು ಎನ್.ಕೆ. ಅವರು ಹೇಳಿದರು.

> **ಅಗತ್ಯವಿರುವ ರೈತರು ಈ ಸಹಾಯವಾಣಿ ಸಂಖ್ಯೆಯಾದ : 022 2519 4491ಗೆ ಕರೆ ಮಾಡಿ ಪರಿಹಾರವನ್ನು ರೈತರು ಕಂಡುಕೊಳ್ಳಬಹುದು**
> - ರಾಜವೇಲು ಎನ್.ಕೆ., ಸಿಇಒ

# ಭವ್ಯ ಇತಿಹಾಸ-ಪರಂಪರೆ- ಹಲವು ಐತಿಹಾಸಿಕ ಸ್ಮಾರಕಗಳ ನಾಡು ಯಾದಗಿರಿ

## ಅತ್ಯಾಕರ್ಷಕ ಕಲೆ, ಶಿರವಾಳ ಸ್ಮಾರಕಗಳು, ಬೋನಾಳ ಪಕ್ಷಿಧಾಮ, ವಿವಿಧ ದೇವಸ್ಥಾನ, ಕೋಟೆಗಳಿಂದ ಐತಿಹಾಸಿಕ ಮಹತ್ವ

• ಉದಯವಾಹಿನಿ, ಯಾದಗಿರಿ

ಭವ್ಯ ಇತಿಹಾಸ, ಪರಂಪರೆಯನ್ನು ಹೊಂದಿರುವಂತಹ ಯಾದಗಿರಿ ಜಿಲ್ಲೆ, ಸಂತ,ಶರಣರ ನಾಡಾಗಿ, ಸ್ವಾತಂತ್ರ್ಯ ಸಂಗ್ರಾಮದಲ್ಲಿಯೂ ಭಾರತ ದೇಶದ ಗಮನ ಸೆಳೆದಿತ್ತು ಎಂದು ಹಿರಿಯ ಇತಿಹಾಸ ಸಂಶೋಧಕರು ಹಾಗೂ ನ್ಯಾಯವಾದಿ ಭಾಸ್ಕರಾವ್ ಮುಡಬೂಳ ಅವರು ಅಭಿಪ್ರಾಯಪಟ್ಟರು.

ನಗರದ ಲುಂಬಿನಿ ಉದ್ಯಾನವನ ಎದುರಿನ ಸಭಾಂಗಣದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪ್ರವಾಸೋದ್ಯಮ ಸಮಿತಿ, ಕಲಾ ನಿಕೇತನ ಟ್ರಸ್ಟ್, ಸಗರ ಇವರ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಪ್ರವಾಸೋದ್ಯಮ ದಿನಾಚರಣೆ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಅವರು ಮಾತನಾಡಿದರು. ಈ ಭಾಗದಲ್ಲಿ ಹಲವು ಸಂತ ಶರಣರು ಆಗಿಹೋಗಿದ್ದು, ಹನ್ನೊಂದು ಮತ್ತು ಹನ್ನೆರಡನೆಯ ಶತಮಾನದಲ್ಲಿ ಸತ್ಯ ಕ್ರಾಂತಿ ಮಾಡಿದ್ದಾರೆ. ಅಂತಹವರ ಕುರಿತು ಸಂಶೋ ಧನೆ ನಡೆಯುವ ಅವಶ್ಯ ಕತೆ ಇದೆ.


ಉದಯವಾಹಿನಿ ಚಿತ್ರ

**ವಿಶ್ವ ಪ್ರವಾಸೋದ್ಯಮ ದಿನಾಚರಣೆ**

ಅದರಂತೆ ಗತ ವೈಭವ ಸಾರುವ ಹಲವು ಸ್ಮಾರಕಗಳು ಇಲ್ಲಿ ಇದ್ದು, ಪ್ರವಾಸೋದ್ಯಮ ಬೆಳವಣಿಗೆಗೆ ವಿಪುಲ ಅವಕಾಶವಿದೆ. ಕರ್ನಾಟಕದಲ್ಲಿಯೇ ಉತ್ತುಂಗದ ಪ್ರವಾಸಿ ಕೇಂದ್ರವಾಗಿ ಅಭಿವೃದ್ಧಿಪ ಡಿಸಲು ಅವಕಾಶವಿದೆ ಎಂದು ಹೇಳಿದರು.

ಭಾರತದ ಸ್ವಾತಂತ್ರ್ಯ ಸಂಗ್ರಾಮ 1857ರಲ್ಲಿ ಸುರಪುರ ಸಂಸ್ಥಾನಿಕರು ಬ್ರಿಟಿಷ್ ರ ವಿರುದ್ಧ ಹೋರಾಡಿದ್ದಾರೆ. ಮೊಘಲ್ ದೊರೆ ಔರಂಗಜೇಬ ಕಾಲದಿಂದಲೂ ಸುರಪುರ ಐತಿಹಾಸಿಕ ಮಹತ್ವವನ್ನು ಪಡೆದಿದೆ. ಇಲ್ಲಿಯ ಅತ್ಯಾಕರ್ಷಕ ಕಲೆ, ಟೈಲರ್ ಮಂಜಿಲ್, ಶಿರವಾಳ ಸ್ಮಾರಕಗಳು, ಬೋನಾಳ ಪಕ್ಷಿ ಧಾಮ, ವಿವಿಧ ದೇವಸ್ಥಾನ, ಕೋಟೆಗಳಿಂದ ಈ ಭಾಗ ಐತಿಹಾಸಿಕ ಮಹತ್ವ ಪಡೆದಿದ್ದು, ಕೈಬೀಸಿ ಕರೆ ಯುತ್ತಿವೆ, ಭವ್ಯ ಇತಿಹಾಸ ಸಾರಿಹೇಳುತ್ತಿವೆ. ವ್ಯಕ್ತಿ ತ್ವ ಬೆಳವಣಿಗೆಗೆ ಇತಿಹಾಸ, ಐತಿಹಾಸಿಕ ತಾಣಗಳ ಅಧ್ಯಯನ ಅತ್ಯವಶ್ಯಕವಾಗಿದ್ದು,ಈ ದಿಸೆಯಲ್ಲಿ ಈ ಭಾಗದ ನಾಗರಿಕರು ವಿಶೇಷ ಗಮನ ನೀಡಬೇಕೆಂದು ಹೇಳಿದರು. ರಾಷ್ಟ್ರೀಯ ಐತಿಹಾಸಿಕ ಸ್ಮಾರಕಗಳ ರಕ್ಷಣೆಯಾಗಬೇಕು. ಪ್ರವಾಸೋದ್ಯಮ ದ ಅಭಿವೃದ್ಧಿ ಯಾಗಬೇಕು. ಸತ್ಯ ಶೋಧನೆ ನಡೆಯಬೇಕು.

ಕಾರ್ಯಕ್ರಮ ಉದ್ಘಾಟಿಸಿದ ಚುನಾವಣೆ ತಹಶೀಲ್ದಾರ ಸಂತೋಷ ರಾಣಿ ಅವರು ಜಿಲ್ಲೆಯ ಪ್ರವಾಸಿ ತಾಣಗಳನ್ನು ವೀಕ್ಷಿಸುವ ಜೊತೆಗೆ ಸಾಮಾಜಿಕ ಜಾಲ ತಾಣಗಳ ಮೂಲಕ ಅರಿವು ಮೂಡಿಸಲು ಕರೆ ನೀಡಿದರು. ಪ್ರವಾಸೋದ್ಯಮ ಹಾಗೂ ಶಾಂತಿ, ಈ ದಿನಾಚರಣೆಯ ಸಂದೇಶವಾಗಿತ್ತು.ಲುಂಬಿನಿ ವನದಲ್ಲಿ ಪ್ರವಾಸಿ ಮಾಹಿತಿ ಕೇಂದ್ರ, ಉದ್ಘಾಟಿಸಲಾಯಿತು.

ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡ ಲಾಯಿತು. ಪ್ರಬಂಧ ಸ್ಪರ್ಧೆಯಲ್ಲಿ ವಿಜೇತ ವಿದ್ಯಾ ರ್ಥಿ ಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇ ಶಕ ರಾಮಚಂದ್ರ ಕಟ್ಟಿಮನಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಮಾಜ ಸೇವಕಿ ರುದ್ರಾಂಬಿಕಾ ಪಾಟೀಲ್,ಪ್ರವಾಸೋದ್ಯಮ ಇಲಾಖೆ ಸಿಬ್ಬಂದಿ ಪರಮೇಶ್ವರ ಉಪಸ್ಥಿತರಿದ್ದರು. ಬಸವರಾಜ ಸಿನ್ನೂರ್ ಕಾರ್ಯಕ್ರಮ ನಿರ್ವಹಿಸಿದರು.ಮಲ್ಲಿಕಾರ್ಜುನ ಶಹಾಪುರ, ಸಂಗಡಿಗರು ಪ್ರಾರ್ಥಿಸಿದರು.

> **ಜಾತಿ, ಮತ, ಪಂಥ ಬದಿಗೊತ್ತಿ ಶಾಂತಿ, ಸೌಹಾರ್ದತೆ ನೆಲೆಯೂರಬೇಕು. ಪ್ರಾಕೃತಿಕ ಸಂಪನ್ಮೂಲಗಳ ರಕ್ಷಣೆಗೆ ಹೆಚ್ಚಿನ ಗಮನ ನೀಡಬೇಕಾಗಿದೆ. ಶಾಂತಿ, ಸಾಮರಸ್ಯಕ್ಕೆ, ಜ್ವಲಂತ ಸಮಸ್ಯೆಗಳ ಬಗ್ಗೆ ಒತ್ತು ನೀಡುವುದು ಇಂದಿನ ಅವಶ್ಯಕತೆಯಾಗಿದೆ**
> - ಭಾಸ್ಕರಾವ್ ಮುಡಬೂಳ, ನ್ಯಾಯವಾದಿ

# ಮಿನಿ ನ್ಯೂಸ್

## ನಗರಸಭೆ ಅಧ್ಯಕ್ಷರು ಉಪಾಧ್ಯಕ್ಷರಿಗೆ ನಾಗರಿಕರಿಂದ ಅಭಿನಂದನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ಅರಸೀಕೆರೆ

ನಗರದ ಎಂಟನೇ ವಾರ್ಡ್ ಸುಬ್ರಮಣ್ಯನಗರ ಬಡಾವಣೆಗೆ ಅಧ್ಯಕ್ಷರಾದ ಎಂ ಸಮಿವುಲ್ಲಾ ಉಪಾಧ್ಯಕ್ಷರಾದ ಮನೋಹರ್ ಭೇಟಿ ನೀಡಿ ಸಾರ್ವಜನಿಕರ ಕುಂದು ಕೊರತೆಯನ್ನು ಆಲಿಸಿದರು. ಅರಸೀಕೆರೆಯ ಇತಿಹಾಸ ಪ್ರಸಿದ್ಧ ಸುಬ್ರಹ್ಮಣ್ಯೇಶ್ವರ ಬೆಟ್ಟದ ಮೇಲಿಂದ ರೈಲ್ವೆ ಕಾಂಪೌಂಡ್ ವರೆಗೂ ನೀರು ಹರಿದು ಬರುತ್ತಿದ್ದು ಮಳೆಗಾಲದಲ್ಲಿ ಸಾರ್ವಜನಿಕರಿಗೆ ತುಂಬಾ ತೊಂದರೆ ಉಂಟಾಗುತ್ತಿದೆ ಈ ಪ್ರದೇಶ ದಲ್ಲಿ ದೊಡ್ಡ ಚರಂಡಿ ಒಂದನ್ನು ನಿರ್ಮಾಣ ಮಾಡಬೇಕಾಗಿದೆ ಇದಕ್ಕಾಗಿ ಸ್ಥಳದ ಅಭಾವವಿದ್ದು ಈ ಸಮಸ್ಯೆಯನ್ನು ಬಗೆಹರಿಸಿ ಕೊಡಬೇಕಾಗಿ ಸಾ ರ್ವಜನಿಕರು ಅಧ್ಯಕ್ಷರು, ಉಪಾಧ್ಯಕ್ಷರ ಗಮನಕ್ಕೆ ತಂದರು.

ಈ ಸಮಸ್ಯೆಯನ್ನು ಕೂಡಲೇ ಬಗೆಹರಿಸಿಕೊಡುವುದಾಗಿ ನಗರ ಸಭಾ ಅಧ್ಯಕ್ಷರಾದ ಎಮ್ ಶಮಿವುಲ್ಲಾ ಭರವಸೆ ನೀಡಿದರು. ಸೂಕ್ತ ಕ್ರಮಕ್ಕಾಗಿ ನಗರಸಭೆ ಅಧಿಕಾರಿಗಳು, ತಾಲ್ಲೂಕು ಸರ್ವೇಯರ್ ರವರಿಗೆ ಕೂಡಲೇ ಸಮಸ್ಯೆ ಬಗೆಹರಿಸಿಕೊಡುವಂತೆ ತಿಳಿಸಲಾಯಿತು ವಾರ್ಡ್ ನ ಸಾರ್ವಜನಿಕರ ಪರವಾಗಿ ನಗರಸಭಾ ಸದಸ್ಯರಾದ ಮೇಲಗಿರಿ ಗೌಡ ನೂತನ ಅಧ್ಯಕ್ಷ ಉಪಾಧ್ಯಕ್ಷರಿಗೆ ಸನ್ಮಾನಿಸಿದರು.

## ಕರವೇ ಸ್ವಾಭಿಮಾನಿ ಸೇನೆಗೆ ಲಿಂಬಾಜಿ ಚವ್ಹಾಣ ನೇಮಕ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಂಚೋಳಿ

ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತಾಲ್ಲೂಕಾಧ್ಯಕ್ಷರಾಗಿ ಲಿಂಬಾಜಿ ಚವ್ಹಾಣ ಅವರಿಗೆ, ಉಪಾಧ್ಯಕ್ಷರಾಗಿ ಶಂಕರ ಪವ್ಹಾರಗೆ ನೇಮಕ ಮಾಡಲಾಗಿದೆ ಎಂದು ಕರವೇ ಸ್ವಾಭಿಮಾನಿ ಸೇನೆಯ ಜಿಲ್ಲಾಧ್ಯಕ್ಷ ಪುನೀತರಾಜ ಸಿ.ಕವಡೆ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ಹೊರಡಿಸಿದ ಅವರು,ತಮಗೆ ನೇಮಕ ಮಾಡಿದ ಹುದ್ದೆಗೆ ಕನ್ನಡ ನಾಡಿನ ನೆಲ,ಜನ,ಭಾಷೆ ಕರ್ನಾಟಕ ಸಮಗ್ರ ಉಳಿವಿಗಾಗಿ ನಿಷ್ಠೆಯಿಂದ ಕೆಲಸ ನಿರ್ವಹಿಸಬೇಕು.

ರಾಜ್ಯಧ್ಯಕ್ಷ ನಿಂಗರಾಜಗೌಡ್ರು ನಾಯಕತ್ವದ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆಯ ತತ್ವಸಿದ್ಧಾಂತಗಳನ್ನು ಒಪ್ಪಿಕೊಂಡು ಸಂಘಟನೆಯಲ್ಲಿ ಸಕ್ರಿಯವಾಗಿ ದುಡಿಯುತ್ತೀರೆಂದು ನಿಮ್ಮ ಸೇವೆ ಪರಿಗಣಿಸಿ ಅಧ್ಯಕ್ಷ, ಉಪಾಧ್ಯಕ್ಷ ಸ್ಥಾನಕ್ಕೆ ನೇಮಕ ಮಾಡಲಾಗಿದೆ,ಈ ಗುರುತುವಾದ ಜವಾಬ್ದಾರಿಯನ್ನು ನಾಡು ನುಡಿ ಬಗ್ಗೆ ಕಾಳಜಿ ವಹಿಸಿ ಅತ್ಯಂತ ನಿಷ್ಠೆ ಪ್ರಾಮಾಣಿಕತೆಯಿಂದ ಸಮಗ್ರ ಕರ್ನಾಟಕ ಅಭಿ ವೃದ್ಧಿಗಾಗಿ ಹೋರಾಟದ ಮೂಲಕ ಕೆಲಸ ಮಾಡಬೇಕು ಎಂದರು.

## ಬ್ಯಾಂಕ್ ನೋಟಿಸ್‌ಗೆ ಹೆದರಿ ಪೆಟ್ರೋಲ್ ಸುರಿದುಕೊಂಡು ರೈತ ಆತ್ಮಹತ್ಯೆ

• ಉದಯವಾಹಿನಿ, ಕಲಬುರಗಿ

ತೊಗರಿ ಬೆಳೆಯಲು ಬ್ಯಾಂಕ್ ಹಾಗೂ ಖಾಸಗಿಯಾಗಿ ಲಕ್ಷಾಂತರ ರೂ. ಸಾಲ ಮಾಡಿದ್ದ ರೈತನೊಬ್ಬ, ಬೆಳೆ ಕೈಕೊಟ್ಟಿದ್ದರಿಂದ ಬ್ಯಾಂಕ್ ನವರು ನೋಟಿಸ್ ನೀಡಿದ್ದಕ್ಕೆ ಹೆದರಿಕೊಂಡು ಪೆಟ್ರೋಲ್ ಸುರಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕಲಬುರ್ಗಿ ಜಿಲ್ಲೆಯ ಚಿಂಚೋಳಿ ತಾಲ್ಲೂಕಿನ ಪೊತಂಗಲ ಗ್ರಾಮದಲ್ಲಿ ನಡೆದಿದೆ.

ಪಾಂಡಪ್ಪ ತಿಪ್ಪಣ್ಣ ಕೊರುವನ್ (45) ಆತ್ಮಹತ್ಯೆ ಮಾಡಿಕೊಂಡ ರೈತ ಎಂದು ಹೇಳಲಾಗಿತ್ತಿದ್ದು, ತೊಗರಿ ಬೆಳೆಯಲು ಬ್ಯಾಂಕ್, ಖಾಸಗಿಯಾಗಿ ಲಕ್ಷಾಂತರ ರೂ. ಸಾಲ ಮಾಡಿದ್ದ. ಆದರೆ, ದುರಾದೃಷ್ಟವಶಾತ್ ನಿರಂತರವಾಗಿ ಸುರಿದ ಮಳೆಗೆ ಜಮೀನಿನಲ್ಲಿ ಬೆಳೆದಿದ್ದ ತೊಗರಿ ನಾಶವಾಗಿತ್ತು. ಇತ್ತ ಬ್ಯಾಂಕ್ ಅಧಿಕಾರಿಗಳ ಸಾಲದ ಕಿರುಕುಳಕ್ಕೆ ಹೆದರಿ ತಿಪ್ಪಣ್ಣ ಮೈಮೇಲೆ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆಗೆ ಶರಣಾಗಿದ್ದಾನೆ. ಈ ಕುರಿತು ಸುಲೇಪೆಟ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ.

## ಬೇಡಿಕೆಗಳ ಈಡೇರಿಕೆಗೆ ಗ್ರಾಮ ಆಡಳಿತ ಅಧಿಕಾರಿಗಳ ಸಂಘ ಪ್ರತಿಭಟನೆ

• ಉದಯವಾಹಿನಿ, ಸೊರಬ

ಕರ್ನಾಟಕ ರಾಜ್ಯ ಗ್ರಾಮ ಆಡಳಿತ ಅಧಿಕಾರಿಗಳ ಸಂಘ ತಾಲ್ಲೂಕು ಶಾಖೆ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ತಾಲ್ಲೂಕು ಕಚೇರಿ ಮುಂಭಾಗ ಕಪ್ಪು ಪಟ್ಟಿ ಧರಿಸಿ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮಂಜುಳಾ ಹೆಗಡಾಳ್ ಅವರಿಗೆ ಮನವಿ ಸಲ್ಲಿಸಲಾಯಿತು.

ಅಂತರ್ ಜಿಲ್ಲಾ ವರ್ಗಾವಣೆಗೆ ಅವಕಾಶ ನೀಡಬೇಕು ಎಂದು ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ತಾಲ್ಲೂಕು ಘಟಕದ ಅಧ್ಯಕ್ಷ ಯಶವಂತ್ ತಿಳಿಸಿದರು. ಅಂಗವಿಕಲರು, ಅನಾರೋಗ್ಯ ಸಮಸ್ಯೆ ಇರುವವರಿಗೆ ನಿಯೋಜನೆಗಳನ್ನು ಕೌನ್ಸಿಲಿಂಗ್ ಮೂಲಕ ನೀಡಬೇಕು, ಪದೋನ್ನತಿ, ಆಪತ್ತಿನ ಭತ್ಯೆ ನೀಡಬೇಕು. ಪ್ರಯಾಣ ಭತ್ಯೆಯನ್ನು 500 ರಿಂದ 3,000ಕ್ಕೆ ಹೆಚ್ಚಿಸಬೇಕು. ಬೇಡಿಕೆ ಈಡೇರದಿದ್ದರೆ ಜಿಲ್ಲಾ, ರಾಜ್ಯ ಮಟ್ಟದಲ್ಲಿ ಬೃಹತ್ ಪ್ರತಿಭಟನೆ ನಡೆಸಲಾಗುವುದು. ಹೋರಾಟಕ್ಕೆ ಕಂದಾಯ ನೌಕರರು, ಸರ್ಕಾರಿ ನೌಕರರ ಸಂಘ ಮತ್ತು ಗ್ರಾಮ ಸಹಾಯಕರ ಸಂಘಗಳು ಬೆಂಬಲ ಸೂಚಿಸಿವೆ ಎಂದರು.

## ಬೈಕ್ ಅಪಘಾತ ಸವಾರ ಸಾವು

• ಉದಯವಾಹಿನಿ, ಮಂಗಳೂರು

ಕುಲಶೇಖರದ ಸೇಕ್ರೆಡ್ ಹಾರ್ಟ್ ಶಾಲೆಯ ಬಳಿ ಶುಕ್ರವಾರ ಬೆಳಗ್ಗೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಬೈಕ್ ಸವಾರನೋರ್ವ ಮೃತಪಟ್ಟಿರುವ ಘಟನೆ ನಡೆದಿದೆ.ಚಂದನ್ (20) ಮೃತಪಟ್ಟ ಬೈಕ್ ಸವಾರ. ಕುಲಶೇಖರದ ಸೇಕ್ರೆಡ್ ಹಾರ್ಟ್ ಶಾಲೆಯ ಬಳಿ ಎರಡು ಬೈಕ್ ಗಳ ನಡುವೆ ಅಪಘಾತ ಸಂಭವಿಸಿದೆ ಈ ವೇಳೆ ಚಂದನ್ ರಸ್ತೆಗೆ ಬಿದ್ದಿದ್ದಾನೆ ಇದೆ ಸಮಯದಲ್ಲಿ ಬಸ್ ಆತನ ಮೇಲೆ ಹರಿದು ಸ್ಥಳದಲ್ಲೇ ಮೃತಪಟ್ಟಿದ್ದಾನೆ ಎನ್ನಲಾಗಿದೆ. ಘಟನೆ ಸಂಬಂಧ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 09:00 ರಿಂದ 10:30 |
| ಗುಳಿಕ ಕಾಲ | ಬೆಳಿಗ್ಗೆ | 06:00 ರಿಂದ 07:30 |
| ಯಮಗಂಡ ಕಾಲ | ಮಧ್ಯಾಹ್ನ | 01:30 ರಿಂದ 03:00 |

**ಮೇಷ** ನಿಮ್ಮ ಭಯವನ್ನು ಗುಣಪಡಿಸಲು ಇದು ಒಳ್ಳೆಯ ಸಮಯ. ಇದು ಭೌತಿಕ ಚೈತನ್ಯವನ್ನು ಕಡಿಮೆ ಮಾಡುವುದಲ್ಲದೇ ಜೀವಿತಾವಧಿಯನ್ನೂ ಕಡಿಮೆ ಮಾಡುತ್ತದೆ ಎಂದು ನೀವು ಅರ್ಥ ಮಾಡಿಕೊಳ್ಳಬೇಕು.

**ವೃಷಭ** ಜನರನ್ನು ನಿಮ್ಮಿಷ್ಟದಂತೆ ನಡೆದುಕೊಳ್ಳುವಂತೆ ಒತ್ತಾಯಿಸಬೇಡಿ. ಇತರರ ಬಯಕೆ ಮತ್ತು ಆಸಕ್ತಿಯ ಬಗ್ಗೆ ಯೋಚಿಸಿದಲ್ಲಿ ನಿಮಗೆ ಅನಿಯಮಿತ ಸಂತೋಷ ಬರುತ್ತದೆ.

**ಮಿಥುನ** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಬಾಕಿಯಿರುವ ವಿಷಯಗಳು ರಹಸ್ಯಮಯವಾಗುತ್ತವೆ ಮತ್ತು ವೆಚ್ಚಗಳು ನಿಮ್ಮ ಮನಸ್ಸನ್ನು ಆವರಿಸಿಕೊಳ್ಳುತ್ತವೆ.

**ಕರ್ಕಾಟಕ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ದಿ ಜೀವನದ ಹೆಬ್ಬಾಗಿಲಾಗಿದೆ.

**ಸಿಂಹ** ಆರೋಗ್ಯ ವಿಷಯಗಳಲ್ಲಿ ನಿಮ್ಮ ಬಗ್ಗೆ ನೀವೇ ನಿರ್ಲಕ್ಷ್ಯ ಮಾಡದಂತೆ ಎಚ್ಚರಿಕೆ ವಹಿಸಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ.

**ಕನ್ಯಾ** ಸಾಕಷ್ಟು ವಿಶ್ರಾಂತಿ ತೆಗೆದುಕೊಳ್ಳುತ್ತಿರದಿದ್ದಲ್ಲಿ ನಿಮಗೆ ತುಂಬಾ ದಣಿವಾದಂತೆನಿಸುತ್ತದೆ. ಸಣ್ಣ ಉದ್ಯೋಗವನ್ನು ಮಾಡುವ ತಮ್ಮ ಆಪ್ತರಿಂದ ಯಾವುದೇ ಸಲಹೆಯನ್ನು ಪಡೆಯಬಹುದು.

**ತುಲಾ** ನಿಮ್ಮ ಸಾಮಾನ್ಯ ಜ್ಞಾನದ ಜೊತೆಗೆ ನಿಮ್ಮ ನಿರಂತರ ಪ್ರಯತ್ನ ಖಂಡಿತವಾಗಿಯೂ ಯಶಸ್ಸು ತರುವುದರಿಂದ ತಾಳ್ಮೆಯಿಂದಿರಿ. ನಿಮ್ಮ ಹಣ ಖರ್ಚಾಗುತ್ತಿದೆ ಎಂಬುದರ ಮೇಲೆ ನಿಗಾ ಇರಿಸುವ ಅಗತ್ಯವಿದೆ.

**ವೃಶ್ಚಿಕ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ದಿ ಜೀವನದ ಹೆಬ್ಬಾಗಿಲಾಗಿದೆ.

**ಧನಸ್ಸು** ಕೆಲವರಿಗೆ ಕುಟುಂಬದಲ್ಲಿ ಒಂದು ಹೊಸ ಆಗಮನ ಸಂಭ್ರಮಾಚರಣೆ ಮತ್ತು ಆನಂದದ ಕ್ಷಣಗಳನ್ನು ತೆರೆದಿಡುತ್ತದೆ. ಇಂದು ನೀವು ನೀವು ಸುತ್ತಲೂ ನಿಮ್ಮ ಪ್ರಿಯತಮೆಯ ಪ್ರೀತಿಯನ್ನು ಅನುಭವಿಸುತ್ತೀರಿ.

**ಮಕರ** ನಿಮ್ಮ ಚೈತನ್ಯವನ್ನು ಪುನಃ ಸಂಪಾದಿಸಲು ವಿಶ್ರಾಂತಿ ತೆಗೆದುಕೊಳ್ಳಿ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ.

**ಕುಂಭ** ಕೆಲವು ಹಿನ್ನಡೆ ಎದುರಿಸುವ ಸಾಧ್ಯತೆಯಿದೆ. ಧೃತಿಗೆಡಬೇಡಿ ಹಾಗೂ ನಿರೀಕ್ಷಿತ ಫಲಿತಾಂಶ ಪಡೆಯಲು ಕಠಿಣ ಪರಿಶ್ರಮಪಡಿ. ಈ ಹಿನ್ನಡೆಗಳು ನಿಮ್ಮ ಯಶಸ್ಸಿನ ಸೋಪಾನಗಳಾಗಿರಲಿ.

**ಮೀನ** ಮದುವೆಯಾಗುವವರು ತಮ್ಮ ಪ್ರೇಮಿ ಸಂತೋಷದ ಮೂಲವೆಂದು ಕಂಡುಕೊಳ್ಳುತ್ತಾರೆ. ಸಮಯಕ್ಕಿಂತ ಹೆಚ್ಚು ಏನು ಇಲ್ಲ. ಆದ್ದರಿಂದ ನೀವು ಸಮಯವನ್ನು ಚೆನ್ನಾಗಿ ಬಳಸುತ್ತೀರಿ.

# ರೈಲ್ವೇ ಕಾಮಗಾರಿಗಳನ್ನು ತ್ವರಿತಗೊಳಿಸಲು ಸಚಿವ ವಿ.ಸೋಮಣ್ಣ ಸೂಚನೆ

## • ರೈಲ್ವೇ ಕ್ಷೇತ್ರದ ಪ್ರಗತಿ ಜನಸಾಮಾನ್ಯರ ಬೇಡಿಕೆ ಎಂದು ಪರಿಗಣಿಸದೆ ಅವಶ್ಯಕತೆ ಎಂದೇ ಭಾವಿಸಲಾಗಿದೆ

• **ಉದಯವಾಹಿನಿ ಶಿವಮೊಗ್ಗ**

ಪ್ರಧಾನಮಂತ್ರಿ ನರೇಂದ್ರಮೋದಿಯವರ ನೇತೃತ್ವದ ಕೇಂದ್ರ ಸರ್ಕಾರವು ಕಳೆದ ಒಂದು ದಶಕದ ಅವಧಿಯಲ್ಲಿ ರಾಜ್ಯ ರೈಲ್ವೇ ಕ್ಷೇತ್ರದಲ್ಲಿ ಅನೇಕ ಮಹತ್ವ ನಿರ್ಣಯಗಳನ್ನು ಕೈಗೊಂಡು ಜನಸ್ನೇಹಿಯಾಗಿ ಕಾರ್ಯನಿರ್ವಹಿಸಿರುವುದು ಎಲ್ಲರಲ್ಲೂ ಸಂತಸ ಮೂಡಿಸಿದೆ ಎಂದು ರೈಲ್ವೇ ಹಾಗೂ ಜಲಶಕ್ತಿ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಅವರು ಹೇಳಿದರು.

**ಪ್ರಗತಿ ಪರಿಶೀಲನಾ ಸಭೆ**

ಅವರು ಶಿಕಾರಿಪುರದಲ್ಲಿ ಶಿವಮೊಗ್ಗ – ಶಿಕಾರಿಪುರ–ರಾಣೇಬೆನ್ನೂರು ರೈಲ್ವೇ ಅಭಿವೃದ್ಧಿ ಕಾಮಗಾರಿಗಳು, ಶಿವಮೊಗ್ಗ ಸಮೀಪದ ಕೋಟೆಗಂಗೂರು ಕೋಚಿಂಗ್ ಡಿಪೋ ಕಾಮಗಾರಿಗಳನ್ನು ಪರಿಶೀಲಿಸಿದ ನಂತರ ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡುತ್ತಿದ್ದರು. ಮಹಾನಗರಗಳಿಂದ ಗ್ರಾಮೀಣ ಪ್ರದೇಶಗಳವರೆಗೆ ಸಂಪರ್ಕ ಕಲ್ಪಿಸುವ ನಿಟ್ಟಿನಲ್ಲಿ ರೈಲ್ವೇ ಇಲಾಖೆಯು ಸೈನಿಕರಂತೆ ಹಗಲಿರುಳು ಕಾರ್ಯನಿರ್ವಹಿಸುತ್ತಿದೆ. ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರವೂ ಸಹ ನುಡಿದಂತೆ ಮುನ್ನಡೆಯುತ್ತಿದೆ ಎಂದ ಅವರು, ರೈಲ್ವೇ ಕ್ಷೇತ್ರ ಅಸಾಧಾರಣ ಪ್ರಗತಿ ಹಾಗೂ ಕ್ರಾಂತಿಕಾರಿ ಬದಲಾವಣೆಗೆ ಹೊಸಭಾಷ್ಯ ಬರೆದಿದೆ ಎಂದರು.

ರೈಲ್ವೇ ಕ್ಷೇತ್ರದ ಪ್ರಗತಿ ಜನಸಾಮಾನ್ಯರ ಬೇಡಿಕೆ ಎಂದು ಪರಿಗಣಿಸದೇ ಅವಶ್ಯಕತೆ ಎಂದೇ ಭಾವಿಸಲಾಗಿದೆ. ರಾಣೆಬೆನ್ನೂರು–ಶಿಕಾರಿಪುರ ಹೊಸ ರೈಲ್ವೇ ಮಾರ್ಗದ ಪ್ರಗತಿಯು ಆಶಾದಾಯಕವಾಗಿಲ್ಲ. ಮುಂದಿನ ಎಂಟು ದಿನಗಳೊಳಗಾಗಿ ಕೈಗೊಂಡ ಕ್ರಮಗಳ ಬಗ್ಗೆ ಸಂಬಂಧಿತ ಇಲಾಖಾಧಿಕಾರಿಗಳು ಸಮಗ್ರ ವರದಿ ನೀಡುವಂತೆ ಸೂಚಿಸಿದ ಅವರು, ಈ ಭಾಗದಲ್ಲಿ ಭೂಸ್ವಾದೀನ ಪ್ರಕ್ರಿಯೆ ನಡೆಸುವ ಅಧಿಕಾರಿಗಳು ರೈತರಿಗೆ ಪರಿಹಾರಧನ ಒದಗಿಸುವ ಸಂದರ್ಭದಲ್ಲಿ ಮಾನವೀಯ ನೆಲೆಯಲ್ಲಿ ವ್ಯವಹರಿಸಿ, ಒಂದು ತಿಂಗಳೊಳಗಾಗಿ ಪರಿಹಾರಧನ ವಿತರಿಸುವಂತೆ ಸೂಚಿಸಿದರು.

ಮೋದಿಯವರ ನೇತೃತ್ವದ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಹಲವು ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಅನೇಕ ಯೋಜನೆಗಳಿಗೆ ಚಾಲನೆ ನೀಡಲಾಗಿದೆ. ಶಿಕಾರಿಪುರ–ರಾಣೆಬೆನ್ನೂರು ಮಾರ್ಗದ ಭೂಸ್ವಾದೀನ ಪ್ರಕ್ರಿಯೆ ಸಮಾಧಾನಕರವಾಗಿದ್ದರೂ ರಾಣೆಬೆನ್ನೂರು–ಶಿಕಾರಿಪುರ ಮಾರ್ಗದಲ್ಲಿ ಭೂಸ್ವಾದೀನ ಪ್ರಕ್ರಿಯೆ ನಿರೀಕ್ಷೆಯಂತೆ ಪೂರ್ಣಗೊಂಡಿಲ್ಲ. ಇನ್ನೂ 642 ಎಕರೆ ಭೂಪ್ರದೇಶ ಮಾಲೀಕರಿಂದ ರೈಲ್ವೇ ಇಲಾಖೆಗೆ ಹಸ್ತಾಂತರಿಸುವ ಪ್ರಕ್ರಿಯೆ ತುರ್ತಾಗಿ ಆಗಬೇಕಾಗಿದೆ. ಡಿಸೆಂಬರ್ ಮಾಸಾಂತ್ಯದೊಳಗಾಗಿ ಭೂಸ್ವಾದೀನ ಪ್ರಕ್ರಿಯೆಯನ್ನು ಪೂರ್ಣಗೊಳಿಸುವಂತೆ ಸೂಚಿಸಿದ ಅವರು, ಹಾವೇರಿ ಮತ್ತು ಶಿವಮೊಗ್ಗ ಜಿಲ್ಲೆಯ ಜಿಲ್ಲಾಧಿಕಾರಿಗಳು ಸಂಯುಕ್ತವಾಗಿ ಈ ಕಾರ್ಯದಲ್ಲಿ ಸಮನ್ವಯತೆ ಸಾಧಿಸಿ, ಉದ್ದೇಶಿತ ಯೋಜನೆಯು ಕಾಲಮಿತಿಯಲ್ಲಿ ಪೂರ್ಣಗೊಳಿಸುವಲ್ಲಿ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಯಶವಂತಪುರ–ಶಿವಮೊಗ್ಗ ನಡುವೆ ವಾರಕ್ಕೆ ಮೂರು ಬಾರಿ ಸಂಚರಿಸುತ್ತಿರುವ ರೈಲನ್ನು ವಾರದ ಏಳು ದಿನಗಳ ಚಲಿಸುವಂತೆ ಹಾಗೂ ವಂದೇಭಾರತ್ ರೈಲು ಮಾರ್ಗವನ್ನು ಬೆಂಗಳೂರಿನಿಂದ ತಾಳಗುಪ್ಪವರೆಗೆ ವಿಸ್ತರಿಸಲು ವಿಶೇಷ ಗಮನಹರಿಸಲಾಗುವುದು. ಕೋಟೆಗಂಗೂರು ಕೋಚಿಂಗ್ ಡಿಪೋ ಕಾಮಗಾರಿ ಪೂರ್ಣಗೊಳ್ಳುತ್ತಿದ್ದಂತೆಯೇ ಈ ವಿಷಯದ ಬಗ್ಗೆ ಗಮನಹರಿಸಲಾಗುವುದು ಎಂದ ಅವರು, ಹಲವು ದಶಕಗಳ ಅನೇಕ ಸಮಸ್ಯೆಗಳನ್ನು ಇತ್ಯರ್ಥಪಡಿಸುವಲ್ಲಿ ರೈಲ್ವೇ ಇಲಾಖೆ ವಿಶೇಷ ಗಮನಹರಿಸಿದೆ. ಇದರೊಂದಿಗೆ ಸಿರ್ಸಿ– ತಾಳಗುಪ್ಪ–ಹುಬ್ಬಳ್ಳಿಗೆ ಸಂಪರ್ಕ ಕಲ್ಪಿಸುವ 158ಕಿ.ಮೀ ದೂರದ ರೈಲ್ವೇ ಕಾಮಗಾರಿ ಪೂರ್ವ ಸರ್ವೇ ನಡೆಸಲು ಆದೇಶ ಹೊರಡಿಸಲಾಗಿದೆ. ಅಂಕೋಲ–ತಾಳಗುಪ್ಪ ಮಾರ್ಗದ ಬಗ್ಗೆಯೂ ಗಮನಹರಿಸಲಾಗುವುದು ಎಂದರು.


ಉದಯವಾಹಿನಿ ಚಿತ್ರ

> ಉಷಾ ನರ್ಸಿಂಗ್ ಬಳಿಯ ವರ್ತುಲ ನವೀಕರಣಕ್ಕೆ ರೈಲ್ವೇ ಇಲಾಖೆಯಿಂದ ಮಹಾನಗರಪಾಲಿಕೆಗೆ ಈಗಾಗಲೇ 2ಕೋಟಿ ರೂ. ಗಳನ್ನು ಬಿಡುಗಡೆಗೊಳಿಸಿ ಆದೇಶ ಹೊರಡಿಸಿದೆ. ಅಗತ್ಯವಿರುವ ಇನ್ನೂ 2.50ಕೋಟಿ ರೂ. ಗಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ. ಹಣ ಬಿಡುಗಡೆಯಾಗುವ ನಿರೀಕ್ಷೆಯಿಂದ ಶೀಘ್ರದಲ್ಲಿ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ
> –ಶ್ರೀಮತಿ ಕವಿತಾ ಯೋಗಪ್ಪನವರ್, ಮಹಾನಗರಪಾಲಿಕೆ ಆಯುಕ್ತ

> ಮಲೆನಾಡಿನಿಂದ ಬಯಲುಸೀಮೆಗೆ ಸಂಪರ್ಕ ಕಲ್ಪಿಸುವ ಶಿವಮೊಗ್ಗ–ಶಿಕಾರಿಪುರ –ರಾಣೆಬೆನ್ನೂರು ರೈಲ್ವೆ ನಿರ್ಮಾಣದಲ್ಲಿ ಶಿಕಾರಿಪುರ–ಶಿವಮೊಗ್ಗ ಮಾರ್ಗದ ಭೂಸ್ವಾದೀನ ಕಾರ್ಯ ತಕ್ಕಮಟ್ಟಿನ ಯಶಸ್ಸು ಕಂಡಿದೆ. ರಾಣೆಬೆನ್ನೂರು–ಶಿಕಾರಿಪುರ ನಡುವಿನ ಭೂಸ್ವಾದೀನ ಕಾರ್ಯ ನಿರೀಕ್ಷಿತ ಪ್ರಗತಿ ಸಾಧ್ಯವಾಗಿಲ್ಲ. ಸಂಬಂಧಿಸಿದ ಇಲಾಖಾಧಿಕಾರಿಗಳು ಈ ಬಗ್ಗೆ ವಿಶೇಷ ಗಮನಹರಿಸಿ, ಪ್ರಕ್ರಿಯೆಯನ್ನು ತ್ವರಿತಗೊಳಿಸಬೇಕು. ಹಾರನಹಳ್ಳಿ ರೈಲ್ವೇ ನಿಲ್ದಾಣದ ಪ್ಲಾಟಫಾರಂನ್ನು ಅಭಿವೃದ್ಧಿಪಡಿಸಲು ಇಲಾಖೆಯು ಈಗಾಗಲೇ 2ಕೋಟಿ ರೂ.ಗಳನ್ನು ಮಂಜೂರು ಮಾಡಿದೆ
> –ಬಿ.ವೈ.ರಾಘವೇಂದ್ರ, ಸಂಸದ

## ಆನ್‌ಲೈನ್‌ನಲ್ಲಿ ಹಣ ಹೂಡಿಕೆ ಮಾಡುವ ಮುನ್ನ ಎಚ್ಚರ
## 91 ಲಕ್ಷ ರೂ. ಕಳೆದುಕೊಂಡ ಶಿಕ್ಷಕ

• **ಉದಯವಾಹಿನಿ ದಾವಣಗೆರೆ**

ಹೆಚ್ಚು ಹಣಗಳಿಸುವ ಆಸೆಗೆ ಆನ್ ಲೈನ್‌ನಲ್ಲಿ ಹಣ ಹೂಡಿಕೆ ಮಾಡಿದ್ದ ಶಿಕ್ಷಕ ಬರೋಬ್ಬರಿ 91.90 ಲಕ್ಷ ರೂಪಾಯಿ ಕಳೆದುಕೊಂಡಿರುವ ಘಟನೆ ದಾವಣಗೆರೆಯಲ್ಲಿ ನಡೆದಿದೆ. ವಾಟ್ಸಪ್‌ಗೆ ಬಂದಿದ್ದ ಎನ್ ಜಿಸಿ (ನ್ಯೂ ಮೌಂಟ್ ಗೋಲ್ಡ್ ಕ್ಯಾಪಿಟಲ್) ವೆಬ್ ಸೈಟ್ ಲಿಂಕ್ ಕ್ಲಿಕ್ ಮಾಡಿದಾಗ ಶಿಕ್ಷಕನಿಗೆ ಐದು ಅಮೆರಿಕಾ ಟ್ರೇಡಿಂಗ್ ಮತ್ತು ಮೈನಿಂಗ್ ಕಂಪನಿ ಎಂಬ ಹೆಸರಲ್ಲಿ ವಂಚನೆ ಮಾಡಲಾಗಿದೆ.

ಈ ಕಂಪನಿಯಲ್ಲಿ ಹಣ ಹೂಡಿಕೆ ಮಾಡಿದರೆ ಹೆಚ್ಚಿನ ಹಣ ಗಳಿಸಬಹುದು ಎಂದು ನಂಬಿಸಲಾಗಿದೆ.

ವಂಚಕರು ಶಿಕ್ಷಕನಿಂದ ಮಾಹಿತಿ ಪಡೆದು, ಆನ್ ಲೈನ್‌ನಲ್ಲಿಯೇ ಅಕೌಂಟ್ ಓಪನ್ ಮಾಡಿ ಹಣ ಹಾಕಿಸಿಕೊಂಡಿದ್ದಾರೆ. ಶಿಕ್ಷಕ ಹಣ ಹಾಕಿದ ಬಳಿಕ 27.40 ಲಕ್ಷ ಹಣ ಬಿಡಿಸಿಕೊಳ್ಳಲು ಹೋದಾಗ ಅಕೌಂಟ್ ಲಾಕ್ ಆಗಿದ್ದು, 27.40 ಲಕ್ಷ ರೂ ಎಕ್ಸ್ ಚೇಂಜ್ ಫ್ರೀ ಹೇಳಿದ್ದರಿಂದ ಹಣ ತುಂಬುವಂತೆ ಹೇಳಿ ಶಿಕ್ಷಕನ ಖಾತೆಯಿಂದ ಹಣ ವರ್ಗಾವಣೆ ಮಾಡಿಕೊಂಡಿದ್ದಾರೆ. ಬಳಿಕ ನಿಮ್ಮ ಅಕೌಂಟ್‌ನಲ್ಲಿ 2ಕೋಟಿ ಹಣವಿದೆ. ವಿತ್ ಡ್ರಾ ಮಾಡಬೇಕೆಂದರೆ 47.29 ಲಕ್ಷ ಹಣ ಪಾವತಿ ಮಾಡಬೇಕು ಎಂದು ಮತ್ತೆ ಸಂದೇಶ ಕಳುಹಿಸಿದ್ದಾರೆ. 2 ಕೋಟಿ ಹಣದ ಆಸೆಗೆ ಶಿಕ್ಷಕ ಮತ್ತೆ ಹಣ ತುಂಬಿದ್ದಾರೆ. ಆದರೆ ಹಣ ಬಾರದೇ ಇದ್ದಾಗ ಇದೊಂದು ವಂಚನೆ ಜಾಲ ಎಂಬುದು ಗೊತ್ತಾಗಿದೆ.

ತಕ್ಷಣ ಶಿಕ್ಷಕ ಸಿಇಎನ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಆರೋಪಿಗಳ ಪತ್ತೆಗೆ ಬಲೆ ಬೀಸಿದ್ದಾರೆ.


ಉದಯವಾಹಿನಿ ಚಿತ್ರ

## ಕಳ್ಳರಿಂದ ತಪ್ಪಿಸಿಕೊಳ್ಳಲು ಹೋಗಿ ದುರಂತ ಅಂತ್ಯ ಕಂಡ ಮಹಿಳೆ

• **ಉದಯವಾಹಿನಿ ಬೆಳಗಾವಿ**

ಕಳ್ಳರಿಂದ ತಪ್ಪಿಸಿಕೊಳ್ಳಲು ಹೋಗಿ ಮಹಿಳೆ ದಾರುಣವಾಗಿ ಸಾವನ್ನಪ್ಪಿರುವ ಘಟನೆ ಕರ್ನಾಟಕದಲ್ಲಿ ನಡೆದಿದೆ. ಮನೆಗೆ ಕಳ್ಳರು ಬಂದರು ಅವರಿಂದ ತಪ್ಪಿಸಿಕೊಳ್ಳಬೇಕು ಎನ್ನುವ ಆತಂಕದಲ್ಲಿದ್ದ ಮಹಿಳೆ, ಓಡುವ ವೇಗದಲ್ಲಿ ತಮ್ಮ ಜೀವವನ್ನೇ ಕಳೆದುಕೊಂಡಿದ್ದಾರೆ. ಬೆಳಗಾವಿಯ ಶಿಂದೋಳ್ಳಿ ಗ್ರಾಮದಲ್ಲಿ ಈ ದುರ್ಘಟನೆ ಸಂಭವಿಸಿದೆ.

ಪೊಲೀಸರು ಈ ಘಟನೆ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದು, ವಿಚಾರಣೆ ನಡೆಸುತ್ತಿದ್ದಾರೆ.

**ಘಟನೆಯ ಹಿನ್ನೆಲೆ ಏನು:** ಮನೆಗೆ ಬಂದ ಕಳ್ಳನಿಂದ ತಪ್ಪಿಸಿಕೊಳ್ಳುವ ಸಂದರ್ಭದಲ್ಲಿ ಈ ದುರಂತ ಸಂಭವಿಸಿದೆ. ಇಲ್ಲಿನ ಬೆಳಗಾವಿ ತಾಲ್ಲೂಕಿನ ಶಿಂದೋಳ್ಳಿ ಗ್ರಾಮದಲ್ಲಿ ದುರ್ಘಟನೆ ನಡೆದಿದೆ. ಮನೆಯಲ್ಲಿ ಕಳ್ಳತನ ಮಾಡಲು ಕಳ್ಳರು ಬಂದಿದ್ದು, ಅವರಿಂದ ತಪ್ಪಿಸಿಕೊಳ್ಳಲು ಹೋಗಿ ಕೊಳ್ಳ (ಆಳವಾದ ನೀರಿನ ಪ್ರದೇಶ)ದಲ್ಲಿ ಬಿದ್ದು ಮಹಿಳೆ ಸಾವನ್ನಪಿದ್ದಾರೆ. ಮೃತಪಟ್ಟವರನ್ನು ಭರಮಕ್ಕಾ ಪೂಜಾರಿ ಎಂದು ಗುರುತಿಸಲಾಗಿದೆ. ಭರಮಕ್ಕಾ ಅವರ ಮನೆಗೆ ಗುರುವಾರ ತಡರಾತ್ರಿ ಕಳ್ಳರು ನುಗ್ಗಿದ್ದಾರೆ. ಈ ವೇಳೆ ಕಳ್ಳರಿಂದ ತಪ್ಪಿಸಿಕೊಳ್ಳಲು ಭರಮಕ್ಕಾ ಓಡಿದ್ದಾರೆ. ಆದರೆ, ಈ ರೀತಿ ಓಡುವಾಗ ಕೊಳ್ಳದಲ್ಲಿ ಜಾರಿ ಬಿದಿದ್ದಾರೆ. ಈಜಿ ಹೊರಗೆ ಬರಲಾಗದೆ ಸಾವನ್ನಪ್ಪಿದ್ದಾರೆ.

ತಡರಾತ್ರಿ ಮನೆಗೆ ಕಳ್ಳರು ನುಗ್ಗಿರುವುದು ತಿಳಿಯುತ್ತಿದ್ದಂತೆಯೇ ಮನೆಯ ಹಿತ್ತಲು (ಹಿಂಬಾಗಿಲು) ಬಾಗಿಲಿನಿಂದ ಹೊರಕ್ಕೆ ಬಂದಿದ್ದರು. ಆದರೆ, ಕಳ್ಳರಿಂದ ತಪ್ಪಿಸಿಕೊಳ್ಳುವ ಆತಂಕದಲ್ಲಿ ಕೊಳ್ಳದಲ್ಲಿ ಜಾರಿ ಬಿದಿದ್ದಾರೆ. ತಡರಾತ್ರಿ ಹಿನ್ನೆಲೆಯಲ್ಲಿ ಯಾರು ಸಹಾಯಕ್ಕೆ ಬಂದಿಲ್ಲ.


ಉದಯವಾಹಿನಿ ಚಿತ್ರ

**ಪ್ರಕರಣ ದಾಖಲು**

ವಿಷಯ ತಿಳಿಯುತ್ತಿದ್ದಂತೆ ನೂರಾರು ಜನ ಈ ಸ್ಥಳದಲ್ಲಿ ಸೇರಿದ್ದು ಕಂಡುಬಂತು. ಮೃತದೇಹವನ್ನು ಪೊಲೀಸರು ಹಾಗೂ ಸ್ಥಳೀಯರು ಸೇರಿ ಹೊರಕ್ಕೆ ತೆಗೆದಿದ್ದಾರೆ. ಮರಣೋತ್ತರ ಪರೀಕ್ಷೆಗಾಗಿ ಶವವನ್ನು ಇಲ್ಲಿನ ಬಿಮ್ಸ್ ಆಸ್ಪತ್ರೆಗೆ ಕಳುಹಿಸಲಾಗಿದೆ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ಈ ಸಂಬಂಧ ಮಾರಿಹಾಳ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕು: ಬಿ.ಶ್ರೀರಾಮುಲು

• **ಉದಯವಾಹಿನಿ ಬಳ್ಳಾರಿ**

ಸಿಎಂ ಸಿದ್ದರಾಮಯ್ಯ ಶಾಸಕರಾಗಿದ್ದಾಗ ವಿರೋಧ ಪಕ್ಷದ ನಾಯಕ ಮತ್ತು ಮುಖ್ಯಮಂತ್ರಿಯಾಗಿ ಕೆಲಸ ನಿರ್ವಹಣೆ ಮಾಡಿದ್ದಾರೆ. ಭ್ರಷ್ಟಾಚಾರ ನಡೆದಾಗ ಕ್ಷಮಿಸುವ ಪ್ರಶ್ನೆಯೇ ಇಲ್ಲ. ಕ್ರಮ ತೆಗೆದುಕೊಳ್ಳಬೇಕು ಎಂದು ಅವರೇ ಹೇಳುತ್ತಾರೆ. ಇದೀಗ ಅವರ ಮೇಲೆ ಭ್ರಷ್ಟಾಚಾರದ ಆರೋಪ ಬಂದಿದೆ. ಹೀಗಾಗಿ ರಾಜೀನಾಮೆ ನೀಡಬೇಕು ಎಂದು ಮಾಜಿ ಸಚಿವ ಬಿ.ಶ್ರೀರಾಮುಲು ಹೇಳಿದರು.

ಬಳ್ಳಾರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪ್ರಾಸಿಕ್ಯೂಷನ್ ಅನುಮತಿ ನೀಡಿದ ಹಿನ್ನೆಲೆಯಲ್ಲಿ ಕೋರ್ಟ್‌ನಲ್ಲಿಯೂ ಸಿದ್ದರಾಮಯ್ಯ ಹಿನ್ನಡೆಯಾಗಿದೆ. ಇದನ್ನರಿತು ರಾಜೀನಾಮೆ ನೀಡಬೇಕು. ಹಿಂದೆ ಯಡಿಯೂರಪ್ಪ ರಾಜೀನಾಮೆ ನೀಡಿದ್ದರು. ಉನ್ನತ ಹುದ್ದೆಯಲ್ಲಿದ್ದವರು ರಾಜೀನಾಮೆ ನೀಡಬೇಕು ಎಂದರು.

ಸಿಎಂ ಹುದ್ದೆಯಲ್ಲಿದ್ದಾಗ ಲೋಕಯುಕ್ತ ಅಧಿಕಾರಿಗಳು ತನಿಖೆ ಮಾಡುವುದು ಕಷ್ಟ. ಅಭಿವೃದ್ಧಿ ಬಗ್ಗೆ ಕನಿಷ್ಠ ಚಿಂತನೆ ಇಲ್ಲದೆ ತಪ್ಪುಗಳನ್ನು ಸಮರ್ಥನೆ ಕೆಲಸವಾಗುತ್ತಿದೆ. ಕಲಬುರಗಿ ಕ್ಯಾಬಿನೆಟ್ ನಡೆಸಿದ್ದು ಖುಷಿಯಾಯ್ತು. ಆದರೆ ಲಾಭ ಏನಾಯಿತು ಎನ್ನುವುದು ಮುಖ್ಯ. ಯಾವುದೇ ಅಭಿವೃದ್ಧಿ ಕೆಲಸ ಕಲ್ಯಾಣ ಕರ್ನಾಟಕ ಭಾಗದಲ್ಲಿ ಆಗುತ್ತಿಲ್ಲ ಎಂದು ಶ್ರೀರಾಮುಲು ಹೇಳಿದರು.

ಅಭಿವೃದ್ಧಿ, ನೇಮಕಾತಿ ವಿಳಂಬದ ವಿಚಾರವಾಗಿ ಮಾತನಾಡಿದ ಅವರು, ಮಲ್ಲಿಕಾರ್ಜುನ ಖರ್ಗೆ ಬಳಿ ಹೋಗಿ ಎಂದು ಹೋರಾಟಗಾರರಿಗೆ ಹೇಳಿದ್ದೇನೆ. ಕುರ್ಚಿ ಉಳಿಸಿಕೊಳ್ಳಲು ಹೋರಾಟ ಮಾಡುತ್ತಿದ್ದಾರೆ ಹೊರತು ಅಭಿವೃದ್ಧಿ ಮಾಡುತ್ತಿಲ್ಲ ಎಂದರು.



ಉದಯವಾಹಿನಿ ಚಿತ್ರ

> ಬಳ್ಳಾರಿ ಲೋಕಸಭೆ ಸದಸ್ಯ ತುಕಾರಾಂ ವಿರುದ್ಧ ವಾಗ್ದಾಳಿ ನಡೆಸಿದ ಅವರು, ವಾಲ್ಮೀಕಿ ಹಣ ದುರ್ಬಳಕೆ ಮಾಡಿಕೊಂಡ ವಿಚಾರ ನಾನು ಹೇಳುತ್ತಿರುವುದಲ್ಲ. ಇಡಿ ಅವರು ಹೇಳಿದ್ದಾರೆ. ಇದೇ ವಿಚಾರಕ್ಕೆ ರಾಜೀನಾಮೆ ನೀಡಿ ಎಂದಿದ್ದೇನೆ. ಸಮುದಾಯದ ಹಣ ಬಳಕೆ ಮಾಡಿಕೊಂಡ ಸಂಸದರಾಗಿದ್ದೀರಾ, ವಾಲ್ಮೀಕಿ ಹಗರಣದ ಬಗ್ಗೆ ಯಾಕೆ ಮಾತನಾಡುತ್ತಿಲ್ಲ –ಬಿ.ಶ್ರೀರಾಮುಲು

## ವಿಧಾನ ಪರಿಷತ್‌ಗೆ ಅಂತಿಮಗೊಳ್ಳದ ಅಭ್ಯರ್ಥಿಗಳು

• **ಉದಯವಾಹಿನಿ ಮಂಗಳೂರು**

ವಿಧಾನ ಪರಿಷತ್‌ಗೆ ದ.ಕ. ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ನಡೆಯುವ ಉಪಚುನಾವಣೆ ಪ್ರಕ್ರಿಯೆಗೆ ಚಾಲನೆ ದೊರೆತಿದ್ದರೂ ಇದುವರೆಗೆ ಕಾಂಗ್ರೆಸ್ ಮತ್ತು ಬಿಜೆಪಿ ತಮ್ಮ ಅಭ್ಯರ್ಥಿಯನ್ನು ಪ್ರಕಟಿಸಿಲ್ಲ. ನಾಮಪತ್ರ ಸಲ್ಲಿಸಲು ಅಕ್ಟೋಬರ್ 3 ಕೊನೆಯ ದಿನವಾಗಿದೆ.

**ಉಡುಪಿ ಜಿಲ್ಲೆಯವರಿಗೆ ಅವಕಾಶ**

ಬಿಜೆಪಿಯ ನಿರ್ಧಾರ ವರಿಷ್ಠರ ಕೈಯಲ್ಲೇ ಇದ್ದು, ಕೆಲವೇ ದಿನಗಳಲ್ಲಿ ಅಭ್ಯರ್ಥಿ ಹೆಸರು ಪ್ರಕಟವಾಗಲಿದೆ ಎನ್ನುತ್ತಾರೆ ಸ್ಥಳೀಯ ನಾಯಕರು. ಕಾಂಗ್ರೆಸ್ ಈ ಬಾರಿ ಉಡುಪಿ ಜಿಲ್ಲೆಯವರಿಗೆ ಅವಕಾಶ ಕೊಡುವುದು ಖಚಿತವಾಗಿದೆ. ಉಡುಪಿಯ ಸಹಕಾರಿ ಧುರೀಣ ಎಸ್.ರಾಜು ಪೂಜಾರಿ, ಭುಜಂಗ ಶೆಟ್ಟಿ ಹಾಗೂ ಕಾರ್ಕಳದ ಟಿ.ಆರ್.ರಾಜು ಅವರ ಹೆಸರು ಕೇಳಿಬರುತ್ತಿದೆ. ಬಿಜೆಪಿಯಿಂದ ಯಾರು ಎನ್ನುವುದು ಕುತೂಹಲದ ವಿಚಾರ. ಕೋಟ ಶ್ರೀನಿವಾಸ ಪೂಜಾರಿ ಪ್ರತಿನಿಧಿಸಿದ್ದ ಕ್ಷೇತ್ರವಾದ್ದರಿಂದ ಉಡುಪಿ ಭಾಗದವರಿಗೇ ಕೊಡುವ ಸಾಧ್ಯತೆಗಳಿವೆ ಎನ್ನಲಾಗುತ್ತಿದೆ. ಹಾಗಿದ್ದರೆ ಪ್ರಮೋದ್ ಮಧ್ವರಾಜ್ ಹೆಸರು ಪರಿಗಣಿಸುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ. ಕೆಲವು ದಿನಗಳ ಹಿಂದೆಯಷ್ಟೇ ರಾಜ್ಯ ಬಿಜೆಪಿ ಕೋರ್ ಕಮಿಟಿ ಸಭೆ ನಡೆದಿದ್ದು, ಅದರಲ್ಲಿ ಪರಿಷತ್ ಚುನಾವಣೆ ಕುರಿತು ಚರ್ಚೆ ನಡೆದಿದೆ. ಅದರಲ್ಲಿ ಮಾಜಿ ಸಂಸದ ನಳಿನ್ ಕುಮಾರ್ ಕಟೀಲು ಕೂಡ ಪಾಲ್ಗೊಂಡಿದ್ದರು. ನಳಿನ್ ಕುಮಾರ್ ಹಾಗೂ ಬಿಜೆಪಿ ದ.ಕ ಜಿಲ್ಲಾಧ್ಯಕ್ಷ ಸತೀಶ್ ಕುಂಪಲ ಅವರ ಹೆಸರು ಕೂಡ ಕೇಳಿ ಬಂದಿದೆ.

ಲಭ್ಯ ಮಾಹಿತಿ ಪ್ರಕಾರ ಇಬ್ಬರೂ ಆಸಕ್ತಿ ತೋರಿಸಿದ್ದು ಹೌದು. ಆದರೆ ಇದುವರೆಗೆ ಯಾರಿಗೆ ಟಿಕೆಟ್ ನೀಡಲಾಗುತ್ತದೆ ಎಂಬುದು ಸ್ಪಷ್ಟವಾಗಿಲ್ಲ.

## ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ತಾತ್ಕಾಲಿಕ ಆಯ್ಕೆ ಪಟ್ಟಿ ಪ್ರಕಟ

• **ಉದಯವಾಹಿನಿ, ಚಿತ್ರದುರ್ಗ**

2021ನೇ ಸಾಲಿನಲ್ಲಿ ಪ್ರಥಮ ಮುದ್ರಣವಾಗಿ ಪ್ರಕಟಣೆಗೊಂಡ ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಯಾದ ಮತ್ತು ಆಯ್ಕೆಯಾಗದ ಪುಸ್ತಕಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗಿದೆ. ಆಯ್ಕೆಯಾದ ಪುಸ್ತಕಗಳ ತಾತ್ಕಾಲಿಕ ಪಟ್ಟಿಯನ್ನು ಜಿಲ್ಲಾ ನಗರ ಕೇಂದ್ರ ಗ್ರಂಥಾಲಯಗಳ ಕೇಂದ್ರ ಕಚೇರಿಗಳಲ್ಲಿ ಮತ್ತು ಇಲಾಖೆ ವೆಬ್‌ಸೈಟ್ dpl.karnataka.gov.in ನಲ್ಲಿ ಪ್ರಕಟಿಸಲಾಗಿದೆ. ಈ ಪುಸ್ತಕಗಳ ಪ್ರದರ್ಶನವನ್ನು ಅಕ್ಟೋಬರ್ 4 ಮತ್ತು 5 ರಂದು ಬೆಂಗಳೂರಿನ ಪಶ್ಚಿಮ ವಲಯ, ಹಂಪಿನಗರ ನಗರ ಕೇಂದ್ರ ಗ್ರಂಥಾಲಯದಲ್ಲಿ ಏರ್ಪಡಿಸಲಾಗುವುದು. ರಾಜ್ಯ ಮಟ್ಟದ ಪುಸ್ತಕ ಆಯ್ಕೆ ಸಮಿತಿಯಿಂದ ಆಯ್ಕೆಗಾಗಿ ಸಲ್ಲಿಸಿದ ಲೇಖಕರು, ಲೇಖಕ ಪ್ರಕಾಶಕರು, ಪ್ರಕಾಶಕರು ಮತ್ತು ಪುಸ್ತಕ ಮಾರಾಟಗಾರರು ಈ ಬಗ್ಗೆ ಆಕ್ಷೇಪಣೆಗಳಿದ್ದಲ್ಲಿ ಅ.9ರ ಸಂಜೆ 5.30ರ ಒಳಗಾಗಿ ಆಯುಕ್ತರು, ಸಾರ್ವಜನಿಕ ಗ್ರಂಥಾಲಯ ಇಲಾಖೆ, ವಿಶ್ವೇಶ್ವರಯ್ಯ ಮುಖ್ಯ ಗೋಪುರ, 4ನೇ ಮಹಡಿ, ಡಾ. ಬಿ.ಆರ್.ಅಂಬೇಡ್ಕರ್ ಬೀದಿ, ಬೆಂಗಳೂರು, ಇಲ್ಲಿಗೆ ಲಿಖಿತವಾಗಿ ಮನವಿಗಳನ್ನು ಸಲ್ಲಿಸಲು ಸೂಚಿಸಿದೆ. ನಂತರ ಬಂದಂತಹ ಮನವಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆ ತಿಳಿಸಿದೆ.

## ಆಡಳಿತ ನ್ಯಾಯಾಧಿಕರಣದಲ್ಲಿ ತರಬೇತಿ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

• **ಉದಯವಾಹಿನಿ, ಚಿತ್ರದುರ್ಗ**

ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2024–25ನೇ ಸಾಲಿಗೆ ಆಡಳಿತ ನ್ಯಾಯಾಧಿಕರಣದಲ್ಲಿ ತರಬೇತಿ ನೀಡಲು ಪರಿಶಿಷ್ಟ ಪಂಗಡದ ಪದವೀಧರರಿಂದ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಕೆ ಅವಧಿಯನ್ನು ಅ.7ರವರೆಗೆ ವಿಸ್ತರಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಇಲಾಖೆ ವೆಬ್‌ಸೈಟ್ tw.kar.nic.in ನಲ್ಲಿ ಸಲ್ಲಿಸಿರುವ ಅರ್ಜಿಗಳನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಚೇರಿಗೆ ಅ.7ರ ಸಂಜೆ 5.30ರೊಳಗೆ ಸಲ್ಲಿಸಲು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ಸರಕಾರಿ ನೌಕರರ ಸಂಘದಿಂದ ಬೆಂಬಲ ಕಾರ್ಯಾಧ್ಯಕ್ಷ ಎ ಕೆ ಮುಲ್ಲಾ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಸವದತ್ತಿ**

ಗ್ರಾಮ ಆಡಳಿತ ಅಧಿಕಾರಿಗಳು ತಮ್ಮ ವಿವಿಧ ಬೇಡಿಕೆಗಳ ಕುರಿತು ನಡೆಸುತ್ತಿರುವ ಅನಿರ್ಧಿಷ್ಟಾವಧಿ ಮುಷ್ಕರಕ್ಕೆ ತಾಲ್ಲೂಕಿನ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘದ ವತಿಯಿಂದ ಸಂಪೂರ್ಣ ಬೆಂಬಲವಿದೆ ಎಂದು ಸಂಘದ ಕಾರ್ಯಾಧ್ಯಕ್ಷರಾದ ಎ ಕೆ ಮುಲ್ಲಾ ತಿಳಿಸಿದರು. ಸವದತ್ತಿ ತಾಲ್ಲೂಕಿನ ತಾಲ್ಲೂಕು ತಹಶೀಲ್ದಾರ್ ಕಚೇರಿಯ ಆವರಣದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳು ನಡೆಸುತ್ತಿರುವ ಅನಿರ್ಧಿಷ್ಟಾವಧಿ ಮುಷ್ಕರ ನಡೆಸುತ್ತಿದ್ದ ಸ್ಥಳಕ್ಕೆ ಆಗಮಿಸಿದ ನೌಕರರ ಸಂಘದ ವತಿಯಿಂದ ಸಂಪೂರ್ಣ ಬೆಂಬಲವಿದೆ ಎಂದು ರಾಜ್ಯ ಪರಿಷತ್ ಸದಸ್ಯರಾದ ಸೋಮು ಅಗಸಿಮನಿಯವರು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ತಾಲ್ಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಕರಡಿಗುಡ್ಡ ಹಾಗೂ ಸಮಸ್ತ ಅಧಿಕಾರಿಗಳು ಸಿಬ್ಬಂದಿಗಳು ಉಪಸ್ಥಿತರಿದ್ದರು.

## ತಾತ್ಕಾಲಿಕ ಶಾಶ್ವತ ಗರ್ಭನಿರೋಧಕ ವಿಧಾನಗಳ ಬಗ್ಗೆ ಮಾಹಿತಿ

• **ಉದಯವಾಹಿನಿ, ಸವದತ್ತಿ**

ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರ ಉಗರಗೋಳದಲ್ಲಿ ಆಡಳಿತ ವೈದ್ಯಾಧಿಕಾರಿಗಳು ಶ್ರೀಪಾದ ಸಬನೀಸ ಇವರ ಮಾರ್ಗದರ್ಶನದಲ್ಲಿ ವಿಶ್ವ ಗರ್ಭ ನಿರೋಧಕ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಡಾಕ್ಟರ್ ಜ್ಯೋತಿ ಬಸರಿಯವರು ಮಾತನಾಡಿ ತಾತ್ಕಾಲಿಕ ಶಾಶ್ವತ ಗರ್ಭನಿರೋಧಕ ವಿಧಾನಗಳ ಬಗ್ಗೆ ಚುಚ್ಚುಮದ್ದು ಶಸ್ತ್ರಚಿಕಿತ್ಸೆ ನುಂಗುವ ಮಾತ್ರೆಗಳು ಕಾಂಡೋಮ್‌ಗಳು ಸ್ತ್ರೀ ಸಂತಾನ ನಿರೋಧ್ ಶಸ್ತ್ರಚಿಕಿತ್ಸೆ ಪುರುಷ ಸಂತಾನ ನಿರೋಧ್ ಶಸ್ತ್ರಚಿಕಿತ್ಸೆ ವ್ಯಾಸೆಕ್ಟಮಿ ಬಗ್ಗೆ ಸವಿಸ್ತಾರವಾಗಿ ವಿವರಣೆ ನೀಡಿದರು.

ಸದರಿ ಕಾರ್ಯಕ್ರಮದಲ್ಲಿ ಲ್ಯಾಬ್ ಟೆಕ್ನಿಕಲ್ ಆಫೀಸರ್ ಎ ಕೆ ಮುಲ್ಲಾ ಸಿಎಚ್‌ಓ ನಿಂಗಣ್ಣಾ ಹೆಚ್ ಆರೋಗ್ಯ ಅಧಿಕಾರಿಗಳಾದ ಎನ್ ಎ ಪೂಜೇರ ಎಂ ಎಚ್ ಸುಲಾಖೆ ಶ್ರೀದೇವಿ ಪತ್ತಾರ ಆಶಾ ಕಾರ್ಯಕರ್ತೆಯರು ಗರ್ಭಿಣಿಯರು ಗ್ರಾಮಸ್ಥರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

## ಕಿತ್ತೂರು ಉತ್ಸವ : ವಿಶೇಷ ‘ಲೋಗೋ’ ರಚಿಸಿ 10 ಸಾವಿರ ರೂ. ಬಹುಮಾನ ಗೆಲ್ಲಿ

• **ಉದಯವಾಹಿನಿ ಬೆಳಗಾವಿ**

ಸ್ವಾತಂತ್ರ್ಯದ ಬೆಳ್ಳಿಚುಕ್ಕಿ, ವೀರವನಿತೆ ಕಿತ್ತೂರು ಚನ್ನಮ್ಮ ಬ್ರಿಟೀಷರ ವಿರುದ್ಧದ ಹೋರಾಟದಲ್ಲಿ ಚನ್ನಮ್ಮ ವಿಜಯ ಸಾಧಿಸಿ 200 ವರ್ಷ ಪೂರ್ಣಗೊಳ್ಳುತ್ತಿರುವ ಹಿನ್ನೆಲೆಯನ್ನು ಪ್ರಸಕ್ತ ವರ್ಷ ಕಿತ್ತೂರು ಉತ್ಸವವನ್ನು ಅದ್ದೂರಿಯಾಗಿ ಆಚರಿಸಲಾಗುತ್ತಿದೆ.

ವಿಜಯೋತ್ಸವದ 200 ನೇ ವರ್ಷಾಚರಣೆ ಸ್ಮರಣೀಯ ಹಾಗೂ ಅರ್ಥಪೂರ್ಣವಾಗಿಸುವ ಉದ್ದೇಶದಿಂದ ಲಾಂಛನ(ಲೋಗೋ) ಆಹ್ವಾನಿಸಲಾಗಿದೆ. ಕಿತ್ತೂರು ಚನ್ನಮ್ಮನ ಆಡಳಿತ ಕಾಲದ ಕಲೆ–ಸಂಸ್ಕೃತಿ, ನಂದಿಧ್ವಜ, ರಾಜಗುರು ಸಂಸ್ಥಾನ ಮತ್ತು ಭವ್ಯ ಪರಂಪರೆ ಒಳಗೊಂಡ ಲಾಂಛನಗಳನ್ನು ಆಹ್ವಾನಿಸಲಾಗಿದೆ. ಕಲಾವಿದರು ಹಾಗೂ ಸಾರ್ವಜನಿಕರು ಈ ವಿಷಯಾಧಾರಿತವಾಗಿ ಲಾಂಛನವನ್ನು ಕಳುಹಿಸಬಹುದು. ಅತ್ಯುತ್ತಮ ಲಾಂಛನ ರಚಿಸಿದವರಿಗೆ 10 ಸಾವಿರ ರೂಪಾಯಿ ಬಹುಮಾನವನ್ನು ನೀಡಲಾಗುವುದು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.

ಲಾಂಛನಗಳನ್ನು ಸೆಪ್ಟೆಂಬರ್ 29, 2024 ರ ಸಂಜೆ 5 ಗಂಟೆಯ ಒಳಗಾಗಿ acblhbgm@gmail.com ಅಥವಾ dkc.belagavi@gmail.com ಇ–ಮೇಲ್ ವಿಳಾಸಕ್ಕೆ ಕಳುಹಿಸಬಹುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾರ್ವಜನಿಕರ ಅಭಿಪ್ರಾಯ ಸಂಗ್ರಹಿಸಿ ಸರ್ಕಾರಕ್ಕೆ ವರದಿ ಸಲ್ಲಿಸುತ್ತೇವೆ: ಡಿಸಿ

## ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಜಿಲ್ಲಾ ಪ್ರಾದೇಶಿಕ ಕಛೇರಿ ವತಿಯಿಂದ ಹಮ್ಮಿಕೊಂಡ ಪರಿಸರ ಸಾರ್ವಜನಿಕ ಆಲಿಕೆ ಸಭೆ

• **ಉದಯವಾಹಿನಿ, ಚಿಂಚೋಳಿ**

ಶಹಾಬಾದ ಕಲ್ಲು ತೆಗೆಯಲು ಸ್ಥಾಪನೆಯ ಪ್ರಸ್ತಾವನೆಗಾಗಿ ಪರಿಸರ ಸಾರ್ವಜನಿಕರ ಸಲಹೆ ಸೂಚನೆ ಟೀಕೆ ಟಿಪ್ಪಣಿಗಳು ಅಭಿಪ್ರಾಯಗಳು ಸಂಗ್ರಹಿಸಿದ ವರದಿ ಸರ್ಕಾರದ ಮಟ್ಟಕ್ಕೆ ತಲುಪಿಸುತ್ತೇವೆ ಎಂದು ಜಿಲ್ಲಾಧಿಕಾರಿ ಪೌಜೀಯಾ ತರನ್ನುಮ್ ಹೇಳಿದರು.

ತಾಲ್ಲೂಕಿನ ಮಿರಿಯಾಣ ಗ್ರಾಮದ ಹೊರವಲಯದಲ್ಲಿರುವ ವೀರಭದ್ರೇಶ್ವರ ದೇವಾಲಯದ ಆವರಣದಲ್ಲಿ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ,ಜಿಲ್ಲಾ ಪ್ರಾದೇಶಿಕ ಕಛೇರಿ ವತಿಯಿಂದ ಹಮ್ಮಿಕೊಂಡ ಪರಿಸರ ಸಾರ್ವಜನಿಕ ಆಲಿಕೆ ಸಭೆಯಲ್ಲಿ ಮಾತನಾಡಿದ ಅವರು,ಕೆಲವರು ಬೇಡ ಅಂದರೆ ಕೆಲವರು ಅನುಮತಿ ಕೊಡಿ ಕಾರ್ಮಿಕರಿಗೆ ಅನುಕೂಲ ಕಲ್ಪಿಸಿಕೊಡಿ ಕಾರ್ಮಿಕರಿಗೆ ಸಿಗುವ ಸವಲತ್ತುಗಳನ್ನು ದೊರಕಿಸಿಕೊಡುವಂತೆ ಮನವಿ ಮಾಡಿದ್ದಾರೆ.

ಈ ಭಾಗದಲ್ಲಿ ವನ್ಯಜೀವಿಧಾಮ ಇರುವುದರಿಂದ ಪ್ರಾಣಿ ಪಕ್ಷಿಗಳಿಗೆ ವನ್ಯಜೀವಿಧಾಮಕ್ಕೆ ಆಗುವ ಅನಾಹುತದ ಬಗ್ಗೆ ಜಿಲ್ಲಾ ಅರಣ್ಯ ಇಲಾಖೆ ಅಧಿಕಾರಿಗಳ ಜೊತೆ ಸಮಾಲೋಚನೆ ನಡೆಸಿ ವರದಿ ಸಿದ್ದಪಡಿಸಲಾಗುವುದು, ಪರಿಸರ ಮೇಲೆ ಯಾವುದೇ ದುಶ್ಪರಿಣಾಮ ಬಿರದಂತೆ ಹಳೆಯ ಗಣಿಗಾರಿಕೆ ನಡೆಸಿದ ತೆಗ್ಗುಗುಂಡಿ ಹಾಗೂ ಕಲ್ಲುಚಿಂಪ್ಪುಗಳು ಬೇರೆಡೆ ಕಾರ್ಖಾನೆಗಳಿಗೆ ಸಾಗಿಸಲಾಗುವುದು,ಈಗಾಗಲೇ ಮಿರಿಯಾಣ ಗ್ರಾಮದಲ್ಲಿ ಎರಡು ಶಹಾಬಾದ ಕ್ವಾರಿ ಪ್ರಾರಂಭಿಸಲು ಅನುಮತಿಗಾಗಿ ಅರ್ಜಿ ಸಲ್ಲಿಸಿದ್ದು ಗಣಿಗಾರಿಕೆ ನಡೆಸಲು ಬೇಕಾಗುವ ಷರತ್ತುಗಳು ಸುಪ್ರೀಂಕೋರ್ಟ್ ಆದೇಶದಂತೆ ಎಲ್ಲಾ ಷರತ್ತುಗಳು ಅನ್ವಯವಾಗುವಂತೆ ಕಾನೂನಾತ್ಮಕವಾಗಿ ನಡೆಸಲು ಸಾರ್ವಜನಿಕರ ಅಭಿಪ್ರಾಯದಂತೆ ವರದಿ ಸಿದ್ದಪಡಿಸಿ ಸರ್ಕಾರದ ಮಟ್ಟಕ್ಕೆ ಕಳುಹಿಸಲಾಗುವುದು ಎಂದರು.

**ಅಧಿಕಾರಿಗಳ ಜೊತೆ ಸಮಾಲೋಚನೆ ನಡೆಸಿ ವರದಿ**

ಮಾರುತಿ ಗಂಜಗೇರಿ ಮಾತನಾಡಿ ವನ್ಯಜೀವಿ ಪ್ರದೇಶ 10ಕಿಮೀ ಒಳಗೆಯಿರುವ ಪ್ರದೇಶಕ್ಕೆ ಗಣಿಗಾರಿಕೆಗೆ ಅನುಮತಿ ಕೊಡಬಾರದು ಎಂದರು.

ಸುರೇಶ ಭಂಟ್ವಾ, ವೀರಯ್ಯಸ್ವಾಮಿ, ಹಾಫೀಜ ಅಬ್ದುಲ್ ಹಮೀದ್, ಸುದರ್ಶನ ರಡ್ಡಿ,ಕೆ.ಎಂ ಬಾರಿ, ಅಬ್ದುಲ್ ಬಾಷೀದ್, ಸಚಿನ್ ಚವ್ಹಾಣ, ನರಸಿಂಹಮ್ಮುಲು ಕುಂಬಾರ, ಅಬ್ದುಲ್ ರೌಫ್ ಮಿರಿಯಾಣ, ಮಹ್ಮದ್ ಗೌಸ್, ಮಂಜುಳಾ, ವೆಂಕಟೇಶ, ರಾಜೇಂದ್ರ ಪ್ರಸಾದ್,ಬಸವರಾಜ ವಾಡಿ, ನರಸಿಂಹಮಲು ಪೂಜಾರಿ, ಶಾಮರಾವ,ಲಕ್ಷ್ಮಣ ಭೋವಿ ಮಾತನಾಡಿ ಗಣಿಗಾರಿಕೆಗೆ ಅನುಮತಿ ಕೊಡಲು ಮನವಿ ಮಾಡಿದರು. ಈ ಸಂದರ್ಭದಲ್ಲಿ ಪರಿಸರ ಇಲಾಖೆ ಅಧಿಕಾರಿ ರೇಖಾ,ಸೇಡಂ ಸಹಾಯಕ ಆಯುಕ್ತ ಪ್ರಭುರಡ್ಡಿ,ಡಿವೈಎಸ್ಪಿ ಸಂಗಮನಾಥ ಹಿರೇಮಠ, ಪರಿಸರ ಇಲಾಖೆ ಅಧಿಕಾರಿಗಳಾದ ಸೋಮಶೇಖರ್,ವೆಂಕಟೇಶ,ಸಚಿನ್,ತಹಶೀಲ್ದಾರ್ ಸುಬ್ಬಣ್ಣ ಜಮಖಂಡಿ,ಗ್ರೇಡ್2 ತಹಶೀಲ್ದಾರ್ ವೆಂಕಟೇಶ ದುಗ್ಗನ್,ಅನೇಕರಿದ್ದರು.


ಉದಯವಾಹಿನಿ ಚಿತ್ರ

> ಗಣಿಗಾರಿಕೆಗೆ ಅನುಮತಿ ಕೊಡುವ ಮೊದಲು ಷರತ್ತುಗಳು ಅನ್ವಯವಾಗುವಂತೆ ನಿರ್ಧಾಕ್ಷಿಣವಾಗಿ ಕ್ರಮ ಕೈಗೊಂಡು ಹೊರಗಿನವರಿಗೆ ಅನುಮತಿ ಕೊಡಬಾರದು,ಉತ್ತರಪ್ರದೇಶ, ಬಿಹಾರ ರಾಜ್ಯಗಳಿಂದ ಆಗಮಿಸಿ ಗಣಿಗಾರಿಕೆ ನಡೆಸುತ್ತಿದ್ದಾರೆ ಸ್ಥಳೀಯರಿಗೆ ಅವಕಾಶ ನೀಡಬೇಕು,ಕಾರ್ಮಿಕರಿಗೆ ಯಾವುದೇ ಸೌಲಭ್ಯಗಳನ್ನು ನೀಡುತ್ತಿಲ್ಲಾ,ಗಣಿಗಾರಿಕೆ ಸುತ್ತಮುತ್ತಲಿನ ಪ್ರದೇಶಗಳಲ್ಲಿ ರಾಶಿ ರಾಶಿ ಕಲ್ಲುಚಿಂಪ್ಪುಗಳು ಗುಡ್ಡಗಾಡು ತರಹ ಬಿದ್ದಿವೆ ಯಾಕೆ ತೆರವು ಕಾರ್ಯಾಚರಣೆ ಮಾಡಿಲ್ಲಾ,ಹಳೆಯ ಗಣಿಗಾರಿಕೆ ನಡೆಸಿದ ತೆಗ್ಗುಗುಂಡಿಗಳು ತಕ್ಷಣವೇ ಮುಚ್ಚವಂತೆ ಆದೇಶ ಹೊರಡಿಸಬೇಕು
> –ಗೋಪಾಲ ರಾವ ಕಟ್ಟಿಮನಿ, ಸಾರ್ವಜನಿಕ ಆಲಿಕೆ ಸಭೆಯಲ್ಲಿ

> ಗಣಿಗಾರಿಕೆ ನಡೆಸುವವರು ಸರ್ಕಾರಿ ಸೌಮ್ಯ ಮತ್ತು ಧಾರ್ಮಿಕ ಪ್ರದೇಶಗಳು ಸಹ ಅನೇಕರು ಗಣಿಗಾರಿಕೆಗೆ ಬಳಕೆ ಮಾಡಿಕೊಳ್ಳುತ್ತಿದ್ದಾರೆ ಅಂಥವರ ವಿರುದ್ಧ ಕ್ರಮ ಕೈಗೊಳ್ಳಬೇಕು. ಹಳೆಯ ಗಣಿಗಾರಿಕೆಗೆ ಹೊಸ ಗಣಿಗಾರಿಕೆಗೆ ಅನ್ವಯವಾಗುವ ಷರತ್ತುಗಳು ವಿಧಿಸಬೇಕು, ಸುಪ್ರೀಂಕೋರ್ಟ್ ಆದೇಶ ಎಲ್ಲಾ ಗಣಿಗಾರಿಕೆಗಳು ಪಾಲಿಸುವಂತೆ ನಿರ್ದೇಶನ ನೀಡಬೇಕು, ಗಣಿ ಕಾರ್ಮಿಕರಿಗೆ ವಿಮೆ,ಸೇರಿದಂತೆ ಸುರಕ್ಷಿ ಕ್ರಮಗಳು ಮತ್ತು ಸರ್ಕಾರದ ಸೌಲಭ್ಯಗಳನ್ನು ನೀಡಬೇಕು –ರವಿಶಂಕರರೆಡ್ಡಿ ಮುತ್ತಂಗಿ

# ರಾನಿಯಲ್ಲಿನ ನನ್ನ ಪಾತ್ರ ಜನರಿಗೆ ಇಷ್ಟವಾಗಿದೆ

ರಾನಿ ಚಿತ್ರದಲ್ಲಿ ನನ್ನ ಪಾತ್ರ ಪಾಸಿಟಿವ್ ಹಾಗೂ ನೆಗೆಟಿವ್ ಎರಡೂ ಶೇಡ್ ನಲ್ಲಿದೆ. ಹೀಗಾಗಿ ಪ್ರೇಕ್ಷಕರ ಪ್ರತಿಕ್ರಿಯೆ ಬಗ್ಗೆ ಭಯವಿತ್ತು. ಆದರೆ, ಜನರು ನನ್ನನ್ನು ಇಷ್ಟಪಡುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ವ್ಯಕ್ತವಾಗಿರುತ್ತಿರುವ ಪ್ರತಿಕ್ರಿಯೆ ಸಂತಸ ತಂದಿದೆ ಎಂದು ನಟಿ ರಾಧ್ಯಾ ಹೇಳಿದ್ದಾರೆ.

ಗುರುತೇಜ್ ಶೆಟ್ಟಿ ನಿರ್ದೇಶನದ, ''ಕನ್ನಡತಿ' ಧಾರಾವಾಹಿ ಖ್ಯಾತಿಯ ಕಿರಣ್ ರಾಜ್ ನಾಯಕನಾಗಿರುವ ಸಿನಿಮಾ ''ರಾನಿ' ಸಿನಿಮಾ ಬಿಡುಗಡೆಗೊಂಡು ಚಿತ್ರಮಂದಿರಗಳಲ್ಲಿ 2ನೇ ವಾರ ಉತ್ತಮವಾಗಿ ಪ್ರದರ್ಶನ ಕಾಣುತ್ತಿದೆ.

ಚಿತ್ರದ ಕುರಿತು ಪ್ರೇಕ್ಷಕರ ಪ್ರತಿಕ್ರಿಯೆಗೆ ನಟಿ ರಾಧ್ಯಾ ಅವರು ಸಂತಸ ವ್ಯಕ್ತಪಡಿಸಿದ್ದಾರೆ. ಚಿತ್ರದಲ್ಲಿ ನನ್ನ ಪಾತ್ರ ಪಾಸಿಟಿವ್ ಹಾಗೂ ನೆಗೆಟಿವ್ ಎರಡೂ ಶೇಡ್ ನಲ್ಲಿದೆ. ಹೀಗಾಗಿ ಪ್ರೇಕ್ಷಕರ ಪ್ರತಿಕ್ರಿಯೆ ಬಗ್ಗೆ ಭಯವಿತ್ತು. ಆದರೆ, ಜನರು ನನ್ನನ್ನು ಇಷ್ಟಪಡುತ್ತಿದ್ದಾರೆ. ಸಾಮಾಜಿಕ ಜಾಲತಾಣಗಳಲ್ಲಿ ವ್ಯಕ್ತವಾಗಿರುತ್ತಿರುವ ಪ್ರತಿಕ್ರಿಯೆ ಸಂತಸ ತಂದಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಚಿತ್ರರಂಗದಲ್ಲಿ ಇತರೆ ರಾಜ್ಯಗಳ ಕಲಾವಿದರಿದೆ ಆದ್ಯತೆ ನೀಡುತ್ತಿರುವ ಕುರಿತು ನಟಿ ಬೇಸರ ಹೊರಹಾಕಿದ್ದಾರೆ.

ನನ್ನ ಪರಿಶ್ರಮವನ್ನು ಚಿತ್ರರಂಗ ಗುರ್ತಿಸಿರುವುದಕ್ಕೆ ಸಂತಸವಿದೆ. ಆದರೆ, ಕನ್ನಡ ನಟ-ನಟಿಯರಿಗೆ ಬೆಂಬಲ ನೀಡಬೇಕೆಂಬುದು ಕೇವಲ ಧ್ವನಿಯಾಗಿಯೇ ಉಳಿದಿದೆ. ಸಾಕಷ್ಟು ಪ್ರತಿಭೆಗಳ ಹೊರತಾಗಿಯು ನಿರ್ಮಾಪಕರು ಇತರೆ ರಾಜ್ಯಗಳ ನಟ-ನಟಿಯರಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ. ಈ ಬಗ್ಗೆ ಸಾಕಷ್ಟು ವೇದಿಕೆಗಳಲ್ಲಿಯೂ ಕಳವಳ ವ್ಯಕ್ತಪಡಿಲಿದ್ದೇನೆ. ಇದರ ಹಿಂದಿರುವ ವಾಸ್ತವತೆ ನನಗೆ ತಿಳಿದಿಲ್ಲ ಆದರೆ, ಬದಲಾವಣೆಯನ್ನು ಬಯಸುತ್ತಿದ್ದೇನೆಂದು ತಿಳಿಸಿದ್ದಾರೆ. ಬಳಿಕ ಸ್ಥಳೀಯ ಪ್ರತಿಭೆಗಳಿಗೆ ಅವಕಾಶ ನೀಡುತ್ತಿರುವ ರಕ್ಷಿತ್ ಶೆಟ್ಟಿ ಹಾಗೂ ರಿಷಬ್ ಶೆಟ್ಟಿಯವರನ್ನು ನಟಿ ಶ್ಲಾಘಿಸಿದ್ದಾರೆ.

ನನಗೆ ತಮಿಳು ಹಾಗೂ ತೆಲುಗು ಚಿತ್ರಗಳಿಗೆ ಸಾಕಷ್ಟು ಆಫರ್ ಗಳು ಬರುತ್ತಿವೆ. ಆದರೆ, ಕನ್ನಡಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿದ್ದೇನೆ. ಇಲ್ಲಿನ ಉತ್ತಮ ಸಿನಿಮಾಗಳಿಗಾಗಿ ಹುಡುಕುತ್ತಿದ್ದೇನೆ. ಹೊಸ ಸಿನಿಮಾ ನಿರ್ಮಾಣ ಸಂಸ್ಥೆಗಳೊಂದಿಗೆ ಕೆಲಸ ಮಾಡಲು ನಾನು ಸಿದ್ಧ. ಆದರೆ, ಸಾಕಷ್ಟು ಮಂದಿ ಆರಂಭದಲ್ಲಿ ಉತ್ತಮ ಬಲದೊಂದಿಗೆ ಬಂದರೂ ನಂತರ ಸೂಕ್ತ ಬೆಂಬಲ ಸಿಗದೆ ಸಂಕಷ್ಟ ಅನುಭವಿಸುತ್ತಾರೆ. ಇದರಿಂದ ಹಣ ಹಾಗೂ ಸಮಯ ಎರಡೂ ವ್ಯರ್ಥವಾಗುತ್ತದೆ. ಇದೀಗ ನಾನು ನನ್ನ ವೃತ್ತಿಜೀವನದ ಬೆಳವಣಿಗೆಯ ಮೇಲೆ ಗಮನಹರಿಸುತ್ತಿದ್ದೇನೆ.

ಜಾಲತಾಣಗಳಲ್ಲಿ ಮೆಚ್ಚುಗೆಯ ಮಾತು





ಶಾಕಿಂಗ್ ವಿಚಾರ ಬಯಲು!

# ಭಾರತದಲ್ಲಿ ಬಾಂಗ್ಲಾದೇಶದ ರಿಯಾ ಬಾರ್ಡೆ ಬಂಧನ

ರಿಯಾ ಬಾಂಗ್ಲಾದೇಶದ ಪ್ರಜೆಯಾಗಿದ್ದು, ನಕಲಿ ದಾಖಲೆಗಳನ್ನು ಬಳಸಿಕೊಂಡು ತನ್ನ ಕುಟುಂಬದೊಂದಿಗೆ ಭಾರತದಲ್ಲಿ ವಾಸಿಸುತ್ತಿದ್ದಳು ಎಂದು ವರದಿಯಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ಕುಟುಂಬ ಸದಸ್ಯರಿಗೂ ಅಧಿಕಾರಿಗಳು ಹುಡುಕಾಟ ನಡೆಸುತ್ತಿದ್ದಾರೆ.

ನೀಲಿ ಚಿತ್ರನಟಿ ರಿಯಾ ಬಾರ್ಡೆ, ಆರೋಹಿ ಬರ್ಡೆ ಮತ್ತು ಬನ್ನಾ ಶೇಖ್ ಎಂಬ ಅಲಿಯಾಸ್‌ಗಳಿಂದ ಗುರುತಿಸಿಕೊಂಡಿದ್ದ ಬಾಂಗ್ಲಾದೇಶದ ರಿಯಾ ಬಾರ್ಡೆಯನ್ನು ಮುಂಬೈ ಪೊಲೀಸರು ಬಂಧಿಸಿದ್ದಾರೆ.

ರಿಯಾ ಬಾಂಗ್ಲಾದೇಶದ ಪ್ರಜೆಯಾಗಿದ್ದು, ನಕಲಿ ದಾಖಲೆಗಳನ್ನು ಬಳಸಿಕೊಂಡು ತನ್ನ ಕುಟುಂಬದೊಂದಿಗೆ ಭಾರತದಲ್ಲಿ ವಾಸಿಸುತ್ತಿದ್ದಳು ಎಂದು ವರದಿಯಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಅವರ ಕುಟುಂಬ ಸದಸ್ಯರಿಗೂ ಅಧಿಕಾರಿಗಳು ಹುಡುಕಾಟ ನಡೆಸುತ್ತಿದ್ದಾರೆ.

ರಿಯಾ ಬಾರ್ಡೆ ಅಕ್ರಮವಾಗಿ ಭಾರತದಲ್ಲಿದ್ದ ಆರೋಪದ ಮೇಲೆ ಮಹಾರಾಷ್ಟ್ರ ಪೊಲೀಸರು ಬಂಧಿಸಿದ್ದಾರೆ. ಪೋರ್ನ್ ಸ್ಟಾರ್ ವಿರುದ್ಧ ಹೊರಿಸಲಾದ ಆರೋಪಗಳ ಪ್ರಕಾರ, ಅವಳು ಬಾಂಗ್ಲಾದೇಶದ ನಿವಾಸಿಯಾಗಿದ್ದು, ನಕಲಿ ದಾಖಲೆಗಳ ಆಧಾರದ ಮೇಲೆ ತನ್ನ ಕುಟುಂಬದೊಂದಿಗೆ ಭಾರತದಲ್ಲಿ ವಾಸಿಸುತ್ತಿದ್ದಳು. ಈ ಪ್ರಕರಣದಲ್ಲಿ ಆಕೆಯ ತಾಯಿ, ಸಹೋದರಿ, ಸಹೋದರ ಮತ್ತು ತಂದೆಗಾಗಿ ಪೊಲೀಸರು ಹುಡುಕಾಟ ನಡೆಸಿದ್ದಾರೆ. ನೀಲಿ ಚಿತ್ರೋದ್ಯಮದಲ್ಲಿ ಆರೋಹಿ ಬರ್ಡೆ ಮತ್ತು ಬನ್ನಾ ಶೇಖ್ ಎಂದು ಜನಪ್ರಿಯರಾಗಿರುವ ರಿಯಾ ಬರ್ಡೆ ಮಹಾರಾಷ್ಟ್ರದ ಉಲ್ಲಾಸ್‌ನಗರದಲ್ಲಿ ಬಂಧಿಸಲಾಗಿದೆ. ರಿಯಾಳ ಸ್ನೇಹಿತ ಪ್ರಶಾಂತ್ ಮಿಶ್ರಾ, ಈ ಬಗ್ಗೆ ಪೊಲೀಸರಿಗೆ ಮಾಹಿತಿ ನೀಡಿದ್ದು ನಂತರ ಪೊಲೀಸರು ನಟಿಯ ದಾಖಲೆಗಳನ್ನು ಪರಿಶೀಲಿಸಿದಾಗ ಇಡೀ ಘಟನೆ ಬೆಳಕಿಗೆ ಬಂದಿದೆ.

ಪ್ರಶಾಂತ್ ಮಿಶ್ರಾ, ರಿಯಾ ಅಕ್ರಮವಾಗಿ ಭಾರತದಲ್ಲಿ ವಾಸಿಸುತ್ತಿದ್ದಾರೆ ಎಂದು ಪೊಲೀಸರಿಗೆ ತಿಳಿಸಿದ್ದರು. ಅವರ ದೂರಿನ ಆಧಾರದ ಮೇಲೆ ಪೊಲೀಸರು ಪ್ರಕರಣದ ತನಿಖೆ ನಡೆಸಿ ದಾಖಲೆಗಳನ್ನು ಪರಿಶೀಲಿಸಿದ್ದರು.

# ಪುಷ್ಪ 2 ಶೂಟಿಂಗ್ ಸೆಟ್‌ಗೆ ರಾಜಮೌಳಿ

'ಆರ್‌ಆರ್‌ಆರ್' ಬಳಿಕ ಡೈರೆಕ್ಟರ್ ರಾಜಮೌಳಿ ಅವರು ಹೊಸ ಸಿನಿಮಾದ ಶೂಟಿಂಗ್ ಇನ್ನೂ ಶುರು ಮಾಡಿಲ್ಲ. ಸದ್ಯಕ್ಕೆ ಕೊಂಚ ಬಿಡುವಿನಲ್ಲಿರುವ ಅವರು 'ಪುಷ್ಪ 2' ಸಿನಿಮಾದ ಚಿತ್ರೀಕರಣದ ಸೆಟ್‌ಗೆ ಹೋಗಿದ್ದಾರೆ. ತಮ್ಮ ಸಿನಿಮಾದ ಸೆಟ್‌ಗೆ ರಾಜಮೌಳಿ ಬಂದಿದ್ದಕ್ಕೆ ನಿರ್ದೇಶಕ ಸುಕುಮಾರ್ ಅವರು ಸಂಭ್ರಮಿಸಿದ್ದಾರೆ. ಆ ಕ್ಷಣದ ಫೋಟೋ ವೈರಲ್ ಆಗಿದೆ. ನಿರ್ದೇಶಕ ರಾಜಮೌಳಿ ಅವರು ಮುಂದಿನ ಸಿನಿಮಾದ ತಯಾರಿಯಲ್ಲಿ ಬ್ಯುಸಿ ಆಗಿದ್ದಾರೆ. ಟಾಲಿವುಡ್ 'ಪ್ರಿನ್ಸ್' ಮಹೇಶ್ ಬಾಬು ಜೊತೆ ಅವರು ಹೊಸ ಸಿನಿಮಾ ಮಾಡಲಿದ್ದಾರೆ. ಆ ಚಿತ್ರದ ಶೂಟಿಂಗ್ ಆರಂಭವಾಗಲು ಇನ್ನೂ ಸಮಯ ಇದೆ. ಈ ನಡುವೆ ರಾಜಮೌಳಿ ಅವರು 'ಪುಷ್ಪ 2' ಸಿನಿಮಾದ ಶೂಟಿಂಗ್ ಸೆಟ್‌ಗೆ ಭೇಟಿ ನೀಡಿದ್ದಾರೆ. ಆ ಸಂದರ್ಭದ ಫೋಟೋ ವೈರಲ್ ಆಗಿದೆ. ರಾಜಮೌಳಿ ಅವರನ್ನು ನೋಡಿ 'ಪುಷ್ಪ 2' ಸಿನಿಮಾದ ನಿರ್ದೇಶಕ ಸುಕುಮಾರ್ ಅವರು ಖುಷಿಪಟ್ಟಿದ್ದಾರೆ. ಅಲ್ಲು ಅರ್ಜುನ್ ಅಭಿಮಾನಿಗಳಿಗೂ ತುಂಬ ಖುಷಿ ಆಗಿದೆ. ರಾಜಮೌಳಿ ಅವರು ತುಂಬ ಸಿಂಪಲ್ ವ್ಯಕ್ತಿ. ವಿಶ್ವಾದ್ಯಂತ ಖ್ಯಾತಿ ಹೊಂದಿದ್ದರೂ ಕೂಡ ಅವರು ಜಂಭ ತೋರುವವರಲ್ಲ. ಅದಕ್ಕೆ ಈ ಭೇಟಿಯೇ ಲೇಟೆಸ್ಟ್ ಉದಾಹರಣೆ. ಚಿತ್ರರಂಗದ ಇತರೆ ನಿರ್ದೇಶಕರ ಜೊತೆ ರಾಜಮೌಳಿ ಅವರು ಸ್ನೇಹ ಹೊಂದಿದ್ದಾರೆ. ನಿರ್ದೇಶಕ ಸುಕುಮಾರ್ ಜೊತೆಗೂ ಅವರಿಗೆ ಒಳ್ಳೆಯ ಬಾಂಧವ್ಯ ಇದೆ. ಈ ಹಿನ್ನೆಲೆಯಲ್ಲಿ ಅವರು 'ಪುಷ್ಪ 2' ಚಿತ್ರದ ಸೆಟ್‌ಗೆ ಭೇಟಿ ಕೊಟ್ಟಿದ್ದಾರೆ.



# 2 ವರ್ಷದ ಬಳಿಕ ಬಂದ ಸಾಯಿ ಪಲ್ಲವಿ

ಸಾಯಿ ಪಲ್ಲವಿಯ ಸಿನಿಮಾ ಒಂದು ಬಿಡು ಗಡೆ ಆಗಿ ಎರಡು ವರ್ಷಕ್ಕೂ ಹೆಚ್ಚು ಸಮಯ ವಾಯ್ತು. ಇದೀಗ ಸಾಯಿ ಪಲ್ಲವಿ ನಟಿಸಿರುವ ಹೊಸ ಸಿನಿಮಾದ ಕ್ಯಾರೆಕ್ಟರ್ ಟೀಸರ್ ಬಿಡುಗಡೆ ಮಾಡಿದ್ದು, ಒಂದು ಅದ್ಭುತ ಪಾತ್ರದ ಮೂಲಕ ಮರಳಿ ಬಂದಿದ್ದಾರೆ ಸಾಯಿ ಪಲ್ಲವಿ. ಸಾಯಿ ಪಲ್ಲವಿ, ಹೇಟರ್‌ಗಳೇ ಇಲ್ಲದ ನಟಿ. ಎಲ್ಲಾ ವಯೋಮಾನದ ಪ್ರೇಕ್ಷಕರಿಂದಲೂ ಸಮಾನ ಪ್ರೀತಿ, ಗೌರವ ಪಡೆಯುತ್ತಿರುವ ನಟಿ. ಸಾಯಿ ಪಲ್ಲವಿ ಆಯ್ಕೆ ಮಾಡಿಕೊಳ್ಳುತ್ತಿರುವ ಪಾತ್ರಗಳು, ಸಿನಿಮಾಗಳಲ್ಲಿ ತಮ್ಮನ್ನು ತಾವು ಪ್ರಸ್ತುತ ಪಡಿಸಿಕೊಳ್ಳುತ್ತಿರುವ ರೀತಿ, ಸಿನಿಮಾಗಳ ಹೊರಗೆ ಸಹ ಸಾಯಿ ಪಲ್ಲವಿ ನಡೆದುಕೊಳ್ಳುವ, ಮಾತನಾಡುವ, ವರ್ತಿಸುವ ರೀತಿಯಿಂದಾಗಿ ಆಕೆಯ ನಟನೆಯ ಜೊತೆಗೆ ಆಕೆಯ ವ್ಯಕ್ತಿತ್ವಕ್ಕೂ ಸಹ ಕೋಟ್ಯಂತರ ಮಂದಿ ಮಾರು ಹೋಗಿದ್ದಾರೆ. ಆದರೆ ಸಾಯಿ ಪಲ್ಲವಿ ನಟನೆ ಸಿನಿಮಾ ಒಂದು ಬಿಡುಗಡೆ ಆಗಿ ಎರಡು ವರ್ಷಕ್ಕೂ ಹೆಚ್ಚು ಸಮಯವಾಗಿದೆ. ಸಾಯಿ ಪಲ್ಲವಿಯನ್ನು ಮತ್ತೆ ತೆರೆಯ ಮೇಲೆ ಯಾವಾಗ ನೋಡುವುದು ಎಂದು ಕಾದಿದ್ದ ಅಭಿಮಾನಿಗಳಿಗೆ ಒಂದು ಅದ್ಭುತ ಪಾತ್ರದ ಮೂಲಕ ಶಾಕ್ ಕೊಟ್ಟಿದ್ದಾರೆ ಸಾಯಿ ಪಲ್ಲವಿ. ಸಾಯಿ ಪಲ್ಲವಿ 'ಅಮರನ್' ಹೆಸರಿನ ಸಿನಿಮಾದಲ್ಲಿ ನಟಿಸಿದ್ದು ಸಿನಿಮಾದ ಟೀಸರ್ ಇಂದಷ್ಟೆ ಬಿಡುಗಡೆ ಆಗಿದೆ. ವಿಶೇಷವೆಂದರೆ ಈ ಟೀಸರ್ ಕೇವಲ ಸಾಯಿ ಪಲ್ಲವಿ ಪಾತ್ರಕ್ಕೆ ಮಾತ್ರವೇ ಸೀಮಿತ. ಸಿನಿಮಾದ ಕತೆ ವೀರ ಯೋಧನ ಕತೆಯಾಗಿದ್ದರೂ ಸಹ ಚಿತ್ರತಂಡ ಸಾಯಿ ಪಲ್ಲವಿ ಪಾತ್ರದ ಟೀಸರ್ ಅನ್ನು ಮಾತ್ರವೇ ಬಿಡುಗಡೆ ಮಾಡಿದ್ದು, ಸಣ್ಣ ಟೀಸರ್‌ನಲ್ಲಿಯೂ ಸಹ ಸಾಯಿ ಪಲ್ಲವಿ ಬಹುವಾಗಿ ಇಷ್ಟವಾಗುತ್ತಾರೆ.



# ಬಾಂಗ್ಲಾ ಅಭಿಮಾನಿ ಮೇಲೆ ತೀವ್ರವಾಗಿ ಹಲ್ಲೆ! ಆಸ್ಪತ್ರೆಗೆ ದಾಖಲು

ಭಾರತ ಮತ್ತು ಬಾಂಗ್ಲಾದೇಶ ನಡುವೆ ನಡೆಯುತ್ತಿರುವ ಎರಡನೇ ಟೆಸ್ಟ್ ಪಂದ್ಯದಿಂದಲ್ಲಿ ನಡೆಯಬಾರದ ಘಟನೆಯೊಂದು ನಡೆದಿದೆ. ಕಾನ್ಪುರದ ಗ್ರೀನ್ ಪಾರ್ಕ್ ಸ್ಟೇಡಿಯಂನಲ್ಲಿ ಬಾಂಗ್ಲಾದೇಶದ ಅಭಿಮಾನಿಯೊಬ್ಬರನ್ನು ಥಳಿಸಲಾಗಿದ್ದು, ಆತನನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಕಾನ್ಪುರದ ಗ್ರೀನ್ ಪಾರ್ಕ್ ಸ್ಟೇಡಿಯಂನಲ್ಲಿ ಬಾಂಗ್ಲಾದೇಶದ ಅಭಿಮಾನಿಯೊಬ್ಬರನ್ನು ಥಳಿಸಲಾಗಿದ್ದು, ಆತನನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿದೆ. ಟೈಗರ್ ರಾಬಿ ಎಂದು ಕರೆಯಲ್ಪಡುವ ಈ ವ್ಯಕ್ತಿ ಬಾಂಗ್ಲಾದೇಶ ಕ್ರಿಕೆಟ್ ತಂಡದ ಸೂಪರ್ ಫ್ಯಾನ್. ಬಾಂಗ್ಲಾ ತಂಡ ಎಲ್ಲೆಲ್ಲಿ ಪಂದ್ಯವನ್ನಾಡುತ್ತದೋ, ಅಲ್ಲೆಲ್ಲ ಈತ ಹಾಜರಿರುತ್ತಾನೆ. ವರದಿಯ ಪ್ರಕಾರ, ಕಾನ್ಪುರ ಟೆಸ್ಟ್ ಪಂದ್ಯದ ವೇಳೆ ಟೈಗರ್ ರಾಬಿ, ಟೀಂ ಇಂಡಿಯಾ ವೇಗಿ ಮೊಹಮ್ಮದ್ ಸಿರಾಜ್ ಅವರನ್ನು ನಿಂದಿಸುತ್ತಿದ್ದನ್ನು ನೋಡಿದ ಟೀಂ ಇಂಡಿಯಾ ಫ್ಯಾನ್ಸ್ ಆತನಿಗೆ ಥಳಿಸಿದ್ದಾರೆ ಎಂದು ವರದಿಯಾಗಿದೆ.

**ಟೀಂ ಇಂಡಿಯಾ ವಿರುದ್ಧ ಘೋಷಣೆ**

ತೀವ್ರ ಥಳಿತಕ್ಕೊಳಗಾದ ಟೈಗರ್ ರಾಬಿ ಪ್ರಜ್ಞೆ ತಪ್ಪಿ ಬಿದ್ದಿದ್ದಾನೆ. ಈ ವಿಷಯ ತಿಳಿದ ಕೂಡಲೇ ಭದ್ರತಾ ಸಿಬ್ಬಂದಿ ಆತನನ್ನು ಆಸ್ಪತ್ರೆಗೆ ಕರೆದೊಯ್ದಿದ್ದಾರೆ. ಟೈಗರ್ ರಾಬಿ ಮೇಲೆ ಏಕೆ ಹಲ್ಲೆ ಮಾಡಲಾಗಿದೆ ಎಂಬುದರ ಬಗ್ಗೆ ಇದುವರೆಗೆ ಯಾವುದೇ ಅಧಿಕೃತ ಮಾಹಿತಿ ಹೊರಬಿದ್ದಿಲ್ಲ. ಆದರೆ ಸೋಶಿಯಲ್ ಮೀಡಿಯಾದಲ್ಲಿ ಹರಿದಾಡುತ್ತಿರುವ ಮಾಹಿತಿ ಪ್ರಕಾರ ಈತ, ಮೊಹಮ್ಮದ್ ಸಿರಾಜ್ ಅವರನ್ನು ನಿಂದಿಸುತ್ತಿದ್ದ ಎಂದು ಹೇಳಲಾಗಿದ್ದು, ಇದರಿಂದ ಜನರು ಆಕ್ರೋಶಗೊಂಡಿದ್ದಾರೆ. ಅಲ್ಲದೆ ಈತ ಚೆನ್ನೈನಲ್ಲೂ ಟೀಂ ಇಂಡಿಯಾ ವಿರುದ್ಧ ಘೋಷಣೆಗಳನ್ನು ಕೂಗುತ್ತಿದ್ದ ಎಂಬ ಆರೋಪವೂ ಇದೆ. ಇದೇ ಕಾರಣಕ್ಕೆ ಅಭಿಮಾನಿಗಳು ಆತನನ್ನು ಥಳಿಸಿದ್ದಾರೆ ಎಂದು ಹೇಳಲಾಗುತ್ತಿದೆ.



ಪ್ರಜ್ಞೆ ತಪ್ಪಿದ ಟೈಗರ್ ರಾಬಿ

**ಈ ಹಿಂದೆಯೇ ವಿರೋಧ**

ಅಂದಹಾಗೆ, ಕಾನ್ಪುರದಲ್ಲಿ ಬಾಂಗ್ಲಾದೇಶ ತಂಡಕ್ಕೆ ತೀವ್ರ ವಿರೋಧ ವ್ಯಕ್ತವಾಗಿತ್ತು. ಬಾಂಗ್ಲಾದೇಶ ತಂಡ ಕಾನ್ಪುರ ತಲುಪಿದಾಗ ಹಲವು ಸಂಘಟನೆಗಳು ಬಾಂಗ್ಲಾ ತಂಡದ ವಿರುದ್ಧ ರಸ್ತೆಗಿಳಿದು ಘೋಷಣೆಗಳನ್ನು ಕೂಗಿದ್ದವು. ಇದಕ್ಕೆ ಕಾರಣವೆಂದರೆ, ಬಾಂಗ್ಲಾದೇಶದಲ್ಲಿ ನಡೆದಿದ್ದ ಹಿಂಸಾಚಾರದಲ್ಲಿ ಅಲ್ಲಿನ ಹಿಂದೂಗಳ ಮೇಲೆ ದಾಳಿ ಮಾಡಲಾಗಿತ್ತು. ಇದರಿಂದ ಹಲವು ಕುಟುಂಬಗಳು ಜೀವ ಮತ್ತು ಆಸ್ತಿ ನಷ್ಟವನ್ನು ಅನುಭವಿಸಿದ್ದವು. ಇದೀಗ ಬಾಂಗ್ಲಾದೇಶದ ಅಭಿಮಾನಿಯೊಬ್ಬನಿಗೆ ಥಳಿಸಿರುವ ಘಟನೆಯೂ ಅದೇ ಘಟನೆಗೆ ತಳುಕು ಹಾಕಿಕೊಂಡಿದೆ. ಆದರೆ ಈ ಬಗ್ಗೆ ಇನ್ನಷ್ಟೇ ಸತ್ಯಾಂಶ ಹೊರಬರಬೇಕಿದೆ.

**ಟೆಸ್ಟ್ ಪಂದ್ಯ ಹೀಗಿದೆ**

ಕಾನ್ಪುರ ಟೆಸ್ಟ್‌ನ ಮೊದಲ ದಿನ ಕೇವಲ 35 ಓವರ್‌ಗಳನ್ನು ಮಾತ್ರ ಎಸೆಯಲು ಸಾಧ್ಯವಾಯಿತು. ಮಳೆಯಿಂದಾಗಿ ಪಂದ್ಯ ತಡವಾಗಿ ಆರಂಭ ವಾಯಿತು. 10 ಗಂಟೆಗೆ ಟಾಸ್ ನಡೆದಿದ್ದು, ಟಾಸ್ ಗೆದ್ದ ಟೀಂ ಇಂಡಿಯಾ ಬಾಂಗ್ಲಾದೇಶವನ್ನು ಮೊದಲು ಬ್ಯಾಟಿಂಗ್ ಮಾಡಲು ಆಹ್ವಾನಿಸಿತು. ಬಾಂಗ್ಲಾದೇಶ ಮೊದಲ ಎರಡು ವಿಕೆಟ್‌ಗಳನ್ನು ಬೇಗನೆ ಕಳೆದುಕೊಂಡಿತು. ಆದರೆ, ಇದಾದ ಬಳಿಕ ಆಟ ನಿಲ್ಲುವ ವೇಳೆಗೆ ಬಾಂಗ್ಲಾದೇಶ 3 ವಿಕೆಟ್ ಕಳೆದುಕೊಂಡು 107 ರನ್ ಗಳಿಸಿದೆ. ಆದರೆ ಮಂದ ಬೆಳಕಿನಿಂದಾಗಿ ಹಾಗೂ ಮಳೆಯಿಂದಾಗಿ ನಿಗದಿತ ಸಮಯಕ್ಕೂ ಮುನ್ನವೇ ಮೊದಲ ದಿನದಾಟವನ್ನು ಅಂತ್ಯಗೊಳಿಸಲಾಯಿತು.

# ರೋಹಿತ್‌ಗೂ ಅಚ್ಚರಿ ತರಿಸಿದ ಆಕಾಶ್ ಉರುಳಿಸಿದ ವಿಕೆಟ್

ಆಕಾಶ್ ದೀಪ್‌ರನ್ನು ಹೊರತುಪಡಿಸಿ ತಂಡದ ಮತ್ತ್ಯಾವ ಆಟಗಾರ ಕೂಡ ಡಿಆರ್‌ಎಸ್ ತೀರ್ಪು ನಮ್ಮ ಪರವಾಗಿ ಬರುತ್ತದೆ ಎಂದು ಭಾವಿಸಿರಲಿಲ್ಲ. ಸ್ವತಃ ನಾಯಕ ರೋಹಿತ್ ಕೂಡ ನಂಬಿರಲಿಲ್ಲ. ಆದರೆ ಡಿಆರ್ ಎಸ್‌ನಲ್ಲಿ ಔಟಾಗಿರುವುದು ಖಚಿತವಾದ ಬಳಿಕ ಆಟಗಾರರೆಲ್ಲರೂ ಅಚ್ಚರಿಗೊಂಡರು. ಭಾರತ ಮತ್ತು ಬಾಂಗ್ಲಾದೇಶ ನಡುವಿನ ಟೆಸ್ಟ್ ಸರಣಿಯ ಎರಡನೇ ಪಂದ್ಯ ಕಾನ್ಪುರದ ಗ್ರೀನ್ ಪಾರ್ಕ್‌ನಲ್ಲಿ ನಡೆಯುತ್ತಿದೆ. ಪಂದ್ಯದಲ್ಲಿ ಟಾಸ್ ಗೆದ್ದ ನಾಯಕ ರೋಹಿತ್ ಶರ್ಮಾ ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿದರು. ಅದರಂತೆ ಬೌಲಿಂಗ್ ದಾಳಿ ಆರಂಭಿಸಿದ ಜಸ್ಪ್ರೀತ್ ಬುಮ್ರಾ ಹಾಗೂ ಮೊಹಮ್ಮದ್ ಸಿರಾಜ್‌ರಂತಹ ಅನುಭವಿ ವೇಗಿಗಳಿಗೆ ಆರಂಭದಲ್ಲಿ ವಿಕೆಟ್ ಸಿಗಲಿಲ್ಲ. ಆದ್ದರಿಂದ ಬೌಲಿಂಗ್‌ನಲ್ಲಿ ಬದಲಾವಣೆ ತಂಡ ನಾಯಕ ರೋಹಿತ್ ಶರ್ಮಾ, ಯುವ ಬೌಲರ್ ಆಕಾಶ್ ದೀಪ್‌ಗೆ ಬೌಲಿಂಗ್ ನೀಡಿದರು. ಈ ವೇಳೆ ದಾಳಿಗಿಳಿದ ಆಕಾಶ್, ಬಾಂಗ್ಲಾದೇಶ ತಂಡದ ಆರಂಭಿಕರಿಬ್ಬರನ್ನು ಪೆವಿಲಿಯನ್‌ಗಟ್ಟಿದರು. ಅದರಲ್ಲೂ ಆಕಾಶ್ ಉರುಳಿಸಿದ ಎರಡನೇ ವಿಕೆಟ್ ನಾಯಕ ರೋಹಿತ್ ಶರ್ಮಾಗೂ ಅಚ್ಚರಿ ತರಿಸಿತು.

ಪಂದ್ಯದ ಮೊದಲ ಎಂಟು ಓವರ್‌ಗಳಲ್ಲಿ ಜಸ್ಪ್ರೀತ್ ಬುಮ್ರಾ ಮತ್ತು ಮೊಹಮ್ಮದ್ ಸಿರಾಜ್‌ಗೆ ಯಾವುದೇ ವಿಕೆಟ್ ಸಿಗಲಿಲ್ಲ. ಇದೇ ವೇಳೆ ನಾಯಕ ರೋಹಿತ್, ಆಕಾಶ್ ದೀಪ್‌ಗೆ ಬೌಲಿಂಗ್ ನೀಡಿದರು. ಏತನ್ಮಧ್ಯೆ, ಆಕಾಶ್ ತನ್ನ ಮೊದಲ ಓವರ್‌ನಲ್ಲಿ ಆರಂಭಿಕ ಝೂಕಿರ್ ಹಸನ್‌ನನ್ನು ಔಟ್ ಮಾಡಿದರು. ಜಾಕಿರ್ ಬರೋಬ್ಬರಿ 24 ಎಸೆತಗಳನ್ನು ಎದುರಿಸಿದರೂ ಖಾತೆ ತೆರೆಯದೆ ಪೆವಿಲಿಯನ್ ಸೇರಿಕೊಂಡರು. ಇದಾದ ಬಳಿಕ ಮತ್ತೊಬ್ಬ ಆರಂಭಿಕ ಸದ್ಮಾನ್ ಇಸ್ಲಾಂ ಅವರನ್ನು ಆಕಾಶ್ ಎಲ್‌ಬಿ ಬಲೆಗೆ ಬೀಳಿಸಿದರು.

ಆಕಾಶ್ ದೀಪ್ ಎಸೆದ ಮೂರನೇ ಓವರ್‌ನ ಮೊದಲ ಎಸೆತ ಬಾಂಗ್ಲಾದೇಶದ ಮತ್ತೊಬ್ಬ ಆರಂಭಿಕ ಸಾದ್ಮಾನ್ ಇಸ್ಮಲ್ ಅವರ ಪ್ಯಾಡ್‌ಗೆ ಬಡಿತು. ಹೀಗಾಗಿ ಟೀಂ ಇಂಡಿಯಾ ಆಟಗಾರರು ಅಂಪೈರ್‌ಗೆ ಮನವಿ ಸಲ್ಲಿಸಿದರೂ ಅಂಪೈರ್ ಅದನ್ನು ಔಟ್ ನೀಡಲಿಲ್ಲ. ಆಕಾಶ್ ದೀಪ್‌ಗೆ ಇದು ಖಚಿತವಾಗಿ ಔಟೆಂದು ಗೊತ್ತಿದ್ದ ಕಾರಣ ನಾಯಕ ರೋಹಿತ್‌ಗೆ ಡಿಆರ್‌ಎಸ್ ತೆಗೆದುಕೊಳ್ಳುವಂತೆ ಕೇಳಿಕೊಂಡರು. ಕೊಂಚ ಸಮಯ ಯೋಚಿಸಿದ ರೋಹಿತ್ ಕೊನೆಗೂ ಡಿಆರ್ ಎಸ್ ತೆಗೆದುಕೊಂಡರು. ಡಿಆರ್‌ಎಸ್‌ನಲ್ಲಿ ನೋಡಲಾಗಿ ಇಸ್ಮಾಲ್ ಔಟ್ ಆಗಿರುವುದು ಖಚಿತವಾಯಿತು.

ಆಕಾಶ್‌ಗೆ 2 ವಿಕೆಟ್

**ಅಚ್ಚರಿಗೊಂಡ ರೋಹಿತ್**

ಅಲ್ಲಿಯವರೆಗೂ ಆಕಾಶ್ ದೀಪ್‌ರನ್ನು ಹೊರತುಪಡಿಸಿ ತಂಡದ ಮತ್ತ್ಯಾವ ಆಟಗಾರ ಕೂಡ ಡಿಆರ್‌ಎಸ್ ತೀರ್ಪು ನಮ್ಮ ಪರವಾಗಿ ಬರುತ್ತದೆ ಎಂದು ಭಾವಿಸಿರಲಿಲ್ಲ. ಸ್ವತಃ ನಾಯಕ ರೋಹಿತ್ ಕೂಡ ನಂಬಿರಲಿಲ್ಲ. ಆದರೆ ಡಿಆರ್ ಎಸ್‌ನಲ್ಲಿ ಔಟಾಗಿರುವುದು ಖಚಿತವಾದ ಬಳಿಕ ಆಟಗಾರರೆಲ್ಲರೂ ಅಚ್ಚರಿಗೊಂಡರು. ನಾಯಕ ರೋಹಿತ್ ಕೂಡ ವಿಕೆಟ್ ಸಿಕ್ಕ ಅಚ್ಚರಿಯಲ್ಲಿ ಆಕಾಶ್ ದೀಪ್‌ರನ್ನು ತಬ್ಬಿಕೊಂಡು ಸಂಭ್ರಮಿಸಿದರು. ಅದರ ವಿಡಿಯೋ ಈಗ ಎಲ್ಲೆಡೆ ವೈರಲ್ ಆಗುತ್ತಿದೆ.



# ಶ್ರೀಲಂಕಾ ಕ್ರಿಕೆಟ್‌ಗೆ ಸಿಕ್ಕ ರನ್ ಮಷಿನ್ ಮೆಂಡಿಸ್

ನ್ಯೂಜಿಲೆಂಡ್ ವಿರುದ್ಧ ಗಾಲೆಯಲ್ಲಿ ನಡೆಯುತ್ತಿರುವ ಎರಡನೇ ಟೆಸ್ಟ್‌ನಲ್ಲಿ ಶ್ರೀಲಂಕಾದ ಆಲ್‌ರೌಂಡರ್ ಕಮಿಂದು ಮೆಂಡಿಸ್ ಭರ್ಜರಿ ಶತಕ ಸಿಡಿಸಿ ಕ್ರಿಕೆಟ್ ದಿಗ್ಗಜರ ದಾಖಲೆಗಳನ್ನು ಸರಿಗಟ್ಟಿದ್ದಾರೆ. ತಮ್ಮ ಟೆಸ್ಟ್ ವೃತ್ತಿಜೀವನದ ಕೇವಲ 8ನೇ ಟೆಸ್ಟ್ ಪಂದ್ಯವನ್ನಾಡುತ್ತಿರುವ ಮೆಂಡಿಸ್ ಬರೋಬ್ಬರಿ 5 ನೇ ಶತಕವನ್ನು ಸಿಡಿಸಿದ್ದಾರೆ. ಇದರೊಂದಿಗೆ ಶ್ರೇಷ್ಠ ಬ್ಯಾಟ್ಸ್‌ಮನ್ ಡಾನ್ ಬ್ರಾಡ್‌ಮನ್ ರನ್ನು ಸರಿಗಟ್ಟಿದ್ದಾರೆ. ಬ್ರಾಡ್ಮನ್ ಮತ್ತು ಜಾರ್ಜ್ ಹೆಡ್ಲಿ ತಮ್ಮ ಮೊದಲ 13 ಇನ್ನಿಂಗ್ಸ್‌ಗಳಲ್ಲಿ 5 ಶತಕಗಳನ್ನು ಪೂರ್ಣಗೊಳಿಸಿದ್ದರು. ಇದೀಗ ಮೆಂಡಿಸ್ ಕೂಡ ತಮ್ಮ 8ನೇ ಟೆಸ್ಟ್ ಪಂದ್ಯದ 13ನೇ ಇನ್ನಿಂಗ್ಸ್‌ನಲ್ಲಿ 5ನೇ ಶತಕ ಪೂರೈಸಿದ್ದು, ದಿಗ್ಗಜರ ಪಟ್ಟಿಯಲ್ಲಿ ಸೇರ್ಪಡೆಗೊಂಡಿದ್ದಾರೆ.

ಇಷ್ಟೇ ಅಲ್ಲ, ಈ ಪಂದ್ಯದ ಮೊದಲ ದಿನವೇ ಅರ್ಧಶತಕ ಸಿಡಿಸುವ ಮೂಲಕ ಮೆಂಡಿಸ್ ಅಚ್ಚರಿಯ ವಿಶ್ವದಾಖಲೆ ಮಾಡಿದ್ದರು. 147 ವರ್ಷಗಳ ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲಿ, ಕಮಿಂದು ಮೆಂಡಿಸ್ ತಮ್ಮ ಚೊಚ್ಚಲ ಪಂದ್ಯದ ನಂತರ ಸತತ 8 ಟೆಸ್ಟ್ ಪಂದ್ಯಗಳಲ್ಲಿ ಐವತ್ತಕ್ಕೂ ಹೆಚ್ಚು ರನ್ ಗಳಿಸಿದ ವಿಶ್ವದ ಮೊದಲ ಆಟಗಾರ ಎಂಬ ದಾಖಲೆ ನಿರ್ಮಿಸಿದ್ದಾರೆ.



ಟೆಸ್ಟ್‌ಗಳಲ್ಲಿ 5ನೇ ಶತಕ

**ಕಾಂಬ್ಳಿ ದಾಖಲೆ ಸ್ವಲ್ಪದರಲ್ಲೇ ಮಿಸ್**

ಗಾಲೆಯಲ್ಲಿ ದಾಖಲೆಯ ಶತಕ ಸಿಡಿಸಿರುವ ಮೆಂಡಿಸ್ ಇದೀಗ ಟೆಸ್ಟ್‌ನಲ್ಲಿ 900 ರನ್ ಗಡಿ ದಾಟಿದ್ದಾರೆ. ಇದರೊಂದಿಗೆ ಟೆಸ್ಟ್‌ನ ಅತಿ ಕಡಿಮೆ ಇನ್ನಿಂಗ್ಸ್‌ನಲ್ಲಿ 900 ರನ್ ಗಳಿಸಿದ 5ನೇ ಬ್ಯಾಟ್ಸ್‌ಮನ್ ಎನಿಸಿಕೊಂಡಿದ್ದಾರೆ. ಟೆಸ್ಟ್‌ನಲ್ಲಿ ವೇಗವಾಗಿ 900 ರನ್ ಗಳಿಸಿದ ದಾಖಲೆಯನ್ನು ಭಾರತೀಯ ಕ್ರಿಕೆಟಿಗ ವಿನೋದ್ ಕಾಂಬ್ಳಿ ಮತ್ತು ವೆಸ್ಟ್ ಇಂಡೀಸ್‌ನ ಎವರ್ಟನ್ ವೀಕ್ಸ್ ಜಂಟಿಯಾಗಿ ಹೊಂದಿದ್ದಾರೆ. ಇವರಿಬ್ಬರೂ 11 ಇನ್ನಿಂಗ್ಸ್‌ಗಳಲ್ಲಿ ಈ ಸಾಧನೆ ಮಾಡಿದ್ದರು.

**ಯಶಸ್ವಿ ದಾಖಲೆ ಮೇಲೆ ಮೆಂಡಿಸ್ ಕಣ್ಣು**

ಕಮಿಂದು ಮೆಂಡಿಸ್ 1000 ಟೆಸ್ಟ್ ರನ್ ಪೂರ್ಣಗೊಳಿಸಲು ಇನ್ನೂ 78 ರನ್ ಅಗತ್ಯವಿದೆ. ಈ ಇನ್ನಿಂಗ್ಸ್ ಅಥವಾ ಮುಂದಿನ 2 ಇನ್ನಿಂಗ್ಸ್‌ನಲ್ಲಿ ಈ ಸಾಧನೆ ಮಾಡುವಲ್ಲಿ ಯಶಸ್ವಿಯಾದರೆ ಅವರು ಭಾರತದ ಯಶಸ್ವಿ ಜೈಸ್ವಾಲ್ ಅವರ ದಾಖಲೆ ಮುರಿಯಲಿದ್ದಾರೆ. ಜೈಸ್ವಾಲ್ 16 ಇನ್ನಿಂಗ್ಸ್‌ಗಳಲ್ಲಿ 1000 ರನ್‌ಗಳ ಗಡಿಯನ್ನು ಮುಟ್ಟಿದ್ದರು.

ಅತ್ಯಂತ ವೇಗದ 1000 ಟೆಸ್ಟ್ ರನ್‌ಗಳನ್ನು ಗಳಿಸಿದ ದಾಖಲೆಯು ಹರ್ಬರ್ಟ್ ಸಟ್‌ಕ್ಲಿಫ್ ಮತ್ತು ಎವರ್ಟನ್ ವೀಕ್ಸ್ ಹೆಸರಿನಲ್ಲಿದೆ. ಈ ಇಬ್ಬರೂ ಆಟಗಾರರು 12 ಇನ್ನಿಂಗ್ಸ್‌ಗಳಲ್ಲಿ ಈ ಸಾಧನೆ ಮಾಡಿದ್ದರೆ, ಡಾನ್ ಬ್ರಾಡ್ಮನ್ 13 ಇನ್ನಿಂಗ್ಸ್‌ಗಳಲ್ಲಿ ಈ ಅಂಕಿಅಂಶ ದಾಟಿದ್ದರು.

# ಕಾನ್ಪುರದಲ್ಲಿ ಭಾರಿ ಮಳೆ; ದಿನದಾಟ ಅಂತ್ಯ

ಭಾರತ ಮತ್ತು ಬಾಂಗ್ಲಾದೇಶ ನಡುವಿನ ಎರಡು ಪಂದ್ಯಗಳ ಟೆಸ್ಟ್ ಸರಣಿಯ ಎರಡನೇ ಪಂದ್ಯ ಕಾನ್ಪುರದ ಗ್ರೀನ್ ಪಾರ್ಕ್ ಸ್ಟೇಡಿಯಂನಲ್ಲಿ ನಡೆಯುತ್ತಿದೆ. ದಿನದಾಟದ ಮೊದಲ ಸೆಷನ್‌ವರೆಗೂ ವರುಣ ರಾಯ ಪಂದ್ಯಕ್ಕೆ ಯಾವುದೇ ಅಡ್ಡಿಪಡಿಸಲಿಲ್ಲ. ಆದರೆ ಎರಡನೇ ಸೆಷನ್ ಆರಂಭವಾದಂತೆ ಮಳೆ ಕೂಡ ಬೀಳಲಾರಂಭಿಸಿತು. ಅಲ್ಲದೆ ಮಂದ ಬೆಳಕಿನ ಕಾರಣ ಪಂದ್ಯವನ್ನು ಅವಧಿಗೂ ಮುನ್ನವೇ ನಿಲ್ಲಿಸಲು ತೀರ್ಮಾನಿಸಲಾಯಿತು. ಮಳೆಯಿಂದಾಗಿ 1 ಗಂಟೆ ತಡವಾಗಿ ಪಂದ್ಯ ಆರಂಭವಾಯಿತು. ಈ ವೇಳೆ ಟಾಸ್ ಗೆದ್ದ ಟೀಂ ಇಂಡಿಯಾ ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು. ದಿನದಾಟದ ಮೊದಲ ಸೆಷನ್‌ವರೆಗೂ



ವರುಣ ರಾಯ ಪಂದ್ಯಕ್ಕೆ ಯಾವುದೇ ಅಡ್ಡಿಪಡಿಸಲಿಲ್ಲ. ಆದರೆ ಎರಡನೇ ಸೆಷನ್ ಆರಂಭವಾದಂತೆ ಮಳೆ ಕೂಡ ಬೀಳಲಾರಂಭಿಸಿತು. ಅಲ್ಲದೆ ಮಂದ ಬೆಳಕಿನ ಕಾರಣ ಪಂದ್ಯವನ್ನು ಅವಧಿಗೂ ಮುನ್ನವೇ ನಿಲ್ಲಿಸಲು ತೀರ್ಮಾನಿಸಲಾಯಿತು. ದಿನದಾಟ ಅಂತ್ಯದ ವೇಳೆಗೆ ಇಡೀ ದಿನ ಕೇವಲ 35 ಓವರ್‌ಗಳನ್ನು ಮಾತ್ರ ಆಡಲು ಸಾಧ್ಯವಾಯಿತು.

35 ಓವರ್‌ಗಳಿಗೆ ಪಂದ್ಯ ಅಂತ್ಯ ಕಾನ್ಪುರದ ಗ್ರೀನ್ ಪಾರ್ಕ್ ಸ್ಟೇಡಿಯಂನಲ್ಲಿ ಪಂದ್ಯ ಆರಂಭವಾಗುವ 2-3 ದಿನಗಳ ಹಿಂದೆಯೇ ಮಳೆ ಬೀಳಲಾರಂಭಿಸಿತ್ತು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966